ಸಂಪುಟ: 04 ಸಂಚಿಕೆ: 293 ಪುಟಗಳು: 08 ಭಾನುವಾರ 05 ಜನವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಒಳ್ಳೆಯ ಪುಸ್ತಕಗಳು
ಒಳ್ಳೆಯ ವ್ಯಕ್ತಿಗಳು
ಸುಲಭವಾಗಿ
ಅರ್ಥವಾಗುವುದಿಲ್ಲ
ಮತ್ತೊಮ್ಮೆ
ಓದಬೇಕಾಗುತ್ತದೆ

## ಸರ್ಕಾರ ಬದುಕಿದೆಯೋ ಸತ್ತಿದಿಯೋ ಅಂತ ಜನ ಮಾತನಾಡ್ತಿದ್ದಾರೆ

• ಉದಯವಾಹಿನಿ, ಬೆಂಗಳೂರು

ಜನವರಿ 2ರಂದು ನಡೆದ ಸಿಎಂ ನೇತೃತ್ವದ ಸಚಿವ ಸಂಪುಟ ಸಭೆಯಲ್ಲಿ ದರವನ್ನು ಶೇ. 15ರಷ್ಟು ದರ ಏರಿಕೆ ಮಾಡಿ ಆದೇಶ ಹೊರಡಿಸಲಾಗಿದೆ. ಈ ಅಧಿಕೃತ ದರವು ಶನಿವಾರ ರಾತ್ರಿ 12 ಗಂಟೆಯಿಂದಲೇ ಜಾರಿ ಗೆ ಬರಲಿದೆ. ಸದ್ಯ ರಾಜ್ಯ ಸರ್ಕಾರದ ಈ ನಡೆಗೆ ರಾಜ್ಯಾದ್ಯಂತ ಆಕ್ರೋಶ ವ್ಯಕ್ತವಾಗುತ್ತಿದೆ. ಈ ನಡುವೆ ಬಿಜೆಪಿ ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ಅವರು ಸರ್ಕಾರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಸರ್ಕಾರದ ವಿರುದ್ಧ ರೇಣುಕಾಚಾರ್ಯ ಆಕ್ರೋಶ ದಾವಣಗೆರೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸರ್ಕಾರ ಬದುಕಿದೆಯೋ ಸತ್ತಿದಿಯೋ ಎಂದು ಜನ ಮಾತನಾಡ್ತಾ ಇದ್ದಾರೆ, ಮೊನ್ನೆ ಎರಡದು ದಿನದ ಹಿಂದೆ 15% ಬಸ್ ದರವನ್ನ ಜಾಸ್ತಿ ಮಾಡಿದ್ದಾರೆ. ಡಿಸೇಲ್, ಹಾಲಿನ ದರ ಹೆಚ್ಚು ಮಾಡಿದ್ದಾರೆ ಹಿಮಾಚಲದಲ್ಲಿ ಕೊಟ್ಟ ಭರವಸೆ ಈಡೇರಿಸಲಾಗಿಲ್ಲ ಅಂತ ವಾಪಸ್ ಪಡೀತಾ ಇದ್ದಾರೆ. ಕೆಎಸ್‌ಆರ್‌ಟಿಸಿ ಬಸ್ ದರ ಹಿಂಪಡೆಯದೆ ಇದ್ದರೆ ರಾಜ್ಯಾದ್ಯಂತ ಹೋರಾಟ ಮಾಡ್ತೀವಿ ಎಂದು ಆಕ್ರೋಶ ಹೊರಹಾಕಿದರು.

## ರಾಜ್ಯ ಪ್ರವಾಸಕ್ಕೆ ವಾಹನ ನೀಡದೆ ಶಿಷ್ಟಾಚಾರ ಉಲ್ಲಂಘಿಸಿದ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಅವರು ಎರಡು ದಿನಗಳ ರಾಜ್ಯ ಪ್ರವಾಸ ಕೈಗೊಂಡಿದ್ದು ರಾಜ್ಯ ಪ್ರವಾಸಕ್ಕೆ ವಾಹನ ನೀಡದೆ ಸರ್ಕಾರ ಶಿಷ್ಟಾಚಾರ ಉಲ್ಲಂಘಿಸಿದೆ ಎಂಬ ಆರೋಪ ಕೇಳಿ ಬಂದಿದೆ. ಸರ್ಕಾರ ನಡೆಗೆ ಕುಮಾರಸ್ವಾಮಿ ಅವರು ಆಕ್ರೋಶಗೊಂಡಿದ್ದು. ಕೇಂದ್ರ ಸರ್ಕಾರದ ವಾಹನದಲ್ಲೇ ಮಂಡ್ಯ, ಮೈಸೂರು ಜಿಲ್ಲೆ ಪ್ರವಾಸ ಮಾಡುತ್ತಿದ್ದಾರೆ.

ಈ ನಡುವೆ ಮಂಡ್ಯದ ಕೆ.ಆರ್.ಪೇಟೆಯಲ್ಲಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಕುಮಾರಸ್ವಾಮಿಯವರು, ರಾಜ್ಯ ಸರ್ಕಾರ ನನಗೆ ಇಲ್ಲಿವರೆಗೂ ಕಾರು ಕೊಟ್ಟಿಲ್ಲ. ಹೀಗಾಗಿ, ನಮ್ಮ ಕೇಂದ್ರ ಸರ್ಕಾರದ ವಾಹನ ಬಳಕೆ ಮಾಡುತ್ತಿದ್ದೇನೆ. ಬೃಹತ್ ಕೈಗಾರಿಕಾ ಇಲಾಖೆಯ ವಾಹನ ತರಿಸಿಕೊಂಡಿದ್ದೇನೆಂದು ಹೇಳಿದರು.

ರಾಜ್ಯ ಸರ್ಕಾರ ತಮ್ಮನ್ನು ನಿರ್ಲಕ್ಷಿಸುತ್ತಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, ಅದರ ಬಗ್ಗೆ, ನನಗೆ ತಿಳಿದಿಲ್ಲ, ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರ ಅದಕ್ಕೆ ಉತ್ತರಿಸಬೇಕು ಎಂದು ತಿಳಿಸಿದರು.

## ಬೆಂಬಲ ಬೆಲೆಗಿಂತಲೂ ಕಡಿಮೆ ದರಕ್ಕೆ ದಲ್ಲಾಳಿಗಳಿಗೆ ಭತ್ತ ಮಾರಾಟ

• ಉದಯವಾಹಿನಿ, ಬೆಂಗಳೂರು

ಮಂಡ್ಯದಲ್ಲಿ ಭತ್ತದ ಖರೀದಿ ಕೇಂದ್ರಗಳು ತೆರೆಯದ ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಅಶೋಕ್ ಕಿಡಿಕಾರಿದ್ದಾರೆ. ಎಕ್ಸ್‌ನಲ್ಲಿ ಸರ್ಕಾರದ ವಿರುದ್ಧ ಕಿಡಿಕಾರಿದ ಅಶೋಕ್ ಕಾಂಗ್ರೆಸ್ ಸರ್ಕಾರ ದರಿದ್ರ ಸರ್ಕಾರ ಅಂತ ವಾಗ್ದಾಳಿ ನಡೆಸಿದ್ದಾರೆ. ಈ ದರಿದ್ರ ಕಾಂಗ್ರೆಸ್ ಸರ್ಕಾರದಲ್ಲಿ ಒಬ್ಬರು ಕುರ್ಚಿ ಉಳಿಸಿಕೊಳ್ಳಲು ತಂತ್ರ ಹೆಣೆಯುತ್ತಿದ್ದರೆ, ಇನ್ನೊಬ್ಬರು ಕುರ್ಚಿ ಕಿತ್ತುಕೊಳ್ಳಲು ಕತ್ತಿ ಮಸಿಯುತ್ತಿದ್ದಾರೆ. ಇವರಿಬ್ಬರ ನಡುವೆ ಅತಂತ್ರವಾಗಿರುವ ಮಂತ್ರಿಗಳು ಅವರವರ ಅಸ್ತಿತ್ವ ಉಳಿಸಿಕೊಳ್ಳಲು ಡಿನ್ನರ್ ಮೀಟಿಂಗ್, ಸೀಕ್ರೆಟ್ ಸಭೆ ಮಾಡಿ ಕಾಲಹರಣ ಮಾಡುತ್ತಿದ್ದಾರೆ.

ಗಂಡ ಹೆಂಡತಿ ಜಗಳದಲ್ಲಿ ಕೂಸು ಬಡವಾಯಿತು ಎಂಬಂತೆ ಇವೆಲ್ಲದರ ನಡುವೆ ರಾಜ್ಯದಲ್ಲಿ ಆಡಳಿತ ಯಂತ್ರ ಸಂಪೂರ್ಣ ಕುಸಿದು ರೈತರ ಕಷ್ಟ ಕೇಳಲು ಸರ್ಕಾರವೇ ಇಲ್ಲದಂತಾಗಿದೆ. ಮಂಡ್ಯದಲ್ಲಿ ಭತ್ತ ಖರೀದಿ ಕೇಂದ್ರಗಳು ಆರಂಭವಾಗದ ಕಾರಣ ರೈತರು ಬೆಂಬಲ ಬೆಲೆಗಿಂತ ಕಡಿಮೆ ದರಕ್ಕೆ ಭತ್ತದ ದಲ್ಲಾಳಿಗಳಿಗೆ ಮಾರಾಟ ಮಾಡುವ ಅನಿವಾರ್ಯತೆ ಎದುರಾಗಿದೆ ಎಂದು ಅಶೋಕ್ ಕಿಡಿಕಾರಿದ್ದಾರೆ.

## ನಾವು ಮಾನಸಿಕ ಆರೋಗ್ಯವನ್ನ ಮುಖ್ಯವಾಹಿನಿಗೆ ತರಲು ಪ್ರಯತ್ನ

• ಉದಯವಾಹಿನಿ, ಬೆಂಗಳೂರು

ದೇಶದಲ್ಲಿ ಮಾನಸಿಕ ಆರೋಗ್ಯವನ್ನ ಮುಖ್ಯವಾಹಿನಿಗೆ ತರಲು ಪ್ರಯತ್ನಗಳು ನಡೆಯುತ್ತಿವೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಹಾಗೂ ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ ಹೇಳಿದರು. ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿದರು. ಕೇಂದ್ರ ಸಚಿವ ನಡ್ಡಾ, ನಿಮ್ಹಾನ್ಸ್ ಲಕ್ಷಾಂತರ ಜನರಿಗೆ ಮಾನಸಿಕ ಆರೋಗ್ಯ ಸೇವೆ ಒದಗಿಸುತ್ತಿದೆ ಮತ್ತು ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿದೆ ಎಂದು ನನಗೆ ಸಂತೋಷವಾಗಿದೆ.

ವಾರ್ಷಿಕವಾಗಿ ಸುಮಾರು 21 ಲಕ್ಷ ಪ್ರಯೋಗಾಲಯ ತನಿಖೆಗಳನ್ನ ನಡೆಸಲಾಗುತ್ತದೆ ಮತ್ತು ದೇಶದ ಮೂಲೆ ಮೂಲೆಗಳಿಂದ ಜನರು ಈ ಸೌಲಭ್ಯಕ್ಕೆ ಭೇಟಿ ನೀಡುತ್ತಾರೆ. ಇದು ನಿಮ್ಹಾನ್ಸ್'ನಲ್ಲಿ ಖಾತ್ರಿಪಡಿಸಿದ ಆರೈಕೆ ಮತ್ತು ಗುಣಮಟ್ಟದ ಸೇವೆಗಳನ್ನು ಪ್ರದರ್ಶಿಸುತ್ತದೆ ಎಂದರು. ನಿಮ್ಹಾನ್ಸ್ ವಿಶ್ವದ ಅಗ್ರ 200 ಆಸ್ಪತ್ರೆಗಳಲ್ಲಿ ಒಂದಾಗಿದೆ ಎಂದು ಅವರು ಒತ್ತಿ ಹೇಳಿದರು.

# ಗೂಂಡಾಗಿರಿ VS ಗಾಂಧಿಗಿರಿ



- ಪ್ರಿಯಾಂಕ್ ಖರ್ಗೆ ನಿವಾಸಕ್ಕೆ ಮುತ್ತಿಗೆ ಹಾಕಲು ಹೊರಟ ಬಿಜೆಪಿಗರಿಗೆ
- ತಂಪು ಪಾನೀಯ ವ್ಯವಸ್ಥೆ ಮಾಡಿದ ಕಾಂಗ್ರೆಸ್
- ಕೆರಳಿದ ಕೇಸರಿ ಪಡೆ, ರಾಜೀನಾಮೆಗೆ ಆಗ್ರಹಿಸಿ ಖರ್ಗೆ ನಿವಾಸಕ್ಕೆ ಮುತ್ತಿಗೆ ಯತ್ನ









• ಉದಯವಾಹಿನಿ, ಕಲಬುರಗಿ

ಗುತ್ತಿಗೆದಾರ ಸಚಿನ್ ಪಾಂಚಾಳ್ ಆತಹತ್ಯೆ ಪ್ರಕರಣ ಸಂಬಂಧ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ರಾಜ್ ಸಚಿವ ಪ್ರಿಯಾಂಕ ಖರ್ಗೆ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ನಿವಾಸಕ್ಕೆ ಮುತ್ತಿಗೆ ಹಾಕುವ ಪ್ರಯತ್ನ ಮಾಡಿತು.ವಿಧಾನಮಂಡಲದ ಉಭಯ ಸದನಗಳ ಪ್ರತಿಪಕ್ಷದ ನಾಯಕ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಮುಖಂಡ ಸುನೀಲ್ ವಲ್ಯಾಪುರೆ, ಸಿ.ಟಿ.ರವಿ, ಎಂ.ರವಿಕುಮಾರ್ ಸೇರಿದಂತೆ ಸುಮಾರು 5 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಪ್ರಿಯಾಂಕ ಖರ್ಗೆ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಮುಂದಾದರು. ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಮುಖಂಡರು, ಪ್ರಿಯಾಂಕ್ ಖರ್ಗೆ ಅವರ ಮನೆಗೆ ಮುತ್ತಿಗೆ ಹಾಕುವ ಹೋರಾಟ ನಡೆಸುತ್ತಿದ್ದರೆ ಸಚಿವರ ಮನೆ ಮುಂದೆ ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ಗೂಂಡಾಗಿರಿ ನಮ್ಮ ಗಾಂಧಿಗಿರಿ ಎಂಬ ಶೀರ್ಷಿಕೆಯಡಿಯಲ್ಲಿ ಬ್ಯಾನರ್ ಹಿಡಿದು ಹೋರಾಟ ನಡೆಸಿದರು. ಕಾಂಗ್ರೆಸ್ ಕಾರ್ಯಕರ್ತರು ಎಳನೀರು, ನೀರು, ಚಹಾ ಮೂಲಕ ಬಿಜೆಪಿಯ ಮುತ್ತಿಗೆ ಹೋರಾಟಕ್ಕೆ ಕೌಂಟರ್ ಹೋರಾಟದ ವೇದಿಕೆಯ ಮೂಲಕ ಬಿಜೆಪಿ ಕಾರ್ಯಕರ್ತರನ್ನು ಸ್ವಾಗತಿಸುತ್ತೇವೆ ಎಂದು ಕಾಂಗ್ರೆಸ್ ಕಾರ್ಯಕರ್ತರು ಹೇಳಿದ್ದಾರೆ. ಬಿಜೆಪಿಯ ಹೋರಾಟಕ್ಕೆ ಬೆಂಗಳೂರ್ ನಿಂದ ಬರುತ್ತಿರುವ ಮುಖಂಡರಿಗೆ ಎಳನೀರು, ಮಜ್ಜಿಗೆ ತಂಪು ಪಾನಿಯ ವ್ಯವಸ್ಥೆ ಮಾಡಲಾಗಿದ್ದು, ಅವರ ಗೂಂಡಾಗಿರಿಗೆ ನಾವು ನಮ್ಮ ಗಾಂಧಿಗಿರಿ ಮೂಲಕ ಸ್ವಾಗತಿಸುತ್ತೇವೆ ಎಂದರು. ಸಂವಿಧಾನದಲ್ಲಿ ಹೋರಾಟ ಮಾಡುವ ಹಕ್ಕು ಎಲ್ಲರಿಗೂ ಇದೆ. ಬಿಜೆಪಿ ಅವರು ಸಂವಿಧಾನಕವಾಗಿ ಹೋರಾಟ ಮಾಡುವುದನ್ನು ಬಿಟ್ಟು, ಸಚಿವರ ಮನೆಗೆ ಮುತ್ತಿಗೆ ಹಾಕುವ ಹೋರಾಟವನ್ನು ಹಮ್ಮಿಕೊಳ್ಳುವ ಮೂಲಕ ಗೂಂಡಾಗಿರಿಗೆ ಮುಂದಾಗಿದ್ದಾರೆ. ಅವರ ಗೂಂಡಾಗಿರಿಯ ವಿರುದ್ಧ ನಮ್ಮ ಗಾಂಧಿಗಿರಿ ಹೋರಾಟ ನಡೆಯುತ್ತಿದೆ ಎಂದು ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಝುರ್ ಅಲಾಮ್ ಖಾನ್ ಹೇಳಿದರು.






ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷದ ನಾಯಕ ಆರ್. ಅಶೋಕ್, ಕಾಂಗ್ರೆಸ್ ಅಧಿಕಾರಕ್ಕೆ ಬಂದಮೇಲೆ ರಾಜ್ಯದಲ್ಲಿ ಬಾಣಂತಿಯರ ಸರಣಿ ಸಾವುಗಳು ನಡೆಯುತ್ತಿವೆ. ಗುತ್ತಿಗೆದಾರರು, ರೈತರ ಆತಹತ್ಯೆಗಳಾಗುತ್ತಿವೆ. ರಾಜ್ಯದಲ್ಲಿ ಹಣಕ್ಕಾಗಿ ವಸೂಲಿ ದಂಧೆ ನಡೆಯುತ್ತಿದೆ ಎಂದು ಆರೋಪಿಸಿದರು. ರಾಜ್ಯದಲ್ಲಿರುವುದು ಪರ್ಸಂಟೇಜ್ ಸರ್ಕಾರ. ಕಾಂಗ್ರೆಸ್‌ನ ದುರಾಸೆಗೆ ಗುತ್ತಿಗೆದಾರರು ಸಾವನ್ನಪ್ಪುತ್ತಿದ್ದಾರೆ. ಕಾಮಗಾರಿಯಲ್ಲಿ ಕಂಟ್ರಾಕ್ಟರ್ ಬಳಿ ಆಕ್ರಮವಾಗಿ ಹಣ ಸುಲಿಗೆ ಮಾಡುವುದು ಮನೆ ಮಾತಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಲಂಚ ಜಾಸ್ತಿ ಆಗಿದೆ ಎಂದು ಕಿಡಿಕಾರಿದರು.

ಸಚೀನ್ ಪಾಂಚಾಳ ಡೆತ್ ನೋಟ್ ನಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಹೆಸರಿಲ್ಲ. ಅವರ ರಾಜೀನಾಮೆ ಕೇಳುವುದು ಮುರ್ಖತನವಾಗಿದೆ. ಸಚಿನ್ ಆತ್ಮಹತ್ಯೆ ವಯಕ್ತಿಕ ವ್ಯವಹಾರದ ಕಾರಣದಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಖರ್ಗೆ ಅವರಿಗೆ ಕಪ್ಪು ಚುಕ್ಕೆ ತರಲು ಮತ್ತು ಬಿಜೆಪಿ ಮುಖಂಡರು ಪಕ್ಷದಲ್ಲಿ ತನ್ನ ನಾಯಕತ್ವವನ್ನು ಉಳಿಸಿಕೊಳ್ಳುವ ಉದ್ದೇಶದಿಂದ ಈ ರೀತಿಯ ಅರ್ಥಹಿನ ಹೋರಾಟ ನಡೆಸುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಪಾಲಿಕೆ ಸದಸ್ಯರು ಮತ್ತು ಮಹಿಳಾ ಘಟಕದ ನಾಯಕಿಯರು ಹೋರಾಟದಲ್ಲಿ ಇದ್ದರು.

### ರಾಜ್ಯದಲ್ಲಿ ಸುಪಾರಿ ಸುಸೈಡ್ ಸರ್ಕಾರ ಇದೆ

ರಾಜ್ಯದಲ್ಲಿ ಎಸ್ ಎಸ್ ಸರ್ಕಾರ ಇದೆ. ಎಸ್ ಅಂದ್ರೆ ಸುಪಾರಿ ಎಸ್ ಅಂದ್ರೆ ಸುಸೈಡ್ ಸರ್ಕಾರ. ಕಳಪೆ ಮೆಡಿಸಿನ್ ತಂದು ಆಸ್ಪತ್ರೆಗೆ ಕೊಟ್ಟು ಬಾಣಂತಿಯರು ಸಾವಿಗೆ ಕಾರಣವಾಯಿತು ಈ ಸರ್ಕಾರ. ಮಗು ಜನ್ಮ ಪಡೆದ್ರೆ, ತಾಯಿ ಸವನ್ನಪಿದ್ರು. ಪೊಲೀಸರು ಕಬ್ಬಿನ ಗದ್ದೆಗಳು ಸೇಫ್ಟಿ ಅಂತ ಅಲ್ಲಿ ಇಡ್ತಾರೆ. ರವಿ ಅವರನ್ನು ಕಬ್ಬಿನ ಗದ್ದೆಗೆ ಕರ್ಕೊಂಡು ಹೋದ್ರು. ಯಾಕ್ ಅವರನ್ನು ಕರ್ಕೊಂಡು ಹೋದ್ರು? ಎಂದು ಪ್ರಶ್ನೆ ಮಾಡಿದರು.

### ಬಿಜೆಪಿ ನಾಯಕರು ಪೊಲೀಸ್ ವಶಕ್ಕೆ

ಕಲಬುರ್ಗಿಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ನಿವಾಸದ ಬಳಿ ಪ್ರತಿಭಟನೆ ಹಿನ್ನೆಲೆ ಬಿಜೆಪಿಗರು ದೌಡಾಯಿಸುತ್ತಿದ್ದರು. ಅಲ್ಲದೆ ಜಿಲ್ಲಾಧಿಕಾರಿ ಕಚೇರಿ ಹತ್ರನೂ ಬಿಜೆಪಿ ಪ್ರತಿಭಟನಾ ಮೆರವಣಿಗೆ ಸಾಗುತ್ತಿತ್ತು. ಈ ವೇಳೆ ಐವಾನ್ ಏ ಶಾಹಿ ರಸ್ತೆಯಲ್ಲಿ ಬಿಜೆಪಿ ಮುಖಂಡರನ್ನ ಪೊಲೀಸರು ತಡೆದಿದ್ದಾರೆ. ಈ ವೇಳೆ ನಾಯಕರು ಮತ್ತು ಪೊಲೀಸರ ಮಧ್ಯೆ ನೂಕಾಟ ತಳ್ಳಾಟ ಶುರುವಾಗಿದೆ. ಪರಿಸ್ಥಿತಿ ನಿಯಂತ್ರಿಸುವ ದೃಷ್ಟಿಯಿಂದ ಪೊಲೀಸರು ತಕ್ಷಣ ವಿಪಕ್ಷ ನಾಯಕ ಆರ್ ಅಶೋಕ್, ಛಲವಾದಿ ನಾರಾಯಣಸ್ವಾಮಿ, ಸಿಟಿ ರವಿ, ಎನ್ ರವಿಕುಮಾರ್ ಸೇರಿದಂತೆ ಅನೇಕರನ್ನ ವಶಕ್ಕೆ ಪಡೆದಿದ್ದಾರೆ ಎನ್ನಲಾಗಿದೆ. ಬಳಿಕ ಸಾರಿಗೆ ಸಂಸ್ಥೆಯ ಎರಡು ಬಸ್‌ಗಳಲ್ಲಿ ವಶಕ್ಕೆ ಪಡೆದ ಬಿಜೆಪಿ ಮುಖಂಡರನ್ನ ಪೊಲೀಸರು ಕರೆದೊಯ್ದಿದ್ದಾರೆ.

### ವಿಜಯೇಂದ್ರ ವಿರುದ್ಧ ಕೆಂಡಾಮಂಡಲ

ಪ್ರಿಯಾಂಕ್ ಖರ್ಗೆ ಕೆಲವು ಬಿಜೆಪಿ ಮುಖಂಡರಿಗೆ ಸುಪಾರಿ ಕೊಟ್ಟಿದ್ದಾರೆ ಎಂಬ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಯಾರ್ರೀ ಚಂದು ಪಾಟೀಲ್ ಸುಪಾರಿ ಕೊಡೋ ಕೆಟ್ಟ ಕೆಲಸ ಏನು ಮಾಡಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಗೌರವ ಕೊಡ್ತೀವಿ ಅಂತಾ ಬಾಯಿಗೆ ಬಂದಂತೆ ಮಾತಾಡೋದಲ್ಲ. ನಿಮ್ಮ ತಂದೆ ಏನು ಮಾಡಿದ್ದಾರೆ..? ಪೂಜ್ಯ ತಂದೆ ಅಂದುಬಿಟ್ಟ ಮಾತ್ರಕ್ಕೆ ಪೂಜ್ಯ ಆಗಿಬಿಡಲ್ಲ ಎಂದರು. ನಾವು ಬುದ್ದ, ಬಸವ, ಅಂಬೇಡ್ಕರ್ ಮೇಲೆ ನಂಬಿಕೆ ಇಟ್ಟವರು. ನಾವು ಬೀದಿಗೆ ಇಳಿದರೆ ನೀವು ಮನೆ ಖಾಲಿ ಮಾಡಬೇಕಾಗುತ್ತೆ. ನಾಲಿಗೆ ಮೇಲೆ ಹಿಡಿತ ಇಟ್ಟುಕೊಂಡು ಮಾತಾಡಿ ಎಂದು ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದರು.

- ಬಿಜೆಪಿ ನಾಯಕರ ವಿರುದ್ಧ ಪ್ರಿಯಾಂಕ್ ಖರ್ಗೆ ವಾಗ್ದಾಳಿ
- ಸಚಿನ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಆರೋಪಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಸಿಬಿಐ ತನಿಖೆಗೆ ಕೊಡಬೇಕು ಅಂತಾ ಬಿಜೆಪಿಯವ್ರು ಹೇಳಿದಾಗೆಲ್ಲಾ ಕೇಳಲು ಆಗಲ್ಲ
- ಗಂಗಾ ಕಲ್ಯಾಣ ಯೋಜನೆಯಲ್ಲಿ ನಡೆದಿರುವ ಹಗರಣವನ್ನು ಸಿಬಿಐಗೆ ಕೊಟ್ಟಿದ್ರಾ, ಪಿಎಸ್ ಐ ಹಗರಣನ್ನು ಕೊಟ್ಟಿದ್ರಾ..?

## ಜಾತಿ ರಾಜಕಾರಣದ ಹೆಸರಿನಲ್ಲಿ ಕೆಲವರು ಶಾಂತಿ ಕದಡಲು ಪ್ರಯತ್ನ

• ಉದಯವಾಹಿನಿ, ನವದೆಹಲಿ

ಜಾತಿ ರಾಜಕಾರಣದ ಹೆಸರಿನಲ್ಲಿ ಕೆಲವರು ಶಾಂತಿ ಕದಡಲು ಪ್ರಯತ್ನಿಸುತ್ತಿದ್ದಾರೆ ಮತ್ತು ದೇಶದ ಗ್ರಾಮೀಣ ಭಾಗಗಳಲ್ಲಿ ಸಾಮಾಜಿಕ ಸಾಮರಸ್ಯವನ್ನು ಕಾಪಾಡುವ ಇಂತಹ ಯೋಜನೆಗಳನ್ನು ತಡೆಯುವಂತೆ ಪ್ರಧಾನಿ ನರೇಂದ್ರ ಮೋದಿ ಶನಿವಾರ ಕರೆ ನೀಡಿದರು ಗ್ರಾಮೀಣ ಭಾರತ ಮಹೋತ್ಸವವನ್ನು ಉದ್ಘಾಟಿಸಿದ ಪ್ರಧಾನಮಂತ್ರಿಯವರು, 2047ರ ವೇಳೆಗೆ ವಿಕ್ಷಿತ ಭಾರತದ ಕನಸನ್ನು ನನಸು ಮಾಡುವಲ್ಲಿ ಗ್ರಾಮಗಳು ಪ್ರಮುಖ ಪಾತ್ರ ವಹಿಸಲಿವೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಜಾತಿ ರಾಜಕಾರಣದ ವಿಷವನ್ನು ಹರಡುವ ಮೂಲಕ ಕೆಲವರು ಶಾಂತಿಯನ್ನು ಭಂಗಗೊಳಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಯಾವುದೇ ಹೆಸರುಗಳನ್ನು ಉಲ್ಲೇಖಿಸದೆ ಮೋದಿ ಹೇಳಿದರು. ಹಳ್ಳಿಗಳ ಶಾಂತಿ ಮತ್ತು ಸಾಮರಸ್ಯದ ಪರಂಪರೆಯನ್ನು ಬಲಪಡಿಸಲು ನಾವು ಕೆಲಸ ಮಾಡಬೇಕಾಗಿದೆ ಎಂದು



ಅವರು ಹೇಳಿದರು. ಗ್ರಾಮೀಣಾಭಿವೃದ್ಧಿಗಾಗಿ 2014 ರಿಂದ ಎನ್‌ಇಎ ಸರ್ಕಾರ ಕೈಗೊಂಡ ಕ್ರಮಗಳನ್ನು ನೆನಪಿಸಿಕೊಂಡ ಮೋದಿ, ಎಸ್ಬಿಐ ಸಂಶೋಧನಾ ವರದಿಯನ್ನು ಉಲ್ಲೇಖಿಸಿ, ಗ್ರಾಮೀಣ ಭಾರತದಲ್ಲಿ ಬಡತನವು 2012 ರಲ್ಲಿ ಶೇಕಡಾ 26 ರಿಂದ ಶೇಕಡಾ 5ಕ್ಕಿಂತ ಕಡಿಮೆಯಾಗಿದೆ ಎಂದು ಹೇಳಿದರು. ಸ್ವಾತಂತ್ರ್ಯದ ದಶಕಗಳ ನಂತರವೂ ಗ್ರಾಮೀಣ ಭಾರತವನ್ನು ನಿರ್ಲಕ್ಷಿಸಿದ ಮತ್ತು ಗ್ರಾಮಗಳನ್ನು ಮೂಲಭೂತ ಅವಶ್ಯಕತೆಗಳಿಂದ ವಂಚಿತಗೊಳಿಸಿದ ಹಿಂದಿನ ಸರ್ಕಾರಕ್ಕಿಂತ ಭಿನ್ನವಾಗಿ, ತಮ್ಮ ಸರ್ಕಾರವು ಈಗ ಗ್ರಾಮಗಳನ್ನು ಸಬಲೀಕರಣಗೊಳಿಸುವತ್ತ ಮತ್ತು ಆರಂಭದಲ್ಲಿ ಕಡೆಗಣಿಸಲ್ಪಟ್ಟವರ ಅಗತ್ಯಗಳನ್ನು ಪರಿಹರಿಸುವತ್ತ ಗಮನ ಹರಿಸಿದೆ ಎಂದು ಪ್ರಧಾನಿ ಒತ್ತಿ ಹೇಳಿದರು.

## ಮಹಿಳಾ, ಮಕ್ಕಳ ಕಲ್ಯಾಣ ಇಲಾಖೆ ಸಚಿವರನ್ನ ಹುಡುಕಿ ಕೊಡಿ

• ಉದಯವಾಹಿನಿ, ಬೆಂಗಳೂರು



ಕೋಲಾರ ಜಿಲ್ಲೆಯ ಬಂಗಾರಪೇಟೆಯಲ್ಲಿ ಮೇಲ್ಛಾವಣಿ ಕುಸಿದು ಅಂಗನವಾಡಿ ಮಕ್ಕಳಿಗೆ ಗಾಯವಾಗಿರೋ ಪ್ರಕರಣದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಸಚಿವರು ರಾಜೀನಾಮೆ ನೀಡಬೇಕು ಅಂತ ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷೆ ಮಂಜುಳಾ ಆಗ್ರಹಿಸಿದ್ದಾರೆ.

ಈ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸಚಿವರನ್ನ ಹುಡುಕಿಕೊಂಡಿ ಅಂತ ಸಿಎಂ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಂಗಾರಪೇಟೆಯಲ್ಲಿ ಅಂಗನವಾಡಿ ಮೇಲ್ಛಾವಣಿ ಬಿದ್ದು 7 ಮಕ್ಕಳು ಆಸ್ಪತ್ರೆಗೆ ಸೇರಿದ್ದಾರೆ. 4 ಮಕ್ಕಳಿಗೆ ಗಂಭೀರ ಗಾಯಗಳಾಗಿವೆ. ಇದೇನಾ ಮುಖ್ಯಮಂತ್ರಿಗಳ ಬಡವರ ಪರ ಕಾಳಜಿ ಕಿಡಿಕಾರಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಎಲ್ಲಿದ್ದಾರೆ? ಅವರನ್ನು ಹುಡುಕಿ ಕೊಡಿ ಮುಖ್ಯಮಂತ್ರಿಗಳೇ ಎಂದು ಕೇಳಿದ್ದಾರೆ.

ರಾಜ್ಯದಲ್ಲಿ ಬಾಣಂತಿಯರ ಸಾವು ನಿತ್ಯೋತ್ಸವವಾಗಿ ರಾಜ್ಯ ತಲ್ಲಣಗೊಂಡ ಸಂದರ್ಭದಲ್ಲೂ ಕೂಡ ಮಹಿಳಾ, ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ತಮ್ಮ ಮನೆ ಮತ್ತು ಕಚೇರಿಯಿಂದ ಹೊರಗೆ ಬಂದು ಕೆಲಸ ಮಾಡುತ್ತಿಲ್ಲ. ಕಳೆದ ಒಂದೂವರೆ ವರ್ಷದಿಂದ ಅವರು ಸಚಿವೆಯಾಗಿದ್ದಾರೆ. ಇದೇನಾ ಈ ಸರ್ಕಾರ ಮಹಿಳೆಯರಿಗೆ ಕೊಡುವ ಗೌರವ ಮತ್ತು ನ್ಯಾಯ ಅಂತ ಕಿಡಿಕಾರಿದರು.

### ಗಮನಿಸಿ ಸರಿಪಡಿಸಲಿ

ಇಲ್ಲಿಗೆ ಬಡವರ- ಕೂಲಿಕಾರರ ಮಕ್ಕಳು ಬರುತ್ತಾರೆ. ಅವರಿಗೆ ಯಾವ ರಕ್ಷಣೆ ಇದೆ? ಈ ಸರಕಾರವು ಯಾವ ನೈತಿಕತೆ ಮೇಲೆ ಸದಾ ವಿಪಕ್ಷವನ್ನು ಟೀಕೆ ಮಾಡುತ್ತಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ತಮ್ಮ ಮನೆ, ಕಚೇರಿಯಿಂದ ಹೊರಕ್ಕೆ ಬಂದು ಇಲಾಖೆಯಲ್ಲಿ ಏನು ನಡೆಯುತ್ತಿದೆ ಎಂದು ಗಮನಿಸಿ ಸರಿಪಡಿಸಲಿ. ಇಲ್ಲವಾದರೆ ರಾಜೀನಾಮೆ ಕೊಟ್ಟು ಮನೆಗೆ ಹೋಗಲಿ ಎಂದು ಒತ್ತಾಯಿಸಿದರು.

## ಈ ರಾಜ್ಯಕ್ಕೂ ಸಿದ್ದರಾಮಯ್ಯ ಹೆಸರನ್ನೇ ಇಟ್ಟು ಬಿಡಲಿ

• ಉದಯವಾಹಿನಿ, ಮೈಸೂರು



ಇಡೀ ಕರ್ನಾಟಕಕ್ಕೆ ಸಿದ್ದರಾಮಯ್ಯ ಅವರು ಬಹಳ ದೊಡ್ಡ ಕೊಡುಗೆ ಕೊಟ್ಟಿದ್ದಾರೆ.

ಈ ರಾಜ್ಯಕ್ಕೂ ಅವರ ಹೆಸರೆ ಇಟ್ಟು ಬಿಡಲಿ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಿಡಿಕಾರಿದರು. ಮೈಸೂರಿನಲ್ಲಿ ಕೆಆರ್‌ಎಸ್ ರಸ್ತೆಗೆ ಸಿಎಂ ಹೆಸರು ಇಡುವ ವಿಚಾರವಾಗಿ ಮಾತನಾಡಿದ ಅವರು, ಮಹಾರಾಜರ ಮನೆತನಕ್ಕೆ ಸರ್ಕಾರ ಯಾಕೆ ಅಪಮಾನ ಮಾಡ್ತಿದೆ ಸಿಎಂ ಈ ವಿಚಾರದಲ್ಲಿ ಜಾಣ ಮೌನದಲ್ಲಿದ್ದಾರೆ.

ತಮ್ಮ ಬೆಂಬಲಿಗರ ಛೂ ಬಿಟ್ಟು ರಸ್ತೆಗೆ ತಮ್ಮ ಹೆಸರಿಡಿಸಿಕೊಳ್ತಿದ್ದಾರೆ. ಸಿದ್ದರಾಮಯ್ಯ ಹೆಸರನ್ನು ದೇವನೂರು ಬಡಾವಣೆಯ ಕೆಸರೆ ಗ್ರಾಮಕ್ಕೆ ಇಡಲಿ. ಇಡೀ ಕರ್ನಾಟಕಕ್ಕೆ ಸಿದ್ದರಾಮಯ್ಯ ಅವರು ಬಹಳ ದೊಡ್ಡ ಕೊಡುಗೆ ಕೊಟ್ಟಿದ್ದಾರೆ. ಈ ರಾಜ್ಯಕ್ಕೂ ಅವರ ಹೆಸರೇ ಇಟ್ಟು ಬಿಡಲಿ. ಈ ಹೆಸರಿನ ರಾಜಕಾರಣವನ್ನು ಸಿದ್ದರಾಮಯ್ಯ ಕೈ ಬಿಡಬೇಕು ಎಂದು ಗರಂ ಆದರು ಹೆಚ್‌ಡಿಕೆ, ಮೈಸೂರಿಗೆ ನನ್ನ ಅವಧಿಯಲ್ಲೂ ಬಹಳ ಕೊಡುಗೆ ಕೊಟ್ಟಿದ್ದೇನೆ. ಹಾಗಂತ ನನ್ನ ಹೆಸರಿಡಿ ಎಂದು ಕೇಳಲು ಆಗುತ್ತಾ ಎಂದು ಪ್ರಶ್ನಿಸಿದರು. ಜೆಡಿಎಸ್ ಜೊತೆ ಜಿ.ಟಿ.ದೇವೇಗೌಡ ಮುನಿಸು ಕುರಿತು ಮಾತನಾಡಿ, ಜನತಾದಳಕ್ಕೂ ಜಿಟಿಡಿಗೂ ಗಂಡ-ಹೆಂಡತಿ ಸಂಬಂಧ ಇದ್ದ ರೀತಿ. ಜಗಳ ಮುನಿಸು ನಡೆಯುತ್ತವೆ. ಸಂಬಂಧವೇನೂ ಮುರಿಯುವುದಿಲ್ಲ. ಆಯಾ ಸಂದರ್ಭಕ್ಕೆ ಜಿಟಿಡಿ ಅನ್ನಿಸಿದ್ದನ್ನು ಹೇಳುತ್ತಾರೆ. ಅಷ್ಟಕ್ಕೆ ನಮ್ಮ ಅವರ ಸಂಬಂಧ ಮುಗಿಯಿತು ಅಂತಾ ಅರ್ಥ ಅಲ್ಲ. ಜಿಟಿಡಿ ಯಾವ ಪಕ್ಷಕ್ಕೂ ಹೋಗಲ್ಲ. ನಮ್ಮಲ್ಲೇ ನಮ್ಮ ಜೊತೆಯೇ ಇದ್ದಾರೆ.

ನಮ್ಮ ಪಕ್ಷದ 18 ಶಾಸಕರ ಶಕ್ತಿ ಕಾಂಗ್ರೆಸ್‌ಗೆ ಗೊತ್ತಿದೆ. ಹೀಗಾಗಿ, ನಮ್ಮ ಶಾಸಕರ ಒಗ್ಗಟ್ಟು ಮುರಿಯುವ ಯತ್ನ ಆಗಾಗ ಮಾಡ್ತಾ ಇರುತ್ತಾರೆ. ಇದರಲ್ಲಿ ಅವರು ಯಶಸ್ವಿ ಆಗಲ್ಲ ಎಂದು ಸ್ಪಷ್ಟಪಡಿಸಿದರು.

# ಸಿಎಂ ಬದಲಾವಣೆ: ಸಿದ್ದರಾಮಯ್ಯ ವಿರುದ್ಧ ಕಾಂಗ್ರೆಸ್‌ನಲ್ಲಿ ಯುದ್ಧ ಆರಂಭ

▶▶ ಸ್ವಾಮಿ ಸಿದ್ದರಾಮಯ್ಯನವರೇ ನಾನು ಭವಿಷ್ಯ ನುಡಿಯುತ್ತೇನೋ ▶▶ ನನ್ನ ರಾಜಕೀಯ ಲೆಕ್ಕಾಚಾರವೇ ಎಂಬುದು ಮುಂದಿನ ದಿನಗಳಲ್ಲಿ ಗೊತ್ತಾಗಲಿದೆ

• ಉದಯವಾಹಿನಿ, ಶಿವಮೊಗ್ಗ


**ಸಿಎಂ ಸ್ಥಾನ ಬಿಟ್ಟುಕೊಡಲು ಸಿದ್ದು ಸಿದ್ಧರಿಲ್ಲ**

ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಕಾಂಗ್ರೆಸ್ಸಿನಲ್ಲಿ ಈಗಾಗಲೇ ಯುದ್ಧ ಆರಂಭವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ. ಸ್ವಾಮಿ ಸಿದ್ದರಾಮಯ್ಯನವರೇ ನಾನು ಭವಿಷ್ಯ ನುಡಿಯುತ್ತೇನೋ, ನನ್ನ ರಾಜಕೀಯ ಲೆಕ್ಕಾಚಾರವೇ ಎಂಬುದು ಮುಂದಿನ ದಿನಗಳಲ್ಲಿ ಗೊತ್ತಾಗಲಿದೆ. ಒಂದಂತೂ ಸತ್ಯ. ರಾಜ್ಯ ಸರಕಾರದಲ್ಲಿ ಎಲ್ಲವೂ ಸರಿ ಇಲ್ಲ ಎನ್ನುವುದಕ್ಕೆ ಡಿ.ಕೆ.ಶಿವಕುಮಾರ್ ಅನುಪಸ್ಥಿತಿಯಲ್ಲಿ ನಡೆದ ಸಿದ್ದರಾಮಯ್ಯ ಪ್ರಾಯೋಜಿತ ಔತಣಕೂಟವೇ ಸಾಕ್ಷಿ ಎಂದರು.

**ಸಿದ್ದರಾಮಯ್ಯನವರು ಸಿಎಂ ಸ್ಥಾನ ಬಿಟ್ಟುಕೊಡಲು ಸಿದ್ಧರಿಲ್ಲ:** ಅವರನ್ನು ಮುಖ್ಯಮಂತ್ರಿ ಸ್ಥಾನದಲ್ಲಿ ಮುಂದುವರೆಸಲು ಅವರ ವಿರೋಧಿ ಬಣಗಳೂ ಸಿದ್ಧವಿಲ್ಲ ಎಂಬುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಬಜೆಟ್ ಬಳಿಕ ಸಿದ್ದರಾಮಯ್ಯನವರು ರಾಜೀನಾಮೆ ಕೊಡುವ ಮತ್ತು ಆ ಸಂಬಂಧ ಕೇಂದ್ರದಲ್ಲಿ ಚರ್ಚೆ ನಡೆದಿರುವ ಬಗ್ಗೆ ಮಾಹಿತಿ ಹೊರಬರುತ್ತಿದೆ. ಬಜೆಟ್ ನಂತರದಲ್ಲಿ ಸಿದ್ದರಾಮಯ್ಯನವರು ರಾಜೀನಾಮೆ ಕೊಡಬೇಕಾಗುವ ಕಾರಣಕ್ಕೆ ಒಂದು ರಾಜಕೀಯ ದಾಳವನ್ನು ಉರುಳಿಸಲು ನಿನ್ನೆ ಮುನ್ನುಡಿ ಬರೆದಿದ್ದಾರೆ ಎಂದು ತಿಳಿಸಿದರು.

ಸಚಿನ್ ಪಾಂಚಾಳ ಅವರ ಆತ್ಮಹತ್ಯೆ ಸಂಬಂಧ ಗುಲ್ಬರ್ಗದಲ್ಲಿ ಪ್ರಿಯಾಂಕ ಖರ್ಗೆ ಅವರ ಮನೆಗೆ ಮುತ್ತಿಗೆ ಹಾಕಲಾಗುತ್ತಿದೆ. ಪ್ರಿಯಾಂಕ್ ಆಪ್ತ ಮಿತ್ರ, ಕಾಂಗ್ರೆಸ್ ಮುಖಂಡ ರಾಜು ಕಪನೂರ್ ಬೆದರಿಕೆಯಿಂದ ಆತ್ಮಹತ್ಯೆ ನಡೆದಿದೆ. ಮೃತರ ಕುಟುಂಬದ ಕೋರಿಕೆಯಂತೆ ಸಂಪೂರ್ಣ ಪ್ರಕರಣದ ಸಿಬಿಐ ತನಿಖೆಗೆ ಒತ್ತಾಯಿಸುತ್ತಿದ್ದೇವೆ ಎಂದು ಅವರು ತಿಳಿಸಿದರು.

ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿದ ಅವರು, ಹಿಂದೂ ಬಿಜೆಪಿ ಮುಖಂಡರ ಹತ್ಯೆಗೆ ಮಹಾರಾಷ್ಟ್ರದಿಂದ ಸುಪಾರಿ ಕಿಲ್ಲರಳಿಗೆ ಕುಮ್ಮಕ್ಕು ಕೊಟ್ಟಿದ್ದನ್ನೂ ವಿವರಿಸಿದರು. ಶಾಸಕ ಮಿತ್ರ ಪ್ರಿಯಾಂಕ್ ಖರ್ಗೆಯವರು ಪ್ರಾಮಾಣಿಕರಾಗಿದ್ದರೆ ಸಿಬಿಐ ತನಿಖೆಗೆ ಕೊಡಿಸಲಿ ಎಂದು ಒತ್ತಾಯಿಸಿದರು.ಮುಖ್ಯಮಂತ್ರಿಗಳನ್ನು ನಂಬಲು ಹೋಗದಿರಿ; ನಿಮಗೆ ನ್ಯಾಯ ಸಿಗುವ ಭರವಸೆ ನನಗಂತೂ ಇಲ್ಲ. ನಿಮ್ಮ ಪಕ್ಷದಲ್ಲೇ ನಿಮ್ಮ ವಿರುದ್ಧ ಷಡ್ಯಂತ್ರ ನಡೆಯುತ್ತಿದೆ.



### ಸಚಿವೆ ಲಕ್ಷ್ಮಿ ಹೆಬ್ಬಾಳ್ಳರ್ ಅವರು ಈ ಸಂಬಂಧ ರಾಜೀನಾಮೆ ಕೊಡಬೇಕೆಂದು

ರಾಜ್ಯದಲ್ಲಿ 736ಕ್ಕೂ ಹೆಚ್ಚು ಬಾಣಂತಿಯರ ಸಾವು, ಸಾವಿರಕ್ಕೂ ಹೆಚ್ಚು ನವಜಾತ ಶಿಶುಗಳ ಸಾವು ಸಂಭವಿಸಿದೆ. ಈ ಸರಣಿ ಸಾವು ಈಗಲೂ ಮುಂದುವರೆದಿದೆ ಎಂದ ಅವರು, ಕಳಪೆ ಔಷಧಿ, ರಾಜ್ಯ ಸರಕಾರದ ವೈಫಲ್ಯ ಇದಕ್ಕೆ ಕಾರಣ ಎಂದು ಆರೋಪಿಸಿದರು. ಮೃತರ ಕುಟುಂಬಕ್ಕೆ ಪರಿಹಾರವನ್ನೂ ನೀಡಿಲ್ಲ ಎಂದು ಟೀಕಿಸಿದರು. ಆರೋಗ್ಯ ಇಲಾಖೆ ಸಚಿವ ದಿನೇಶ್ ಗುಂಡೂರಾವ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಳರ್ ಅವರು ಈ ಸಂಬಂಧ ರಾಜೀನಾಮೆ ಕೊಡಬೇಕೆಂದು ವಿಜಯೇಂದ್ರ ಅವರು ಆಗ್ರಹಿಸಿದರು.

ಪ್ರಿಯಾಂಕ್ ಖರ್ಗೆ ಪರವಾಗಿ ಯಾರೂ ಮಾತನಾಡುತ್ತಿಲ್ಲ ಗಣಪತಿ ಆತ್ಮಹತ್ಯೆ ಪ್ರಕರಣದಲ್ಲಿ ಸಚಿವ ಜಾರ್ಜ್ ರಾಜೀನಾಮೆ ನೀಡಿದ ಮಾದರಿಯಲ್ಲಿ ರಾಜೀನಾಮೆ ಕೊಟ್ಟು ಸಿಬಿಐ ತನಿಖೆ ಎದುರಿಸಿ ಎಂದು ಬಿ ವೈ ವಿಜಯೇಂದ್ರ ಅವರು ತಿಳಿಸಿದರು.

ಕೇಂದ್ರದ ನರೇಂದ್ರ ಮೋದಿಜೀ ನೇತೃತ್ವದ ಸರಕಾರವು ಬಾಣಂತಿಯರು, ಹಸುಗೂಸುಗಳಿಗೆ ಸಂಬಂಧಿಸಿ ಮಾತೃವಂದನಾ, ಇಂದ್ರಧನುಷ್ ಸೇರಿ ಅನೇಕ ಯೋಜನೆಗಳನ್ನು ನೀಡಿದೆ. ಅಂಥ ಯೋಜನೆಗಳು ಸರಿಯಾಗಿ ತಲುಪುತ್ತಿಲ್ಲ. ಅವಕ್ಕೂ ಕತ್ತರಿ ಹಾಕಲಾಗುತ್ತಿದೆ ಎಂದು ಆಕ್ಷೇಪಿಸಿದರು.

ಮೃತರ ಕುಟುಂಬಕ್ಕೆ 25 ಲಕ್ಷ ಪರಿಹಾರವನ್ನು ರಾಜ್ಯ ಸರಕಾರ ಘೋಷಿಸಬೇಕು; ನವಜಾತ ಶಿಶುಗಳ ಸಾವಿಗೆ ಪರಿಹಾರ ಕೊಡಬೇಕೆಂದು ಒತ್ತಾಯಿಸಿದರು. ಮುಡಾದ ಹಗರಣ, 62 ಕೋಟಿ ಕೊಟ್ಟರೆ ಮಾತ್ರ 14 ನಿವೇಶನಗಳನ್ನು ವಾಪಸ್ ಮಾಡುವುದಾಗಿ ಹೇಳಿ ನಿವೇಶನಗಳನ್ನು ಹಣ ಪಡೆಯದೆ ವಾಪಸ್ ಮಾಡಲು ಬಿಜೆಪಿ ತೀವ್ರ ಹೋರಾಟ ಕಾರಣ ಆದುದನ್ನೂ ಅವರು ಪ್ರಸ್ತಾಪಿಸಿದರು.

> ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ನಾಜೀ ಅವರು ಬೆಂಗಳೂರಿಗೆ ಬಂದಿದ್ದು, ಅವರನ್ನು ಭೇಟಿ ಮಾಡಿದ್ದೇನೆ. ಪಕ್ಷದ ಮುಖಂಡ, ಉಗ್ರಾಣ ನಿಗಮದ ಮಾಜಿ ಅಧ್ಯಕ್ಷ ಮತ್ತು ಬಿಜೆಪಿ ಮುಖಂಡರಾದ ಬಳಿಗಾರ್ ಅವರು ನಿಧನರಾಗಿದ್ದು ಅನಿವಾರ್ಯವಾಗಿ ಶಿಕಾರಿಪುರಕ್ಕೆ ಬರಬೇಕಿತ್ತು. ಆದ್ದರಿಂದ ಇವತ್ತು ಗುಲ್ಬರ್ಗಕ್ಕೆ ತೆರಳಲಾಗಿಲ್ಲ
>
> – ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹7,871/Gram24ct ₹7,215/Gram22ct ಬೆಳ್ಳಿ: ₹92.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ನ ವಿರೋಧೋ ಬಲವತಾ

ಕ್ಷಮೋ ರಾವಣ ತೇನ ತೇ.
ಅನಾದೃತ್ಯ ತು ತದ್ವಾಕ್ಯಂ ರಾವಣಃ ಕಾಲಚೋದಿತಃ.
ವಾಲ್ಮೀಕಿ ರಾಮಾಯಣದ ಮಾತು. ತಂಗಿ ಶೂರ್ಪಣಖೆಗೆ ಆದ ಗಾಯ ಅವಮಾನ ಖರ ಮೊದಲಾದ ತನ್ನವರ ಸಂಹಾರದಿಂದಾಗಿ ರಾಮನ ಮೇಲೆ ಸೇಡು ತೀರಿಸಿಕೊಳ್ಳಲು ರಾವಣ ನಿರ್ಧರಿಸಿದ. ಮಾರೀಚನ ಬಳಿ ಬಂದು ಮಾರುವೇಷದಿಂದ ರಾಮನನ್ನು ವಂಚಿಸಲು ಹೇಳಿದ. ರಾಮನ ಸಾಮರ್ಥ್ಯ ತಿಳಿದಿದ್ದ ಮಾರೀಚ ರಾವಣನಿಗೆ ಬುದ್ಧಿ ಹೇಳುತ್ತಾನೆ. ಬಲಿಷ್ಠರಾದವರೊಂದಿಗೆ ವಿರೋಧ ಕಟ್ಟಿಕೊಳ್ಳುವುದು ಒಳಿತಲ್ಲ (ಬಡವನ ಸಿಟ್ಟು ದವಡೆಗೆ ಮೂಲ ಎಂಬ ಗಾದೆ ಇದೆ) ಎಂದು ತಿಳಿಸಿ ಹೇಳುತ್ತಾನೆ. ಆದರೆ ರಾವಣ ಈ ಬುದ್ಧಿಮಾತನ್ನು ಕೇಳುವ ಸ್ಥಿತಿಯಲ್ಲಿ ಇರಲಿಲ್ಲ. ಕಾಲ ಕೂಡಿಬಂದಾಗ ಯಾರೂ ಏನನ್ನೂ ತಡೆಯಲಾಗದು. ರಾವಣನಿಗೆ ಕೆಟ್ಟ ಕಾಲ ಕೂಡಿ ಬಂದಿತ್ತು. ಆದ್ದರಿಂದ ಆತ ಮಾರೀಚನ ಹಿತೋಪದೇಶವನ್ನು ಧಿಕ್ಕರಿಸಿದ. ರಾವಣನ ಭಯದಿಂದಾಗಿ ಆತನಿಗೆ ನೆರವಾಗಲು ಸಿದ್ಧನಾಗುತ್ತಾನೆ. ರಾವಣ ಮಾರೀಚನೊಂದಿಗೆ ರಾವಣ ಶ್ರೀರಾಮ ನೆಲೆಸಿದ ಆಶ್ರಮದತ್ತ ಮುನ್ನುಗ್ಗುವನು.

## ಬೈಕ್‌ಗೆ ಬಿಬಿಎಂಪಿ ಕಸದ ಲಾರಿ ಡಿಕ್ಕಿಯಾಗಿ ಅಕ್ಕ-ತಂಗಿ ಸ್ಥಳದಲ್ಲೇ ಸಾವು

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಬಿಬಿಎಂಪಿ ಕಸದ ಲಾರಿ ಬೈಕ್ ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರರಿಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಬೆಂಗಳೂರಿನ ಥಣಿಸಂದ್ರ ಮುಖ್ಯ ರಸ್ತೆಯಲ್ಲಿ ಬೈಕ್ ಗೆ ಡಿಕ್ಕಿ ಹೊಡೆದ ಕಸದ ಲಾರಿ ಸವಾರರ ಮೇಲೆ ಹರಿದು ಹೋಗಿದೆ. ಇಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮೃತರನ್ನು ನಾಜಿಯಾ ಸುಲ್ತಾನ್ ಹಾಗೂ ನಾಜಿಯಾ ಇರ್ಫಾನ್ ಎಂದು ಗುರುತಿಸಲಾಗಿದೆ. ಅಪಘಾತದ ಬೆನ್ನಲ್ಲೇ ಪೊಲೀಸರು ಕಸದ ಲಾರಿ ಚಾಲಕನನ್ನು ವಶಕ್ಕೆ ಪಡೆದಿದ್ದಾರೆ. ಮೃತದೇಹಗಳನ್ನು ಯಲಹಂಕ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ.

## ಕರ್ನಾಟಕದಲ್ಲಿ 4 ವರ್ಷಗಳಲ್ಲಿ 50 ಆನೆಗಳು ಕರೆಂಟ್ ಶಾಕ್‌ಗೆ ಬಲಿ

• ಉದಯವಾಹಿನಿ, ಬೆಂಗಳೂರು

ಕಳೆದ ನಾಲ್ಕು ವರ್ಷಗಳಲ್ಲಿ ವಿದ್ಯುತ್ ಸ್ಪರ್ಶದಿಂದ 50 ಆನೆಗಳು ಸಾವನ್ನಪ್ಪಿದ್ದು, ಮಡಿಕೇರಿ ವಿಭಾಗದಲ್ಲಿ ಅತಿ ಹೆಚ್ಚು ವಿದ್ಯುತ್ ಅವಘಡ (8) ಸಂಭವಿಸಿದ್ದು ಅವುಗಳಲ್ಲಿ ಸುಮಾರು 12 ಆನೆಗಳು ಹುಲಿ ಸಂರಕ್ಷಿತ ಪ್ರದೇಶದಲ್ಲಿ ದಾಖಲಾಗಿವೆ. ಕರ್ನಾಟಕದಲ್ಲಿ ಆನೆಗಳ ಸಂಖ್ಯೆ 2017 ರಲ್ಲಿ 6,049 ರಿಂದ 2023 ರ ಆರಂಭದ ವೇಳೆಗೆ 6,395 ಕ್ಕೆ ಏರಿದೆ. ರಾಜ್ಯವು ತನ್ನ ಸಂರಕ್ಷಣಾ ಪ್ರಯತ್ನಗಳಿಗೆ ಮನ್ನಣೆ ನೀಡಿದರೂ, 'ಅಭಿವೃದ್ಧಿ' ಯೋಜನೆಗಳ ಪ್ರಸರಣದಿಂದಾಗಿ ಆವಾಸಸ್ಥಾನಗಳು ನಾಶವಾಗುತ್ತಿರುವ ಸಮಯದಲ್ಲಿ ಹೆಚ್ಚುತ್ತಿರುವ ಸಾವಿನ ಸಂಖ್ಯೆಯು ಆತಂಕ ಹೆಚ್ಚಿಸಿದೆ. ಅರಣ್ಯ ಇಲಾಖೆಯು ಸಂರಕ್ಷಿತ ಪ್ರದೇಶಗಳಲ್ಲಿನ ವಿದ್ಯುತ್ ಆಘಾತದಿಂದ ಸಾವನ್ನಪ್ಪಿದ ಆನೆಗಳ ಕುರಿತು ಮಾಹಿತಿ ಹೀಗಿದೆ. ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ (5), ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ (4), ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶ (3), ಶಿವಮೊಗ್ಗ ವನ್ಯಜೀವಿ ವಿಭಾಗ (3), ಕಾವೇರಿ ವನ್ಯಜೀವಿ ಅಭಯಾರಣ್ಯ (3), ಮತ್ತು ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ (1) ಆನೆಗಳು ಸಾವನ್ನಪ್ಪಿವೆ. ವನ್ಯಜೀವಿಗಳು ಹೆಚ್ಚಿನ ಮಟ್ಟದ ರಕ್ಷಣೆಯನ್ನು ಅನುಭವಿಸಬೇಕಾದ ಪ್ರದೇಶಗಳಲ್ಲಿ ಸುಮಾರು 20 ಸಾವುಗಳು ಸಂಭವಿಸಿವೆ.

## ಚಲಿಸುತ್ತಿದ್ದ ಆಟೋದಿಂದ ಜಿಗಿದು ಮಹಿಳೆ ಸೇಫ್ ಆದ ಕೇಸ್ : ಚಾಲಕ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರಲ್ಲಿ ಆಟೋ ಚಾಲಕನ ದುರ್ನಡತೆಯಿಂದ ಮಹಿಳೆ ಒಬ್ಬರು ಚಲಿಸುತ್ತಿದ್ದ ಆಟೋದಿಂದ ಜಿಗಿದು ಸೇಫ್ ಆದಂತಹ ಪ್ರಕರಣಕ್ಕೆ ಸಂಬಂಧಪಟ್ಟಂತೆ, ಇದೀಗ ಆಟೋ ಚಾಲಕ ಸುನಿಲ್ ಎಂಬಾತನನ್ನು ಅಮೃತ ಹಳ್ಳಿಯ ಠಾಣೆಯ ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಥಣಿಸಂದ್ರದ ನಿವಾಸಿಯಾಗಿದ್ದ ಮಹಿಳೆ, ರಾತ್ರಿ ಕೆಲಸದ ನಿಮಿತ್ತ ಹೊರ ಹೋಗಿದ್ದರು. ವಾಪಸ್ ಮನೆಗೆ ತೆರಳಲು ಹೊರಮಾವಿನಿಂದ ಥಣಿಸಂದ್ರಕ್ಕೆ ಆಯಪ್ ಮೂಲಕ ಆಟೋ ಬುಕ್ ಮಾಡಿದ್ದರು.
8.55ರ ಸುಮಾರಿಗೆ ಪಿಕಪ್ ಲೊಕೇಷನ್ ಬಳಿ ಬಂದಿದ್ದ ಆಟೋ ಚಾಲಕನು ಮಹಿಳೆಯನ್ನ ಥಣಿಸಂದ್ರಕ್ಕೆ ಡ್ರಾಪ್ ಮಾಡದೇ ಹೆಬ್ಬಾಳ ಕಡೆ ಹೋಗಲಾರಂಭಿಸಿದ್ದ. ತಪ್ಪಾದ ದಾರಿಯಲ್ಲಿ ಹೋಗುತ್ತಿರುವುದನ್ನ ಗಮನಿಸಿದ ಮಹಿಳೆ ಚಾಲಕನಿಗೆ ಹೇಳಿದರೂ ಸಹ ಆತ ಪ್ರತಿಕ್ರಿಯಿಸಿರಲಿರಲಿಲ್ಲ. ಆಟೋ ನಿಲ್ಲಿಸುವಂತೆ ಸೂಚಿಸಿದರೂ ಚಾಲನೆ ಮುಂದುವರಿಸಿದ್ದ. ಇದರಿಂದ ಆತಂಕಗೊಂಡ ಮಹಿಳೆ ಚಲಿಸುತ್ತಿರುವಾಗಲೇ ಆಟೋದಿಂದ ಜಿಗಿದಿದ್ದರು. ಘಟನೆಯ ಕುರಿತು ಮಹಿಳೆಯ ಪತಿ ಅಜರ್ ಖಾನ್ ಎಕ್ಸ್ ಆಯಪ್ ಮೂಲಕ ಪೊಲೀಸರಿಗೆ ದೂರು ನೀಡಿದ್ದರು. ಅಜರ್ ಅವರು ನೀಡಿದ ದೂರಿನ ಮೇರೆಗೆ ಇದೀಗ ಆಟೋ ಚಾಲಕ ಸುನಿಲನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ.

## ದಟ್ಟ ಮಂಜು ವಿಮಾನಗಳ ಹಾರಾಟದಲ್ಲಿ ವ್ಯತ್ಯಯ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಬೆಳಗ್ಗೆಯಿಂದ ದಟ್ಟ ಮಂಜು ಕವಿದ ವಾತಾವರಣ ಹಿನ್ನೆಲೆ ವಿಮಾನಗಳ ಹಾರಾಟದಲ್ಲಿ ವ್ಯತ್ಯಯವಾಗಿದೆ.ಕಡಿಮೆ ಗೋಚರತೆ ಪರಿಣಾಮದಿಂದ ವಿಮಾನಗಳ ಹಾರಾಟದಲ್ಲಿ ವ್ಯತ್ಯಯವಾಗಿದೆ. ಈ ಬಗ್ಗೆ ಎಕ್ಸ್ ಪೋಸ್ಟ್ ಮೂಲಕ ಇಂಡಿಗೋ ಸಂಸ್ಥೆ ಮಾಹಿತಿ ನೀಡಿದೆ.ಈಗಾಗಲೇ ದೆಹಲಿಯಲ್ಲೂ ದಟ್ಟ ಮಂಜು ಹಿನ್ನೆಲೆ, ದೇಶದ ಇತರೆ ನಗರಗಳಿಗೆ ಸಂಪರ್ಕಿಸುವ 200ಕ್ಕೂ ಹೆಚ್ಚು ವಿಮಾನಗಳ ಹಾರಟದಲ್ಲಿ ವ್ಯತ್ಯಯ ಉಂಟಾಗಿದೆ. ಬೆಂಗಳೂರಿನಲ್ಲಿ ಮಂಜು ಮುಸುಕಿದ ವಾತಾವರಣದಿಂದಾಗಿ ಕಡಿಮೆ ಗೋಚರತೆ ಪರಿಸ್ಥಿತಿ ಇದೆ. ಇದು, ವಿಮಾನಗಳ ಕಾರ್ಯಾಚರಣೆಯ ವೇಳಾಪಟ್ಟಿಯಲ್ಲಿ ಬದಲಾವಣೆಗಳಿಗೆ ಕಾರಣವಾಗಬಹುದು. ವಿಮಾನ ನಿಲ್ದಾಣಕ್ಕೆ ಹೋಗುವ ಮೊದಲು ನಿಮ್ಮ ಫ್ಲೈಟ್ ಸ್ಟೇಟಸ್ bit.ly/3Z-WAQXd ಕುರಿತು ಅಪ್‌ಡೇಟ್ ಆಗಿರಲು ನಾವು ನಿಮ್ಮನ್ನು ವಿನಂತಿಸುತ್ತೇವೆ ಎಂದು ಇಂಡಿಗೋ ಪ್ರಯಾಣಿಕರಲ್ಲಿ ಮನವಿ ಮಾಡಿಕೊಂಡಿದೆ.

## 45 ಪ್ರಯಾಣಿಕರು ಪಾರು!

• ಉದಯವಾಹಿನಿ, ಬೆಂಗಳೂರು

ಚಲಿಸುತ್ತಿದ್ದ ಐರಾವತ ಬಸ್ಸಿನ ಇಂಜಿನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು ಅದೃಷ್ಟವಶಾತ್ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಸುಮಾರು 45 ಪ್ರಯಾಣಿಕರು ಪ್ರಾಣಪಾಯದಿಂದ ಪಾರಾಗಿರುವ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದಲ್ಲಿ ನಡೆದಿದೆ. ಹೌದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದ ಬಳಿ 1ಘಟನೆ ನಡೆದಿದೆ. ಎಂ 57 ಈ 0984 ಸಂಖ್ಯೆಯ ಐರಾವತ ಬಸ್‌ನಲ್ಲಿ ಇಂಜಿನ್ ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಬೆಂಗಳೂರಿನಿಂದ ಈ ಒಂದು ಐರಾವತ ಬಸ್ ಚಿಕ್ಕಮಂಗಳೂರಿಗೆ ತೆರಳುತ್ತಿತ್ತು. ಐರಾವತ ಬಸ್‌ನಲ್ಲಿ ತೆರಳುತ್ತಿದ್ದ 45 ಜನ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಕೂಡಲೇ ಘಟನಾ ಸ್ಥಳಕ್ಕೆ ಆಗಮಿಸಿ, ಅಗ್ನಿಶಾಮಕದಳ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಬಳಿಕ ಸಾರಿಗೆ ಸಂಸ್ಥೆಯಿಂದ ಮತ್ತೊಂದು ಬಸ್ ವ್ಯವಸ್ಥೆ ಮಾಡಿ ಪ್ರಯಾಣಿಕರನ್ನು ಕಳುಹಿಸಿಕೊಡಲಾಗಿದೆ. ಘಟನೆ ಕುರಿತು ನೆಲಮಂಗಲ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಧ್ಯರಾತ್ರಿಯಿಂದಲೇ ಸಾರಿಗೆ ಬಸ್ ಟಿಕೆಟ್ ದರ ಏರಿಕೆ

### ಶೇ. 15ರಷ್ಟು ಪ್ರಯಾಣದ ದರ ಹೆಚ್ಚಳ ಮಾಡಲು ಸಭೆ, ಅದರಂತೆ ಪ್ರಸ್ತಾವನೆ ಸಲ್ಲಿಸಲು ಸೂಚನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳ ಪ್ರಯಾಣದರವನ್ನು ಮಧ್ಯ ರಾತ್ರಿಯಿಂದಲೇ ಜಾರಿಗೆ ಬರುವಂತೆ ಏರಿಕೆ ಮಾಡಲಾಗುತ್ತಿದೆ ಎಂಬುದಾಗಿ ರಾಜ್ಯ ಸರ್ಕಾರ ಅಧಿಕೃತ ಆದೇಶದಲ್ಲಿ ತಿಳಿಸಿದೆ. ಈ ಸಂಬಂಧ ಸಾರಿಗೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ನಡವಳಿಯನ್ನು ಹೊರಡಿಸಿದ್ದು ಅದರಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ 2015ರಲ್ಲಿ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ಸಾರಿಗೆ ನಿಗಮಗಳಲ್ಲಿ 2020ರಲ್ಲಿ ಪಯಾಣದ ದರ ಪರಿಷ್ಕರಣೆ ಮಾಡಲಾಗಿರುತ್ತದೆ.ಪ್ರಯಾಣ ದರ ಪರಿಷ್ಕರಣೆಗಾಗಿ ನಿಗಮದ ಸಿಬ್ಬಂದಿ ವೇತನ ವೆಚ್ಚ ಇಂಧನ ವೆಚ್ಚ ಹಾಗೂ ನಿರ್ವಹಣಾ ವೆಚ್ಚವನ್ನು ಪರಿಗಣಿಸಲಾಗುತ್ತಿದೆ.

ಪುಸ್ತುತ ರೂ.9.56 ಕೋಟಿ ಮೊತ್ತವನ್ನು ಹೆಚ್ಚುವರಿಯಾಗಿ ವೆಚ್ಚ ಮಾಡುತ್ತಿದ್ದು, ಸಿಬ್ಬಂದಿ ವೆಚ್ಚ ಸೇರಿ ವಾರ್ಷಿಕವಾಗಿ do.3650.00 ಕೋಟಿ ನಿಗಮಕ್ಕೆ ಹೊರೆಯಾಗುತ್ತಿದೆ. ಆದ್ದರಿಂದ, ಶೇ. 15ರಷ್ಟು ಪ್ರಯಾಣದ ದರ ಹೆಚ್ಚಳ ಮಾಡಲು ಸಭೆಯು ನಿರ್ಣಯಿಸಿ, ಅದರಂತೆ ಪುಸ್ತಾವನೆ ಸಲ್ಲಿಸಲು ಸೂಚಿಸಲಾಗಿದೆ ಎಂದಿದ್ದಾರೆ. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಇವರು ಕರ್ನಾಟಕ ರಾಜ್ಯದ ನಾಲ್ಕು ರಸ್ತೆ ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕ.ರಾ.ರ.ಸಾ.ನಿಗಮ), ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬೆಂ.ಮ.ಸಾ.ಸಂಸ್ಥೆ), ವಾಯುವ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ವಾ.ಕ.ರ.ಸಾ.ಸಂಸ್ಥೆ) ಮತ್ತು ಕಲ್ಯಾಣ ಕರ್ನಾಟಕ ಸಾರಿಗೆ ನಿಗಮಗಳಲ್ಲಿ (ಕ.ಕ.ರ.ಸಾ.ನಿಗಮ) ಸುಮಾರು 25337 ಬಸ್‌ಗಳಿಂದ ಪ್ರತಿದಿನ ಸುಮಾರು 23038 ಅನುಸೂಚಿಗಳನ್ನು ಕಾರ್ಯಾಚರಿಸಲಾಗುತ್ತಿದೆ. ಅದರಂತೆ, ಪ್ರತಿದಿನ ಸರಾಸರಿ 116.18ಲಕ್ಷ ಪುಯಾಣಿಕರು ನಾಲ್ಕು ರಸ್ತೆ ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಪ್ರಯಾಣಿಸುತ್ತಿರುತ್ತಾರೆ ಎಂದು ತಿಳಿಸಿದ್ದಾರೆ. ಶಕ್ತಿ ಯೋಜನೆಯ ಅನುಷ್ಠಾನದ ನಂತರ ರಾಜ್ಯದಲ್ಲಿ ಸುಮಾರು ಅರವತ್ನಾಲ್ಕು ಲಕ್ಷ ಮಹಿಳಾ ಪ್ರಯಾಣಿಕರು ಆಯ್ದ ಅನುಸೂಚಿಗಳಲ್ಲಿ ಉಚಿತವಾಗಿ ಪ್ರಯಾಣಿ ಸುತ್ತಿದ್ದಾರೆ.

ನಾಲ್ಕು ನಿಗಮಗಳು ಸುಮಾರು 1,01,648 ಸಿಬ್ಬಂದಿಗಳನ್ನು ಹೊಂದಿದ್ದು ಆಯಾ ನಿಗಮಗಳು ಸದರಿ ಸಿಬ್ಬಂದಿಗಳ ಸಂಬಳ ಮತ್ತು ಎಲ್ಲಾ ಭತ್ಯೆಗಳನ್ನು ನಿಗಮಗಳ ಆದಾಯದ ಮೂಲಕ ಮಾತ್ರ ಪಾವತಿಸುತ್ತಿವೆ. ರಾಜ್ಯದ ನಾಲ್ಕು ರಸ್ತೆ ಸಾರಿಗೆ ನಿಗಮಗಳ 2024-25ನೇ ಆರ್ಥಿಕ ವರ್ಷದ 1ನೇ ಏಪ್ರಿಲ್‌ನಿಂದ 30ನೇ ನವೆಂಬರ್‌ವರೆಗೆ ಒಟ್ಟು ಆದಾಯ ರೂ.8418.46 ಕೋಟಿಗಳಾಗಿದ್ದು. ನಾಲ್ಕು ಸಾರಿಗೆ ಸಂಸ್ಥೆಗಳು ಒಟ್ಟು ರೂ.9511.41 ಕೋಟಿಗಳ ವೆಚ್ಚವನ್ನು ಮಾಡಿರುತ್ತವೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಿಗೆ ದಿನಾಂಕ 26-02-2020ರಂದು ಶೇಕಡ 12ರಷ್ಟು ಪ್ರಯಾಣ ದರವನ್ನು ಪರಿಷ್ಕರಿಸಲಾಗಿತ್ತು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ದಿನಾಂಕ:25-04-2014 ರಂದು ಶೇಕಡ 17ರಷ್ಟು ಪ್ರಯಾಣ ದರವನ್ನು ಹೆಚ್ಚಿಸಿ ತದನಂತರ ದಿನಾಂಕ: 10-01- 2015 ರಂದು ಶೇಕಡ 2ರಷ್ಟು, ಪ್ರಯಾಣ ದರವನ್ನು ಪರಿಷ್ಕರಣೆಗೊಳಿಸಿದಾಗ ಅಂದಿನ ದಿನಗಳಲ್ಲಿ ಕ್ರಮವಾಗಿ ಪ್ರತಿ ಲೀಟರ್ ಡೀಸೆಲ್‌ಗೆ ರೂ.60.98 ಮತ್ತು ರೂ.46.24 ಆಗಿದ್ದು, ರಾಜ್ಯದ ನಾಲ್ಕು ಸಾರಿಗೆ ನಿಗಮಗಳಿಗೆ ಪ್ರತಿ ದಿನದ ಡೀಸೆಲ್ ಒಟ್ಟು ವೆಚ್ಚವು ರೂ.9.16 ಕೋಟಿಗಳಾಗಿರುತ್ತದೆ. ಪ್ರಸ್ತುತ, ಸದರಿ ವೆಚ್ಚವು ರೂ.13.21 ಕೋಟಿಗಳಷ್ಟಾಗಿರುತ್ತದೆ. ಅದೇ ರೀತಿ ನಾಲ್ಕು ಸಾರಿಗೆ ಸಂಸ್ಥೆಗಳಿಗೆ ಪ್ರತಿ ದಿನ ಸಿಬ್ಬಂದಿ ವೆಚ್ಚಕ್ಕಾಗಿ (ಸಂಬಳ ಮತ್ತು ಇತರ ವೇತನಗಳು) ರೂ.12.85 ಕೋಟಿಗಳಾಗಿದ್ದು ಪುಸ್ತುತ ರೂ.18.36 ಕೋಟಿಗಳಾಗಿರುತ್ತದೆ. ಸದರಿ ಎರಡು ಅಂಶಗಳಿಂದ ನಾಲ್ಕು ಸಾರಿಗೆ ಸಂಸ್ಥೆಗಳಿಗೆ ಪ್ರತಿ ದಿನ ರೂ.9.56 ಕೋಟಿ ಹೆಚ್ಚುವರಿ ಹೊರೆ ಉಂಟಾಗುತ್ತಿರುತ್ತದೆ ಎಂದು ತಿಳಿಸಿದ್ದಾರೆ.

**ರಾಜ್ಯ ಸರ್ಕಾರ ಅಧಿಕೃತ ಆದೇಶ**

**ಪ್ರಸ್ತುತ 2024-25ನೇ ಆರ್ಥಿಕ ವರ್ಷದಲ್ಲಿ (ನವೆಂಬರ್‌ವರೆಗೆ) ನಿವ್ವಳ ಕೊರತೆಯು ರೂ.1092.95 ಕೋಟಿಗಳಷ್ಟಿರುತ್ತದೆ ಎಂದಿದ್ದಾರೆ.ನಾಲ್ಕು ರಸ್ತೆ ಸಾರಿಗೆ ಸಂಸ್ಥೆಗಳು ಪ್ರಸ್ತುತ ಆರ್ಥಿಕ ಮುಗ್ಗಟ್ಟು ಎದುರಿಸುತ್ತಿವೆ. ಸಾರಿಗೆ ಸಂಸ್ಥೆಗಳಿಗೆ ಡೀಸೆಲ್ ಮತ್ತು ಸಿಬ್ಬಂದಿಗಳಿಗೆ ವೇತನ ಪಾವತಿಸುವುದು ಪ್ರಮುಖ ವೆಚ್ಚಗಳಾಗಿದ್ದು ಸದರಿ ಎರಡು ವೆಚ್ಚಗಳು ಸೇರಿದಂತೆ ಒಟ್ಟು ಶೇಕಡ 90ರಷ್ಟು ವೆಚ್ಚ ಹೆಚ್ಚಳವಾಗಿರುತ್ತದೆ. ಸದರಿ ಎರಡು ಅಂಶಗಳಲ್ಲಿ ಯಾವುದೇ ಬದಲಾವಣೆಯಾದಲ್ಲಿ ನಗದು ಕೊರತೆಗೆ ಕಾರಣವಾಗುತ್ತದೆ.**



## ಸೋಲಾರ್ ಪಂಪ್ ಸೆಟ್‌ಅಳವಡಿಕೆಗೆ ಸರ್ಕಾರದಿಂದ ಸಿಗಲಿದೆ 1.5 ಲಕ್ಷ ರೂ. ಸಹಾಯಧನ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಜ್ಯ ಸರ್ಕಾರವು ರೈತರಿಗೆ ಸಿಹಿಸುದ್ದಿಯೊಂದನ್ನು ನೀಡಿದ್ದು, ಕುಸುಮ್ ಬಿ ಯೋಜನೆಯಡಿ ಜಾಲ ಮುಕ್ತ ಸೌರ ಕೃಷಿ ಪಂಪ್ಸೆಟ್ ಅಳವಡಿಸಲು ಅರ್ಜಿ ಆಹ್ವಾನಿಸಲಾಗಿದೆ. ರಾಜ್ಯ ಸರ್ಕಾರದಿಂದ ರೈತರಿಗೆ ಹಗಲು ವೇಳೆಯಲ್ಲಿ ನೀರಾವರಿ ಸೌಕರ್ಯವನ್ನು ಒದಗಿಸುವ ಮಹತ್ವಾಕಾಂಕ್ಷಿ ಸೋಲಾರ್ ಪಂಪ್ಸೆಟ್ ಯೋಜನೆ ಇದಾಗಿದೆ.. ನೀರಾವರಿಗೆ ಸಾಂಪ್ರದಾಯಿಕ ವಿದ್ಯುತ್ ಅವಲಂಬನೆಯನ್ನು ಕಡಿಮೆ ಮಾಡಿ, ಸೌರಶಕ್ತಿಯ ಬಳಕೆ ಮೂಲಕ ರೈತರು ಸ್ವಾವಲಂಬನೆ ಸಾಧಿಸಲು ಕುಸುಮ್ ಬಿ ಯೋಜನೆ ರೂಪಿಸಲಾಗಿದೆ.

ಕೃಷಿ ಕ್ಷೇತ್ರವನ್ನು ಲಾಭದಾಯಕವಾಗಿಸಲು, ಸೌರಶಕ್ತಿ ಬಳಕೆಯ ಉತ್ತೇಜನಕ್ಕೆ ಸರ್ಕಾರದಿಂದ ಶೇ.80 ರಷ್ಟು ಹೆಚ್ಚಿನ ಸಹಾಯಧನ ನೀಡಲಾಗುತ್ತಿದೆ.

ಸೋಲಾರ್ ಆಧರಿತ 3 ಹೆಚ್‌ಪಿ ಸೋಲಾರ್ ಪಂಪ್‌ಸೆಟ್‌ಗಳಿಗೆ 2 ಲಕ್ಷವಾದರೆ ಶೇ.50 %ರಂತೆ 1 ಲಕ್ಷ ರೂಪಾಯಿ ಸಹಾಯಧನ ಸಿಗಲಿದೆ. 3 ಹೆಚ್‌ಪಿ ಸೋಲಾರ್ ಗಿಂತ ಮೇಲ್ಪಟ್ಟ ಸೋಲಾರ್ ಪಂಪ್‌ಸೆಟ್‌ಗಳಿಗೆ 3 ಲಕ್ಷ ಖರ್ಚಿಗೆ 1.5ಲಕ್ಷ ರೂಪಾಯಿ ಸಹಾಯಧನ ದೊರೆಯಲಿದೆ. ಕುಸುಮ್ ಬಿ ಯೋಜನೆಯಡಿ ಜಾಲ ಮುಕ್ತ ಸೌರ ಕೃಷಿ ಪಂಪ್ಸೆಟ್ ಅಳವಡಿಸಲು ಒತ್ತು ನೀಡಿ ರಾಜ್ಯ ಸರ್ಕಾರವು ಸಬ್ಸಿಡಿ ಮೊತ್ತವನ್ನು ಶೇ. 30 ರಿಂದ ಶೇ. 50ಕ್ಕೆ ಹೆಚ್ಚಿಸಿದೆ. ಕುಸುಮ್ ಬಿ ಯೋಜನೆಯಡಿ ರೈತರಿಗೆ ಸೌರ ಫಲಕಗಳು, ಸಲ್ಮರ್ಸಿಬಲ್/ಸರ್ಫೇಸ್ ಡಿಸಿ ಪಂಪ್ಗಳು, ಮೌಂಟಿಂಗ್ ಸ್ಟ್ರಕ್ಚರ್, ಪ್ಯಾನಲ್ ಬೋರ್ಡ್, ಪೈಪ್ ಮತ್ತು ಕೇಬಲ್ ಸರಬರಾಜು ಮಾಡಲಾಗುತ್ತದೆ.

ಸೌರ ಪಂಪ್ಸೆಟ್‌ಗಳ ಸ್ಥಾಪನೆ ಸುಲಭವಾಗಿದ್ದು, ದೀರ್ಘಕಾಲ ಬಾಳಿಕೆ ಬರುವ ಕಾರಣದಿಂದ ಗ್ರಾಮೀಣ ಪ್ರದೇಶಗಳಲ್ಲೂ ಸೌರ ತಂತ್ರಜ್ಞಾನ ಹೆಚ್ಚು ಜನಪ್ರಿಯವಾಗುತ್ತಿದೆ. ಸೌರ ಪಂಪ್ಸೆಟ್ ಬಳಕೆಯಿಂದ ಸುಮಾರು 8 ಗಂಟೆಗಳ ಕಾಲ ಹಗಲಿನ ವೇಳೆಯಲ್ಲಿ ಕೃಷಿ ಚಟುವಟಿಕೆಗಳಿಗೆ ವಿದ್ಯುತ್ ಪೂರೈಕೆಯಾಗಲಿದೆ. ಕೃಷಿ ಭೂಮಿಯಲ್ಲಿ ಅಳವಡಿಸಲಾಗುವ ಸೋಲಾರ್ ಪಂಪ್ಗಳನ್ನು 5 ವರ್ಷಗಳ ಕಾಲ ಪೂರೈಕೆದಾರರೇ ಉಚಿತವಾಗಿ ನಿರ್ವಹಣೆ ಮಾಡಲಿದ್ದಾರೆ.

ರೈತ ಸಮುದಾಯದಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿರುತ್ತದೆ. ಅನಧಿಕೃತ ಪಂಪ್ಸೆಟ್‌ಗಳನ್ನು ಸಕ್ರಮಗೊಳಿಸುವ ಯೋಜನೆಯಡಿ ರೂ. 50 ಗಿಂತ ಹೆಚ್ಚಿನ ಮೊತ್ತವನ್ನು ಪಾವತಿಸಿ ರೈತರು ಅರ್ಜಿ ನೋಂದಾಯಿಸಿದ್ದರೆ, ಇಂಥವರ ನೀರಾವರಿ ಪಂಪ್ಸೆಟೆ ಮೊದಲ ಆದ್ಯತೆ ಯನ್ನು ನೀಡಲಾಗುವುದು. ನೋಂದಣಿ ಹೇಗೆ ರೈತರು ತಮ್ಮ ಆಧಾರ್, ಆರ್‌ಟಿಸಿ, ಬ್ಯಾಂಕ್ ವಿವರಗಳೊಂದಿಗೆ https://souramitra.com ನೋಂದಾಯಿಸಿಕೊಳ್ಳಬಹುದು. ರೈತರ ನೋಂದಣಿ ಸಮಸ್ಯೆ ಪರಿಹರಿಸಲು ಕ್ರೆಡಲ್‌ನಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದ್ದು ದೂರವಾಣಿ ಸಂಖ್ಯೆ 080-22202100 ಸಂಪರ್ಕಿಸಲು ಕೋರಿದೆ.

**ಸೋಲಾರ್ ಪಂಪ್ಸೆಟ್ ಯೋಜನೆ**

## ಕೇಂದ್ರಗಳಲ್ಲಿ ಖಗೋಳ ವಿಜ್ಞಾನಕ್ಕೆ ಉತ್ತೇಜನ

• ಉದಯವಾಹಿನಿ, ಬೆಂಗಳೂರು



ಭಾರತೀಯ ಖಗೋಳ ಭೌತಶಾಸ್ತ್ರ ಸಂಸ್ಥೆ (ಇಂಡಿ ಯನ್ ಇನ್ಸಿಟ್ಯೂಟ್ ಆಫ್ ಆಸ್ಟ್ರೋ ಫಿಸಿಕ್ಸ್ - ಐಐಎ) ರಾಜ್ಯಾದ್ಯಂತ ಗ್ರಾಮೀಣಾಭಿವೃದ್ಧಿ, ಪಂ. ರಾಜ್ ಇಲಾಖೆ ನಿರ್ವಹಿಸುತ್ತಿರುವ ಗ್ರಾಮೀಣ ಗ್ರಂಥಾಲಯಗಳಾದ ಅರಿವು ಕೇಂದ್ರಗಳ ಮೂಲಕ ಖಗೋಳ ವಿಜ್ಞಾನವನ್ನು ಉತ್ತೇಜಿಸಲು ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರಾಜ್ಯದಲ್ಲಿ ಸುಮಾರು 6000 ಅರಿವು ಕೇಂದ್ರಗಳನ್ನು ನಿರ್ವಹಿಸುತ್ತಿದ್ದು, ಇವು ಪ್ರಾಥಮಿಕವಾಗಿ ಗ್ರಾಮೀಣ ಪ್ರದೇಶಗಳಲ್ಲಿದ್ದು ಇವುಗಳನ್ನು ಗ್ರಂಥಾಲಯ ಮೇಲ್ವಿಚಾರಕರು ನಿರ್ವಹಿಸುತ್ತಿದ್ದಾರೆ. ಖಗೋಳ ಭೌತಶಾಸ್ತ್ರ ಸಂಸ್ಥೆಯೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯಂತೆ ಖಗೋಳ ವಿಜ್ಞಾನದಲ್ಲಿ ಅರಿವು ಆಸಕ್ತಿಯನ್ನು ಉತ್ತೇಜಿಸಲು ಗ್ರಾಮೀಣಾಭಿವೃದ್ಧಿ ಇಲಾಖೆಯೊಂದಿಗೆ ಸಂಸ್ಥೆ ವಿವಿಧ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಿದೆ ಹಾಗೂ ಅರಿವು ಕೇಂದ್ರಗಳು ಸೇವೆ ಸಲ್ಲಿಸುವ ಪ್ರದೇಶಗಳ ಸಮುದಾಯಗಳಲ್ಲಿ ವಿಜ್ಞಾನ ಸಾಕ್ಷರತೆ ಮತ್ತು ವೈಜ್ಞಾನಿಕ ಮನೋಭಾವವನ್ನು ಉತ್ತೇಜಿಸುತ್ತದೆ.

ಮೇಲ್ವಿಚಾರಕರ ತರಬೇತಿ, ಮಾರ್ಗದರ್ಶನ, ಕನ್ನಡದಲ್ಲಿ ಖಗೋಳ ವಿಜ್ಞಾನ ಸಂಪನ್ಮೂಲಗಳ ರಚನೆ ಮತ್ತು ಆಕಾಶಕಾಯಗಳ ಘಟನೆಗಳ ಸುತ್ತ ಸಾರ್ವಜನಿಕ ಚಟುವಟಿಕೆಗಳನ್ನು ಆಯೋಜಿಸಿ ವಿವಿಧ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಿದೆ. ಸಾರ್ವಜನಿಕರು, ವಿಶೇಷವಾಗಿ ವಿದ್ಯಾರ್ಥಿಗಳು ಕಡಿಮೆ ವೆಚ್ಚದಲ್ಲಿ ಖಗೋಳ ವಿಜ್ಞಾನಕ್ಕೆ ಸಂಬಂಧಿಸಿದ ಚಟುವಟಿಕೆಗಳನ್ನು ನಡೆಸಲು ಗ್ರಂಥಾಲಯ ಮೇಲ್ವಿಚಾರಕರಿಗೆ ತರಬೇತಿ ನೀಡುವುದು,

ಅರಿವು ಕೇಂದ್ರಗಳಲ್ಲಿನ ಕಂಪ್ಯೂಟರ್ ಲ್ಯಾಬ್‌ಗಳ ಮೂಲಕ ಚರ್ಚೆ, ಸ್ಪರ್ಧೆಗಳನ್ನು ಏರ್ಪಡಿಸುವುದು ಮತ್ತು ಡಿಜಿಟಲ್ ಪರಿಕರಗಳ ರೂಪದಲ್ಲಿ ಆನ್‌ಲೈನ್ ಸಂವಹನಗಳನ್ನು ಉತ್ತೇಜಿಸುವ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗುವುದಲ್ಲದೇ, ಸಣ್ಣ ದೂರದರ್ಶಕಗಳ ಬಳಕೆಯ ತರಬೇತಿಯನ್ನೂ ಸಹ ನೀಡಲಾಗುವುದು.

## ಯೋಗೇಶ್ ಗೌಡ ಕೊಲೆ ಮಾಡಿಸಿದ್ದ ವಿನಯ್ ಕುಲಕರ್ಣಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬಿಜೆಪಿ ಮುಖಂಡ ಯೋಗೇಶ್ ಗೌಡ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಮುಖ ಆರೋಪಿ ಆಗಿರುವಂತಹ ಬಸವರಾಜ್ ಮುತ್ತಗಿ ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ಹೇಳಿಕೆ ದಾಖಲಿಸಿದ್ದು, ಯೋಗೇಶ್ ಗೌಡ ಕೊಲೆ ಮಾಡಿಸಿದ್ದ ಶಾಸಕ ವಿನಯ್ ಕುಲಕರ್ಣಿ ಎಂದು ತಪ್ಪೊಪ್ಪಿಗೆ ಹೇಳಿಕೆ ನೀಡಿದ್ದಾನೆ.

ಹೀಗಾಗಿ ಆಪ್ತನ ತಪ್ಪೋಪ್ಪಿಗೆಯಿಂದ ಶಾಸಕ ವಿನಯ್ ಕುಲಕರಣಿಗೆ ಮತ್ತಷ್ಟು ಸಂಕಷ್ಟ ಎದುರಾಗಲಿದೆ.ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ಬಸವರಾಜ್ ಮುತ್ತಗಿ ಹೇಳಿಕೆ ನೀಡಿದ್ದು, ಕೊಲೆ ಪ್ರಕರಣದ ಪ್ರಮುಖ ಆರೋಪಿ ನ್ಯಾಯಾಲಯದಲ್ಲಿ ಹೇಳಿಕೆ ದಾಖಲಿಸಿದ್ದಾರೆ.

ಆಪ್ತನ ತಪೋಪಿಗೆಯಿಂದ ಶಾಸಕ ವಿನಯ್ ಕುಲಕರ್ಣಿಗೆ ಇದೀಗ ಮತ್ತಷ್ಟು ಸಂಕಷ್ಟ ಎದುರಾಗಿದೆ.

ಬೆಂಗಳೂರಿನಿಂದ ಕರೆಸಿದವರಿಂದಲೇ ಯೋಗೇಶ್ ಗೌಡ ಕೊಲೆ ನಡೆದಿದೆ. ತಪ್ಪೋಪ್ಪಿಗೆಯಲ್ಲಿ ವಿನಯ ಪಾತ್ರದ ಕುರಿತು ವಿಸ್ತೃತವಾಗಿ ಬಸವರಾಜ್ ಮುತ್ತಿಗಿ ಮಾಹಿತಿ ನೀಡಿದ್ದಾನೆ. ಮುತ್ತಗಿ ಹೇಳಿಕೆಯಿಂದ ವಿನಯ್ ಕುಲಕರ್ಣಿ ಮೇಲಿನ ಕಾನೂನು ಕುಣಿಕೆ ಮತ್ತಷ್ಟು ಬಿಗಿಯಾಗುವ ಸಾಧ್ಯತೆ ಇದೆ.

ಧಾರವಾಡದ ವಿಕಾಸ್ ಕಲಬುರ್ಗಿ, ಕೀರ್ತಿ ಕುಮಾರ್ ಕುರಹಟ್ಟಿ, ವಿಕ್ರಂ, ಸಂದೀಪ್ ಸವದತ್ತಿ ಹಾಗೂ ಮಹಾಬಲೇಶ್ವರನನ್ನು ಭೇಟಿಯಾಗಿದ್ದ ಬಸವರಾಜ್ ಮುತ್ತಗಿ ಅವರ ಮುಂದೆ ವಿನಯ್ ಕುಲಕರ್ಣಿ ವಿಚಾರವನ್ನು ಪ್ರಸ್ತಾಪಿಸಿದ್ದ ಯೋಗೇಶ್ ಗೌಡನನ್ನು ಕೊಲೆ ಮಾಡಲು ವಿನಯ್ ಕುಲಕರ್ಣಿ ಹೇಳಿದ್ದ ಆದರೆ ಧಾರವಾಡದ ಹುಡುಗರು ಅದಕ್ಕೆ ವಿರೋಧ ವ್ಯಕ್ತಪಡಿಸಿದ್ದರು.

ಬಳಿಕ ಮಾಹಿತಿಯನ್ನು ಬಸವರಾಜ್ ಮುತ್ತಗಿ ವಿನಯ್ ಕುಲಕರ್ಣಿಗೆ ನೀಡಿದ್ದ. ಇದೇ ಕಾರಣಕ್ಕಾಗಿ ವಿನಯ್ ಕುಲಕರ್ಣಿ ಯೋಗೇಶ ಗೌಡನನ್ನು ಕೊಲೆ ಮಾಡಲು ಬೆಂಗಳೂರಿನಿಂದ ಹುಡುಗರನ್ನು ಕರೆಸಿದ್ದ ಅವರನ್ನು ಬಸವರಾಜ್ ಮುತ್ತಗಿಗೆ ವಿನಯ್ ಕುಲಕರ್ಣಿ ಪರಿಚಯ ಮಾಡಿಸಿದ್ದ.

ಬೆಂಗಳೂರಿನ 8ನೇ ಆರೋಪಿ ದಿನೇಶ್ ನನ್ನು ಬಸವರಾಜ್ ಮುತ್ತಗಿ ಭೇಟಿಯಾಗಿದ್ದಾನೆ.

ವಿನಯ್ ಕುಲಕರ್ಣಿಯ ಪ್ರಸ್ತಾಪವನ್ನು ಆರೋಪಿ ದಿನೇಶ್ ಮುಂದಟ್ಟಿದ್ದ. ಎರಡು ದಿನಗಳ ಕಾಲಾವಕಾಶ ಕೂಡಿದ್ದ 8ನೇ ಆರೋಪಿ ದಿನೇಶ್, ಬಳಿಕ ಯೋಗೇಶ್ ಹತ್ಯೆಗೆ ಒಪ್ಪಿಗೆ ಸೂಚಿಸಿ 20 ಲಕ್ಷ ಹಣಕ್ಕೆ ದಿನೇಶ್ ಬೇಡಿಕೆ ಇಟ್ಟಿದ್ದ. ಕೊಲೆ ಪ್ರಕರಣದಲ್ಲಿ ತನ್ನ ಹೆಸರು ಬರಬಾರದೆಂದು ದಿನೇಶ್ ಹೇಳಿದ್ದ. ಹತೆಯ ಬಳಿಕ ಧಾರವಾಡದ ಹುಡುಗರನ್ನು ಶರಣಾಗಿಸುವ ಪ್ಲಾನ್ ಮಾಡಲಾಗಿತ್ತು ಎಂದು ಬಸವರಾಜ್ ಮುತ್ತಗಿ ಹೇಳಿಕೆ ದಾಖಲಿಸಿದ್ದಾನೆ. ಇನ್ನೊಂದು ಕಡೆ ಕಾಂಗ್ರೆಸ್ ಶಾಸಕ ವಿನಯ್ ಕುಲಕರಣಿ ಬೇಲ್ ಗಾಗಿ ಅರ್ಜಿ ಸಲ್ಲಿಸಿದ್ದು ಎಂದು ವಿನಯ್ ಕುಲಕರಣಿ ಸಲ್ಲಿಸಿರುವ ಬೇಲ್ ಅರ್ಜಿಯ ಕುರಿತು ವಿಚಾರಣೆ ನಡೆಯಲಿದೆ. ಈ ಸಂದರ್ಭದಲ್ಲಿ ಈ ಒಂದು ಕೊಲೆ ಪ್ರಕರಣದ ಪ್ರಮುಖ ಆರೋಪಿ ಬಸವರಾಜ್ ಮುತ್ತಗಿ ಹೇಳಿಕೆ ವಿನಯ್ ಕುಲಕರ್ಣಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

**ಬಸವರಾಜ್ ಮುತ್ತಿಗಿ ಮಾಹಿತಿ**

## ಇ- ಖಾತಾ ಪಡೆಯಲು ಈ 5 ದಾಖಲೆಗಳು ಅಪ್ಲೋಡ್ ಕಡ್ಡಾಯ!

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ನಗರದ ಆಸ್ತಿ ಮಾಲೀಕರು ಇ-ಖಾತಾ ಪಡೆಯುವುದು ಕಡ್ಡಾಯ. ಹಲವಾರು ಗೊಂದಲಗಳ ನಡುವೆ ಈಗಾಗಲೇ ಕೆಲವರು ಪಡೆದಿದ್ದರೇ, ಮತ್ತೆ ಕೆಲವರು ಪಡೆಯೋ ಪ್ರಯತ್ನದಲ್ಲಿ ಇದ್ದಾರೆ.

ಬೆಂಗಳೂರಿನ ಆಸ್ತಿ ಮಾಲೀಕರಿಗೆ ಗುಡ್ ನ್ಯೂಸ್ ಎನ್ನುವಂತೆ ಜಸ್ಟ್ ಐದು ದಾಖಲೆಗಳನ್ನು ಅಪ್ ಲೋಡ್ ಮಾಡಿದ್ರೆ, ಅಂತಿಮ ಇ-ಖಾತಾವನ್ನು ಪಡೆಯಬಹುದಾಗಿದೆ.ಈ ಬಗ್ಗೆ ಬಿಬಿಎಂಪಿ ಮಾಹಿತಿ ಹಂಚಿಕೊಂಡಿದ್ದು, ಬಿಬಿಎಂಪಿ ವ್ಯಾಪ್ತಿಯ ಆಸ್ತಿ ಮಾಲೀಕರು ಇ - ಖಾತಾ ಪಡೆಯಲು ಐದು ದಾಖಲೆಗಳನ್ನು ಅಪ್‌ಲೋಡ್ ಮಾಡಬೇಕು. ಮಾಲೀಕರ ಆಧಾರ್ ಕಾರ್ಡ್, ಆಸ್ತಿ ತೆರಿಗೆ ಐಡಿ, ಮಾರಾಟ / ರಿಜಿಸ್ಟರ್ ಡೀಡ್ ಸಂಖ್ಯೆ, ಬೆಸ್ಕಾಂ ಖಾತೆಯ ಸಂಖ್ಯೆ (ಖಾಲಿ ನಿವೇಶನವಿದ್ದರೆ ಅಗತ್ಯವಿಲ್ಲ), ಆಸ್ತಿ ಫೋಟೋ ಈ ಎಲ್ಲಾ ದಾಖಲೆಗಳು ಬಿಬಿಎಂಪಿಯಲ್ಲಿರುವ ದಾಖಲೆಗಳೊಂದಿಗೆ ಹೊಂದಾಣಿಕೆಯಾದರೆ ಕೂಡಲೇ ಅಂತಿಮ ಇ - ಖಾತಾವನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು ಎಂದಿದೆ. ಈ ಕುರಿತಂತೆ ಸಂಶಯವಿದ್ದಲ್ಲಿ ಇ - ಖಾತಾ ಸಹಾಯವಾಣಿ 94806 83695 ಗೆ ಕರೆ ಮಾಡಿ ಸಲಹೆ ಪಡೆಯುವಂತೆ ತಿಳಿಸಿದೆ. ಬಿಬಿಎಂಪಿ ಇ-ಖಾತಾ 22 ಲಕ್ಷ ಆಸ್ತಿಗಳು ಲಭ್ಯವಿದೆ https //bbmpeaasthi karnataka.gov.in ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರ ದೂರದೃಷ್ಟಿ ಮತ್ತು ನಾಯಕತ್ವದಲ್ಲಿ ಬಿಬಿಎಂಪಿಯು ಎಲ್ಲಾ ಬೆಂಗಳೂರಿಗರಿಗೆ ತಮ್ಮ ಸ್ವತ್ತುಗಳ ಬಿಬಿಎಂಪಿ ಇ-ಖಾತಾಗಳನ್ನು ನೀಡಲು ಸುಮಾರು 22-ಲಕ್ಷ ಕರಡು ಇ-ಖಾತಾಗಳನ್ನು ಆನ್ ಲೈನ್‌ನಲ್ಲಿ ಇರಿಸಲಾಗಿರುತ್ತದೆ.

ಎಲ್ಲಾ ನಾಗರೀಕರು ತಮ್ಮ ಬಿಬಿಎಂಪಿ ಇ-ಖಾತಾ ಪಡೆಯಲು ವಿನಂತಿಸಲಾಗಿದೆ. ಬಿಬಿಎಂಪಿಯ ಇ-ಖಾತಾ ಈಗ ನಾಗರೀಕರ ನಿಯಂತ್ರಣದಲ್ಲಿದೆ ಹಾಗೂ ಪ್ರತಿಯೊಬ್ಬರಿಗೂ ಬಿಬಿಎಂಪಿಯ ಇ-ಖಾತಾವನ್ನು ಪಾಲಿಕೆ ಜಾಲತಾಣ https://bbmpeaasthi.karnataka.gov.in , ಸಂಪರ್ಕರಹಿತ ಫೇಸ್‌ಲೆಸ್, ಆನ್‌ಲೈನ್ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ.


**ನಿಮ್ಮ ಆಸ್ತಿ ಇ-ಖಾತಾ ಆನ್‌ಲೈನ್‌ನಲ್ಲಿದೆ, ಅದನ್ನು ಸರಾಗವಾಗಿ ಈ ಕೆಳಗಿನಂತೆ ಪಡೆಯಿರಿ**

- ನಿಮ್ಮ ಕರಡು ಇ-ಖಾತಾವನ್ನು ವಾರ್ಡ್ ವಾರು ಪಟ್ಟಿಯಲ್ಲಿ ಹುಡುಕಿ. (ನಿಮ್ಮ ವಾರ್ಡ್ ಅನ್ನು ನಿಮ್ಮ ಆಸ್ತಿ ತೆರಿಗೆ ರಶೀದಿಯಿಂದ ತಿಳಿದುಕೊಳ್ಳಿ)
- ಈ ಕೆಳಗಿನ ಮಾಹಿತಿಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಿ ನಿಮ್ಮ ಅಂತಿಮ ಇ-ಖಾತಾವನ್ನು ಮುದ್ರಿಸಿಕೊಳ್ಳಿ ಆಧಾರ್ ಆಸ್ತಿ ತೆರಿಗೆ ID ಕ್ರಯ/ನೊಂದಾಯಿತ ಪತ್ರ, ಸಂಖ್ಯೆ ಬೆಸ್ಕಾಂ ID (ಖಾಲಿ ನಿವೇಶನ ಆಯ್ಕೆ) 3. ಅಪೂರ್ಣ ಮಾಹಿತಿ ಅಥವಾ ಬಿಬಿಎಂಪಿ ದಾಖಲೆಗಳೊಂದಿಗೆ ಹೊಂದಾಣಿಕೆಯಾಗದಿದ್ದಲ್ಲಿ ಮಾತ್ರ ಪ್ರಕರಣಗಳು ನಿರ್ಧಾರಕ್ಕಾಗಿ ಎಆರ್‌ಒಗಳಿಗೆ ರವಾನೆಯಾಗುತ್ತದೆ.

# ಬೇಸಿಗೆಯಲ್ಲಿ ಪವರ್ ಕಟ್ ಸಮಸ್ಯೆ ಇಲ್ಲದಂತೆ ಸಮರ್ಪಕ ವಿದ್ಯುತ್ ಪೂರೈಕೆ

### ವಿದ್ಯುತ್ ಪ್ರಸರಣ ನಿಗಮ ನಿಯಮಿತ , ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್ ಅಧಿಕಾರಿಗಳೊಂದಿಗೆ ಸಭೆ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಬೇಸಿಗೆ ವೇಳೆ ಸಮರ್ಪಕ ವಿದ್ಯುತ್ ಪೂರೈಕೆಗೆ ಯಾವುದೇ ತೊಂದರೆಯಾಗದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಿದ್ಯುತ್ ಉತ್ಪಾದನೆ ಖರೀದಿ/ ವಿನಿಮಯ ಮತ್ತು ಪ್ರಸರಣ ಕುರಿತಂತೆ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ (ಕೆಪಿಸಿಎಲ್), ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್), ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್ (ಪಿಸಿಕೆಎಲ್) ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು, ಸಮರ್ಪಕ ವಿದ್ಯುತ್ ಪೂರೈಕೆ ಜತೆಗೆ ಅಗತ್ಯ ಸಂದರ್ಭದಲ್ಲಿ ಹೆಚ್ಚು ವಿದ್ಯುತ್ ಉತ್ಪಾದನೆ ಮೂಲಕ ಬೇಡಿಕೆ, ಪೂರೈಕೆ ನಡುವೆ ಅಂತರ ಇಲ್ಲದಂತೆ ನೋಡಿಕೊಳ್ಳಬೇಕು, ಎಂದು ಸೂಚಿಸಿದರು.

ಅದಕ್ಕಾಗಿ ಎಲ್ಲಾ ಉತ್ಪಾದನಾ ಘಟಕಗಳನ್ನು ಸನ್ನದ್ಧವಾಗಿ ಇಡಬೇಕು ಎಂದು ನಿರ್ದೇಶನ ನೀಡಿದರು. ರಾಯಚೂರು, ಯರಮರಸ್ ಮತ್ತು ಬ್ಯಾರಿ ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ಕೆಲವು ಉತ್ಪಾದನಾ ಘಟಕಗಳು ಸ್ಥಗಿತಗೊಂಡಿರುವ ಕುರಿತು ಮಾಹಿತಿ ಪಡೆದ ಸಚಿವರು, ಕಾಲಮಿತಿ ಹಾಕಿಕೊಂಡು ಸ್ಥಾವರಗಳ ವಾರ್ಷಿಕ ನಿರ್ವಹಣೆ ಅಥವಾ ಸಣ್ಣ ಪುಟ್ಟ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿ ಫೆಬ್ರವರಿ ಅಂತ್ಯದೊಳಗೆ ಎಲ್ಲಾ ಘಕಗಳನ್ನು (ಆರ್ ಟಿಪಿಎಸ್ ನ ಒಂದು ಘಟಕ ಹೊರತುಪಡಿಸಿ) ಪೂರ್ಣ ಪ್ರಮಾಣದ ವಿದ್ಯುತ್ ಉತ್ಪಾದನೆಗೆ ಸಿದ್ಧಗೊಳಿಸಬೇಕು ಎಂದು ಸೂಚಿಸಿದರು.

**ವಿದ್ಯುತ್ ಪೂರೈಕೆ ಜತೆಗೆ ಅಗತ್ಯ**

**ಈ ಬಾರಿ ಅದಕ್ಕಿಂತ ಹೆಚ್ಚು ವಿದ್ಯುತ್ ಉತ್ಪಾದನೆ**

**ಕೆಪಿಸಿಎಲ್‌ನ ಉಷ್ಣ ವಿದ್ಯುತ್ ಸ್ಥಾವರಗಳ ಕುರಿತು ಅಧಿಕಾರಿಗಳೊಂದಿಗೆ ಸಮಾಲೋಚನ ನಡೆಸಿದ ಅವರು, ಕಳೆದ ಬೇಸಿಗೆಯಲ್ಲಿ ಸರಾಸರಿ 3,600 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುವ ಮೂಲಕ ಉಷ್ಣ ವಿದ್ಯುತ್ ಸ್ಥಾವರಗಳು ದಾಖಲೆ ನಿರ್ಮಿಸಿದ್ದವು. ಈ ಬಾರಿ ಅದಕ್ಕಿಂತ ಹೆಚ್ಚು ವಿದ್ಯುತ್ ಉತ್ಪಾದನೆ ಮಾಡಿ ಹೊಸ ದಾಖಲೆ ಸ್ಥಾಪಿಸಬೇಕು.**

ವಿದ್ಯುತ್ ವಿನಿಮಯಕ್ಕೆ ಒತ್ತು ಹೊರ ರಾಜ್ಯಗಳಿಂದ ವಿದ್ಯುತ್ ಖರೀದಿಸುವ ಬದಲು ವಿದ್ಯುತ್ ವಿನಿಮಯಕ್ಕೆ ಆದ್ಯತೆ ನೀಡಬೇಕು. ಈ ಬಗ್ಗೆ ಈಗಿನಿಂದಲೇ ಅನ್ಯ ರಾಜ್ಯಗಳೊಂದಿಗೆ ಒಪ್ಪಂದಕ್ಕೆ ಮಾತುಕತೆ ನಡೆಸಬೇಕು. ಅದೇ ರೀತಿ ಅಲ್ಪಾವಧಿ ವಿದ್ಯುತ್ ಖರೀದಿ ದುಬಾರಿಯಾಗಿರುವುದರಿಂದ ಕಡಿಮೆ ದರಕ್ಕೆ ದೀರ್ಘಾವಧಿ ವಿದ್ಯುತ್ ಖರೀದಿಗೆ ಒತ್ತು ನೀಡಬೇಕು. ಹಾಗೆ ಮಾಡಿದಲ್ಲಿ ಹೆಚ್ಚುವರಿ ವಿದ್ಯುತ್ ಅನ್ನು ಪೀಕ್ ಅವರ್ ನಲ್ಲಿ ಹೆಚ್ಚು ದರಕ್ಕೆ ಮಾರಾಟ ಮಾಡಿ ಹೊರೆ ಕಡಿಮೆ ಮಾಡಬೇಕು ಎಂದು ಸೂಚನ ನೀಡಿದರು.

ಇಂಧನ ಇಲಾಖೆ ಸರ್ಕಾರದ ಅಪರ ಕಾರ್ಯದರ್ಶಿ ಗೌರವ್ ಗುಪ್ತ,ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ, ಪಿಸಿಕೆಎಲ್ ವ್ಯವಸ್ಥಾಪಕ ನಿರ್ದೇಶಕ ಲೋಖಂಡೆ ಸ್ನೇಹಲ್ ಸುಧಾಕರ್, ಕೆಪಿಸಿಎಲ್ ನಿರ್ದೇಶಕ (ಹಣಕಾಸು) ಆರ್.ನಾಗರಾಜ್, ನಿರ್ದೇಶಕ (ತಾಂತ್ರಿಕ) ಎಸ್.ಕೃಷ್ಣಮೂರ್ತಿ ಸೇರಿದಂತೆ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

**ಸೋಲಾರ್ ವಿದ್ಯುತ್ ಉತ್ಪಾದನೆ ಹೆಚ್ಚಾಗುತ್ತಿರುವುದರಿಂದ ಹಗಲು ವೇಳೆಯೇ ಕೃಷಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ಪೂರೈಸಬೇಕು. ಉಷ್ಣ ವಿದ್ಯುತ್ ಮತ್ತು ಜಲ ವಿದ್ಯುತ್ ಸ್ಥಾವರಗಳಲ್ಲಿ ಸಾಧ್ಯವಾದಷ್ಟು ರಾತ್ರಿ ವೇಳೆಯ ಬಳಕೆಗೆ ವಿದ್ಯುತ್ ಉತ್ಪಾದಿಸಬೇಕು. ಆ ಮೂಲಕ ಬೇಡಿಕೆ ಮತ್ತು ಪೂರೈಕೆಯ ನಡುವೆ ಅಂತವಿಲ್ಲದಂತೆ ಎಚ್ಚರಿಕೆ ವಹಿಸಬೇಕು ಎಂದರು.**

# ಶೀಘ್ರದಲ್ಲೇ ಪೌರಕಾರ್ಮಿಕರಿಗೆ ಉಚಿತ ನಿವೇಶನ: ಎಚ್.ಸಿ.ಬಾಲಕೃಷ್ಣ

## ಪೌರಕಾರ್ಮಿಕರಿಗೆ ಶೀಘ್ರದಲ್ಲೆ 2 ಎಕರೆ ಜಾಗ ನಿಗದಿ ಮಾಡಿ ಉಚಿತ ನಿವೇಶನ ಹಂಚಿ ಮನೆಗಳ ನಿರ್ಮಾಣಕ್ಕೆ ನೆರವು

• **ಉದಯವಾಹಿನಿ ಮಾಗಡಿ**

ರಾಜ್ಯ ಸರ್ಕಾರ ಶೀಘ್ರದಲ್ಲಿಯೇ ಪೌರಕಾರ್ಮಿಕರಿಗೆ ಗುಡ್ ನ್ಯೂಸ್ ನೀಡಲಿದೆ. ಪೌರಕಾರ್ಮಿಕರಿಗೆ ಬೇಡಿಕೆಯಂತೆ ಶೀಘ್ರದಲ್ಲೆ 2 ಎಕರೆ ಜಾಗ ನಿಗದಿ ಮಾಡಿ ಉಚಿತ ನಿವೇಶನ ಹಂಚಿ ಮನೆಗಳ ನಿರ್ಮಾಣಕ್ಕೆ ನೆರವು ನೀಡಲಾಗುವುದು ಎಂದು ಶಾಸಕ ಎಚ್.ಸಿ.ಬಾಲಕೃಷ್ಣ ಭರವಸೆ ನೀಡಿದರು.

ಈ ಕುರಿತು ಮಾಗಡಿಯ ಅಂಬೇಡ್ಕರ್ ಭವನದಲ್ಲಿ ಪುರಸಭೆ, ತಾಲ್ಲೂಕು ಪೌರಸೇವಾ ನೌಕರರ ಸಂಘದ ಸಹಯೋಗದಲ್ಲಿ ಆಯೋಜಿಸಿದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪಟ್ಟಣವನ್ನು ಸ್ವಚ್ಛ ಹಾಗೂ ಸುಂದರವಾಗಿ ಕಾಪಾಡುವಲ್ಲಿ ಪೌರಕಾರ್ಮಿಕರಕಾರ್ಯ ಶ್ಲಾಘಿಸಿದ ಅವರು, ಪೌರಕಾರ್ಮಿಕರ ದಿನಾಚರಣೆ ಮೂಲಕ ಅವರನ್ನು ಗೌರವಿಸುವುದರ ಜತೆಗೆ ಅವರ ಬೇಡಿಕೆ ಈಡೇರಿಸಲಾಗುವುದು ಎಂದು ತಿಳಿಸಿದರು.

**ಪೌರಕಾರ್ಮಿಕರಿಗೆ ಗುಡ್ ನ್ಯೂಸ್**

ಪುರಸಭಾಧ್ಯಕ್ಷೆ ರಮ್ಯಾ ಮಾತನಾಡಿ, ನಗರದ ಸ್ವಚ್ಛತೆಗಾಗಿ ಶ್ರಮಿಸುವ ಪೌರಕಾರ್ಮಿಕರ ಕಾರ್ಯ ಶ್ಲಾಘನೀಯ. ವರ್ಜನಿಕರ ಆರೋಗ್ಯ ರಕ್ಷಣೆಗೆ ಬೀದಿಗಳಿದು ತಮ್ಮ ಪಾಲಿನ ಕರ್ತವ್ಯ ಪ್ರಾಮಾಣಿಕವಾಗಿ ಮಾಡುತ್ತಿರುವ ಪೌರಕಾರ್ಮಿಕರಿಗೆ ಜನರ ಪರವಾಗಿ ತುಂಬು ಹೃದಯದ ಅಭಿನಂದನ ಸಲ್ಲಿಸುತ್ತೇನೆ.

ಹೊರಗುತ್ತಿಗೆದಾರರ ಬದುಕಿಗೆ ಸಾಮಾಜಿಕ ಭದ್ರತೆಯನ್ನು ಒದಗಿಸಲು ಹಾಗೂ ಪೌರಕಾರ್ಮಿಕರ ಸಮಸ್ಯೆಗಳಿಗೆ ಸ್ಪಂದಿಸುವುದಾಗಿ ತಿಳಿಸಿದರು. ಪುರಸಭಾ ಸದಸ್ಯ ಎಂ.ಎನ್.ಮಂಜುನಾಥ್ ಮಾತನಾಡಿ, ಹಬ್ಬ, ಉತ್ಸವ ಎನ್ನದೆ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರು ದೇವರ ಮಕ್ಕಳು ಎಂದರೆ ತಪ್ಪಾಗಲಾರದು. ಅವರು ಮಾಡುವ ಕೆಲಸಕ್ಕೆ ನ್ಯಾಯ ಒದಗಿಸಲು ಶಾಸಕರು ಪುರಸಭಾ ವ್ಯಾಪ್ತಿಯಲ್ಲಿ ಅರ್ಧ ನಿವೇಶನವನ್ನಾದರೂ ನೀಡಬೇಕು. ಎಲ್ಲಾ ಸದಸ್ಯರನ್ನು ಗಣನೆಗೆ ತೆಗೆದುಕೊಂಡು ಕಾರ್ಯಕ್ರಮಗಳನ್ನು ರೂಪಿಸುವಂತೆ ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

ಪುರಸಭೆ, ತಾಲ್ಲೂಕು ಪೌರಸೇವಾ ನೌಕರರ ಸಂಘದ ಸಹಯೋಗದಲ್ಲಿ ಆಯೋಜಿಸಿದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮವನ್ನು ಪೌರ ಕಾರ್ಮಿಕರನ್ನು ಸನ್ಮಾಸಲಾಯಿತು. ಕಾರ್ಮಿಕರಿಗಾಗಿ ಆಯೋಜಿಸಿದ್ದ ವಿವಿಧ ಕ್ರೀಡೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಪುರಸಭಾ ಮುಖ್ಯಾಧಿಕಾರಿ ಶಿವರುದ್ರಯ್ಯ, ಉಪಾಧ್ಯಕ್ಷ ರಿಯಾಜ್ ಅಹಮದ್, ಸ್ಥಾಯಿ ಸಮಿತಿ ಅಧ್ಯಕ್ಷ ಶಿವಕುಮಾರ್, ಪುರಸಭಾ ಮಾಜಿ ಅಧ್ಯಕ್ಷ ರಂಗಹನುಮಯ್ಯ, ಪುರಸಭಾ ಸದಸ್ಯರು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

> ಪೌರ ಕಾರ್ಮಿಕರಿಗೆ ಸರ್ಕಾರದಿಂದ ಬರಬೇಕಾದ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ತಲುಪಿಸುವ ಕೆಲಸ ಶಾಸಕರಿಂದ ಆಗಬೇಕು. ಪ್ರತಿ 2 ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆ ಮಾಡಿಸಬೇಕು. ಬೆಳಗಿನ ತಿಂಡಿ ಶುಚಿಯಾಗಿ ನೀಡಬೇಕು. ಕಾರ್ಮಿಕರ ಮಕ್ಕಳಿಗೆ ಉಚಿತವಾಗಿ ಶಿಕ್ಷಣವನ್ನು ಕೊಡಿಸುವಂತೆ ಹಾಗೂ ತಮ್ಮ ಪ್ರಾಣದ ಹಂಗು ತೊರೆದು ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರನ್ನು ಕಾಯಂ ನೌಕರರನ್ನಾಗಿ ಮಾಡುವಂತೆ ಮನವಿ ಮಾಡಿದರು
>
> –ನಾಗರಾಜು, ಜಿಲ್ಲಾ ಪೌರಸೇವಾ ನೌಕರರ ಸೇವಾ ಸಂಘದ ಅಧ್ಯಕ್ಷ


> ಪೌರ ಕಾರ್ಮಿಕರಿಗಾಗಿ ಈಗಾಗಲೇ ತಿರುಮಲೆಯಲ್ಲಿ ಮನೆಗಳನ್ನು ನಿರ್ಮಿಸಿದ್ದು, ಪೌರ ಕಾರ್ಮಿಕರು ನಮಗೆ ಕಟ್ಟಡ ಬೇಡ ಜಾಗ ನೀಡಿದರೆ ಸಾಕು ಎಂದು ಹೇಳಿದ್ದರಿಂದ ಸ್ಥಾಯಿ ಸಮಿತಿ ಅಧ್ಯಕ್ಷ ಶಿವಕುಮಾರ್ ಅವರಿಗೆ ಎರಡು ಎಕರೆ ಜಾಗ ಗುರುತಿಸಲು ತಿಳಿಸಿದ್ದು, ಆದಷ್ಟು ಬೇಗ ನಿವೇಶನ ನೀಡಲಾಗುವುದು, ಹೊರಗುತ್ತಿಗೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಪುರಸಭಾ ನೀರು ಸರಬರಾಜು ನೌಕರರನ್ನು ಹಾಗೂ ಪೌರ ಕಾರ್ಮಿಕರ ಕೆಲಸ ಕಾಯಂಗೊಳಿಸಲು ಸದನದಲ್ಲಿ ಚರ್ಚಿಸಲಾಗುವುದು
>
> –ಬಾಲಕೃಷ್ಣ, ಕಾಂಗ್ರೆಸ್ ಶಾಸಕ

# ಸಂಪರ್ಕ ಭಾಷೆಯಾಗಿ ಹಿಂದಿ ಬೆಳೆಸಬೇಕು: ಬಿಹಾರ ರಾಜ್ಯಪಾಲ

• **ಉದಯವಾಹಿನಿ ಮೈಸೂರು**

ಭಾರತದ ಎಲ್ಲಾ ಭಾಷೆಗಳ ಮೇಲೆ ಅಭಿಮಾನ ಇರಿಸಿಕೊಂಡೇ ಸಂಪರ್ಕ ಭಾಷೆಯಾಗಿ ಹಿಂದಿಯನ್ನು ಬೆಳೆಸಬೇಕಿದೆ' ಎಂದು ಬಿಹಾರ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಪ್ರತಿಪಾದಿಸಿದರು. ಕೆಎಸ್‌ಒಯು ಘಟಿಕೋತ್ಸವ ಭವನದಲ್ಲಿ ಕೇಂದ್ರ ಗೃಹ ಸಚಿವಾಲಯದ ಅಧಿಕೃತ ಭಾಷಾ ವಿಭಾಗವು ಶನಿವಾರ ಆಯೋಜಿಸಿದ್ದ 'ದಕ್ಷಿಣ ಹಾಗೂ ನೈರುತ್ಯ ವಿಭಾಗದ ಅಧಿಕೃತ ಭಾಷಾ ಸಮ್ಮೇಳನ ಹಾಗೂ ಪ್ರಶಸ್ತಿ ಪ್ರದಾನ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತೀಯ ಸಮಾಜದ ಅಭಿವ್ಯಕ್ತಿಯೇ ಭಾಷೆಯಾಗಿದೆ. ದೇಶದ ಬಹುಸಂಸ್ಕೃತಿಯ ರಾಯಭಾರಿಯಾಗಿರುವ ಎಲ್ಲಾ ಭಾಷೆಗಳನ್ನು ಕಲಿತಾಗ ಮಾತ್ರವೇ ವೈವಿಧ್ಯತೆ ಅರಿಯಲು ಸಾಧ್ಯವಾಗುತ್ತದೆ' ಎಂದರು. ಸಶಕ್ತ ಪರಂಪರೆ ಹೊಂದಿರುವ ದೇಶದ ಅನೇಕತೆಯಲ್ಲಿಯೇ ಏಕತೆಯಿದೆ. ನಮ್ಮ ಸಂಸ್ಕೃತಿಯು ಇತಿಹಾಸ ಹಾಗೂ ಜ್ಞಾನದ ಆಧಾರದ ಮೇಲೆ ನಿಂತಿದೆ. ಹೀಗಾಗಿಯೇ ಹೆಚ್ಚು ವಿದೇಶಿಗರು ದೇಶದ ಜ್ಞಾನ ಭಂಡಾರ ಅರಿಯಲು ಇಲ್ಲಿಗೆ ಬರುತ್ತಾರೆ. ಜ್ಞಾನಿಗಳಾದ ಭಾರತೀಯರು ಸಮಾಜದ ಅಭಿವೃದ್ಧಿಯ ಕಡೆಗೆ ಯೋಚಿಸಬೇಕು ಎಂದು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

'ಯಾವುದೇ ವಿದೇಶಿ ಭಾಷೆಯನ್ನು ಕಲಿಯಬಹುದು. ಆದರೆ, ನಮ್ಮ ದೇಶದ ಭಾಷೆಗಳನ್ನು ಪ್ರೀತಿಸಬೇಕು. ದ್ವೇಷಿಸಬಾರದು' ಎಂದರು.ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಮಾತನಾಡಿದರು.ಆಂಧ್ರಪ್ರದೇಶ, ಕರ್ನಾಟಕ, ತೆಲಂಗಾಣ, ಕೇರಳ, ತಮಿಳುನಾಡು, ಪಾಂಡಿಚೇರಿ, ಲಕ್ಷದ್ವೀಪದ ಕೇಂದ್ರ, ಸರ್ಕಾರದ ಕಚೇರಿಗಳು, ಬ್ಯಾಂಕ್‌ಗಳಲ್ಲಿ ಭಾಷಾ ಅನುಷ್ಠಾನಗೊಳಿಸಿದ 32 ಉತ್ತಮ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಸನ್ಮಾನಿಸಿ, ಪ್ರಮಾಣ ಪತ್ರ ನೀಡಲಾಯಿತು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಪಂಜಾಬ್ ನ್ಯಾಷನಲ್ ಬ್ಯಾಂಕ್ ಕಾರ್ಯನಿರ್ವಾಹಕ ನಿರ್ದೇಶಕ ಬಿನೋದ್ ಕುಮಾರ್, ಅನಿರ್ಬನ್ ಕುಮಾರ್ ಬಿಸ್ವಾಸ್, ಸಿಐಐಎಲ್ ನಿರ್ದೇಶಕ ಪ್ರೊ.ಶೈಲೇಂದ್ರ ಮೋಹನ್ ಪಾಲ್ಗೊಂಡಿದ್ದರು.

# ಶಿಕ್ಷಕರಿಗೆ ಸವಾಲು ಬೋಧನೆ ಬಿಟ್ಟು ಪ್ರತಿದಿನ ಮಕ್ಕಳನ್ನು ಅರಸುವ ಕೆಲಸ

• **ಉದಯವಾಹಿನಿ ಗುಡಿಬಂಡೆ**

ಶಿಕ್ಷಣ ಪ್ರತಿಯೊಬ್ಬರಿಗೂ ಮುಖ್ಯ ಯಾವುದೇ ಮಕ್ಕಳು ಕಲಿಕೆಯಿಂದ ಹೊರಗುಳಿಯಬಾರದು ಎಂದು ವಿನೂತನ ಕಾರ್ಯಕ್ರಮ ಜಾರಿ ಮಾಡುವ ಮೂಲಕ ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಸೇರಿಸುವಂತೆ ಶಿಕ್ಷಣ ಇಲಾಖೆ ಆದೇಶಗಳನ್ನು ಮಾಡುತ್ತಿದೆ. ಆದರೆ, ಇದು ಶಿಕ್ಷಕರಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದ್ದು, ಶಾಲೆ ಬಿಟ್ಟ ಮಕ್ಕಳಿಗಾಗಿ ಪ್ರತಿದಿನ ಮಕ್ಕಳ ಮನೆಗಳಿಗೆ ತೆರಳಿ ಹುಡುಕಬೇಕಾಗಿದೆ.

ತಾಲ್ಲೂಕಿನಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಒಟ್ಟು 24 ವಿದ್ಯಾರ್ಥಿಗಳು ಶಾಲೆ ಬಿಟ್ಟಿದ್ದು, ಅವರನ್ನು ಮರಳಿ ಶಾಲೆಗೆ ಕರೆತರಲು ಶಿಕ್ಷಕರು ಹರಸಹಾಸ ಪಡುವಂತಾಗಿದೆ. ಕೆಲ ಪಾಲಕರು ಮಕ್ಕಳನ್ನು ಶಾಲೆಗೆ ಹೋಗುವಂತೆ ಬಲವಂತ ಮಾಡಿದರೂ ಮಕ್ಕಳು ನಿರಾಕರಿಸುತ್ತಿದ್ದಾರೆ. ಶಾಲೆಗೆ ಹೋಗುವಂತೆ ರಾತ್ರಿ ಮಗುವನ್ನು ಒಪ್ಪಿಸಿದರೆ, ಮರುದಿನ ಬೆಳಗ್ಗೆ ಶಾಲೆಗೆ ಹೋಗುವಷ್ಟರಲ್ಲಿ ಮಗು ಮಾಯವಾಗಿರುತ್ತದೆ. ಇನ್ನು ಕೆಲ ಮಕ್ಕಳು ಕೆಲಸ ಕಾರ್ಯಗಳಿಗಾಗಿ ಬೇರೆ ಊರುಗಳಿಗೆ ತೆರಳಿದ್ದು, ವರ್ಷಗಳೇ ಕಳೆದಿದ್ದರೂ ಮತ್ತೆ ಶಾಲೆಗೆ ಸೇರಿರುವ ಗ್ರಾಮಗಳಿಗೆ ಬರುತ್ತಿಲ್ಲ. ಇನ್ನೂ ಕೆಲ ಪಾಲಕರು ಮಕ್ಕಳನ್ನು ಕೆಲಸಕ್ಕಾಗಿ ಬೇರೆ ರಾಜ್ಯಗಳಿಗೆ ಕಳಿಸಿರುವ ಮಾಹಿತಿ ನೀಡದೆ, ಎಲ್ಲಿ ಹೋಗಿದ್ದಾರೋ ಎನ್ನುವ ಉತ್ತರ ನೀಡುತ್ತಾರೆ. ಇದು ಶಿಕ್ಷಕರು ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಮಕ್ಕಳನ್ನು ಮತ್ತೆ ಶಾಲೆಗೆ ತರುವಲ್ಲಿ ದೊಡ್ಡ ಸವಾಲಾಗಿದೆ.


ಉದಯವಾಹಿನಿ ಚಿತ್ರ

> ತಾಲೂಕಿನಲ್ಲಿ 24 ವಿದ್ಯಾರ್ಥಿಗಳು ಶಾಲೆ ಬಿಟ್ಟಿದ್ದು ಮಕ್ಕಳನ್ನು ಮರು ಶಾಲೆಗೆ ಕರೆತರಲು ಶಿಕ್ಷಕರು, ಇಸಿಒ ಸೇರಿ ಇತರರೊಂದಿಗೆ ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಶಾಲೆಗೆ ಬರುವಂತೆ ಮನವೊಲಿಸುತ್ತಿದ್ದೇವೆ. ಒಂದು ವೇಳೆ ಮಗು ಊರಿನಲ್ಲಿ ಇಲ್ಲದೇ ಇದ್ದಾಗ ವಿದ್ಯಾರ್ಥಿಯ ಮನೆಯ ಪಕ್ಕದಲ್ಲಿರುವ ಮನೆಯವರಿಂದ ಮಾಹಿತಿ ಪಡೆದು ಪಂಚನಾಮೆ ಮಾಡುತ್ತಿದ್ದೇವೆ. ಪ್ರತಿದಿನ ಆಯಾ ಶಾಲಾ ವ್ಯಾಪ್ತಿಯ ಶಿಕ್ಷಕರು ವಿದ್ಯಾರ್ಥಿ ಮನೆಗೆ ಹೋಗಿ ಮನವೊಲಿಸುವ ಕೆಲಸ ಮಾಡುತ್ತಿದ್ದಾರೆ
>
> –ಎಂ.ಎಸ್. ಕೃಷ್ಣಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ,

> ಗುಡಿಬಂಡೆ 'ಶಾಲೆಗೆ ಮಗು ಬರದೇ ಇದ್ದಾಗ ಅಂತಹ ವಿದ್ಯಾರ್ಥಿಯ ಮನೆಗೆ ತೆರಳಿ ಮಾಹಿತಿ ಪಡೆಯುತ್ತೇವೆ. ಒಮ್ಮೊಮ್ಮೆ ಮಕ್ಕಳು ಇರುವ ಕಡೆಯೇ ಹೋಗಿ ಶಾಲೆಗೆ ಕರೆತರುತ್ತಿದ್ದೇವೆ. ಒಂದು ಮಗುವನ್ನು ಶಾಲೆಗೆ ಕರೆ ತರುವ ಕೆಲಸದಿಂದಾಗಿ ಪ್ರತಿದಿನ ಶಾಲೆಗೆ ಬರುವ ಮಕ್ಕಳಿಗೆ ಪಾಠ ಮಾಡಲು ಸಾಧ್ಯವಾಗುತ್ತಿಲ್ಲ
>
> –ಹೆಸರು ಹೇಳಲಿಚ್ಛಿಸದ ಶಿಕ್ಷಕ

# ಅಭಿವೃದ್ಧಿಗೆ ಅಧಿಕಾರಿಗಳ ಅಡ್ಡಗಾಲು

• **ಉದಯವಾಹಿನಿ ಗೌರಿಬಿದನೂರು**

ವೆಚ್ಚಗಳ ಬಗ್ಗೆ ಮಾಹಿತಿ ನೀಡದ ಹಾಗೂ ಗುತ್ತಿಗೆ ಆದೇಶ ಪತ್ರಗಳನ್ನು ನೀಡಲು ವಿಳಂಬ ಧೋರಣೆ ಅನುಸರಿಸುತ್ತಿರುವ ಅಧಿಕಾರಿಗಳ ವಿರುದ್ಧ ನಗರಸಭೆ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು.

ಅಧ್ಯಕ್ಷ ಲಕ್ಷ್ಮೀನಾರಾಯಣಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಸದಸ್ಯ ಕಲೀಮ್ ಮಾತನಾಡಿ, ಜಿಲ್ಲಾಧಿಕಾರಿಗಳ 18 ತಿಂಗಳ ಆಡಳಿತಾವಧಿಯಲ್ಲಿ ನಡೆದಿರುವ ಜಮಾ, ಖರ್ಚಿನ ಮಾಹಿತಿ ಒದಗಿಸುವಂತೆ ಹಿಂದಿನ ಸಭೆಯಲ್ಲಿ ಮನವಿ ಮಾಡಲಾಗಿತ್ತು. ಆದರೆ, ಇದುವರೆಗೂ ಮಾಹಿತಿ ಒದಗಿಸಿಲ್ಲ. ಮುಂದಿನ ಸಭೆಯಲ್ಲಾದರೂ ಒದಗಿಸಿ ಎಂದು ಆಗ್ರಹಿಸಿದರು. ಸದಸ್ಯ ಆರ್.ಪಿ.ಗೋಪಿನಾಥ್ ಮಾತನಾಡಿ, ಗುತ್ತಿಗೆ ಆದೇಶ ಪತ್ರ ನೀಡುವಲ್ಲಿ ವಿಳಂಬ ಧೋರಣೆಯಿಂದಾಗಿ ಅಭಿವೃದ್ಧಿ ಕಾಮಗಾರಿಗೆ ಹಿನ್ನಡೆಯಾಗಿದೆ.

ಸ್ವಚ್ಛತಾ ವಾಹನಗಳು ಬಂದು ಎರಡು ತಿಂಗಳಾದರೂ ಚಾಲಕರ ನೇಮಕವಾಗಿಲ್ಲ. ಕೂಡಲೇ 8 ಟಿಪ್ಪರ್ ಮತ್ತು ಜೆಸಿಬಿ ಚಾಲಕರ ನೇಮಕಾತಿ ಮಾಡಿ, ನಗರದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಸದಸ್ಯರ ಬೇಡಿಕೆಗಳಿಗೆ ಅಧ್ಯಕ್ಷರು ಸಹಮತ ವ್ಯಕ್ತಪಡಿಸುತ್ತಾರಾದರೂ ಅವು ಕಾರ್ಯರೂಪಕ್ಕೆ ಬರುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. 3ನೇ ವಾರ್ಡ್ ಸದಸ್ಯೆ ರಂಗಮ್ಮ ಮಾತನಾಡಿ, ಅಭಿವೃದ್ಧಿ ವಿಚಾರದಲ್ಲಿ ಅಧಿಕಾರಿಗಳು ಸ್ಪಂದಿಸುತ್ತಿಲ್ಲ, ಸೂಕ್ತ ಅನುದಾನ ಒದಗಿಸುತ್ತಿಲ್ಲ, ವಾರ್ಡಿನ ಅಶ್ವತ್ಥಕಟ್ಟೆಯಿಂದ ವೀರಂಡನಹಳ್ಳಿವರೆಗೂ ರಸ್ತೆ ಬದಿ ಚರಂಡಿ ಮುಚ್ಚಿಹೋಗಿದ್ದು, ತಾತ್ಕಾಲಿಕವಾಗಿ ದುರಸ್ತಿ ಮಾಡಲಾಗಿದೆ. ಹೊಸ ಚರಂಡಿಗೆ ಅನುದಾನ ಒದಗಿಸುವಂತೆ ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

ಪೌರಾಯುಕ್ತ ಡಿ.ಎನ್.ಗೀತಾ ಪ್ರತಿಕ್ರಿಯಿಸಿ, ನಿಯಮಾವಳಿ ಪ್ರಕಾರ ನಿಗದಿತ ಸಮಯದಲ್ಲಿ ಚಾಲಕರನ್ನು ನೇಮಕ ಮಾಡಿಕೊಳ್ಳಲಾಗುವುದು. ಇಲಾಖೆಯಿಂದ ಅನುಮೋದನೆ ದೊರೆತ ಬಳಿಕ ಚರಂಡಿ ಕಾಮಗಾರಿ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು. ವಿವಿಧ ವಾರ್ಡ್ ಸದಸ್ಯರು ತಮ್ಮ ವಾರ್ಡ್‌ಗಳಲ್ಲಿನ ಸಮಸ್ಯೆಗಳನ್ನು ಸಭೆಯ ಗಮನಕ್ಕೆ ತಂದರು. ಕೆಲವು ಅಭಿವೃದ್ಧಿ ಯೋಜನೆಗಳಿಗೆ ಸಭೆಯಲ್ಲಿ ಅನುಮೋದನೆ ನೀಡಲಾಯಿತು.

ಶಾಸಕ ಕೆ.ಎಚ್.ಪುಟ್ಟಸ್ವಾಮಿಗೌಡ ಮಾತನಾಡಿ, ನಗರದ ಅಭಿವೃದ್ಧಿ ವಿಚಾರದಲ್ಲಿ ಎಲ್ಲ ಸದಸ್ಯರು ಒಗ್ಗಟ್ಟಿನಿಂದ ಸಾಗಬೇಕು. ನನ್ನ ಕಡೆಯಿಂದ ಅಗತ್ಯ ಸಹಕಾರ ನಿಡಲಾಗುವುದು ಎಂದರು.

> ವ್ಯಾಪಾರಿಗಳಿಗೆ ಗುರುತಿನ ಚೀಟಿ ವಿತರಣೆ ಸಭೆ ಪ್ರಾರಂಭಕ್ಕೂ ಮುನ್ನ ನಗರದ 550 ಬೀದಿಬದಿ ವ್ಯಾಪಾರಿಗಳಿಗೆ ಶಾಸಕ ಪುಟ್ಟಸ್ವಾಮಿಗೌಡ ನಗರಸಭೆಯಿಂದ ಗುರುತಿನ ಚೀಟಿ ವಿತರಿಸಿದರು. ನಗರಸಭೆಯಿಂದ ಈಗಾಗಲೇ 400ಕ್ಕೂ ಹೆಚ್ಚು ಬೀದಿಬದಿ ವ್ಯಾಪಾರಿಗಳಿಗೆ ತಲಾ 10 ಸಾವಿರ ರೂ. ಸಾಲ ವಿತರಿಸಲಾಗಿದೆ. ಸರ್ಕಾರಿ ಸೌಲಭ್ಯ ಪಡೆಯಲು ಎಲ್ಲಾ ವ್ಯಾಪಾರಿಗಳು ತಪ್ಪದೇ ಹೆಸರು ನೋಂದಾಯಿಸಿಕೊಂಡು ಗುರುತಿನ ಚೀಟಿ ಪಡೆದುಕೊಳ್ಳಬೇಕು ಎಂದರು.


# ಹೆಚ್‌ಡಿಕೆ ಅಪ್ಪಟ ಅಭಿಮಾನಿಯ ಭೀಕರ ಹತ್ಯೆ

• **ಉದಯವಾಹಿನಿ ಚಿಕ್ಕಬಳ್ಳಾಪುರ**

ಕೇಂದ್ರ, ಸಚಿವ ಹೆಚ್.ಡಿ ಕುಮಾರಸ್ವಾಮಿಯವರ ಅಪ್ಪಟ ಅಭಿಮಾನಿ ಹಾಗೂ ಜೆಡಿಎಸ್ ಮುಖಂಡನನ್ನು ರಸ್ತೆ ಮಧ್ಯದಲ್ಲೆ ಲಾಂಗ್‌ನಿಂದ ಕೊಚ್ಚಿ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಚಿಕ್ಕಬಳ್ಳಾಪುರದ ತಮ್ಮನಾಯಕನಹಳ್ಳಿ ಗ್ರಾಮದ ಬಳಿ ನಡೆದಿದೆ.

ಹತ್ಯೆಗೊಳಗಾದ ವ್ಯಕ್ತಿಯನ್ನು ಗ್ರಾಮದ ವೆಂಕಟೇಶ್ ಅಲಿಯಾಸ್ ಗೋಲ್ಡ್ ವೆಂಕಟೇಶ್ (50) ಎಂದು ಗುರುತಿಸಲಾಗಿದೆ. ಎಂದಿನಂತೆ ವೆಂಕಟೇಶ್ ರಾತ್ರಿ 9 ಗಂಟೆ ಸುಮಾರಿಗೆ ತಮ್ಮನಾಯಕನಹಳ್ಳಿ ಗೇಟ್ ನಲ್ಲಿರುವ ಮೆಡಿಕಲ್ ಸ್ಟೋರ್‌ನಿಂದ ಮನೆಗೆ ತೆರಳುತ್ತಿದ್ದರು.

ಸಣ ವೇಳೆ ಸಂಚು ರೂಪಿಸಿ, ಮನೆಯತ್ತ ಸ್ಕೂಟಿ ಮೂಲಕ ಹೊರಟಿದ್ದ ವೆಂಕಟೇಶ್ ಅವರಿಗೆ ಅಡ್ಡ ಬಂದು ಲಾಂಗ್‌ನಿಂದ ಬಲವಾಗಿ ಬೀಸಲಾಗಿದೆ. ಪರಿಣಾಮ ಎಡಗೈ ತೋಳಿನ ಭಾಗ ಕಟ್ ಆಗಿ, ಗಾಡಿ ಸಮೇತ ವೆಂಕಟೇಶ್ ನೆಲಕ್ಕೆ ಬಿದ್ದಿದ್ದಾರೆ. ಕೂಡಲೇ ಮನಸ್ಸೋ ಇಚ್ಛೆ ಮುಖಕ್ಕೆ ಲಾಂಗ್ ನಿಂದ ಕೊಚ್ಚಲಾಗಿದೆ. ಹೊಟ್ಟೆಯ ಭಾಗಕ್ಕೆ ಬಲವಾಗಿ ಬೀಸಲಾಗಿದೆ. ಪರಿಣಾಮ ವೆಂಕಟೇಶ್ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.


ಉದಯವಾಹಿನಿ ಚಿತ್ರ

ಹತ್ಯೆಯಾಗುವುದಕ್ಕೂ ಕೆಲವು ನಿಮಿಷಗಳ ಮುನ್ನ ವೆಂಕಟೇಶ್, ಮಗನಿಗೆ ಕರೆ ಮಾಡಿ ಮನೆಗೆ ಬರುತ್ತಿದ್ದು, ಮುದ್ದೆ ಮಾಡುವಂತೆ ತಿಳಿಸಿದ್ದರಂತೆ. ಆದರೆ ಅಷ್ಟರಲ್ಲೇ ದಾರಿ ಮಧ್ಯೆ ಕೊಚ್ಚಿ ಕೊಲೆ ಮಾಡಲಾಗಿದ್ದು, ದಾರಿ ಹೋಕರು ನೋಡಿ ಮಗನಿಗೆ ಫೋನ್ ಮಾಡಿ ವಿಷಯ ತಿಳಿಸಿದ್ದಾರೆ.

ಹತ್ಯೆಯಾದವರ ಮಗ ಪೊಲೀಸರ ಬಳಿ, ತಮ್ಮ ತಂದೆ ತಮ್ಮೂರಿನ ರಸ್ತೆಯಲ್ಲಿರುವ ಬಾರ್ ಬಳಿ ಕೆಲವು ಅಕ್ಕ ಪಕ್ಕದ ಗ್ರಾಮದ ಯುವಕರು ಕುಡಿದು ಗಲಾಟೆ ಮಾಡುತ್ತಿದ್ದರು. ಮೂರು ದಿನಗಳ ಹಿಂದೆ ಬೈದು ಬುದ್ದಿವಾದ ಹೇಳಿದ್ದರು. ಹಾಗಾಗಿ ಆ ಹುಡುಗರು ಕೊಲೆ ಮಾಡಿರಬಹುದು ಎಂದು ಶಂಕೆ ವ್ಯಕ್ತಪಡಿಸಿದ್ದಾನೆ.

# ಜನರ ಬೆನ್ನಿನ ಮೇಲೆ ಬರೆ

• **ಉದಯವಾಹಿನಿ, ತುಮಕೂರು**



ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರ ಹೆಚ್ಚಿಸುವ ಮೂಲಕ ರಾಜ್ಯ ಸರ್ಕಾರ ಸಾಮಾನ್ಯ ಜನರ ಬೆನ್ನಿನ ಮೇಲೆ ಬರೆ ಎಳೆದಿದೆ ಎಂದು ಗ್ರಾಮಾಂತರ ಶಾಸಕ ಬಿ.ಸುರೇಶ್‌ಗೌಡ ಟೀಕಿಸಿದ್ದಾರೆ. ಗ್ಯಾರಂಟಿ ಯೋಜನೆ ಜಾರಿಯಿಂದ ಅಭಿವೃದ್ಧಿ ಕೆಲಸಗಳಿಗೆ ಹಣದ ಕೊರತೆಯಿಲ್ಲ' ಎಂದು ಬೊಬ್ಬೆ ಹೊಡೆಯುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಈಗ ಬೊಕ್ಕಸ ಬರಿದಾಗಿರುವುದನ್ನು ಒಪ್ಪಿಕೊಂಡಿದ್ದಾರೆ. ಕಳೆದ ವರ್ಷ ಪೆಟ್ರೋಲ್, ಡೀಸೆಲ್, ಮದ್ಯದ ದರ ಏರಿಸಲಾಗಿತ್ತು.ಬಿಪಿಎಲ್ ಕಾರ್ಡ್‌ಗಳ ಸಂಖ್ಯೆಯನ್ನು ಕಡಿತ ಮಾಡಲು ಹೊರಟಿತ್ತು. ಇದನ್ನೆಲ್ಲ ನೋಡಿದರೆ ಈ ಸರ್ಕಾರಕ್ಕೆ ಬಡವರ ಬಗ್ಗೆ ಕರುಣೆ ಇಲ್ಲ ಎನ್ನುವುದು ಸ್ಪಷ್ಟವಾಗಿ ಗೋಚರಿಸುತ್ತದೆ ಎಂದು ಹೇಳಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ಅರ್ಹರಿಗೆ ನೀಡಿದರೆ ನಿಜವಾದ ಪ್ರಯೋಜನವಾಗುತ್ತದೆ. ಸರ್ಕಾರದ ಮೇಲಿನ ಅನಗತ್ಯ ಹೊರೆ ಕಡಿಮೆಯಾಗುತ್ತದೆ.


ಆದರೆ, ಸಿದ್ದರಾಮಯ್ಯ ಹಟಕ್ಕೆ ಬಿದ್ದವರಂತೆ ಗ್ಯಾರಂಟಿ ಯೋಜನೆಗಳನ್ನು ಇಡಿಯಾಗಿ ಸಮರ್ಥಿಸಿಕೊಳ್ಳುತ್ತಿದ್ದು, ಅವುಗಳ ಮರುಪರಿಶೀಲನೆಗೆ ಒಪ್ಪುತ್ತಲೇ ಇಲ್ಲ. 'ಶಕ್ತಿ' ಯೋಜನೆಯಿಂದ ಹೆಣ್ಣುಮಕ್ಕಳು ಉಚಿತ ಪ್ರಯಾಣ ಮಾಡುವ ಭಾಗ್ಯ ಗಳಿಸಿದ್ದಾರೆ. ಆದರೆ, ಅದರ ಹೊರೆಯನ್ನು ಈಗ ಪುರುಷರು ಹೊರಬೇಕಾಗಿ ಬಂದಿದೆ. ಕೆಂಪು ಬಸ್‌ಗಳಲ್ಲಿ ಪುರುಷರು ನಿಂತು ಪ್ರಯಾಣಿಸಲೂ ಜಾಗವಿಲ್ಲದಂತಹ ಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದ್ದಾರೆ. 'ಇದು ಅತ್ಯಂತ ಭ್ರಷ್ಟ ಸರ್ಕಾರ' ಎಂದು ಉದ್ಯಮಿ ಮೋಹನದಾಸ್ ಪೈ ಈಚೆಗೆ ಇಂಗ್ಲಿಷ್ ಪತ್ರಿಕೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಹೇಳಿರುವ ಮಾತು ಸತ್ಯವಾಗಿದೆ.

# ಕಾಡಾನೆ ಸೆರೆ ಕಾರ್ಯಾಚರಣೆ ಎಂಬ ಹರಸಾಹಸ

• **ಉದಯವಾಹಿನಿ, ರಾಮನಗರ**

ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಕಾಡಾನೆಗಳ ಹಾವಳಿ ನಿಯಂತ್ರಣಕ್ಕೆ ಅರಣ್ಯ ಇಲಾಖೆ ಕಾಡಂಚಿನಲ್ಲಿ ರೈಲು ಕಂಬಿಗಳ ತಡೆಗೋಡೆ, ಸೌರಶಕ್ತಿ ವಿದ್ಯುತ್ ತಂತಿಬೇಲಿ, ಗುಂಡಿಗಳ ನಿರ್ಮಾಣದ ಪರಿಹಾರೋಪಾಯದೊಂದಿಗೆ, ಆನೆಗಳನ್ನು ಮರಳಿ ಕಾಡಿಗೆ ಓಡಿಸಲು ಆನೆ ಕಾರ್ಯಪಡೆ ರಚಿಸಿದೆ. ಇಲಾಖೆಯ ಕಡೆಯ ಅಸ್ತ್ರ ಆನೆ ಸೆರೆ ಕಾರ್ಯಾಚರಣೆ. ಜೀವಹಾನಿ ಜೊತೆಗೆ ಹೆಚ್ಚಿನ ಬೆಳೆಹಾನಿ ಮಾಡುವ ಪುಂಡಾನೆಗಳನ್ನು ಹಿಡಿದು ಮರಳಿ ಕಾಡಿಗೆ ಬಿಡುವ ಕಾರ್ಯಾಚರಣೆಯು ಇಲಾಖೆ ಪಾಲಿಗೆ ಹರಸಾಹಸ. ಸಿಬ್ಬಂದಿ ಕೊರತೆಯಿಂದ ಬಳಲುತ್ತಿರುವ ಇಲಾಖೆಗೆ, ಕಾರ್ಯಾಚರಣೆಗೆ ಸ್ಥಳೀಯವಾಗಿ ಮೂಲಸೌಕರ್ಯಗಳಿಲ್ಲ. ಯುದ್ಧಕಾಲಕ್ಕೆ ಶಸ್ತ್ರಾಭ್ಯಾಸ ಎಂಬಂತೆ ಎಲ್ಲವನ್ನೂ ಹೊಂದಿಸಿಕೊಂಡು ಕಾರ್ಯಾಚರಣೆಗೆ ಇಳಿಯಬೇಕು.

**ಸಿಬ್ಬಂದಿ, ಸೌಕರ್ಯವಿಲ್ಲ:** 'ಕಾರ್ಯಾಚರಣೆಗೆ ಮಾನವ ಸಂಪನ್ಮೂಲದ ಜೊತೆಗೆ ಸೌಲಭ್ಯಗಳ ಕೊರತೆಯನ್ನು ಇಲಾಖೆ ಎದುರಿಸುತ್ತಿದೆ.


ಉದಯವಾಹಿನಿ ಚಿತ್ರ

**ಕಾರ್ಯಾಚರಣೆಗೆ ಮಾನವ ಸಂಪನ್ಮೂಲದ ಕೊರತೆ**

ಇದು ರಾಮನಗರ ಜಿಲ್ಲೆಯಲ್ಲಷ್ಟೇ ಅಲ್ಲದೆ, ಕಾಡಾನೆ ಹಾವಳಿ ಇರುವ ಇತರ ಜಿಲ್ಲೆಗಳಲ್ಲೂ ಇದೆ. ಡ್ರೋನ್, ಥರ್ಮಲ್ ಡ್ರೋನ್, ಲಾರಿಗಳು, ವಾಹನಗಳು, ಜೆಸಿಬಿ, ಕ್ರೇನ್ ಸೇರಿದಂತೆ ಎಲ್ಲವನ್ನು ಬಾಡಿಗೆಗೆ ತರಿಸಿಕೊಂಡು ಕಾರ್ಯಾಚರಣೆ ಶುರು ಮಾಡಬೇಕು' ಎಂದು ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದರು.'ತಳಮಟ್ಟದಲ್ಲಿ ಕೆಲಸ ಮಾಡುವ ಸಿಬ್ಬಂದಿ ಕೊರತೆಯೇ ಇಲಾಖೆಗೆ ದೊಡ್ಡ ಸವಾಲು. ಜಿಲ್ಲೆಗೆ ಮಂಜೂರಾಗಿರುವ 62 ಫಾರೆಸ್ಟ್ ಗಾರ್ಡ್ ಹುದ್ದೆಗಳ ಪೈಕಿ, 28 ಮಾತ್ರ ಭರ್ತಿಯಾಗಿದ್ದು 34 ಖಾಲಿ ಇವೆ. ಇನ್ನು ಕಾಡಾನೆಗಳ ಚಲನವಲನ ಸೇರಿದಂತೆ ಅರಣ್ಯಗಳ ಮೇಲೆ ನಿಗಾ ಇಡುವ 31 ಅರಣ್ಯ ವೀಕ್ಷಕರ ಹುದ್ದೆ ಪೈಕಿ 7 ಮಂದಿಯಷ್ಟೆ ಇದ್ದು 24 ಹುದ್ದೆ ಖಾಲಿ ಇವೆ. ಪರಿಸ್ಥಿತಿ ಹೀಗಿರುವಾಗ ಅಧಿಕಾರಿಗಳು ಹೇಗೆ ನಿಭಾಯಿಸುತ್ತಾರೆ?' ಎಂದು ಪ್ರಶ್ನಿಸಿದರು. ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಒಂದೆಡೆ ಕಾಡಾನೆಗಳ ಹಾವಳಿ ನಿಯಂತ್ರಿಸುವ ಸವಾಲಾದರೆ, ಮತ್ತೊಂದೆಡೆ ಆನೆ ಕಾಟದಿಂದ ಬೇಸತ್ತ ರೈತರ ಆಕ್ರೋಶದ ಬಿಸಿ ಎದುರಿಸಬೇಕು ಕೊರತೆಗಳ ನಡುವೆಯೇ ಕಾಡಾನೆ ತಡೆಗೆ ಕಾರ್ಯಪ್ರವೃತ್ತರಾಗಬೇಕು' ಎಂದು ಬೇಸರ ತೋಡಿಕೊಂಡರು.

# ಫೆ.13ಕ್ಕೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ

## ಅವಿಭಜಿತ ಮೈಸೂರು ಜಿಲ್ಲೆಯಿಂದ ಬೇರ್ಪಟ್ಟ ಬಳಿಕ ಜಿಲ್ಲೆಯಲ್ಲಿ ನಡೆಯುತ್ತಿರುವ ಮೊದಲ ಪೂರ್ಣ ಪ್ರಮಾಣದ ಸಚಿವ ಸಂಪುಟ ಸಭೆ

• **ಉದಯವಾಹಿನಿ ಚಾಮರಾಜನಗರ**

ಮಲೆ ಮಾದಪ್ಪನ ಸನ್ನಿಧಿ ಮಹದೇಶ್ವರ ಬೆಟ್ಟದಲ್ಲಿ ಫೆ.13ರಂದು ಸಚಿವ ಸಂಪುಟ ಸಭೆ ನಡೆಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಅವಿಭಜಿತ ಮೈಸೂರು ಜಿಲ್ಲೆಯಿಂದ ಬೇರ್ಪಟ್ಟ ಬಳಿಕ ಚಾಮರಾಜನಗರ ಜಿಲ್ಲೆಯಲ್ಲಿ ನಡೆಯುತ್ತಿರುವ ಮೊದಲ ಪೂರ್ಣ ಪ್ರಮಾಣದ ಸಚಿವ ಸಂಪುಟ ಸಭೆ ಇದಾಗಿದ್ದು ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಯ ದೃಷ್ಟಿಯಲ್ಲಿ ಹೆಚ್ಚು ಮಹತ್ವ ಪಡೆದುಕೊಂಡಿದೆ. ಜ್ವಲಂತ ಸಮಸ್ಯೆಗಳ ಪರಿಹಾರ ನಿರೀಕ್ಷೆ, ನಂಜುಡಪ್ಪ ವರದಿಯ ಪ್ರಕಾರ ಅತ್ಯಂತ ಹಿಂದುಳಿದ ಜಿಲ್ಲೆಗಳ ಪಟ್ಟಿಯಲ್ಲಿರುವ ಚಾಮರಾಜನಗರ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ತೀರಾ ಹಿಂದುಳಿದಿದೆ. ಸ್ವತಂತ್ರ ಜಿಲ್ಲೆಯಾಗಿ 25 ವರ್ಷಗಳು ಕಳೆದರೂ ಮೂಲಸೌಕರ್ಯಗಳ ಕೊರತೆ ಕಾಡುತ್ತಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ನಡೆಯುತ್ತಿರುವ ಸಚಿವ ಸಂಪುಟ ಸಭೆಯಲ್ಲಿ ಜ್ವಲಂತ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆಯೇ ಎಂಬ ನಿರೀಕ್ಷೆಗಳು ಗರಿಗೆದರಿವೆ.

**ಜಿಲ್ಲಾಡಳಿತದ ಸಿದ್ಧತೆ:** ಜಿಲ್ಲೆಗೆ ಸಮರ್ಪಕ ಕುಡಿಯುವ ನೀರಿನ ಸೌಲಭ್ಯ, ನನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳ ಜಾರಿ, ಐದೂ ತಾಲ್ಲೂಕುಗಳಿಗೆ ವ್ಯವಸ್ಥಿತ ಒಳಚರಂಡಿ ವ್ಯವಸ್ಥೆ ಪ್ರವಾಸೋದ್ಯಮ ಅಭಿವೃದ್ಧಿ, ರಸ್ತೆಗಳ ನಿರ್ಮಾಣ, ಉದ್ಯೋಗ ಸೃಷ್ಟಿಗೆ ಒತ್ತು ನೀಡುವ ಯೋಜನೆಗಳ ಜಾರಿಗೆ ಜಿಲ್ಲಾಡಳಿತ ಪ್ರಸ್ತಾವ ಸಿದ್ಧತೆಮಾಡಿಕೊಂಡಿದೆ. ಜಿಲ್ಲೆಯ ಎಲ್ಲಾ ಇಲಾಖೆಗಳಿಂದ ನನೆಗುದಿಗೆ ಬಿದ್ದಿರುವ ಅಭಿವೃದ್ಧಿ ಕಾಮಗಾರಿ ಹಾಗೂ ಮಹತ್ವದ ಯೋಜನೆಗಳ ವಿವರಗಳನ್ನು ಪಡೆಯಲಾಗುತ್ತಿದೆ. ಆರೋಗ್ಯ, ಪ್ರವಾಸೋದ್ಯಮ, ಬುಡಕಟ್ಟು ಪಂಗಡಗಳ ಕಲ್ಯಾಣ ಇಲಾಖೆಗಳಲ್ಲಿ ತುರ್ತು ಆಗಬೇಕಿರುವ ಕೆಲಸಗಳ ಪಟ್ಟಿ ಮಾಡಲಾಗಿದೆ. ಆರ್‌ಡಿಪಿಆರ್, ನೀರಾವರಿ, ಸಣ್ಣ ನೀರಾವರಿ, ಲೋಕೋಪಯೋಗಿ ಇಲಾಖೆಗಳ ಬೇಡಿಕೆಗಳ ಬಗ್ಗೆ ಪ್ರಸ್ತಾವ ಸಿದ್ಧಪಡಿಸುವ ಪ್ರಕ್ರಿಯೆ ನಡೆಯುತಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ತಿಳಿಸಿದರು.

**ಇಕೋ ಟೂರಿಸಂಗೆ ಒತ್ತು**

ಜಿಲ್ಲೆ ಭೌಗೋಳಿಕವಾಗಿ ಶೇ 52ರಷ್ಟು ಅರಣ್ಯ ಪ್ರದೇಶ ಹೊಂದಿದ್ದು 'ಚೆಲುವ ಚಾಮರಾಜನಗರ' ನಿರ್ಮಾಣ ನಿಟ್ಟಿನಲ್ಲಿ ಪರಿಸರಕ್ಕೆ ಪೂರಕವಾಗಿ ಇಕೋ ಟೂರಿಸಂಗೆ ಅಭಿವೃದ್ಧಿಗೆ ಒತ್ತು ನೀಡಲಾಗುವುದು. ಜೀವನೋಪಾಯ ಸುಧಾರಣೆ ಉದ್ಯೋಗ ಸೃಷ್ಟಿ ಹಾಗೂ ಪ್ರಕೃತಿಗೆ ಹಾನಿಯಾಗದಂತೆ ಪ್ರವಾಸೋದ್ಯಮ ಚಟುವಟಿಕೆಗಳ ಅನುಷ್ಠಾನಕ್ಕೆ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಪಡೆಯಲಾಗುವುದು.


ಉದಯವಾಹಿನಿ ಚಿತ್ರ

**ಕುಡಿಯುವ ನೀರಿನ ಯೋಜನೆ:** 2040 ದೃಷ್ಟಿಯಲ್ಲಿಟ್ಟುಕೊಂಡು ಜಿಲ್ಲೆಗೆ ಸಮರ್ಪಕ ಶುದ್ಧ ಕುಡಿಯುವ ನೀರು ಒದಗಿಸಲು ಮಾಲಂಗಿ ಯೋಜನೆಗೆ ಮರುಜೀವ ನೀಡಲು ಜಿಲ್ಲಾಡಳಿತ ನಿರ್ಧರಿಸಿದೆ. ಪ್ರಸ್ತಾವಕ್ಕೆ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಸಿಕ್ಕರೆ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ಸಂಪೂರ್ಣವಾಗಿ ನೀಗಲಿದೆ.

ಇದಲ್ಲದೆ ಜಿಲ್ಲಾ ಕ್ರೀಡಾಂಗಣದ ಅಭಿವೃದ್ಧಿ, ಒಳಾಂಗಣ ಹಾಗೂ ಹೊರಾಂಗಣ ಕ್ರೀಡಾಂಗಣಗಳ ನಿರ್ಮಾಣ, ಈಜುಕೊಳ ನಿರ್ಮಾಣ, ವಿದ್ಯುತ್ ಚಿತಾಗಾರ, ಸ್ಮಶಾನಗಳ ಅಭಿವೃದ್ಧಿಗೆ ಪ್ರಸ್ತಾವ ಸಿದ್ಧಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

**ರಸ್ತೆ ಅಭಿವೃದ್ಧಿ:** ಈಗಾಗಲೇ ತಾಳಬೆಟ್ಟದವರೆಗೆ 15 ಕೋಟಿ ವೆಚ್ಚದಲ್ಲಿ ಸಂಪರ್ಕ ರಸ್ತೆಗಳ ನಿರ್ಮಾಣ ನಡೆಯುತ್ತಿದೆ. ಹಾಡಿ ಪೋಡುಗಳಿಗೆ ವಿದ್ಯುದ್ದೀಕರಣ ನಡೆಯುತ್ತಿದೆ. ಹಾಡಿಗಳಿಗೆ 128 ಕಿ.ಮೀ ಮೆಟಲಿಂಗ್ ರಸ್ತೆಗಳ ನಿರ್ಮಾಣವಾಗಲಿದೆ. ಸಚಿವ ಸಂಪುಟ ಸಭೆ ನಡೆಯುವ ದಿನ ಮುಖ್ಯಮಂತ್ರಿಗಳು ಹಾಡಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಯೋಜನೆಗೆ ಚಾಲನೆ ನೀಡಲಿದ್ದಾರೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಜಿಲ್ಲೆಯ ಪ್ರಮುಖ ಬೇಡಿಕೆಗಳ ಬಗ್ಗೆ ಸ್ಥಳೀಯ ಶಾಸಕರ ಜೊತೆ ಸಭೆ ನಡೆಸಿ ಪ್ರಸ್ತಾವ ಸಿದ್ಧಪಡಿಸಲಾಗಿದೆ. ಮೈಸೂರಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಜೊತೆ ಒಂದು ಸುತ್ತಿನ ಸಭೆ ನಡೆದಿದ್ದು ಶೀಘ್ರ ಮತ್ತೊಂದು ಸಭೆ ನಡೆಯಲಿದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ಹೆಚ್ಚುವರಿ ಕಾರ್ಯದರ್ಶಿಗಳೂ ಸಭೆ ನಡೆಸಿ ಮಾಹಿತಿ ಪಡೆದಿದ್ದಾರೆ. ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆ ಸಿದ್ಧಪಡಿಸಲಾಗುತ್ತಿದೆ ಎಂದರು.

> ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತುಹಾಡಿ ಜನರಿಗೆ 3000 ಮನೆಗಳ ನಿರ್ಮಾಣ ಸಂಬಂಧ ಜಿಲ್ಲಾಡಳಿತ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಿದ್ದು ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ದೊರೆಯುವ ವಿಶ್ವಾಸವಿದೆ. ವಸತಿ ಯೋಜನೆ ಜಾರಿಯಾದರೆ ಜಿಲ್ಲೆಯಲ್ಲಿ ಮೊದಲ ಬಾರಿಗೆ ದೊಡ್ಡ ಪ್ರಮಾಣದಲ್ಲಿ ಹಾಡಿ ಜನರಿಗೆ ಸೂರುಗಳು ದೊರೆಯಲಿವೆ
>
> –ಸಿ.ಟಿ.ಶಿಲ್ಪಾನಾಗ್, ಜಿಲ್ಲಾಧಿಕಾರಿ

**ಜ್ವಲಂತ ಸಮಸ್ಯೆಗಳ ಪರಿಹಾರ ನಿರೀಕ್ಷೆ**

# ಮಿನಿ ನ್ಯೂಸ್

## ಲಸಿಕೆ ನಂತರ ಮಗು ಸಾವು ಆರೋಪ: ಪೋಷಕರ ಪ್ರತಿಭಟನೆ

• **ಉದಯವಾಹಿನಿ ಕುಣಿಗಲ್**

ತಾಲ್ಲೂಕಿನ ಭಕ್ತರಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಲಸಿಕೆ ಪಡೆದ ನಂತರ ಎರಡೂವರೆ ತಿಂಗಳ ಗಂಡು ಮಗುವಿನ ಆರೋಗ್ಯದಲ್ಲಿ ವ್ಯತ್ಯಾಸ ಉಂಟಾಗಿ ಬೆಳಗಿನ ಜಾವ ಮೃತಪಟ್ಟಿದೆ ಎಂದು ಪೋಷಕರು ದೂರಿದ್ದಾರೆ. ತಾಲ್ಲೂಕಿನ ಕೊತ್ತಗೆರೆ ಹೋಬಳಿ ಸಿಂಗೋನಹಳ್ಳಿ ಗ್ರಾಮದ ಮುರಳಿ ಮೋಹನ್ – ಚೈತ್ರ ದಂಪತಿ ಪುತ್ರ ದಕ್ಷಿತ್‌ಗೆ ಭಕ್ತರಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಎರಡೂವರೆ ತಿಂಗಳ ಲಸಿಕೆ ಹಾಕಿಸಿದ ನಂತರ ಮಗುವಿನ ಆರೋಗ್ಯದಲ್ಲಿ ವ್ಯತ್ಯಾಸವಾಗಿದೆ.

ಬೆಳಿಗ್ಗೆ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ತರುವ ಸಮಯದಲ್ಲಿ ಮೃತಪಟ್ಟಿದೆ. ಮಗುವಿನ ಸಾವಿಗೆ ಲಸಿಕೆಯೇ ಕಾರಣ ಎಂದು ಆರೋಪಿಸಿದ ಪೋಷಕರು ಮತ್ತು ಸಂಬಂಧಿಕರು ಭಕ್ತರಹಳ್ಳಿ ಆಸ್ಪತ್ರೆ ಮುಂಭಾಗ ಶವವಿಟ್ಟು ಪ್ರತಿಭಟನೆಗೆ ಮುಂದಾದರು. ಸಿಬ್ಬಂದಿ ಪರಾರಿಯಾಗಿದ್ದಾರೆ. ಸಿಪಿಐ ನವೀನ್ ಗೌಡ ಮತ್ತು ಸಿಬ್ಬಂದಿ ಸ್ಥಳಕ್ಕೆ ಬಂದು ಪರಿಸ್ಥಿತಿ ನಿಯಂತ್ರಿಸಿದರು.

ಪಟ್ಟಣದ ತಾಲ್ಲೂಕು ಆರೋಗ್ಯಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆಗೆ ಮುಂದಾಗಿದ್ದು, ತಾಲ್ಲೂಕು ಆರೋಗ್ಯಾಧಿಕಾರಿ ಮರಿಯಪ್ಪ, 'ಶವ ಪರೀಕ್ಷೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳುವ ಭರವಸೆ ನೀಡಿದ ನಂತರ ಪ್ರತಿಭಟನೆ ಹಿಂಪಡೆದರು. ಮಗುವಿನ ತಂದೆ ಮುರಳಿ ಮೋಹನ್ ನೀಡಿದ ದೂರಿನ ಮೇರೆಗೆ ಕುಣಿಗಲ್ ಪೋಲಿಸರು ಪ್ರಕರಣ ದಾಖಲಿಸಿದ್ದಾರೆ.

## 3 ವರ್ಷದ ಚಿರತೆ ಕಳೇಬರ ಪತ್ತೆ

• **ಉದಯವಾಹಿನಿ ಚನ್ನಪಟ್ಟಣ**

ತಾಲ್ಲೂಕಿನ ಬಿ.ವಿ. ಹಳ್ಳಿ ಗ್ರಾಮದ ಹೊರವಲಯದ ಹಳ್ಳದಲ್ಲಿ ಮೂರು ವರ್ಷದ ಹೆಣ್ಣು ಚಿರತೆಯ ಕಳೇಬರ ಪತ್ತೆಯಾಗಿದೆ. ಚಿರತೆಯು ಅನಾರೋಗ್ಯ ಅಥವಾ ವಿಷಾಹಾರ ತಿಂದು ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದೆ. ವಿಷಯ ತಿಳಿದು ಸ್ಥಳಕ್ಕೆ ಎಸಿಎಫ್ ಪುಟ್ಟಮ್ಮ ವಲಯ ಅರಣ್ಯಾಧಿಕಾರಿ ಮಲ್ಲೇಶ್ ಹಾಗೂ ಪಶು ವೈದ್ಯರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ. ನಂತರ, ಮರಣೋತ್ತರ ಪರೀಕ್ಷೆ ನಡೆಸಿ ಅಂತ್ಯಕ್ರಿಯೆ ನಡೆಸಿದ್ದಾರೆ. ಗ್ರಾಮದ ಹೊರವಲಯದಲ್ಲಿರುವ ಅರಣ್ಯ ಸೇರಿದಂತೆ ರಸ್ತೆ ಬದಿಗಳಲ್ಲಿ ಇತ್ತೀಚೆಗೆ ಕೆಲವರು ಕೋಳಿ ಮಾಂಸದ ತ್ಯಾಜ್ಯವನ್ನು ತಂದು ಸುರಿಯುತ್ತಿದ್ದಾರೆ. ಅದನ್ನು ತಿನ್ನಲು ಬೀದಿ ನಾಯಿಗಳು ಬರುತ್ತಿದೆ. ಇದರಿಂದಾಗಿ, ಚಿರತೆಗಳು ಇಲ್ಲಿಗೆ ಬರುವುದು ಸಾಮಾನ್ಯವಾಗಿದೆ. ಕೊಳೆತ ತ್ಯಾಜ್ಯ ತಿಂದು ಚಿರತೆ ಸಾವನ್ನಪ್ಪಿರುವ ಅನುಮಾನವಿದ್ದು, ಮರಣೋತ್ತರ ಪರೀಕ್ಷೆ ವರದಿ ಬಂದ ಬಳಿಕ ಸಾವಿಗೆ ನಿಖರ ಕಾರಣ ಗೊತ್ತಾಗಲಿದೆ ಎಂದು ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

## ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ದಿಶಾ ಸಭೆ: ಜಿ.ಟಿ. ದೇವೇಗೌಡ ಗೈರು

• **ಉದಯವಾಹಿನಿ ಮೈಸೂರು**

ಕೇಂದ್ರ, ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಇಲ್ಲಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ (ದಿಶಾ) ಸಭೆಗೆ ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಶಾಸಕ ಜಿ.ಟಿ. ದೇವೇಗೌಡ ಗೈರುಹಾಜರಾದರು. ಕುಮಾರಸ್ವಾಮಿ ಅವರೊಂದಿಗೆ ಅಂತರ ಕಾಯ್ದು ಕೊಂಡಿರುವ ದೇವೇಗೌಡ ಸಭೆಯಿಂದ ದೂರ ಉಳಿದರು. ಆದರೆ ಅವರ ಪುತ್ರ ಹುಣಸೂರು ಶಾಸಕ ಜಿ.ಡಿ. ಹರೀಶ್ ಗೌಡ ಪಾಲ್ಗೊಂಡಿದ್ದರು.

ಇದಕ್ಕೂ ಮುನ್ನ ಪತ್ರಕರ್ತರೊಂದಿಗೆ ಮಾತಾನಾಡಿದ ಕುಮಾರಸ್ವಾಮಿ, ಜಿಟಿಡಿ–ಜೆಡಿಎಸ್ ಸಂಬಂಧ ಗಂಡ–ಹೆಂಡತಿ ಸಂಬಂಧದಂತೆ ಉಂಡು ಮಲಗುವವರೆಗೆ ಮಾತ್ರವೇ ಜಗಳ ಇರುತ್ತದೆ. ನಂತರ ಎಲ್ಲವೂ ಸರಿಯಾಗುತ್ತದೆ. ಅವರು ಕಾಂಗ್ರೆಸ್‌ಗೆ ಹೋಗುವುದಿಲ್ಲ. ನಮ್ಮೊಂದಿಗೇ ಇರುತ್ತಾರೆ. ಮುನಿಸು ಇದ್ದ ಮಾತ್ರಕ್ಕೆ ನಮ್ಮನ್ನು ಬಿಟ್ಟು ಹೋಗುತ್ತಾರೆ ಎಂದರ್ಥವಲ್ಲ ಎಂದು ಹೇಳಿದರು.

## ಅಂಗನವಾಡಿ ಮೇಲ್ಛಾವಣಿ ಕುಸಿತ ಓರ್ವ ಮಗುವಿನ ಸ್ಥಿತಿ ಗಂಭೀರ

• **ಉದಯವಾಹಿನಿ ಕೋಲಾರ**

ಅಂಗನವಾಡಿ ಮೇಲ್ಛಾವಣಿ ಕುಸಿದು ಬಿದ್ದು ಶಾಲೆಯಲ್ಲಿದ್ದಂತಹ 7 ಮಕ್ಕಳ ಪೈಕಿ 4 ಮಕ್ಕಳಿಗೆ ಗಾಯವಾಗಿದ್ದು ಅದರಲ್ಲಿ ಒರ್ವ ಮಗುವಿಗೆ ತೀವ್ರವಾಗಿ ಗಂಭೀರವಾಗಿ ಕಾಯಕೊಂಡಿರುವ ಘಟನೆ ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನ ದಾಸರ ಹೊಸಹಳ್ಳಿಯಲ್ಲಿ ಈ ಒಂದು ದುರ್ಘಟನೆ ನಡೆದಿದೆ.

ಹೌದು ಕೋಲಾರ ಜಿಲ್ಲೆಯ ದಾಸರಹೊಸಹಳ್ಳಿ ಎಂಬಲ್ಲಿ ಅಂಗನವಾಡಿ ಶಾಲೆಯ ಮೇಲ್ಛಾವಣಿ ಕುಸಿತವಾಗಿ 7 ಮಕ್ಕಳಿಗೆ ಗಾಯವಾಗಿದೆ. ನಾಲ್ವರು ಮಕ್ಕಳ ತಲೆ ಮತ್ತು ಕೈಕಾಲುಗಳಿಗೆ ಗಾಯವಾಗಿದ್ದು, ಬಂಗಾರಪೇಟೆ ಆಸ್ಪತ್ರೆಯಲ್ಲಿ ಸದ್ಯ ಚಿಕಿತ್ಸೆ ನೀಡಲಾಗುತ್ತಿದೆ. ಅಂಗನವಾಡಿ ಕಟ್ಟಡದ ಮೇಲ್ಛಾವಣಿ ಕುಸಿತವಾಗಿ ಬಂಗಾರಪೇಟೆ ತಾಲ್ಲೂಕಿನ ದಾಸರಹೊಸಹಳ್ಳಿಯಲ್ಲಿ ಗಾಯಗೊಂಡ 7 ಅಂಗನವಾಡಿ ಮಕ್ಕಳನ್ನು ತಕ್ಷಣ ಆಸ್ಪತ್ರೆಗೆ ದಾಖಲಿಸಲಾಯಿತು ಈ ವೇಳೆ ಘಟನೆ ಸ್ಥಳದಲ್ಲಿ ನಾರಾಯಣಸ್ವಾಮಿ ಭೇಟಿ ನೀಡಿ ಅಲ್ಲದೆ ಆಸ್ಪತ್ರೆಗೆ ಭೇಟಿ ನೀಡಿ ಮಕ್ಕಳ ಆರೋಗ್ಯ ವಿಚಾರಿಸಿದ್ದಾರೆ. ಘಟನೆ ಕುರಿತಂತೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಅವರು ಭರವಸೆ ನೀಡಿದರು.

## ಹೊಸ ವರ್ಷದಂದು ಕಟ್ ಮಾಡಿ ಉಳಿದಿದ್ದ ಕೇಕ್ ತಿಂದು 30 ಮಕ್ಕಳು ಅಸ್ವಸ್ಥ

• **ಉದಯವಾಹಿನಿ ಮೈಸೂರು**

ಕೇಕ್ ತಿಂದು 30 ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥವಾದ ಘಟನೆ ಮೈಸೂರು ಜಿಲ್ಲೆಯ ಹುಣಸೂರಿನ ಬೋಳನಹಳ್ಳಿಯ ಶ್ರೀ ಮಂಜುನಾಥ ವಿದ್ಯಾಸಂಸ್ಥೆಯಲ್ಲಿ ನಡೆದಿದೆ.

ಹೊಸ ವರ್ಷದ ದಿನದಂದು ಕೇಕ್ ಕಟ್ ಮಾಡಿ ಉಳಿದಿದ್ದ ಕೇಕ್ ಅನ್ನು ಎರಡು ದಿನದ ನಂತರ ಮಕ್ಕಳು ತಿಂದಿದ್ದಾರೆಂದು ಹೇಳಲಾಗಿದೆ. ಕೇಕ್ ಸೇವಿಸಿದ ನಂತರ ಮಕ್ಕಳಲ್ಲಿ ವಾಂತಿ ಭೇದಿ ಕಾಣಿಸಿಕೊಂಡಿದ್ದು, ಬೋಳನಹಳ್ಳಿಯ ಆಯುಷ್ಮಾನ್ ಆರೋಗ್ಯ ಕೇಂದ್ರಕ್ಕೆ ಮಕ್ಕಳನ್ನು ದಾಖಲಿಸಲಾಗಿದೆ. ಚಿಕಿತ್ಸೆ ನಂತರ ವಿದ್ಯಾರ್ಥಿಗಳು ಚೇತರಿಸಿಕೊಂಡಿದ್ದಾರೆ. ಕೇಕ್ ತಿಂದು ಅಸ್ವಸ್ಥರಾಗಿದ್ದ ಮಕ್ಕಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಆಸ್ಪತ್ರೆಗೆ ಭೇಟಿ ನೀಡಿ ಮಕ್ಕಳ ಆರೋಗ್ಯದ ಬಗ್ಗೆ ಮಾಹಿತಿ ಪಡೆದ ಕ್ಷೇತ್ರ ಶಿಕ್ಷಣಾಧಿಕಾರಿ ಮಹದೇವ್, ನಿರ್ಲಕ್ಷ್ಯತೆ ವಹಿಸಿದ ಶಾಲಾ ಮುಖ್ಯೋಪಾಧ್ಯಾಯ ಅಶ್ವತ್ಥ್‌ರಿಗೆ ಕ್ಲಾಸ್ ತೆಗೆದುಕೊಂಡಿದ್ದಾರೆ.

ಅಂತರಾಳದಿಂದ..
EDITORIAL

# ಬಸ್ ಟಿಕೆಟ್ ದರ ಏರಿಕೆ: ಕೇಂದ್ರದ ಪರೋಕ್ಷ ಪಾತ್ರವೆಷ್ಟು

ಕಾಂಗ್ರೆಸ್ ಸರಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ ದಿನದಿಂದ, ವಿರೋಧ ಪಕ್ಷಗಳು 'ಸಾರಿಗೆ ನಿಗಮ ನಷ್ಟದಲ್ಲಿದೆ' ಎಂದು ಗದ್ದಲ ಎಬ್ಬಿಸುತ್ತಾ ಬಂದಿದ್ದವು. ಅವರ ಗುರಿ ಸಾರಿಗೆ ನಿಗಮಗಳ ಉದ್ಧಾರ ಖಂಡಿತ ಆಗಿರಲಿಲ್ಲ. ಸರಕಾರ ಮಹಿಳೆಯರಿಗಾಗಿ ಜಾರಿಗೊಳಿಸಿದ ಶಕ್ತಿ ಯೋಜನೆಯನ್ನು ವಿಫಲಗೊಳಿಸುವುದು ಉದ್ದೇಶವಾಗಿತ್ತು ಶಕ್ತಿ ಯೋಜನೆ ಜಾರಿಗೊಂಡ ಮೊದಲ ದಿನವೇ, ಸಾರಿಗೆ ವ್ಯವಸ್ಥೆ ಅಸ್ತವ್ಯಸ್ತಗೊಂಡಿದೆ ಎಂದು ವಿರೋಧ ಪಕ್ಷಗಳ ನಾಯಕರು ಹುಯಿಲೆಬ್ಬಿಸತೊಡಗಿದರು. ಆದರೆ ಅಂತಹದೇನೂ ಸಂಭವಿಸದೇ ಇದ್ದಾಗ, ಶಕ್ತಿಯೋಜನೆಯಿಂದ ಹೆಣ್ಣು ಮಕ್ಕಳು ಹಾದಿ ತಪ್ಪುತ್ತಿದ್ದಾರೆ' ಎಂದು ಹಳಹಳಿಸತೊಡಗಿದರು. ಉದೂ ಫಲಿಸದೇ ಇದ್ದಾಗ ಸಾರಿಗೆ ನಿಗಮಗಳು ದಿವಾಳಿಯಾಗಿವೆ ಸಿಬ್ಬಂದಿಗೆ ವೇತನ ನೀಡುವುದಕ್ಕೂ ಸರಕಾರಕ್ಕೆ ಸಾಧ್ಯವಾಗುತ್ತಿಲ್ಲ. ಇದಕ್ಕೆಲ್ಲ ಮುಖ್ಯ ಕಾರಣ ಸರಕಾರ ಮಹಿಳೆಯರಿಗೆ ನೀಡಿದ ಉಚಿತ ಪ್ರಯಾಣ ಯೋಜನೆ' ಎಂದು ರಂಪಾಟ ಶುರು ಹಚ್ಚತೊಡಗಿದರು. ಇದೀಗ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ಬಸ್ ಪ್ರಯಾಣ ದರವನ್ನು ಶೇ. 15ರಷ್ಟು ಏರಿಕೆ ಮಾಡಲು ಸಿದ್ದರಾಮಯ್ಯ ನೇತೃತ್ವದ ಸರಕಾರ ಸಂಪುಟ ಸಭೆಯು ಒಪ್ಪಿಗೆ ನೀಡಿದೆ. ಈ ಏರಿಕೆಯನ್ನು ವಿರೋಧ ಪಕ್ಷಗಳು ಸಂಭ್ರಮಿಸುತ್ತಿದ್ದು ಸರಕಾರದ ಗ್ಯಾರಂಟಿ ಯೋಜನೆಗಳ ವಿರುದ್ಧ ನಡೆಸುತ್ತಿರುವ ಹೋರಾಟಕ್ಕೆ ಸಿಕ್ಕಿದ ಮೊದಲ ಗೆಲುವು ಎಂಬಂತೆ ವರ್ತಿಸುತ್ತಿವೆ. ತನ್ನ ಗ್ಯಾರಂಟಿ ವಿರೋಧಿ ಹೋರಾಟಗಳಿಗೆ ಟಿಕೆಟ್ ದರ ಏರಿಕೆಯನ್ನು ಅಸ್ತವಾಗಿ ಬಳಸಲು ಮುಂದಾಗಿದೆಹಾಗೆಂದು ಟಿಕೆಟ್ ದರ ಏರಿಕೆ ನ್ಯಾಯಯುತ ಎಂದು ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಏಕಾಏಕಿ ಶೇ. 15ರಷ್ಟು ಹೆಚ್ಚಳಗೊಳಿಸಿದರೆ ಅದರ ದುಷ್ಪರಿಣಾಮವನ್ನು ಶ್ರೀಸಾಮಾನ್ಯ ಅನುಭವಿಸಲೇಬೇಕಾಗುತ್ತದೆ. ಬಿಎಂಟಿಸಿ ಬಸ್ ಟಿಕೆಟ್ ದರ ಏರಿಕೆಯಾಗಿ 10 ವರ್ಷ ಆಗಿದ್ದರೆ, ಟಿಕೆಟ್ ದರ ಏರಿಕೆಯಾಗಿ ಐದು ವರ್ಷವಾಗಿದೆ. ಐದು ವರ್ಷದಲ್ಲಿ ಈಗ ಡೀಸೆಲ್ ದರವೂ ತೀವ್ರ ಹೆಚ್ಚಳವಾಗಿದೆ. ಬೆಲೆಯೇರಿಕೆ ಅನಿವಾರ್ಯ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಹೇಳಿಕೆ ನೀಡಿದ್ದಾರೆ. ಇದೇ ಸಂದರ್ಭದಲ್ಲಿ ಆದರೆ ಸಾರಿಗೆ ಸಚಿವರು, ಈ ಬೆಲೆಯೇರಿಕೆಗೆ ಶಕ್ತಿ ಯೋಜನೆ ಕಾರಣವಲ್ಲ ಎಂದಿದ್ದಾರೆ. ಶಕ್ತಿ ಯೋಜನೆಯಿಂದ ಇಲಾಖೆಗೆ ಲಾಭವಾಗಿದೆ. ಆದರೆ ಬಿಜೆಪಿ ಸರಕಾರ ಸಾವಿರಾರು ಕೋಟಿ ರೂ. ಸಾಲವನ್ನು ಬಿಟ್ಟು ಹೋಗಿರುವುದು ಕೂಡ ಬೆಲೆಯೇರಿಕೆಗೆ ಕಾರಣ. ಹಿಂದಿನ ಸರಕಾರದಲ್ಲಿ ಸಂಬಳದ ಸಮಸ್ಯೆಯಾಗಿತ್ತು. ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಬಸ್ ಟಿಕೆಟ್ ದರ ಕಡಿಮೆ ಇದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಬಸ್‌ಟಿಕೆಟ್ ದರವನ್ನು ವಿರೋಧಿಸುವುದಕ್ಕಾಗಿ ವಿರೋಧ ಪಕ್ಷಗಳು ಶಕ್ತಿಯೋಜನೆಯನ್ನು ಟೀಕಿಸುತ್ತಿರುವುದೇ ಅವರಿಗೆ ತಿರುಗು ಬಾಣವಾಗುತ್ತದೆ. 'ಮಹಿಳೆಯರಿಗೆ ಉಚಿತ-ಪುರುಷರಿಗೆ ಹೊರೆ' ಎನ್ನುವುದೇ ತರ್ಕಹೀನವಾದದು. ಈ ನಾಡಿನ ಮಹಿಳೆ ಒಬ್ಬ ಪುರುಷನ ಮಗಳು, ತಂಗಿ, ಅಕ್ಕ ಮಡದಿ ಹೀಗೆ ಒಂದಲ್ಲ ಒಂದು ರೀತಿಯಲ್ಲಿ ಕುಟುಂಬದ ಭಾಗವಾಗಿ ಬೆಸೆದಿರುತ್ತಾಳೆ. ಮಹಿಳೆಯರಿಗೆ ನೀಡುವ ಯಾವುದೇ ಉಚಿತಗಳ ಪರೋಕ್ಷ ಫಲಾನುಭವಿಗಳು ಪುರುಷರೇ ಆಗಿರುತ್ತಾರೆ. ಮಹಿಳೆಯರಿಗೆ ನೀಡುವ ಯಾವುದೇ ಯೋಜನೆಗಳು ಒಂದಿಡೀ ಕುಟುಂಬವನ್ನೇ ಸಬಲೀಕರಿಸುವುದರಿಂದ, ಮಹಿಳೆಯರು-ಪುರುಷರು ಎಂದು ಬೇರ್ಪಡಿಸಿ ನೋಡುವುದು ಸರಿಯಾದ ವಿಧಾನವಲ್ಲ ಮಹಿಳೆಯರನ್ನು ಸಬಲೀಕರಿಸುವ ಯಾವುದೇ ಯೋಜನೆಗಳ ಲಾಭವನ್ನು ಹಣದ ಮೂಲಕ ಅಳೆಯುವುದು ಸರಿಯಲ್ಲ. ಅದು ಸಮಾಜಕ್ಕೆ ಬೇರೆ ಬೇರೆ ರೂಪಗಳಲ್ಲಿ ಮರಳಿ ಸೇರುವುದು. ಮಹಿಳೆಯರ ಸ್ವಾವಲಂಬೀ ಬದುಕಿಗೆ ಶಕ್ತಿಯೋಜನೆ ನೀಡುತ್ತಿರುವ ಕೊಡುಗೆ ಬಹುದೊಡ್ಡದು. ಇದು ಸಾಮಾಜಿಕ ವಲಯದಲ್ಲಿ ಧನಾತ್ಮಕ ಪರಿಣಾಮಗಳನ್ನು ಬೀರುತ್ತಿದೆ. ಇಷ್ಟಕ್ಕೂ ಸಾರಿಗೆ ಇಲಾಖೆ ಎನ್ನುವುದು ಸರಕಾರ ನಡೆಸುವ ಉದ್ಯಮ ಅಲ್ಲ. ಅದರ ಉದ್ದೇಶವೇ ಸೇವೆ. ಆದುದರಿಂದ, ಸಾರಿಗೆ ಇಲಾಖೆ ತನ್ನ ಸೇವೆಯ ಉದ್ದೇಶವನ್ನು ಎಷ್ಟರಮಟ್ಟಿಗೆ ಈಡೇರಿಸಿಕೊಂಡಿದೆ ಎನ್ನುವುದು ಪರಿಗಣನೆಗೆ ಬರಬೇಕು. ಇದರ ಜೊತೆ ಜೊತೆಗೇ ಇಲಾಖೆಯ ನಷ್ಟವನ್ನು ಎದುರಿಸಲು ದಾರಿ ಹುಡುಕಬೇಕು.ಈ ಹಿಂದೆ ಬಿಜೆಪಿ ಸರಕಾರ ಅಧಿಕಾರದಲ್ಲಿದ್ದಾಗ ಯಾವುದೇ ಗ್ಯಾರಂಟಿ ಯೋಜನೆಗಳು ಜಾರಿಯಲ್ಲಿರಲಿಲ್ಲ. ಆಗಲೂ ನಾರಿಗೆ ಇಲಾಖೆ ಲಾಭದಲ್ಲೇನೂ ಇರಲಿಲ್ಲ. ಈ ಬಾರಿ ಮಹಿಳೆಯರಿಗೆ ಕೊಟ್ಟು ಪುರುಷರಿಂದ ಕಿತ್ತುಕೊಳ್ಳುತ್ತಿದೆ ಎಂದು ಬಿಜೆಪಿ ಆರೋಪಿಸುತ್ತಿದೆ. ಕನಿಷ್ಠ ಈ ಸರಕಾರ ಕೊಟ್ಟು ಕಿತ್ತುಕೊಳ್ಳುತ್ತಿದೆ. ಆದರೆ ಹಿಂದಿನ ಸರಕಾರ ಬರೇ ಕಿತ್ತುಕೊಳ್ಳುವ ಬಗ್ಗೆಯೋಚಿಸುತ್ತಿತ್ತೇ ಹೊರತು, ಬಡವರಿಗೆ, ಮಹಿಳೆಯರಿಗೆ ಕೊಡುವ ಬಗ್ಗೆ ಯೋಚಿಸಿರಲಿಲ್ಲ. ಆಗ ಕರ್ನಾಟಕದ ಖಜಾನೆಯೇನೂ ತುಂಬಿತುಳುಕುತ್ತಿರಲಿಲ್ಲ. ಆದುದರಿಂದ ಸಾರಿಗೆ ಇಲಾಖೆಯ ನಷ್ಟಗಳನ್ನು ಸರಕಾರದ ವೈಫಲ್ಯವಾಗಿ ಗುರುತಿಸಬೇಕಾಗಿಲ್ಲ. ಆದರೆ ಶೇ. 15ರಷ್ಟು ಒಮ್ಮೆಲೆ ಬೆಲೆಯೇರಿಸುವ ಬದಲು, ಬೇರೆ ವಿಧಾನಗಳಿಂದ ಇದನ್ನು ತುಂಬಿಕೊಳ್ಳಲು ಸಾಧ್ಯತೆಗಳಿರಲಿಲ್ಲವೇ ಎನ್ನುವ ಪ್ರಶ್ನೆಗೆ ಸಚಿವರು ಉತ್ತರಿಸಬೇಕಾಗುತ್ತದೆ. ಹಾಗೆ ನೋಡಿದರೆ, ಇಂದು ಜಿಎಸ್‌ಟಿ ಹೆಸರಿನಲ್ಲಿ ಕೇಂದ್ರ ಸರಕಾರ ನಡೆಸುತ್ತಿರುವ ಲೂಟಿಯ ಮುಂದೆ ಕೊಟ್ಟು ಕಿತ್ತುಕೊಳ್ಳುವ ರಾಜ್ಯದ ಸರಕಾರದ ತಂತ್ರ ಎಷ್ಟೋ ವಾಸಿ. ಬೆಲೆಯೇರಿಕೆಯ ಮೂಲಕ ಜನರನ್ನು ಲೂಟಿ ಮಾಡುವುದೇ ರಾಜ್ಯ ಸರಕಾರದ ಉದ್ದೇಶವಾಗಿದ್ದರೆ, ಅದು ಶಕ್ತಿ ಯೋಜನೆ, ಗೃಹಲಕ್ಷ್ಮಿ ಅನ್ನಭಾಗ್ಯ ಗೃಹ ಜ್ಯೋತಿಯಂತಹ ಗ್ಯಾರಂಟಿ ಯೋಜನೆಗಳನ್ನು ಹಮ್ಮಿಕೊಳ್ಳುತ್ತಲೇ ಇರುತ್ತಿರಲಿಲ್ಲ. ಅಷ್ಟರಮಟ್ಟಿಗೆ ರಾಜ್ಯ ಸರಕಾರದ ಆಡಳಿತ ಸಹನೀಯವಾಗಿದೆ ಎನ್ನುವುದನ್ನು ನಾವು ಒಪ್ಪಿಕೊಳ್ಳಲೇ ಬೇಕಾಗಿದೆ. ರಾಜ್ಯ ಸರಕಾರ ಉಚಿತಗಳನ್ನು ನೀಡಿದರೆ ಅದನ್ನೂ ಟೀಕಿಸುವ ವಿರೋಧ ಪಕ್ಷಗಳು, ಕೇಂದ್ರ ಸರಕಾರ ಜನರ ಮೇಲೆ ಹೇರುತ್ತಿರುವ ತೆರಿಗೆಯ ಬಗ್ಗೆ ಯಾಕೆ ಮೌನವಾಗಿವೆ ಇಂದು, ಆರೋಗ್ಯ ವಿಮೆಗೂ ದುಬಾರಿ ಜಿಎಸ್‌ಟಿಯನ್ನು ಕಟ್ಟಬೇಕಾಗಿದೆ. ಬಡವರ ಮನೆಗಳ ನಿರ್ಮಾಣಗಳ ಮೇಲೂ ಜಿಎಸ್‌ಟಿ ಹೇರಲಾಗಿದೆ.

> **ಸರಕಾರದ ನಿರ್ಧಾರವನ್ನು ಟೀಕಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬೆಲೆಯೇರಿಕೆಗೆ ಶಕ್ತಿ ಯೋಜನೆ ಕಾರಣ. ಮಹಿಳೆಯರಿಗೆ ಉಚಿತ-ಪುರುಷರಿಗೆ ಹೊರೆ ಎಂಬ ನೀತಿಯನ್ನು ಸರಕಾರ ಅನುಸರಿಸುತ್ತಿದೆ ಎಂದು ಆರೋಪಿಸಿದ್ದಾರೆ. ಬೆಲೆಯೇರಿಕೆಯ ಮೂಲಕ ಸರಕಾರ ಸುಲಿಗೆ ಮಾಡುತ್ತಿದೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಕಿಡಿ ಕಾರಿದ್ದಾರೆ.**




## ಶ್ರೀರಾಮನು ಜನಕರಾಜನ ಬಿಲ್ಲನ್ನು ಮುರಿದದ್ದು

• ಹಿಂದಿನ ಸಂಚಿಕೆಯಿಂದ 64 ನೆಯ ಅಧ್ಯಾಯ

ಸೀತಾದೇವಿಯನ್ನು ಶ್ರೀರಾಮನಿಗೆ ಕೊಡಬೇಕೆಂಬ ನನ್ನ ಅಭಿಪ್ರಾಯವನ್ನೂ ರಘುನಾಥನು ನಿಮ್ಮ ಕೃಪೆಯಿಂದ ಲಕ್ಷ್ಮಣಸಹಿತನಾಗಿ ಕುಶಲಿಯಾಗಿದ್ದಾನೆ ಎಂಬ ಶುಭವಾರ್ತೆಯನ್ನೂ ಈತನು ನನ್ನ ಮನೆಯಲ್ಲಿದ್ದ ಧನುಸ್ಸಿನ ಹೆದೆಯನ್ನೇರಿಸಿದನೆಂಬ ವೃತ್ತಾಂತವನ್ನೂ ಹೇಳಿ ಆ ರಾಜನನ್ನು ಶೀಘ್ರದಲ್ಲಿ ಕರೆತರಲಿ ಎಂದು ಹೇಳಿದನು. ವಿಶ್ವಾಮಿತ್ರಮುನೀಶ್ವರನು ಹಾಗೆಯೇ ಆಗಲಿ ಎಂದು ನುಡಿದನು. ಜನಕರಾಜನು ಮಂತ್ರಿಗಳನ್ನು ಕರೆದು ಶ್ರೀರಾಮನು ಶಿವಧನುಸ್ಸನ್ನು ಮುರಿದ ವೃತ್ತಾಂತವನ್ನು ದಶರಥಮಹಾರಾಜನಿಗೆ ತಿಳಿಸಿ ಆತನನ್ನು ಆದರದಿಂದ ಕರೆದುಕೊಂಡು ಬನ್ನಿರಿ ಎಂದು ನುಡಿದು ಆ ಮಂತ್ರಿಗಳನ್ನು ಅಯೋಧ್ಯಾ ಪಟ್ಟಣಕ್ಕೆ ಕಳುಹಿಸಿದನು. ಜನಕರಾಜನು ಮನಸ್ಸಿನಲ್ಲಿದ್ದ ಚಿಂತೆಯನ್ನು ಬಿಟ್ಟು ಸಂತೋಷಯುಕ್ತನಾಗಿ ತನ್ನ ದೂತರನ್ನು ಅಯೋಧ್ಯಾ ಪಟ್ಟಣಕ್ಕೆ ಕಳುಹಿಸಲು ಅವರು ಅಯೋಧ್ಯೆಗೆ ಪ್ರಯಾಣಮಾಡಿದರು.

### ಜನಕ ರಾಜನು ದಶರಥ ರಾಯನನ್ನು

ಆನಂತರ ಜನಕಚಕ್ರೇಶ್ವರನ ಮಂತ್ರಿಗಳು ವಾಹನಗಳನ್ನು ಹತ್ತಿಕೊಂಡು ಮಧ್ಯಮಾರ್ಗದಲ್ಲಿ ಮೂರು ರಾತ್ರಿಗಳು ನಿಂತು ಅಯೋಧ್ಯಾವಟ್ಟಣವನ್ನು ಪ್ರವೇಶಿಸಿ ದಶರಥರಾಜನ ಅರಮನೆಗೆ ಹೋಗಿ ದ್ವಾರಪಾಲಕರನ್ನು ಕಂಡು ಎಲೈ ದ್ವಾರಪಾಲಕರುಗಳಿರಾ, ನಾವು ಜನಕರಾಜನ ದೂತರು, ಜನಕರಾಜನು ನಿಮ್ಮ ರಾಜನ ಬಳಿಗೆ ಕಳುಹಿಸಿದ್ದಾನೆ. ನಾವು ಬಂದ ವೃತ್ತಾಂತವನ್ನು ನಿಮ್ಮ ರಾಜನಿಗೆ ಜಿನ್ನ ಹಮಾಡಿರಿ ಎಂದು ಹೇಳಿದರು.
ಆ ದ್ವಾರಪಾಲಕರು ಶೀಘ್ರದಲ್ಲಿ ಅರಮನೆಯ ಒಳಗೆ ಹೋಗಿ ಆಸ್ಥಾನಮಂಟಪದಲ್ಲಿದ್ದ ದಶರಥರಾಜನಿಗೆ ಇವರು ಬಂದುದನ್ನು ಬಿನ್ನ ಹಮಾಡಿದರು.ದಶರಥಮಹಾರಾಜನು ಶೀಘ್ರದಲ್ಲಿ ಕರೆದುಕೊಂಡು ಬರಹೇಳಲು ಆ ದ್ವಾರಪಾಲಕರು ಬಾಗಿಲಿಗೆ ಬಂದು ಜನಕರಾಜನ ದೂತರನ್ನು ಒಳಗೆ ಕರೆದುಕೊಂಡುಹೋದರು. ಆ ದೂತರು ಒಡೋಲಗದಲ್ಲಿದ್ದ ದಶರಥರಾಜನನ್ನು ಕಂಡು ವಿನಯದಿಂದ ಆತನನ್ನು ಕುರಿತು ★ ಮಹಾರಾಜ, ನಮ್ಮ ಒಡೆಯನಾದ ಜನಕರಾಜನು ನಿನ್ನ ಮತ್ತು ನಿನ್ನ ಪುರೋಹಿತ ವುರಜನರ ಕ್ಷೇಮವನ್ನೂ ವಿಚಾರಿಸಿ ವಿಶ್ವಾಮಿತ್ರ ಮುನೀಶ್ವರನ ಅಪ್ಪಣೆಯಿಂದ ನಿಮ್ಮನ್ನು ಕರೆದುಕೊಂಡು ಬರಹೇಳಿ ನಿನ್ನ ಸಮೀಪಕ್ಕೆ ನಮ್ಮನ್ನು ಕಳುಹಿಸಿದ್ದಾನೆ. ನಮ್ಮ ಜನಕಮಹಾರಾಜನ ಬಳಿಯಲ್ಲಿ ಒಂದು ಮಹಾಧನಸ್ಸು, ಇದ್ದುದು ಸರಿಯಷ್ಟೆ. ಯಾವ ವೀರನು ಆ ಧನುಸ್ಸಿಗೆ ಹೆದೆಯನ್ನು ಏರಿಸುವನೋ ಆತನಿಗೆ ತನ್ನ ಮಗಳಾದ ಸೀತಾದೇವಿ ಯನ್ನು ಮಾಡಿಕೊಡುವುದಾಗಿ ನಮ್ಮ ರಾಜನು ಪ್ರತಿಜ್ಞೆ ಮಾಡಿದ್ದನು ಆ ಸೀತಾದೇವಿಯನ್ನು ವಿವಾಹವಾಗಬೇಕೆಂದು ಅನೇಕ ದೇಶಗಳ ರಾಜರು ಬಂದು ಆ ಬಿಲ್ಲನ್ನು ಎತ್ತಲೂ ಆಗದೆ ಅವಮಾನದಿಂದ ತಲೆಬಾಗಿ ಹೋದರು.

**ಮುಂದುವರಿಯುವುದು...**

# ಸಕ್ಕರೆ ಕಾಯಿಲೆಯ ಹಿನ್ನೆಲೆ



☛ ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಇತ್ತೀಚೆಗೆ ಯಾರನ್ನು ಕೇಳಿದರೂ ಸಕ್ಕರೆ ಕಾಯಿಲೆ ಇದೆ ಎಂದೇ ಹೇಳುತ್ತಾ . ನಮ್ಮ ಕಾಲದಲ್ಲಿ ಹಿಂದೆ ಇಂಥ ಕಾಯಿಲೆಗಳೆಲ್ಲ ಎಲ್ಲಿದ್ದವು ಎಂದು ವಯೋವೃದ್ಧರು ಮಾತನಾಡಿಕೊಳ್ಳುತ್ತಿರುವುದನ್ನು ನಾವು ಸಾಕಷ್ಟು ಬಾರಿ ಕೇಳುತ್ತಿದ್ದೇವೆ. ಇದನ್ನು ನೋಡಿದರೆ ಬಹಳಷ್ಟು ಜನರಿಗೆ ಸಕ್ಕರೆ ಕಾಯಿಲೆ ಹೊಸದಾಗಿ ಹುಟ್ಟಿದ ಕಾಯಿಲೆ ಎನಿಸಿರುವುದರಲ್ಲಿ ವಿಶೇಷವೇನಿಲ್ಲ.

ಈಗ ಮಾನವನ ಸರಾಸರಿ ಜೀವಿತಾವಧಿ ಅಧಿಕಗೊಂಡಿದೆ. ಜನರು ಹೆಚ್ಚು ಕಾಲ ಬದುಕುತ್ತಿದ್ದಾರೆ.

ಈಗ ವೈಜ್ಞಾನಿಕ ವಿಧಾನಗಳಿಂದ ಕಾಯಿಲೆಗಳನ್ನು ಪತ್ತೆ ಹಚ್ಚಿ ತಿಳಿದುಕೊಳ್ಳುವುದು ಬಹಳ ಸುಲಭವಾಗಿದೆ. ಇದರೊಂದಿಗೆ ಸಕ್ಕರೆ ಕಾಯಿಲೆಯ ಹುಟ್ಟಿಗೆ ಪೂರಕವಾಗುವಂತೆ, ಮಾನವ ತಪ್ಪು ಆಹಾರವನ್ನೇ ಹೆಚ್ಚಾಗಿ ಸೇವಿಸುತ್ತಾ, ಆಲಸಿತನದಿಂದ ಬದುಕುವುದು ರೂಢಿಮಾಡಿಕೊಂಡಿದ್ದಾನೆ.




ಈ ಎಲ್ಲ ಕಾರಣಗಳಿಂದ ನಮ್ಮಲ್ಲಿ ಬಹಳ ಜನರಿಗೆ ಸಕ್ಕರೆ ಕಾಯಿಲೆ ಬರುತ್ತಿದೆ ಮತ್ತು ಬಂದಿರುವ ಕಾಯಿಲೆ ಬಯಲಿಗೆ ಬರುತ್ತಿದೆಯೇ ಹೊರತು ಸಕ್ಕರೆ ಕಾಯಿಲೆ ಹೊಸತಾಗಿ ಹುಟ್ಟಿಕೊಂಡಿರುವ ಕಾಯಿಲೆಯೇನಲ್ಲ. ಸಕ್ಕರೆ ಕಾಯಿಲೆ ಅತ್ಯಂತ ಪುರಾತನ ಕಾಯಿಲೆ. ಭಾರತ, ಈಜಿಪ್ಟ್, ಚೀನಾ ಹಾಗೂ ಗ್ರೀಸ್ ದೇಶದ ಪ್ರಾಚೀನ ಗ್ರಂಥಗಳಲ್ಲಿ ಈ ಕಾಯಿಲೆಯ ಕುರಿತು ಉಲ್ಲೇಖವಿದೆ.

ಸಾವಿರಾರು ವರ್ಷಗಳಷ್ಟು ಹಿಂದಿನ ಭಾರತೀಯ ಗ್ರಂಥಗಳಾದ ಅಷ್ಟಾಂಗ ಹೃದಯ, ಮಾಧವ ನಿದಾನಯೋಗ, ರತ್ನಾಕರ, ಭಾವಪ್ರಕಾಶ, ರಸಚಂದ್ರಿಕೆಗಳಲ್ಲಿ ಸಕ್ಕರೆ ಕಾಯಿಲೆಯ ಬಗ್ಗೆ ವಿವರಗಳಿವೆ. ಅಷ್ಟೇ ಏಕೆ ಅಥರ್ವಣ ವೇದದಲ್ಲಿಯೂ ಸಕ್ಕರೆ ಕಾಯಿಲೆಯ ಬಗ್ಗೆ ನಿದರ್ಶನಗಳಿವೆ.

ನಮ್ಮ ಆಯುರ್ವೇದದ ಮೂಲ ರೂವಾರಿಗಳು ಪುರಾತನ ಕಾಲದಿಂದಲೇ ಮೂತ್ರದ ದೋಷಗಳನ್ನೆಲ್ಲ ಮೇಹವೆಂದು ಕರೆದಿದ್ದಾರೆ. ಇವುಗಳಲ್ಲಿ ಮಧುಮೇಹವೂ ಸೇರಿದೆ. ಕ್ರಿಸ್ತಪೂರ್ವ. 600ರಲ್ಲಿ ರಚಿತವಾದ ಚರಕ ಸಂಹಿತೆಯಲ್ಲಿ ಚರಕ ಸಕ್ಕರೆ ಕಾಯಿಲೆಯ ಗುಣಲಕ್ಷಣಗಳನ್ನು ವಿವರಿಸಿದ್ದಾನೆ. ಸುಶ್ರುತ ಕ್ರಿ.ಪೂ.400ರಲ್ಲಿಯೇ ಮಧುಮೇಹದಲ್ಲಿ ಎರಡು ವಿಧಗಳಿರುವುದನ್ನು (ಬಾಲ್ಯದ ಮಧುಮೇಹ, ವಯಸ್ಕರ ಮಧುಮೇಹ) ತಿಳಿಸಿದ್ದಾನೆ. ಚಿಕಿತ್ಸೆಯ ಬಗ್ಗೆಯೂ ಬರೆದಿದ್ದಾನೆ. ಚಿಕಿತ್ಸೆಯಲ್ಲಿ ಆಹಾರ ಪಥ್ಯ ಮತ್ತು ವ್ಯಾಯಾಮದ ಪ್ರಾಮುಖ್ಯತೆಯನ್ನು ಮನಮುಟ್ಟುವಂತೆ ವಿವರಿಸಿದ್ದಾನೆ. ದೇವನೊಬ್ಬ ನಾಮ ಹಲವು ಎನ್ನುವಂತೆ ಸಕ್ಕರೆ ಕಾಯಿಲೆಯನ್ನು ಹಲವಾರು ಹೆಸರುಗಳಿಂದ ಕರೆಯುತ್ತಾರೆ. ಕ್ರಿ.ಶ.2ನೇ ಶತಮಾನದಲ್ಲಿ ಗ್ರೀಕರು ಮೊದಲಿಗೆ ಸಕ್ಕರೆ ಕಾಯಿಲೆಗೆ ಡಯಾಬಿಟಿಸ್ ಎಂದು ಹೆಸರಿಟ್ಟರು. ಅವರ ಭಾಷೆಯಲ್ಲಿ ಡಯಾಬಿಟಿಸ್ ಎಂದರೆ 'ನಲ್ಲಿಯಲ್ಲಿರುವ ನೀರು ಸೋರಿಹೋಗು' ಎಂದು ಅರ್ಥವಂತೆ. ಗ್ರೀಕರು ಸಕ್ಕರೆ ಕಾಯಿಲೆಯಿಂದ ದೇಹವೆಲ್ಲಾ ಕರಗಿ ಮೂತ್ರವಾಗಿ ಹರಿದು ಹೋಗುತ್ತದೆ ಎಂದೇ ತಿಳಿದುಕೊಂಡಿದ್ದರಂತೆ. ಮೂತ್ರ ಹೆಚ್ಚಾಗಿ ಹೋಗುವುದಲ್ಲದೆ, ಮೂತ್ರ ಸಿಹಿಯಾಗಿಯೂ ಇರುವುದರಿಂದ ಡಯಾಬಿಟಿಸ್ ಪದಕ್ಕೆ ಮೆಲಿಟಸ್ (ಸಿಹಿ) ಎಂಬ ಪದವನ್ನು ತಳಕು ಹಾಕಿ 'ಡಯಾಬಿಟಿಸ್ ಮೆಲಿಟಸ್' ಎಂದು ನಾಮಕರಣ ಮಾಡಿದ್ದಾರೆ. ಇದರ ಕನ್ನಡ ರೂಪವೇ ಮಧುಮೇಹ. ನಿರ್ನಾಳ ಗ್ರಂಥಿಯ ದೋಷವಿದ್ದಾಗ ಹೆಚ್ಚು ಮೂತ್ರ ವಿಸರ್ಜಿತವಾಗುತ್ತದೆಯಾದರೂ, ಸಕ್ಕರೆ ಕಾಯಿಲೆಯಂತೆ ಮೂತ್ರದಲ್ಲಿ ಸಿಹಿ ಅಂಶ (ಗ್ಲೂಕೋಸ್) ಇರುವುದಿಲ್ಲ. ಇಂತಹ ತೊಂದರೆಯನ್ನು ಆಯುರ್ವೇದತಜ್ಞರು ಉದಕ ಮೇಹ ಎಂದಿದ್ದಾರೆ. ಗ್ರೀಕರು ಡಯಾಬಿಟಿಸ್ ಇನ್ಸೆಪಿಡಿಸ್ ಎಂದಿದ್ದಾರೆ.

# ಇಂದಿನ ಪೀಳಿಗೆಗೆ ತಾಳ್ಮೆಯ ಶಿಕ್ಷಣದ ಅಗತ್ಯವಿದೆ

☛ ಮಾನಸಪ್ರವೀಣ್ ಭಟ್



• ಉದಯವಾಹಿನಿ, ವಿಶೇಷ

ಜಗತ್ತು ಅದೆಷ್ಟು ಮುಂದುವರೆದಿದೆ. ಮಾನವ ಅದೆಷ್ಟು ಅನ್ವೇಷಣೆಗಳನ್ನು ಯಶಸ್ವಿಗೊಳಿಸಿದ್ದಾನೆ. ಚಂದ್ರನ ವರೆಗೂ ಕಾಲಿರಿಸಿದ್ದಾನೆ. ಆದರೆ ಅದೆಷ್ಟೇ ಮುಂದುವರೆದರು ತನ್ನನ್ನು ತಾನು ನಿಯಂತ್ರಿಸಲು ಸಾಧ್ಯವಾಗುತ್ತಿಲ್ಲ ಎಂಬುದು ವಿಪರ್ಯಾಸ.


ವಿವಿಧ ಎಲೆಕ್ಟ್ರಾನಿಕ್ ಯಂತ್ರಗಳನ್ನು ತನ್ನ ಹಿಡಿತ ದಿಂದ ನಿಯಂತ್ರಿಸುವನು, ಪ್ರಾಣಿ ಪಕ್ಷಿ ಗಳನ್ನು ತನ್ನಂತೆ ಕುಣಿಸುವನು ಆದರೆ ತನ್ನ ಪಂಚೇಂದ್ರೀಯ ಗಳನ್ನು ನಿಯಂತ್ರಿಸಲು ಆಗುತ್ತಿಲ್ಲ. ಹೌದು ತನ್ನನ್ನು ತಾನು ನಿಯಂತ್ರಿಸುವಲ್ಲಿ ಮಾನವ ವಿಫಲನಾಗಿದ್ದಾನೆ.

ಏಕೆಂದರೆ ಇಂದು ಮನುಷ್ಯ ತನ್ನೊಳಗಿನ ಅಹಂ ಮತ್ತು ಅವಸರಕ್ಕೆ ತನ್ನನ್ನು ತಾನೇ ಬಲಿಕೊಟ್ಟಿದ್ದಾನೆ. ಅದೆಷ್ಟು ಕೋಪ ಮನುಷ್ಯನಿಗೆ ಅದೆಷ್ಟು ಹಗೆ ಒಂದು ಸಲಕ್ಕೆ ಮೂಕ ಕ್ರೂರ ಪ್ರಾಣಿಗಳಾದರು ತಮ್ಮ ಕೋಪ ಹಗೆ ತೊರೆದು ಬಿಡುತ್ತವೆ ಆದರೆ ಮಾನವ ತನ್ನ ಕೋಪ ಹಗೆ ಇನ್ನಷ್ಟು ಹೆಚ್ಚಿಸಿಕೊಳ್ಳುತ್ತಾನೆ ವಿನಃ ತ್ಯಾಗ ಮಾಡುವಷ್ಟು ಉದಾರಿಯಾಗುವುದಿಲ್ಲ. ಇದರ ಪರಿಣಾಮವನ್ನು ನಾವು ನಮ್ಮ ಮುಂದಿನ ಯುವ ಪೀಳಿಗೆಯ ಮಕ್ಕಳಲ್ಲಿ ಕಾಣುತ್ತಿದ್ದೇವೆ. ಹೌದು ಸ್ನೇಹಿತರೆ ಇಂದಿನ ಮಕ್ಕಳಲ್ಲಿ ನಾವು ವಿಪರೀತ ಕೋಪವನ್ನು ಕಾಣಬಹುದು. ಉದಾಹರಣೆ ನಾವು ಏನಾದರು ಹೇಳಿದರೆ ಅಥವಾ ಅವರ ತಪ್ಪು ಇಲ್ಲದ ಯಾವುದೇ ಕೆಲಸಕ್ಕೆ ನಿಮ್ಮ ತಪ್ಪು ಇದೆ ಎಂದು ಸುಮ್ಮನೆ ಹೇಳಿದರೆ ಸಾಕು. ಅವರು ಒಮ್ಮೆಲೇ ಕೋಪವನ್ನು ವ್ಯಕ್ತ ಪಡಿಸುತ್ತಾರೆ.


☛ ಉದಯವಾಹಿನಿ ಚಿತ್ರ

ಏರು ಧ್ವನಿಯಲ್ಲಿ ಮಾತಾಡುತ್ತಾರೆ. ಯಾವುದಕ್ಕೂ ಕಾಯುವ ತಾಳ್ಮೆ ಕೂಡ ಇಲ್ಲ ಇತ್ತೀಚಿನ ದಿನದಲ್ಲಿ ಕೆಲವು ಮಕ್ಕಳು ತಮ್ಮ ತಂದೆ ತಾಯಿಗೆ ಅಗೌರವ ಕೊಡುವುದರ ಜೊತೆಗೆ ಶಿಕ್ಷಕರಿಗೂ ಕಿಂಚಿತ್ತೂ ಮರ್ಯಾದೆ ಕೊಡುತ್ತಿಲ್ಲ ಎನ್ನುವುದು ಬೇಸರದ ಸಂಗತಿ ಜೊತೆಗೆ ಇದೆಲ್ಲದಕ್ಕೂ ನಾವೇ ಕಾರಣ ಎನ್ನುವುದು ದುಃಖಕರ ವಿಷಯ ಇದೆಲ್ಲ ಅರಿತು ಇನ್ನಾದರೂ ನಾವು ಮಕ್ಕಳಿಗೆ ಕೊಂಚ ತಾಳ್ಮೆಯ ಶಿಕ್ಷಣ ಕಲಿಸುವ.

## ದಿನಕ್ಕೊಂದು ಮುಕ್ತಕ -66



ಸಾಮಾಜಿಕ ಕಳಕಳಿ

ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ
ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

ಹೊಸವರುಷ ನಮಗದುವೆ ಯುಗಾದಿಯ ಹಬ್ಬದಲಿ
ನಸುಕಿನಲೆ ಸಾಗದಿರು ಬೆಳಕಿಹುದಲಿ
ಪಿಸುಗುಡುತ ಕೆಲಸವನು ಮಾಡುತಲಿ ಸಾಧಿಸುತ
ಕಸವೆಲ್ಲ ತೊಳೆಯುತಲಿ ಲಕ್ಷ್ಮಿದೇವಿ.......



ಹೊಸ ವರುಷ ಎಂಬುದು ಕಾಲಘಟ್ಟ ಮುಂದೆ ಹೋಗುತ್ತಿರುವುದನ್ನು ತಿಳಿಸುತ್ತದೆ. ಪ್ರತಿಯೊಬ್ಬರ ಜವಾಬ್ದಾರಿಗಳನ್ನು ಹೆಚ್ಚಿಸುತ್ತಾ ಬದುಕಿನ ಮುಂದಿನದ ವಿಚಾರಗಳ ಲೆಕ್ಕಾಚಾರವಾಗಿದೆ. ನಮಗೆ ಹೊಸ ವರ್ಷವೆಂದರೆ ಯುಗಾದಿ ಹಬ್ಬ. ಜನವರಿ ಒಂದು ಎಂಬುದು ಕ್ಯಾಲೆಂಡರ್ ಬದಲಾವಣೆಯ ವಿಚಾರವಾಗಿದೆ. ನಮ್ಮ ಹೊಸ ವರ್ಷವೂ ಯುಗಾದಿಯಾಗಿದ್ದು. ಅಲ್ಲಿ ನಾವು ನಸುಕಿನಲ್ಲಿರುವಂತೆ ಇರಲಾರದೆ ಬೆಳಕಿನೆಡೆಗೆ ಸಾಗಬೇಕು. ಯಾವ ಯಾವ ಕೆಲಸಗಳನ್ನು ಬಿಟ್ಟಿದ್ದೇವೆ ಎಂಬುದನ್ನು ನಮಗೆ ನಾವೇ ಪಿಸುಗುಡುತ ಲೆಕ್ಕಾಚಾರವನ್ನು ಮಾಡುತ್ತಾ ಕೆಲಸವನ್ನು ಮಾಡಿ ಸಾಧನೆಯಲ್ಲಿ ತೋರಿಸಬೇಕು. ಕ್ಯಾಲೆಂಡರ್ ಬದಲಾವಣೆ ಮಾಡುತ್ತಾ ಯುಗಾದಿ ಹಬ್ಬದ ಹೊಸ ವರ್ಷಕ್ಕಾಗಿ ಹಿಂದೂಗಳೆಲ್ಲಾ ಕಾಯೋಣ ಹೊಸ ವರ್ಷವನ್ನು ಸಂಭ್ರಮದಲ್ಲಿ ಆಚರಿಸೋಣ.

# ಬಿಸಿ ನೀರಿನ ಸೇವನೆಯಿಂದ ತೂಕ ಇಳಿಕೆಯಾಗುತ್ತಾ ಪೌಷ್ಟಿಕ ತಜ್ಞೆ ಹೇಳುವುದೇನು

• ಉದಯವಾಹಿನಿ,ಬೆಂಗಳೂರು

ಬಿಸಿ ನೀರಿನ ಸೇವನೆಯಿಂದ ದೇಹದ ತೂಕ ಇಳಿಕೆಯಾಗುತ್ತೆ ಎಂದು ಹಲವರು ನಂಬಿರುತ್ತಾರೆ.
ದೇಹದ ತೂಕ ಇಳಿಕೆ ನಿರ್ಧಾರವಾಗುವುದು ನಾವು ಸೇವಿಸುವ ಆಹಾರದಿಂದ ಹಾಗೂ ನಮ್ಮ ದೈಹಿಕ ಚಟುವಟಿಕೆಗಳಿಂದ. ಒಮ್ಮೆ ಏರಿಕೆಯಾದ ದೇಹದ ತೂಕವನ್ನು ಕಡಿಮೆ ಮಾಡಿಕೊಳ್ಳಲು ಸರಿಯಾದ ಆಹಾರ ಮತ್ತು ವ್ಯಾಯಾಮ.ನಾವು ಸೇವಿಸುವ ನೀರು ಕೂಡ ದೇಹದ ತೂಕ ಇಳಿಕೆಗೆ ಕಾರಣವಾಗುತ್ತದೆ. ಹೀಗಿದ್ದಾಗ ಸಣ್ಣ ವಿಚಾರಗಳನ್ನು ಕಡೆಗಣಿಸುವಂತಿಲ್ಲ. ಕೆಲವರು ಬಿಸಿ ನೀರಿನ ಸೇವನೆಯಿಂದ ದೇಹ ತೂಕ ಇಳಿಕೆಯಾಗುತ್ತದೆ ಎನ್ನುತ್ತಾರೆ. ಅದು ನಿಜವೇ ಎನ್ನುವ ಪ್ರಶ್ನೆ ಮೂಡುತ್ತದೆ.

**ನಿರ್ಜಲೀಕರಣವಾಗದಂತೆ ನೋಡಿಕೊಳ್ಳಿ:** ದಿನವಿಡೀ ಸಾಕಷ್ಟು ದ್ರವವನ್ನು ಕುಡಿಯುವುದು ಕಳೆದುಹೋದ ಶಕ್ತಿಯನ್ನು ತುಂಬಲು ಸಹಾಯ ಮಾಡುತ್ತದೆ ಮತ್ತು ನಿರ್ವಿಶೀಕರಣ ಪ್ರಕ್ರಿಯೆಯನ್ನು ವೇಗಗೊಳಿಸುತ್ತದೆ. ಇದಲ್ಲದೆ, ಸರಿಯಾದ ನೀರಿನ ಸೇವನೆ ಉರಿಯೂತದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ - ಈ ಎಲ್ಲಾ ಅಂಶಗಳು ನಮ್ಮ ತೂಕ ನಷ್ಟ ಪ್ರಯಾಣದಲ್ಲಿ ಪ್ರಮುಖ ಪಾತ್ರವಹಿಸುತ್ತವೆ.

**ಹಣ್ಣುಗಳ ಸೇವನೆ:** ಬೇರೆ ಎಲ್ಲಾ ಆಹಾರಗಳಲ್ಲಿ ಸಿಗದಿರುವ ಪೋಷಕಾಂಶಗಳನ್ನು ಹಣ್ಣುಗಳಿಂದ ಪಡೆಯ ಬಹುದಾಗಿದೆ. ಅಲ್ಲದೆ ಹಣ್ಣುಗಳಲ್ಲಿ ಉತ್ತಮ ಪ್ರಮಾಣ ಫೈಬರ್, ನೀರಿನಾಂಶವಿರುವುದರಿಂದ ಆರೋಗ್ಯಕ್ಕೆ ಒಳ್ಳೆಯದು. ಅಲ್ಲದೆ ಪದೇ ಪದೇ ಸಿಹಿ ತಿನ್ನುವ ಕಡುಬಯಕೆಗಳನ್ನು ಹಣ್ಣುಗಳು ತಪ್ಪಿಸುತ್ತವೆ. ಇದರಿಂದಾಗಿ ಅತಿಯಾದ ತೂಕ ನಷ್ಟಕ್ಕೆ ಸಹಾಯ ಮಾಡುತ್ತವೆ.

**ಕೊನೆಯ ಮಾತು:** ಬಿಸಿ ನೀರಾಗಲಿ, ತಣ್ಣನೆಯ ನೀರಾಗಲಿ ನೇರವಾಗಿ ದೇಹದ ತೂಕ ಇಳಿಕೆಗೆ ಸಹಾಯ ವಾಗದಿದ್ದರೂ ಜೀರ್ಣಕ್ರಿಯೆಯನ್ನು ಸರಿಯಾಗಿಟ್ಟು, ಮೂತ್ರಪಿಂಡಗಳ ಕಾರ್ಯಚಟುವಟಿಕೆಯನ್ನು ಸುಸ್ಥಿರ ವಾಗಿಡಲು ಸಹಾಯ ಮಾಡುತ್ತದೆ.

ಹೀಗಾಗಿ ನೀರು ಕೂಡ ತೂಕ ಇಳಿಕೆಯ ಜರ್ನಿಯಲ್ಲಿ ಅತೀ ಅಗತ್ಯ ಎನ್ನಬಹುದು. ಅದರ ಜೊತೆಗೆ ಇತರ ಆಹಾರ, ವ್ಯಾಯಾಮ ಕೂಡ ಅಷ್ಟೇ ಪ್ರಮುಖವಾಗಿರುತ್ತದೆ. ಒಟ್ಟಿನಲ್ಲಿ ಪೌಷ್ಟಿಕಾಂಶದ ಕೊರತೆಯಾಗದಂತೆ ನೋಡಿಕೊಂಡು ತೂಕ ಇಳಿಸಿಕೊಳ್ಳುವುದರಿಂದ ಆರೋಗ್ಯವೂ ಉತ್ತಮವಾಗಿರುತ್ತದೆ.


☛ ಉದಯವಾಹಿನಿ ಚಿತ್ರ

> **ಬಿಸಿನೀರಿನಿಂದ ತೂಕ ಇಳಿಕೆ**
>
> **ಪೌಷ್ಟಿಕತಜ್ಞೆ ಅಂಜಲಿ ಮುಖರ್ಜಿ ಅವರ ಪ್ರಕಾರ, ಊಟದ ನಂತರ ಬಿಸಿನೀರು ಕುಡಿಯುವುದು ನಿಜವಲ್ಲ ಆದರೆ, ಇದು ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ. ಊಟದ ನಂತರ ಬಿಸಿನೀರು ಕುಡಿಯುವುದು ನಿರ್ವಿಷಗೊಳಿಸಲು ಸಹಾಯ ಮಾಡುತ್ತದೆ. ಆದ್ದರಿಂದ, ನೀವು ಇದನ್ನು ಪ್ರಯತ್ನಿಸಬಹುದು ಆದರೆ ಬಿಸಿನೀರು ನಿಮ್ಮ ತೂಕವನ್ನು ಇಳಿಸಿಕೊಳ್ಳಲು ನೇರವಾಗಿ ಸಹಾಯ ಮಾಡುವುದಿಲ್ಲ. ಬೆಳಗ್ಗಿನ ತಿಂಡಿಯನ್ನು ಬಿಡದಿರಿ: ಬೆಳಗಿನ ಉಪಾಹಾರತೂಕ ಇಳಿಕೆಗೆ ಅತೀ ಅಗತ್ಯವಾಗಿರುತ್ತದೆ. ಇದು ದೇಹಕ್ಕೆ ಶಕ್ತಿಯನ್ನು ನೀಡುತ್ತದೆ. ಅಲ್ಲದೆ ದೀರ್ಘಕಾಲದವರೆಗೆ ಹೊಟ್ಟೆ ತುಂಬಿರುವಂತೆ ಮಾಡುತ್ತದೆ. ಈ ಕ್ರಿಯೆಯು ತೂಕ ನಷ್ಟವನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ.**

# ದೇಹದ ಈ ಭಾಗದಲ್ಲಿ ಕಾಣಿಸಿಕೊಳ್ಳುವ ನೋವು ಹೃದಯಾಘಾತದ ಲಕ್ಷಣವಾಗಿರಬಹುದು ಎಚ್ಚರ!

• ಉದಯವಾಹಿನಿ,ಬೆಂಗಳೂರು

ಹೃದಯಾಘಾತವು ಸೈಲೆಂಟ್ ಕಿಲ್ಲರ್ ಆಗುತ್ತಿದೆ.. ವಯಸ್ಸು ಚಿಕ್ಕದೆಂಬ ಭೇದವಿಲ್ಲದೆ ಅನೇಕರು ಹೃದಯಾಘಾತದಿಂದ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ ನಿಜವಾಗಿ ಹೃದಯಾಘಾತವು ಮಾರಣಾಂತಿಕವಾಗಿದೆ.
ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ, ವಿಶ್ವಾದ್ಯಂತ ಪ್ರತಿ ವರ್ಷ 179 ಮಿಲಿಯನ್ ಜನರು ಹೃದಯರಕ್ತನಾಳದ ಕಾಯಿಲೆಗಳಿಂದ ಸಾಯುತ್ತಾರೆ.

ಪ್ರತಿ ಐದರಲ್ಲಿ 4 ಸಾವುಗಳು ಹೃದಯಾಘಾತದಿಂದ ಸಂಭವಿಸುತ್ತವೆ ಎಂದು ಅಧ್ಯಯನಗಳು ತೋರಿಸುತ್ತವೆ, ಹೃದಯದ ರಕ್ತನಾಳಗಳಲ್ಲಿ ರಕ್ತ ಪರಿಚಲನೆ ತಡೆಯುವುದರಿಂದ ಹೃದಯಾಘಾತವಾಗುವ ಸಾಧ್ಯತೆಯಿದೆ, ರಕ್ತನಾಳಗಳ ಅಡಚಣೆ, ಅಸಮರ್ಥತೆ, ಹೃದಯಕ್ಕೆ ಸರಿಯಾಗಿ ರಕ್ತ ಪೂರೈಕೆ, ಇತ್ಯಾದಿ. ಹೃದಯಾಘಾತವು ಇದ್ದಕ್ಕಿದ್ದಂತೆ ಮತ್ತು ತುರ್ತಾಗಿ ಸಂಭವಿಸುತ್ತದೆ.. ಆದರೆ ಹೃದಯಾಘಾತವು ನಿಜವಾಗಿ ಸಂಭವಿಸುವ ಮೊದಲು, ದೇಹವು ಕೆಲವು ಸಂಕೇತಗಳನ್ನು ನೀಡುತ್ತದೆ ಅವುಗಳನ್ನು ಸಮಯೋಚಿತವಾಗಿ ಪತ್ತೆಹಚ್ಚುವ ಮೂಲಕ, ನೀವು ನಿಮ್ಮ ಜೀವವನ್ನು ಉಳಿಸಬಹುದು.

ಯಾವುದೇ ಸ್ಪಷ್ಟ ಕಾರಣವಿಲ್ಲದೆ ನೀವು ಯಾವುದೇ ಭಾಗದಲ್ಲಿ ನೋವು ಅಥವಾ ಅಸ್ವಸ್ಥತೆಯನ್ನು ಅನುಭವಿಸಿದರೆ, ಅದು ಹೃದಯಾಘಾತದ ಸಂಕೇತವಾಗಿರಬಹುದು ಎಂಬುದನ್ನು ನೆನಪಿಡಿ. ಆದರೆ.. ಈ ಸ್ಥಳಗಳಲ್ಲಿ ನೋವು ಕಾಣಿಸಿಕೊಂಡರೆ.. ತಡೆಗಟ್ಟುವ ಔಷಧಿಗಳ ಮೂಲಕ ಅದನ್ನು ನಿಗ್ರಹಿಸುವುದು ಮಾರಕವಾಗಬಹುದು ಎಂದು ವೈದ್ಯಕೀಯ ತಜ್ಞರು ಹೇಳುತ್ತಾರೆ. ಹೃದಯಾಘಾತಕ್ಕೆ ಮುಂಚಿನ ದೇಹದ ಐದು ಭಾಗಗಳ ನೋವಿನ ಬಗ್ಗೆ ಈಗ ತಿಳಿಯಿರಿ. ಎದೆ ನೋವು ಅಥವಾ ಒತ್ತಡ ಹೃದಯಾಘಾತದ ಸಾಮಾನ್ಯ ಲಕ್ಷಣವೆಂದರೆ ಎದೆಯಲ್ಲಿ ನೋವು ಅಥವಾ ಒತ್ತಡ.

ಈ ನೋವು ಇದ್ದಕ್ಕಿದ್ದಂತೆ ಪ್ರಾರಂಭ ವಾಗಬಹುದು, ನಿರಂತರವಾಗಿ ಮುಂದುವರಿಯಬಹುದು. ಈ ಒತ್ತಡವು ಎದೆಯ ಮೇಲೆ ಭಾರವಾದಂತೆ ಭಾಸವಾಗುತ್ತದೆ. ಕೆಲವರಲ್ಲಿ ಈ ನೋವು ಈ ತೀವ್ರವಾಗಿರುತ್ತದೆ.. ಇನ್ನು ಕೆಲವರಲ್ಲಿ ಇದು ಸೌಮ್ಯವಾದ ಒತ್ತಡ.. ಆದರೆ, ಇದನ್ನು ಎಂದಿಗೂ ನಿರ್ಲಕ್ಷಿಸಬಾರದು. ಭುಜ, ಕುತ್ತಿಗೆ ಅಥವಾ ಬೆನ್ನು ನೋವು ಭುಜ, ಕುತ್ತಿಗೆ ಅಥವಾ ಬೆನ್ನಿನ ನೋವು ಕೂಡ ಹೃದಯಾಘಾತದ ಸಂಕೇತವಾಗಿರಬಹುದು. ಅದರಲ್ಲೂ ಈ ನೋವು ಎದೆನೋವಿನ ಜೊತೆಗಿದ್ದರೆ ಅದನ್ನು ಗಂಭೀರವಾಗಿ ಪರಿಗಣಿಸಬೇಕು. ಈ ನೋವು ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಹರಡುತ್ತದೆ.. ಕೆಲವೊಮ್ಮೆ ಇದು ಒಂದು ಕಡ ಅಥವಾ ಎರಡೂ ಕಡೆಗಳಲ್ಲಿ ಅನುಭವಿಸಬಹುದು. ಎಡಗೈ ನೋವು ವಿಶೇಷವಾಗಿ ಎಡಗೈಯಲ್ಲಿ ನೋವು ಹೃದಯಾಘಾತದ ಸಾಮಾನ್ಯ ಲಕ್ಷಣವಾಗಿದೆ. ಈ ನೋವು ಇದ್ದಕ್ಕಿದ್ದಂತೆ ಪ್ರಾರಂಭವಾಗುತ್ತದೆ ಮತ್ತು ತೀವ್ರವಾಗಿರುತ್ತದೆ. ಕೆಲವೊಮ್ಮೆ ಈ ನೋವು ಸೌಮ್ಯ ಅಥವಾ ಕಿರಿಕಿರಿಯುಂಟುಮಾಡುತ್ತದೆ..

ಆದರೆ ಇದು ದೀರ್ಘಕಾಲದವರೆಗೆ ಮುಂದುವರಿದರೆ ಅದನ್ನು ನಿರ್ಲಕ್ಷಿಸಬೇಡಿ. ದವಡೆ ಅಥವಾ ಹಲ್ಲುಗಳಲ್ಲಿ ನೋವು ಹೃದಯಾಘಾತದ ಲಕ್ಷಣಗಳು ದವಡೆ ಅಥವಾ ಹಲ್ಲುಗಳಲ್ಲಿನ ನೋವನ್ನು ಸಹ ಒಳಗೊಂಡಿರಬಹುದು. ಈ ನೋವು ದವಡೆಯಲ್ಲಿ ಮಾತ್ರವಲ್ಲದೆ ಕೆನ್ನೆ ಮೇಲಿನ ಭಾಗಕ್ಕೂ ಹರಡುತ್ತದೆ. ಕೆಲವೊಮ್ಮೆ ಒಂದು ಕಡೆ ಮಾತ್ರ ತೀವ್ರವಾಗಿರುತ್ತದೆ. ಅದನ್ನು ನಿರ್ಲಕ್ಷಿಸಬೇಡಿ. ಉಸಿರಾಟದ ತೊಂದರೆ - ಆಯಾಸ. ಉಸಿರಾಟದ ತೊಂದರೆ ಮತ್ತು ತೀವ್ರ ಆಯಾಸ ಕೂಡ ಹೃದಯಾಘಾತದ ಲಕ್ಷಣಗಳಾಗಿವೆ. ಅನೇಕ ಜನರು ಈ ರೋಗಲಕ್ಷಣಗಳನ್ನು ಸಾಮಾನ್ಯ ಆಯಾಸ ಎಂದು ತಪ್ಪಾಗಿ ಭಾವಿಸುತ್ತಾರೆ. ಆದರೆ ಈ ರೋಗಲಕ್ಷಣಗಳು ದೀರ್ಘಕಾಲದವರೆಗೆ ಮುಂದುವರಿದರೆ ಅದು ಅಪಾಯದ ಸಂಕೇತವಾಗಿದೆ.


☛ ಉದಯವಾಹಿನಿ ಚಿತ್ರ

# ಕರ್ನಾಟಕ ರಾಜ್ಯ ದ್ವಿತೀಯ ಮಂದಿರ ಅಧಿವೇಶನದ ಪ್ರಾರಂಭ

• ಉದಯವಾಹಿನಿ,ಬೆಂಗಳೂರು

ಬಹುತ್ ಸಹ ಲಿಯಾ ಅಬ್ ನಹೀ ಹಿಂದೂ ಹಕ್ ಲೇಕರ್ ರಹೆಂಗೇ ಸಮಿತಿ ಮಝುಬೂರಿ ಸನಾತನ ಬೋರ್ಡ್ ಜರೂರಿ ಹೇ ! ಈ ಘೋಷಣೆಯೊಂದಿಗೆ ಪೂ. ದೇವಕಿನಂದನ ಠಾಕೂರ ಇವರು ಉಪಸ್ಥಿತ ಹಿಂದುಗಳನ್ನು ಜಾಗೃತಗೊಳಿಸಿದರು. ಸನಾತನ ಎಂದಿಗೂ ಸ್ವತಂತ್ರವಾಗಿರಬೇಕೆಂದು ಕರ್ನಾಟಕದಲ್ಲಿ ಸನಾತನ ಬೋರ್ಡ್ ಸ್ಥಾಪನೆ ಆಗಲು ಕರ್ನಾಟಕ ಸರ್ಕಾರಕ್ಕೆ ಆಗ್ರಹಿಸಲಾಯಿತು. ಸಂಸ್ಕೃತಿ ರಕ್ಷಣೆಯಾಗಬೇಕಾದರೆ ದೇವಸ್ಥಾನಗಾಳ ರಕ್ಷಣೆ ಆಗಬೇಕು ಮತ್ತು ಇದು ಹಿಂದೂಗಳು ಒಂದಾದರೆ ಮಾತ್ರ ಸಾಧ್ಯ ಎಂದು ಉಪಸ್ಥಿತ ಹಿಂದೂ ಬಾಂಧವರಿಗೆ ದೇವಸ್ಥಾನ ರಕ್ಷಣೆಗಾಗಿ ಹೋರಾಡಲು ಕರೆ ನೀಡಿದರು.

ದೇವಸ್ಥಾನಗಳ ಸಂಸ್ಕೃತಿಯ ರಕ್ಷಣೆಗಾಗಿ ಕರ್ನಾಟಕ ಮಂದಿರ ಮಹಾಸಂಘ ಮತ್ತು ಹಿಂದೂ ಜನಜಾಗೃತಿ ಸಮಿತಿಯ ಆಯೋಜನೆಯಲ್ಲಿ 'ಕರ್ನಾಟಕ ರಾಜ್ಯ ದ್ವಿತೀಯ ಮಂದಿರ ಅಧಿವೇಶನ' ವು ಗಂಗಮ್ಮ ತಿಮ್ಮಯ್ಯ ಕನ್ವೆಂಷನ್ ಹಾಲ್, ಬಸವೇಶ್ವರ ನಗರ, ಬೆಂಗಳೂರಿನಲ್ಲಿ ಶಂಖನಾದದೊಂದಿಗೆ ಪ್ರಾರಂಭಿಸಲಾಯಿತು. ಪೂ. ದೇವಕಿನಂದನ ಠಾಕೂರ, ಸಂಸ್ಥಾಪಕರು, ವಿಶ್ವಶಾಂತಿ ಸೇವಾ ಟ್ರಸ್ಟ್ ಮತ್ತು ಪೂ. ರಮಾನಂದ ಗೌಡ, ಧರ್ಮಪ್ರಚಾರಕರು, ಸನಾತನ ಸಂಸ್ಥೆ, ನ್ಯಾಯವಾದಿ ಪ್ರಮಿಳಾ ನೇಸರ್ಗಿ, ಹಿರಿಯ ವಕೀಲರು, ಕರ್ನಾಟಕ ಉಚ್ಚ ನ್ಯಾಯಾಲಯ, ಶ್ರೀ. ನಂದಕುಮಾರ್ ಐಎಎಸ್, ನಿವೃತ್ತ ಆಯುಕ್ತರು, ಮುಜರಾಯಿ ಇಲಾಖೆ, ಕರ್ನಾಟಕ ಸರಕಾರ, ಪದ್ಮಶ್ರೀ ಶ್ರೀ. ಆರ್. ವಿ. ಗೌರಿಶಂಕರ್, ನಿಕಟಪೂರ್ವ ಆಡಳಿತಾಧಿಕಾರಿಗಳು, ಶೃಂಗೇರಿ ಮಹಾಸಂಸ್ಥಾನ, ಗೋವಿಂದ ಬಾಬು ಪೂಜಾರಿ, ವ್ಯವಸ್ಥಾಪಕೀಯ ನಿರ್ದೇಶಕರು, ವರಲಕ್ಷ್ಮೀ ಚಾರಿಟೆಬಲ್ ಟ್ರಸ್ಟ್, ಶ್ರೀ. ಸುನಿಲ್ ಘನವಟ, ರಾಷ್ಟ್ರೀಯ ಸಂಘಟಕರು, ಮಂದಿರ ಮಹಾಸಂಘ ಇವರು ದೀಪಪ್ರಜ್ವಲನೆಯನ್ನು ಮಾಡುವುದರ ಮೂಲಕ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಿದರು. ಈ ಅಧಿವೇಶನದಲ್ಲಿ ರಾಜ್ಯದಾದ್ಯಂತದ ದೇವಸ್ಥಾನ ವಿಶ್ವಸ್ಥರು, ಪ್ರತಿನಿಧಿಗಳು, ಪುರೋಹಿತರು, ದೇವಸ್ಥಾನದ ರಕ್ಷಣೆಗಾಗಿ ಹೋರಾಡುವ ನ್ಯಾಯವಾದಿಗಳು ಮುಂತಾದವರಿಂದ ಸಭಾಂಗಣವು ತುಂಬಿ ಸಜ್ಜುಗೊಂಡಿತು. ರೋಗಿಗಳ ಸೇವೆ - ಶುಶ್ರೂಷೆಯನ್ನು 'ಸಾಧನೆ' ಎಂದು ಹೇಗೆ ಮಾಡಬೇಕು - ಸನಾತನ ಸಂಸ್ಥೆ ನಿರ್ಮಿತ ಕಿರು ಗ್ರಂಥವನ್ನು ಬಿಡುಗಡೆ ಮಾಡಲಾಯಿತು


☛ ಉದಯವಾಹಿನಿ ಚಿತ್ರ

**ರೋಗಿಗಳ ಸೇವೆ - ಶುಶ್ರೂಷೆಯನ್ನು 'ಸಾಧನೆ'**

> **ಭಾರತಾದ್ಯಂತ ಮಂದಿರ ಮಹಾಸಂಘದ ಕಾರ್ಯಕ್ಕೆ ಹಿಂದೂಗಳ ಅತ್ಯುತ್ತಮ ಬೆಂಬಲದಿಂದ ಸಿಕ್ಕಿದ ಯಶಸನ್ನು ಹೇಳಿದರು. ಕರ್ನಾಟಕ ರಾಜ್ಯದ ದೇವಸ್ಥಾನಗಳ ಅಭಿವೃದ್ಧಿಗಾಗಿ ಹಿಂದೂಗಳು ತಮ್ಮ ಕೈ ಜೋಡಿಸಬೇಕೆಂದು ಕರ್ನಾಟಕ ಮಂದಿರ ಮಹಾಸಂಘದ ಸಂಯೋಜಕರಾದ ಶ್ರೀ ಮೋಹನ್ ಗೌಡ ಇವರು ಕರೆ ನೀಡಿದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ . ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ. ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ.

**ವೃಷಭ** ಇಂದು ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು.

**ಮಿಥುನ** ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು.

**ಕರ್ಕಾಟಕ** ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು.

**ಸಿಂಹ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು.

**ಕನ್ಯಾ** ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ.

**ತುಲಾ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ವೃಶ್ಚಿಕ** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ.

**ಧನಸ್ಸು** ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ. ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ .ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ.

**ಮಕರ** ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ಕೌಟುಂಬಿಕ ಅಗತ್ಯಗಳಿಗೆ ತಕ್ಷಣದ ಗಮನ ನೀಡಬೇಕು.

**ಕುಂಭ** ನಿಮ್ಮ ನಿರಾಶಾದಾಯಕ ನಡವಳಿಕೆಯಿಂದಾಗಿ ನೀವು ಯಾವುದೇ ಪ್ರಗತಿಯನ್ನು ಹೊಂದಲು ಸಾಧ್ಯವಾಗುವುದಿಲ್ಲ. ಚಿಂತೆ ನಿಮ್ಮ ಚಿಂತನಾ ಶಕ್ತಿಯನ್ನು ಕುಂಠಿತಗೊಳಿಸಿದೆಯೆಂದು ಕಂಡುಕೊಳ್ಳಲು ಇದು ಸಕಾಲ.

**ಮೀನ** ನಿಮ್ಮ ಉಚಿತ ಸಮಯ ಮನೆಯನ್ನು ಸ್ವಚ್ಛಗೊಳಿಸುವಲ್ಲಿ ಕಳೆಯಬಹುದು. ಈ ದಿನ ನಿಮ್ಮ ವೈವಾಹಿಕ ಜೀವನದಲ್ಲಿ ನಿಜಕ್ಕೂ ಅದ್ಭುತವಾಗಿದೆ. ನೀವು ನಿಮ್ಮ ಸಂಗಾತಿಯನ್ನು ಎಷ್ಟು ಪ್ರೀತಿಸುತ್ತೀರಿ ಎಂದು ಅವರಿಗೆ ತಿಳಿಯಲಿ.

## ಲೋಕಾಯುಕ್ತ ಬಲೆಗೆ ಸೂಪರಿಡಿಯೆಂಟ್

• ಉದಯವಾಹಿನಿ, ಹಾಸನ

ಅನುದಾನಿತ ಶಾಲೆಯ ಅನುದಾನ ಬಿಡುಗಡೆಯ ಸಲುವಾಗಿ ಡಿಡಿಪಿಐ ಕಚೇರಿಯ ಸೂಪರಿಡಿಯೆಂಟ್ ಅಧಿಕಾರಿ ಒಬ್ಬ ಲಂಚ ಲಂಚ ಸ್ವೀಕರಿಸುತ್ತಿರುವಾಗಲೇ ಅಧಿಕಾರಿಗಳಿಗೆ ಬೆಲೆ ಬಿದ್ದಿರುವ ಘಟನೆ ಹಾಸನದಲ್ಲಿ ನಡೆದಿದೆ. ಹಾಸನ ಡಿಡಿಪಿಐ ಕಚೇರಿಯಲ್ಲಿ ಅನುದಾನಿತ ಶಾಲೆಯ ಅನುದಾನ ಬಿಡುಗಡೆ ಸಂಬಂಧ ಲಂಚ ಸ್ವೀಕರಿಸುತ್ತಿದ್ದ ಸೂಪರಿಡಿಯಂಟ್ ವೇಣುಗೋಪಾಲ್ ಲೋಕಾಯುಕ್ತ ಬಲೆಗೆ ಬಿದ್ದ ಅಧಿಕಾರಿ. ಸದ್ಯ ವೇಣುಗೋಪಾಲನ್ನು ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

## ಆನೆಕಾಲು ರೋಗ ಸಮೀಕ್ಷೆ, 110 ಜನರ ರಕ್ತ ಲೇಪನ ಸಂಗ್ರಹ

• ಉದಯವಾಹಿನಿ, ಮುದ್ದೇಬಿಹಾಳ

ಪಟ್ಟಣದ ಫಿಲೇಕಮ್ಮ ನಗರದಲ್ಲಿ ರಾತ್ರಿ 8 ಗಂಟೆಯಿಂದ 11 ವರಗೆ ಆನೆ ಕಾಲು ರೋಗ ಸಮೀಕ್ಷೆ ಮಾಡಿ 110ಜನರ ರಕ್ತ ಲೇಪನ ಸಂಗ್ರಹ ಮಾಡಲಾಯಿತು . ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್.ಗೌಡರ, ಆನೆಕಾಲು ರೋಗವು ಪೈಲೇರಿಯಾ ಸೋಂಕು ಹೊಂದಿದ ಕ್ಯೂಲೆಕ್ಸ್ ಸೊಳ್ಳೆಗಳ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಮುಖ್ಯವಾಗಿ ನಾವು ವಾಸಿಸುವ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾ ಗಿಟ್ಟುಕೊಳ್ಳಬೇಕು. ರೋಗ ನಿಯಂತ್ರಣಕ್ಕಾಗಿ ಹಾಗೂ ರೋಗಿಗಳ ಪತ್ತೆ ಮಾಡುವುದು ಕಷ್ಟಕರವಾಗಿದ್ದು ಆನೆಕಾಲು ರೋಗದ ಪತ್ತೆಗಾಗಿ ರಾತ್ರಿ ವೇಳೆಯಲ್ಲಿಯೇ ರಕ್ತದ ಮಾದರಿ ಸಂಗ್ರಹಿಸಬೇಕಾಗುತ್ತದೆ. ರಕ್ತ ಪರೀಕ್ಷೆ ಯಲ್ಲಿ ಆನೆಕಾಲು ರೋಗಾಣು ಪತ್ತೆಯಾದಲ್ಲಿ ಡಿಇಸಿ ಮಾತ್ರೆಗಳ ಮೂಲಕ ನಿಯಂತ್ರಿಸಬಹುದು ಎಂದರು. ಸಮೀಕ್ಷೆಯಲ್ಲಿ ವಿಬಿಡಿ ಮೇಲ್ವಿಚಾರಕ ಎಸ್ ಸಿ ರುದ್ರವಾಡಗಿ ಆರೋಗ್ಯ ನಿರೀಕ್ಷಣಾಧಿಕಾರಿ ಎಸ್ ಆರ್ ಸಜ್ಜನ ಇಸ್ಮಾಯಿಲ್ ವಾಲಿಕಾರ, ಆಶಾ ಕಾರ್ಯಕರ್ತೆಯರಾದ ಕವಿತ ಅರಳದಿನ್ನಿ ಸುನಂದಾ ಖ್ಯಾತಣ್ಣವರ ಕಾರ್ಯನಿರ್ವಹಿಸಿದರು.



ಉದಯವಾಹಿನಿ ಚಿತ್ರ

## ತೆಂಗು ಗೊನೆಗಾರರಿಗೆ ಕೇರಾ ಸುರಕ್ಷಾ ವಿಮಾ ಯೋಜನೆ

• ಉದಯವಾಹಿನಿ, ಚಿತ್ರದುರ್ಗ

ತೆಂಗು ಅಭಿವೃದ್ಧಿ ಮಂಡಳಿ ವತಿಯಿಂದ ಫ್ರೆಂಡ್ಸ್ ಆಫ್ ಕೊಕನಟ್ ಟ್ರೀ ಕಾರ್ಯಕ್ರಮದಡಿ ತೆಂಗು ಗೊನೆಗಾರರಿಗೆ ಕೇರಾ ಸುರಕ್ಷಾ ವಿಮಾ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ. ವಿಮಾ ಯೋಜನೆಯಡಿ ತೆಂಗಿನಮರ ಹತ್ತುವವರು, ತೆಂಗಿನಕಾಯಿ ಕೀಳುವವರು, ನೀರಾ ತಂತ್ರಜ್ಞರು ಅಪಘಾತಕ್ಕೊಳಗಾಗಿ ಮರಣ ಹೊಂದಿದಲ್ಲಿ ರೂ.7ಲಕ್ಷ, ಶಾಶ್ವತ ಭಾಗಶಃ ಅಂಗವಿಕಲತೆ ಹೊಂದಿದಲ್ಲಿ ರೂ.3.50ಲಕ್ಷ, ಆಸ್ಪತ್ರೆ ವೆಚ್ಚ (24ಗಂಟೆ ಐಪಿ) ಗರಿಷ್ಠ ರೂ.2ಲಕ್ಷ, ತಾತ್ಕಾಲಿಕ ಅಂಗವಿಕಲತೆಯನ್ನು ಹೊಂದುವವರಿಗೆ ಪ್ರತಿವಾರ ರೂ.3500 ರಂತೆ ಗರಿಷ್ಠ ರೂ.21,000, ಅಂಬುಲೆನ್ಸ್ ಖರ್ಚು ರೂ.3500 ಹಾಗೂ ಪಾಲಿಸಿದಾರ ಮೃತಪಟ್ಟರೆ ಅಂತ್ಯ ಸಂಸ್ಕಾರಕ್ಕೆ ರೂ.5,500 ನೀಡಲಾಗುತ್ತದೆ. ದುರ್ಘಟನೆ ಅಥವಾ ಅಪಘಾತ ಆದ ಏಳು ದಿನಗಳ ಒಳಗಾಗಿ ತೆಂಗು ಅಭಿವೃದ್ಧಿ ಮಂಡಳಿಗೆ ಮಾಹಿತಿ ತಲುಪಿಸಬೇಕು. ವಾರ್ಷಿಕ ವಿಮಾ ಒಟ್ಟು ಕಂತು ರೂ.956 ಗಳಾಗಿದ್ದು, ಶೇ. 75:25 ರಂತೆ ತೆಂಗು ಅಭಿವೃದ್ಧಿ ಮಂಡಳಿ ವಂತಿಕೆ ರೂ. 717 ಮತ್ತು ರೈತರ ವಂತಿಕೆ ರೂ.239ಆಗಿರುತ್ತದೆ. ರೈತರ ವಂತಿಕೆಯನ್ನು ತೆಂಗು ಅಭಿವೃದ್ಧಿ ಮಂಡಳಿಗೆ ಡಿಡಿ ಮೂಲಕ ಅಥವಾ ಆನ್ಲೈನ್ ಮೂಲಕ ಪಾವತಿಸಬಹುದಾಗಿರುತ್ತದೆ.

ಜಿಲ್ಲೆಯ ಆಸಕ್ತರು ತೆಂಗು ಅಭಿವೃದ್ಧಿ ಮಂಡಳಿಯ ನಿಗಧಿತ ಅರ್ಜಿ ನಮೂನೆ. ಆಧಾರ್ ಕಾರ್ಡ್ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ, ರೈತರ ವಾರ್ಷಿಕ ವಂತಿಕೆ ಪಾವತಿಸಿದ ರಶೀದಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ www.cocpnut.board.govt.in/Shceme.aspx#kera ಜಾಲತಾಣಕ್ಕೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಮಿತ್ ಶಾ ಅವರನ್ನು ಭೇಟಿಯಾದ ಕ್ಯಾ. ಬ್ರಿಜೇಶ್ ಚೌಟ

## • ಉಗ್ರ ಚಟುವಟಿಕೆ ನಿಗ್ರಹಕ್ಕೆ ಮಂಗಳೂರಿನಲ್ಲಿ ಆದಷ್ಟು ಬೇಗ ಎನ್‌ಐಎ ಘಟಕ ಸ್ಥಾಪಿಸುವಂತೆ ಕೋರಿಕೆ

• ಉದಯವಾಹಿನಿ, ಮಂಗಳೂರು

ಉಗ್ರ ಚಟುವಟಿಕೆ ನಿಗ್ರಹಕ್ಕೆ ಮಂಗಳೂರಿನಲ್ಲಿ ಆದಷ್ಟು ಬೇಗ ಎನ್‌ಐಎ ಘಟಕ ಸ್ಥಾಪಿಸುವಂತೆ ಕೋರಿ ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ನವದೆಹಲಿಯಲ್ಲಿ ಭೇಟಿಯಾಗಿ ಮಹತ್ವದ ಚರ್ಚೆ ನಡೆಸಿದ್ದಾರೆ.

ಕರಾವಳಿ ತೀರದ ಸುರಕ್ಷತೆ ದೃಷ್ಟಿಯಿಂದ ಭಾರತೀಯ ಕೋಸ್ಟ್‌ಗಾರ್ಡ್ ಅಕಾಡೆಮಿ ಸ್ಥಾಪನ ಯೋಜನೆ ಅನುಷ್ಠಾನ, ದಕ್ಷಿಣ ಕನ್ನಡದಲ್ಲಿ ಸೈನಿಕ ಶಾಲೆ-ಮಿಲಿಟರಿ ನೆಲೆ ಸ್ಥಾಪಿಸುವುದು, ಮಂಗಳೂರು-ಬೆಂಗಳೂರು ನಡುವಿನ ರೈಲು ಹಾಗೂ ರಸ್ತೆ ಸಂಪರ್ಕ ಮತ್ತಷ್ಟು ಸುಗಮಗೊಳಿಸುವುದು ಸೇರಿ ದಕ್ಷಿಣ ಕನ್ನಡ ಜಿಲ್ಲೆ ಸಮಗ್ರ ಅಭಿವೃದ್ಧಿ ಹಾಗೂ ಸುರಕ್ಷತೆ ಹೆಚ್ಚಳಕ್ಕೆ ಪೂರಕವಾದ ಹಲವು ಪ್ರಮುಖ ಬೇಡಿಕೆ ಒಳ ಗೊಂಡಿರುವ ಮನವಿಯನ್ನು ಇದೇ ವೇಳೆ ಸಂಸದ ಕ್ಯಾ. ಚೌಟ ಅವರು ಗೃಹ ಸಚಿವ ಅಮಿತ್ ಶಾ ಅವರಿಗೆ ಸಲ್ಲಿಕೆ ಮಾಡಿದ್ದಾರೆ. ಸಂಸದರಾದ ಬಳಿಕ ಜಿಲ್ಲೆಯ ಅಭಿವೃದ್ಧಿ ವಿಚಾರವಾಗಿ ಮೊದಲ ಬಾರಿಗೆ ಅಧಿಕೃತವಾಗಿ ಅಮಿತ್ ಶಾ ಅವರನ್ನು ಭೇಟಿ ಮಾಡಿದ ಕ್ಯಾ. ಚೌಟ, ಜಿಲ್ಲೆಯ ಪ್ರಗತಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಸಮಲೋಚಿಸಿದ್ದು ಈ ವೇಳೆ ಗೃಹಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

**ಘಟಕ ಸ್ಥಾಪಿಸುವುದು ಅಗತ್ಯ**

ಈ ಹಿಂದೆ ಸಿಎಎ ಪ್ರತಿಭಟನೆ ಹೆಸರಿನಲ್ಲಿ ನಡೆಸಿದ್ದ ಮೂಲಭೂತವಾದಿಗಳ ಗಲಭೆ ಕೂಡ ಕರಾವಳಿಯ ಭದ್ರತೆಗೆ ಎದುರಾದ ಸವಾಲಿಗೆ ಸ್ಪಷ್ಟ ನಿದರ್ಶನ.

ಹೀಗಿರುವಾಗ, ಮಂಗಳೂರಿನಲ್ಲಿ ಎನ್‌ಐಎ ಘಟಕ ಸ್ಥಾಪನೆಯಾದರೆ ಈ ಭಾಗದಲ್ಲಿ ಉಗ್ರ ಚಟುವಟಿಕೆಯ ಮೂಲೋತ್ಪಾಟನೆ ಜತೆಗೆ ಕರಾವಳಿಯ ಸುರಕ್ಷತೆ ಹೆಚ್ಚಿಸುವುದಕ್ಕೂ ಅನುಕೂಲವಾಗಲಿದೆ ಎಂದು ಮನವಿಯಲ್ಲಿ ಕ್ಯಾ. ಚೌಟ ತಿಳಿಸಿದ್ದಾರೆ.

ಸೈನಿಕ ಶಾಲೆ ಮತ್ತು ಮಿಲಿಟರಿ ಬೇಸ್ ಸ್ಥಾಪನೆಗೆ ಮನವಿ ಶೈಕ್ಷಣಿಕವಾಗಿ ಮಂಗಳೂರು ವಿಶ್ವದರ್ಜೆ ಮನ್ನಣೆ ಪಡೆದಿರುವ ಹಿನ್ನಲೆಯಲ್ಲಿ ಈ ಭಾಗದಲ್ಲಿ ದೇಶ ಸೇವೆಗೆ ಮುಂದಾಗುವ ಯುವಕರನ್ನು ಪ್ರೋತ್ಸಾಹಿಸುವುದಕ್ಕೆ ಹಾಗೂ ವಿದ್ಯಾರ್ಥಿಗಳಲ್ಲಿ ದೇಶಾಭಿಮಾನ, ಶಿಸ್ತು, ನಾಯಕತ್ವ ಗುಣ ಬೆಳೆಸುವುದಕ್ಕೆ ಸೈನಿಕ ಶಾಲೆ ಸ್ಥಾಪನೆಯಾಗಬೇಕು. ನಮ್ಮ ಕರಾವಳಿ ತೀರದ ರಕ್ಷಣಾ ಸಾಮರ್ಥ್ಯ ಹಾಗೂ ರಾಷ್ಟ್ರೀಯ ಭದ್ರತೆ ಹೆಚ್ಚಿಸುವ ದೃಷ್ಟಿಯಿಂದ ಮಿಲಿಟರಿ ಬೇಸ್ ಮಂಗಳೂರಿನಲ್ಲಿ ಸ್ಥಾಪಿಸಬೇಕು.

ಸೈನಿಕ ಶಾಲೆ ಜತೆಗೆ ಮಿಲಿಟರಿ ನೆಲೆಯ ನ್ನೂ ಸ್ಥಾಪಿಸುವುದರಿಂದ ಕರಾವಳಿ ಭಾಗದ ಸುರಕ್ಷತೆಯ ಜತೆಗೆ ದೇಶದ ರಕ್ಷಣಾ ಮೂಲಸೌಕರ್ಯ ಮತ್ತಷ್ಟು ಬಲಗೊಳಿಸುವುದಕ್ಕೆ ವಿಪುಲ ಅವಕಾಶ - ಅನುಕೂಲತೆಗಳು ದೊರೆಯುತ್ತದೆ ಎಂದು ಚೌಟ ಅಭಿಪ್ರಾಯಪಟ್ಟಿದ್ದಾರೆ.

ಕೇಂದ್ರ ಸರ್ಕಾರ ಮಂಗಳೂರಿಗೆ 2020 ರಲ್ಲಿ ಭಾರತೀಯ ಕೋಸ್ಟ್‌ಗಾರ್ಡ್ ಅಕಾಡೆಮಿ ಮಂಜೂರು ಮಾಡಿದೆ. ಆದರೆ, ನಮ್ಮ ಜಿಲ್ಲೆಗೆ ರಾಷ್ಟ್ರ ಮಟ್ಟದಲ್ಲಿ ಹೆಗ್ಗುರುತಾಗುವ ಈ ಯೋಜನೆ ಕಾರ್ಯರೂಪಕ್ಕೆ ಬರಲು ಕೆಲವು ಅನುಮತಿ ಪ್ರಕ್ರಿಯೆಗಳು ಗೃಹ ಸಚಿವಾಲಯದ ಮುಂದೆ ಬಾಕಿಯಿದೆ. ಹೀಗಾಗಿ ಆದಷ್ಟು ಬೇಗ ಅಕಾಡೆಮಿ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು.



ಉದಯವಾಹಿನಿ ಚಿತ್ರ

> ಮಂಗಳೂರಿನಲ್ಲಿ ಕೋಸ್ಟ್ ಗಾರ್ಡ್ ಅಕಾಡೆಮಿ ಸ್ಥಾಪಿಸುವುದರಿಂದ ಕರಾವಳಿ ತೀರದ ಕಣ್ಗಾವಲು, ಪ್ರಾಕೃತಿ ವಿಕೋಪದಲ್ಲಿ ರಕ್ಷಣಾ ಕಾರ್ಯಾಚರಣೆಗೆ ಅನುಕೂಲವಾಗಲಿದೆ. ಅಲ್ಲದೆ, ಆಯಕಟ್ಟಿನ ಅರೇಬಿಯನ್ ಸಮುದ್ರ ಮತ್ತು ಮಂಗಳೂರು ಬಂದರಿನ ಸಮೀಪದಲ್ಲಿ ಕೋಸ್ಟ್‌ಗಾರ್ಡ್ ಅಕಾಡೆಮಿ ಸ್ಥಾಪನೆಯಾದರೆ ಲಕ್ಷದ್ವೀಪ ದ್ವೀಪಗಳು ಮತ್ತು ಮಾಲ್ಡೀವ್ಸ್ ಸೇರಿದಂತೆ ಪ್ರಮುಖ ಕಡಲ ವಲಯಗಳ ಸಾಮೀಪ್ಯದಿಂದ ಹೆಚ್ಚಿನ ಪ್ರಯೋಜನವಾಗಲಿದೆ
>
> -ಕ್ಯಾ. ಬ್ರಿಜೇಶ್ ಚೌಟ ಚೌಟ

**ಎನ್‌ಐಎ ಘಟಕ ಸ್ಥಾಪಿಸಬೇಕೆಂಬ ಒತ್ತಾಯ**

ಮಂಗಳೂರಿನಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆಯಾದ ಎನ್‌ಐಎ ಘಟಕ ಸ್ಥಾಪಿಸಬೇಕೆಂಬ ಒತ್ತಾಯ ಹಲವು ವರ್ಷಗಳಿಂದ ಕೇಳಿಬಂದಿತ್ತು. ಈ ಬೇಡಿಕೆಯನ್ನು ಆದ್ಯತೆಯಾಗಿ ಪರಿಗಣಿಸಿದ್ದ ಕ್ಯಾ. ಚೌಟ ಸಂಸದರಾದ ಕೂಡಲೇ ಎನ್‌ಐಎ ಘಟಕ ಸ್ಥಾಪಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದರು. ಅದರಂತೆ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ. ಮಂಗಳೂರು ಸೇರಿ ಕರಾವಳಿಯಲ್ಲಿ ಎಸ್‌ಡಿಪಿಐ, ಪಿಎಫ್‌ಐನಂಥ ಮತಾಂಧ ಸಮಾಜಘಾತುಕ ಸಂಘಟನೆಗಳ ಮೂಲಕ ಸ್ಲೀಪರ್ ಸೆಲ್‌ನಂತಿರುವ ಉಗ್ರ ಚಟುವಟಿಕೆ ಮಟ್ಟ ಹಾಕಬೇಕಾದರೆ ಕರಾವಳಿಯಲ್ಲಿ ಎನ್‌ಐಎ ಘಟಕ ಸ್ಥಾಪಿಸುವುದು ಅತ್ಯಂತ ಅಗತ್ಯವಾಗಿದೆ.

## ದಯಾಮರಣ ಕೋರಿ ಸಿಎಂಗೆ ಪತ್ರ ಬರೆದ ಗುತ್ತಿಗೆದಾರ

• ಉದಯವಾಹಿನಿ, ದಾವಣಗೆರೆ



ಬೀದರ್ ನಲ್ಲಿ ರೈಲಿಗೆ ತಲೆ ಕೊಟ್ಟು ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಮಾಡಿಕೊಂಡ ಹಿನ್ನೆಲೆಯಲ್ಲಿ ಕಲಬುರ್ಗಿಯಲ್ಲಿ ಬಿಜೆಪಿ ನಾಯಕರು ಸಚಿವ ಪ್ರಿಯಾಂಕ ಖರ್ಗೆ ನಿವಾಸಕ್ಕೆ ಮುತ್ತಿಗೆ ಹಾಕಲು ಯತ್ನಿಸಿ ದರು. ಅಲ್ಲದೆ ರಾಜೀನಾಮೆ ಆಗ್ರಹಿಸಿದ್ದಾರೆ.

ಇದರ ಬೆನ್ನಲ್ಲೇ ರಾಜ್ಯದಲ್ಲಿ ಮತ್ತೊಂದು ಘಟನೆ ನಡೆದಿದ್ದು, ಕಾಮಗಾರಿಯಾದರೂ ಕೂಡ ಹಣ ಬಿಡುಗಡೆ ಮಾಡಿಲ್ಲ ಎಂದು ಪ್ರಥಮ ದರ್ಜೆಯ ಗುತ್ತಿಗೆದಾರರು ಒಬ್ಬರು ಸಿಎಂ ಸಿದ್ದರಾಮಯ್ಯ ಹಾಗೂ ಗವರ್ನರ್ ಅವರಿಗೆ ದಯಾಮರಣ ಕೋರಿ ಪತ್ರ ಪಡೆದಿರುವ ಘಟನೆ ದಾವಣಗೆರೆಯಲ್ಲಿ ನಡೆದಿದೆ. ಹೌದು ಕಾಮಗಾರಿ ಮುಗಿದು ಒಂದು ವರ್ಷ ಪೂರೈಸಿದರೂ ಕೂಡ ಇನ್ನು ಕಾಮಗಾರಿಯ ಹಣ ಬಿಡುಗಡೆಯಾಗಿಲ್ಲ. ಅಲ್ಲದೇ ಮಗಳ ಮದುವೆಗೆ ಹಣ ಇಲ್ಲ ಎಂದು ಮನನೊಂದ ಗುತ್ತಿಗೆದಾರ ಒಬ್ಬರು ಸಿಎಂ ಸಿದ್ದರಾಮಯ್ಯ, ಗವರ್ನರ್‌ಗೆ ದಯಾಮರಣ ಕೋರಿ ಪತ್ರ ಬರೆದಿರುವ ಘಟನೆ ದಾವಣಗೆರೆ ಹರಿಹರದಲ್ಲಿ ನಡೆದಿದೆ. ಹರಿಹರದ ನಿವಾಸಿ ಪ್ರಥಮ ದರ್ಜೆಯ ಗುತ್ತಿಗೆದಾರ ಮೊಹಮ್ಮದ್ ಮಝರ್ ಪತ್ರ ಬರೆದ ಗುತ್ತಿಗೆದಾರ ಎಂದು ತಿಳಿದುಬಂದಿದೆ.ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು 2022-23ನೇ ಸಾಲಿನಲ್ಲಿ ಟೆಂಡರ್ ಕರೆದಿದ್ದರು. ಹರಿಹರ ನಗರಸಭೆ ಹಾಗು ಜಿಲ್ಲಾಧಿಕಾರಿ ಅವರು ಕಾಮಗಾರಿ ಕಾರ್ಯದೇಶ ನೀಡಿದ್ದರು. ಅನುಮೋದನೆ ಆದ ಬಳಿಕ ಟೆಂಡರ್ ನನಗೆ ಸಿಕ್ಕಿತು. ಈ ಒಂದು ಟೆಂಡರ್ ನಲ್ಲಿ ಭಾಗಿಯಾಗಿ ನಾನು ಸಾಲ ಸೋಲ ಮಾಡಿ, ಹರಿಹರ ನಗರಸಭೆ ವ್ಯಾಪ್ತಿಯ 29ನೇ ವಾರ್ಡ್ ಖಬರಸ್ಥಾನದಲ್ಲಿ 20 ಲಕ್ಷ ವೆಚ್ಚದಲ್ಲಿ ಶೌಚಾಲಯ ನಿರ್ಮಾಣ ಮಾಡಿದ್ದೇನೆ. 21ನೇ ವಾರ್ಡ್ ನಲ್ಲಿ 5 ಲಕ್ಷ ವೆಚ್ಚದಲ್ಲಿ ಸಿಸಿ ಚರಂಡಿ ನಿರ್ಮಾಣ ಮಾಡಿದ್ದೇನೆ. ಎಲ್ಲಾ ಕಾಮಗಾರಿಯೂ ಮುಗಿದಿದೆ ಆದರೆ ನನಗೆ ಇದುವರೆಗೂ ಒಟ್ಟು 25 ಲಕ್ಷ ಹಣ ಬರಬೇಕಿದೆ.

ನನ್ನ ಹಣ ಕೇಳಿದರೆ ಅಧಿಕಾರಿಗಳು ಅಲೆದಾಡಿಸುತ್ತಿದ್ದಾರೆ ಮನೆಯಲ್ಲಿ ಮಗಳ ಮದುವೆ ಇದ್ದು, ಮದುವೆಗೆ ದಿನಾಂಕ ನಿಗದಿ ಮಾಡಬೇಕಾಗಿದೆ. ಆದ್ದರಿಂದ ಕಾಮಗಾರಿಯ ಹಣ ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯಪಾಲರಾದ ಥಾವರ್ ಚಂದ್ ಗೆಹೋಟ್ ಅವರಿಗೆ ಪತ್ರ ಬರೆದಿದ್ದೇನೆ ಎಂದು ತಿಳಿಸಿದ್ದಾರೆ.

## ಮದುವೆ ಮಾಡಿಸಿ 4 ಲಕ್ಷ ಹಣ ಪಡೆದು ಬ್ರೋಕರ್ ಎಸ್ಕೇಪ್ ಇತ್ತ ಮದುವೆಯಾದ ಹೆಣ್ಣೂ ಪರಾರಿ

• ಉದಯವಾಹಿನಿ, ಬಾಗಲಕೋಟೆ

ಹೆಣ್ಣು ಸಿಗಲಿಲ್ಲ ಎಂಬ ಕೊರಗಿನಲ್ಲಿದ್ದ ವ್ಯಕ್ತಿಗೆ ಮದುವೆ ಮಾಡಿಸಿ ಲಕ್ಷಾಂತರ ಹಣ ಪಡೆದು ಬ್ರೋಕರ್ ವಂಚಿಸಿರುವ ಘಟನೆ ನಡೆದಿದೆ. ಮದುವೆ ಬಳಿಕ ಬ್ರೋಕರ್ ಮತ್ತು ವಿವಾಹವಾದ ಹೆಣ್ಣು ಇಬ್ಬರೂ ಪರಾರಿಯಾಗಿದ್ದಾರೆ.


ಮುಧೋಳದ ಸೋಮಶೇಖರ್ ಎಂಬಾತ ಮೋಸ ಹೋಗಿದ್ದಾರೆ. ತನಗಾದ ವಂಚನೆ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾನೆ. ಶಿವಮೊಗ್ಗದ ಮಂಜುಳಾ ಎಂಬಾಕೆಯನ್ನು ಮದುವೆ ಮಾಡಿ ಮೋಸ ಮಾಡಿದ್ದಾರೆಂದು ದೂರಿದ್ದಾರೆ.

ಈಗಾಗಲೇ ಎರಡು ಮದುವೆಯಾಗಿದ್ದ ಶಿವಮೊಗ್ಗದ ಮಹಿಳೆ ಮಂಜುಳಾನ್ನ ಕರೆತಂದು ಬ್ರೋಕರ್ ಟೀಂ ಮದುವೆ ಮಾಡಿಸಿತ್ತು. ಇತ್ತ ಹೆಣ್ಣಿಗಾಗಿ ಅಲೆದಾಡುತ್ತಿದ್ದ ಸೋಮಶೇಖರನನ್ನ ಟಾರ್ಗೆಟ್ ಮಾಡಿದ್ದರು.

ಹೆಣ್ಣು ಕೊಡಿಸ್ತೀವಿ ಅಂತ ಹೇಳಿ 4 ಲಕ್ಷ ಹಣಕ್ಕೆ ಡಿಮ್ಯಾಂಡ್ ಮಾಡಿದ್ದರು. ಹೆಣ್ಣು ಸಿಗದೇ ಕೊನೆಗೆ ಸೋಮಶೇಖರ್ ಮದುವೆಗೆ ಒಪ್ಪಿಕೊಂಡಿದ್ದ. ಬಾಗಲಕೋಟೆ ಮುಧೋಳದ ಕಾಳಿಕಾದೇವಿ ದೇಗುಲದಲ್ಲಿ ವರ್ಷದ ಹಿಂದೆ ಮದುವೆ ನಡೆದಿತ್ತು. ಮದುವೆ ದಿನವೇ ಬ್ರೋಕರ್ ತಂಡವು ಪೂರ್ಣ 4 ಲಕ್ಷ ಹಣ ಪಡೆದಿತ್ತು.

ಮದುವೆಯಾದ ಒಂದೇ ತಿಂಗಳಲ್ಲಿ ಪತ್ನಿ ಮಂಜುಳಾ ಎಸ್ಕೇಪ್ ಆಗಿದ್ದಳು. ಪತ್ನಿ ಬಗ್ಗೆ ವಿಚಾರಿಸಲು ಹೋದ ವೇಳೆ ಈಗಾಗಲೇ ಆಕೆಗೆ ಎರಡು ಮದುವೆಯಾದ ಬಗ್ಗೆ ಸುಳಿವು ಸಿಕ್ಕಿದೆ. ಹಣ ಹೊಡೆಯಲು ಮದುವೆಯಾದ ಮಹಿಳೆಯನ್ನೇ ಶಿವಮೊಗ್ಗದಿಂದ ಮುಧೋಳಕ್ಕೆ ಬ್ರೋಕರ್ ಟೀಂ ಕರೆ ತಂದಿತ್ತು. ಬ್ರೋಕರ್ ಟೀಮ್‌ಗೆ ತಾನು ನೀಡಿದ 4 ಲಕ್ಷ ಹಣ ಮರಳಿಸುವಂತೆ ಸಂತ್ರಸ್ತ ಸೋಮಶೇಖರ್, ಪೊಲೀಸರ ಬಳಿ ಮನವಿ ಮಾಡಿದ್ದಾರೆ.

ಕೊನೆಗೆ ಹಣ ಬಾರದೇ ಇದ್ದಾಗ ಮುಧೋಳ ಪೊಲೀಸ್ ಠಾಣೆಯಲ್ಲಿ 7 ಜನರ ವಿರುದ್ಧ ದೂರು ದಾಖಲಿಸಿದ್ದಾರೆ.



ಉದಯವಾಹಿನಿ ಚಿತ್ರ

> ಮದುವೆ ಮಾಡಿಸಿ ಹಣ ಹೊಡೆಯಲು ಇದೊಂದು ದೊಡ್ಡ ಜಾಲವೇ ಇದೆ. ಈ ಗ್ಯಾಂಗ್ ಎಲ್ಲಿ ಕಾರ್ಯಪ್ರವೃತ್ತಿಯಾಗಿದೆ ಅಂತ ಹುಡುಕಿ ತನಿಖೆ ಮಾಡುತ್ತಿದ್ದೇವೆ. ಈ ಜಾಲದಲ್ಲಿ ಆರೋಪಿಗಳು ಬೆಳಗಾವಿ, ರಾಮದುರ್ಗ, ಶಿವಮೊಗ್ಗ, ಧಾರವಾಡ ಮೂಲದವರಿದ್ದಾರೆ. ಅವರನ್ನ ಬಂಧಿಸಿ ವಿಚಾರಣೆಗೆ ಒಳಪಡಿಸುವ ಕೆಲಸ ಮಾಡುತ್ತೇವೆ. ಇವರಿಂದ ಈ ಹಿಂದೆಯೂ ಪ್ರಕರಣ ನಡೆದಿದೆ. ಎಲ್ಲವನ್ನ ಪರಿಶೀಲಿಸಿ ಕ್ರಮ ಕೈಗೊಳ್ಳುತ್ತೇವೆ
>
> -ಎಸ್.ಪಿ.ಅಮರನಾಥ ರೆಡ್ಡಿ

## ಲಾರಿಯೊಂದು ಉರುಳಿ ಬಿದ್ದು ಸಂಚಾರಕ್ಕೆ ತೊಂದರೆ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಕುಂಚಾವರಂ ಮೀಸಲು ದಟ್ಟವಾದ ಅರಣ್ಯ ಪ್ರದೇಶದಲ್ಲಿರುವ ಶಾಧಿಪೂರದಿಂದ ಚಿಕನಿಂಗದಳ್ಳಿ ಬರುವ ಡಾಂಬರಿಕರಣ ರಸ್ತೆಯಲ್ಲಿ ಕೆಂಪು ಮಣ್ಣು ತುಂಬಿದ ಲಾರಿಯೊಂದು ಉರುಳಿ ಬಿದ್ದು ಜನದಟ್ಟನೆಯಾಗಿ ಸಂಚಾರಿಸುವ ವಾಹನ ಸವಾರರಿಗೂ ಸಾರ್ವಜನಿಕರೂ ತೊಂದರೆಯಾದ ಪ್ರಸಂಗ ಜರುಗಿದೆ.

ತಾಲ್ಲೂಕಿನ ಶಾಧಿಪೂರ ಮತ್ತು ಕುಂಚಾವರಂ ಸೇರಿದಂತೆ ನೇರೆಯ ತೆಲಂಗಾಣ ರಾಜ್ಯದ ತಟ್ಟೆಪಳ್ಳಿ, ಜರಾಮ ತಾಂಡಾ, ಅಚ್ಚಕಟ್ಟಾ ತಾಂಡಾ ಸೇರಿದಂತೆ ಕೆಲವು ಲಾರಿ ಟಿಪ್ಪರ್‌ಗಳು ಪರವಾನಿಗೆ ಪಡೆದರೆ ಅದರಲ್ಲಿ ಹಲವಾರು ಟಿಪ್ಪರ್ ಮತ್ತು ಲಾರಿಗಳು ಸರ್ಕಾರದ ಪರವಾನಿಗೆ ಪಡೆಯದೆ ಆಕ್ರಮವಾಗಿ ಕೇಂಪು ಮಣ್ಣು ಅತಿಯಾದ ಭಾರ ತುಂಬಿಕೊಂಡು ಹೋಗುವುದು ಕಂಡುಬರುತ್ತದೆ ಇದರಿಂದ ರಸ್ತೆಗಳು ಹದಗೆಟ್ಟು ಹೋಗುತ್ತಿವೆ.

ಬೈಕ್ ಸವಾರರು, ಕಾರು ಸವಾರರು ಜೀವ ಕೈಯಲ್ಲಿ ಹಿಡಿದುಕೊಂಡು ಹೋಗುವುದು ಅನಿವಾರ್ಯವಾಗಿದೆ ಆದರೆ ಸಂಬಂಧಿಸಿದ ತಾಲ್ಲೂಕಾಡಳಿತ, ಪೋಲಿಸ್ ಇಲಾಖೆ ಕಂದಾಯ ಇಲಾಖೆ ಅಧಿಕಾರಿಗಳು ಮೌನವಾಗಿದ್ದಾರೆ ಎಂದು ಕರವೇ ಸ್ವಾಭಿಮಾನ ಸೇನೆ ಅಧ್ಯಕ್ಷ ಲಿಂಬಾಜೀ ಚವ್ಹಾಣ ಆಕ್ರೋಶ ವ್ಯಕ್ತಪಡಿಸಿದರು. ಕೇಂಪು ಮಣ್ಣಿನ ಲಾರಿಯೊಂದು ಉರುಳಿ ಬಿದ್ದಿರುವುದರಿಂದ ದೊಡ್ಡ ಅನಾಹುತ ಆಗುವುದು ಸ್ವಲ್ಪದಲ್ಲಿ ಜೀವ ಉಳಿದಿವೆ ಯಾರಿಗೂ ಅನಾಹುತ ಆಗಿಲ್ಲ, ಆದರೆ ಅತಿಯಾದ ಭಾರವಾದ ಕೆಂಪು ಮಣ್ಣು ತುಂಬಿಕೊಂಡು ಹೋಗುತ್ತಿರುವುದರಿಂದ ಜನರಿಗೆ ಬಹಳಷ್ಟು ತೊಂದರೆ ಆಗುತ್ತಿದೆ ಹಾಗೂ ಅರಣ್ಯ ಪ್ರದೇಶವಿರುವ ಕಾರಣ ಅರಣ್ಯ ಪ್ರಾಣಿ ಪಕ್ಷಿಗಳಿಗೂ ತೊಂದರೆ,ರಸ್ತೆ ಹಾಳಾಗುತ್ತಿವೆ,ಕೆಂಪು ಅಗೆಯುವ ಸ್ಥಳಗಳು ದೊಡ್ಡ ದೊಡ್ಡ ತೆಗ್ಗುಗುಂಡಿಗಳು ಹಾಕಿ ಹಾಗೆ ಬಿಟ್ಟುಹೋಗುತ್ತಿದ್ದಾರೆ ಇದರಿಂದ ಜಾನುವಾರುಗಳಿಗೆ ಮನುಷ್ಯರಿಗೆ ಜೀವಕ್ಕೆ ತೊಂದರೆಯಿದೆ, ಲಾರಿಗಳಿಂದ ಚೆಟ್ಟಿನಾಡು ಕಂಪನಿ, ಕಲಬುರ್ಗಿ ಕಂಪನಿ, ಶ್ರೀ ಕಂಪನಿ, ಸೇರಿದಂತೆ ವಿವಿಧ ಕಂಪನಿಗಳಿಗೆ ಕೇಂಪು ಮಣ್ಣು ಸಾಗಾಟ ಮಾಡುತ್ತಿದ್ದಾರೆ ಆದರೆ ಯಾರು ಹೇಳುವವರು ಇಲ್ಲಾ ಕೇಳುವವರು ಇಲ್ಲದಂತ್ತಿದೆ ಈ ಭಾಗದ ಜನರ ಸಮಸ್ಯೆಗಳು ತಕ್ಷಣವೇ ಸಂಬಂಧಿಸಿದ ಅಧಿಕಾರಿಗಳು ಮತ್ತು ತಾಲ್ಲೂಕಾಡಳಿತ ಎಚ್ಚೆತುಕೊಂಡು ಆಕ್ರಮ ಕೆಂಪು ಮಣ್ಣು ಸಾಗಾಟಕ್ಕೆ ಬ್ರೇಕ್ ಹಾಕಬೇಕು ಇಲ್ಲಾದಿದ್ದರೆ ಬರುವ ದಿನಗಳಲ್ಲಿ ತಾಲ್ಲೂಕಾಡಳಿತ ಕಛೇರಿ ಎದುರು ಮತ್ತು ಜಿಲ್ಲಾಡಳಿತ ಕಛೇರಿ ಎದುರು ಕರವೇ ಸ್ವಾಭಿಮಾನ ಸೇನೆ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಅಧ್ಯಕ್ಷ ಲಿಂಬಾಜೀ ಚವ್ಹಾಣ ಎಚ್ಚರಿಕೆ ನೀಡಿದರು.



ಉದಯವಾಹಿನಿ ಚಿತ್ರ

**ವಾಹನ ಸವಾರರಿಗೂ ತೊಂದರೆ**

## ಎನ್‌ಎಚ್‌ಆರ್‌ಸಿಗೆ ಪತ್ರ ಬರೆಯುವೆ: ವಿಜಯೇಂದ್ರ

• ಉದಯವಾಹಿನಿ, ಶಿವಮೊಗ್ಗ

ರಾಜ್ಯದಲ್ಲಿ ಬಾಣಂತಿಯರ ಮತ್ತು ನವಜಾತ ಶಿವುಗಳ ಸಾವಿನ ಕುರಿತಂತೆ ಕೇಂದ್ರ ಮಾನವ ಹಕ್ಕುಗಳ ಆಯೋಗಕ್ಕೆ ಪತ್ರ ಬರೆದು ರಾಜ್ಯ ಸರ್ಕಾರಕ್ಕೆ ಬಿಸಿ ಮುಟ್ಟಿಸುವ ಕೆಲಸ ಮಾಡಲಾಗುವುದು ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಬಾಣಂತಿಯರ ಮತ್ತು ನವಜಾತ ಶಿಶುಗಳ ಸಾವು ಖಂಡಿಸಿ ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾದಿಂದ ಶನಿವಾರ ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಎದುರು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಕಳೆದ 6 ತಿಂಗಳಲ್ಲಿ 600ಕ್ಕೂ ಅಧಿಕ ಬಾಣಂತಿಯರು ಮತ್ತು 1 ಸಾವಿರಕ್ಕೂ ಅಧಿಕ ನವಜಾತ ಶಿಶು ಮರಣ ಹೊಂದಿದ್ದಾರೆ.

ಸರ್ಕಾರ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಆತ್ಮಹತ್ಯೆ ಭಾಗ್ಯ ಕಲ್ಪಿಸಿದೆ. ಇದು ದುಷ್ಟ ಸರ್ಕಾರವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಾಣಂತಿಯರ ಮತ್ತು ಕಂದಮ್ಮಗಳ ಸಾವಿನ ಶಾಪ ಸರ್ಕಾರಕ್ಕೆ ತಟ್ಟುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಒಳ್ಳೆಯದು ಆಗೊಲ್ಲ. ಇಷ್ಟೊಂದು ಸಾವು ನೋವು ರಾಜ್ಯದಲ್ಲಿ ಎಂದೂ ಸಂಭವಿಸಿಲ್ಲ. ಇಂತಹ ಲಜ್ಜೆಗೆಟ್ಟ ಮತ್ತು ನಾಚಿಕೆಗೆಟ್ಟ ಸರ್ಕಾರವನ್ನು ನೋಡಿಲ್ಲ. ಬೇಜವಾಬ್ದಾರಿತನ ತೋರುತ್ತಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಸಚಿವ ಸಂಪುಟದಿಂದ ಸಿಎಂ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಸಿಎಂ ಸಿದ್ದರಾಮಯ್ಯ ಅವರಿಗೆ ಮನುಷ್ಯತ್ವ ಇದ್ದರೆ ಮೃತ ಬಾಣಯಂತಿಯರ ಕುಟುಂಬಕ್ಕೆ ತಲಾ 25 ಲಕ್ಷ ಪರಿಹಾರ ತಕ್ಷಣ ಘೋಷಣೆ ಮಾಡಬೇಕು. ಅನಾಥವಾಗಿರುವ ಮಕ್ಕಳನ್ನು ಸರ್ಕಾರ ದತ್ತು ತೆಗದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಸರಕಾರ ಬಂದಾಗಿನಿಂದ ರಾಜ್ಯಕ್ಕೆ ಗ್ರಹಣ ಹಿಡಿದಿದೆ. ಅಭಿವೃದ್ಧಿ ನಡೆಯುತ್ತಿಲ್ಲ. 5 ಗ್ಯಾರಂಟಿಗಳಿಂದಾಗಿ ಜನರು ನೆಮ್ಮದಿಯಲ್ಲಿ ಇದ್ದಾರೆ ಎಂಬ ಭ್ರಮೆಯಲ್ಲಿ ಸಿಎಂ ಇದ್ದಾರೆ. ಆರ್ಥಿಕ ಪರಿಸ್ಥಿತಿ ಕುರಿತಂತೆ ಸಿಎಂ ಅವರು ಶ್ವೇತ ಪತ್ರ ಹೊರಡಿಸಲಿ ಎಂದು ಆಗ್ರಹಿಸಿದರು.



**ಬಾಣಂತಿಯರು, ನವಜಾತ ಶಿಶುಗಳ ಸಾವು**

## ತಂದೆಯನ್ನು ಕೊಂದು ಹೃದಯಘಾತವಾಗಿದೆ ಎಂದು ಡ್ರಾಮಾ : ಆರೋಪಿ ಮಗ ಅರೆಸ್ಟ್

• ಉದಯವಾಹಿನಿ, ಹಾಸನ

ಹಾಸನದಲ್ಲಿ ಕುಡಿದ ನಶೆಯಲ್ಲಿ ಮಗನಿಂದಲೇ ತಂದೆಯ ಬರ್ಬರ ಹತ್ಯೆಯಾಗಿದ್ದು, ಕುಡಿದ ನಶೆಯಲ್ಲಿ ಪಾಪಿ ಮಗ ತಂದೆಯನ್ನು ಕೊಲೆ ಮಾಡಿರುವ ಘಟನೆ ಹಾಸನ ಜಿಲ್ಲೆಯ ಬೇಲೂರು ತಾಲ್ಲೂಕಿನ ಲಿಂಗಪುರ ಗ್ರಾಮದಲ್ಲಿ ನಡೆದಿದೆ ಮೃತರನ್ನು ಶಶಿಧರ್ (58) ಎಂದು ತಿಳಿದುಬಂದಿದೆ. ಕಂಠಪೂರ್ತಿ ಕುಡಿದು ತಂದೆ ಜೊತೆಗೆ ದಿನೇಶ್ ಜಗಳವಾಡಿದ್ದಾನೆ. ಮಾತಿಗೆ ಮಾತು ಬೆಳೆದು ಮಗನಿಂದ ತಂದೆಯ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದು ಪಾಪಿ ಪುತ್ರ ದಿನೇಶ್ ಹತ್ಯೆ ಗೈದಿದ್ದಾನೆ. ಈ ವೇಳೆ ಗಾಬರಿಗೊಂಡು ದಿನೇಶ್ ತಾಯಿ ಮನೆಯಿಂದ ಸಹೋದರನ ಮನೆಗೆ ಹೋಗಿದ್ದಾರೆ. ಇತ್ತ ದಿನೇಶ್ ಕೊಲೆ ಮಾಡಿದ ತಂದೆಯನ್ನು ಹೃದಯಾಘಾತವಾಗಿದೆ ಎಂದು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾನೆ. ಬಳಿಕ ಆಸ್ಪತ್ರೆಯಿಂದ ಬಂದು ಅಂತ್ಯಕ್ರಿಯೆಗೂ ಕೂಡ ಗಣೇಶ ಸಿದ್ಧತೆ ಮಾಡಿಕೊಂಡಿದ್ದ ಎನ್ನಲಾಗಿದೆ.

# ಮೇತುವೆ ಪಿಲ್ಲರ್ ಅಳವಡಿಕೆ: ಸಹಕಾರ ಕೋರಿಕೆ

## ಕ್ಲಬ್ ರಸ್ತೆಯನ್ನು ಬಂದ್ ಮಾಡಿ ಕಾಮಗಾರಿ ನಡೆಸಲು ಅನುಕೂಲ ಮಾಡಿಕೊಡುವಂತೆ ಹೆದ್ದಾರಿ ಪ್ರಾಧಿಕಾರದ ಮೂಲಕ ಮನವಿ

• ಉದಯವಾಹಿನಿ, ಹುಬ್ಬಳ್ಳಿ

ಮೂರು ತಿಂಗಳಿನಿಂದ ಸ್ಥಗಿತಗೊಂಡಿದ್ದ ಮೇತುವೆ ಕಾಮಗಾರಿ ಮತ್ತೆ ಪುನರಾರಂಭವಾಗಿದೆ. ಎರಡು ದಿನಗಳಿಂದ ಹಳೇ ಬಸ್‌ನಿಲ್ದಾಣದ ಎದುರಿನ ಅಯೋಧ್ಯಾ ಹೋಟೆಲ್ ಮುಂಭಾಗ ಪಿಲ್ಲರ್‌ಗಳಿಗೆ ಸ್ಲಾಬ್ ಅಳವಡಿಸುವ ಕಾಮಗಾರಿ ನಡೆಯುತ್ತಿದೆ. ಕೋರ್ಟ್ ವೃತ್ತದಿಂದ ದೇಸಾಯಿ ವೃತ್ತದವರೆಗೆ ನಿರ್ಮಾಣವಾದ ಮೇತುವೆಯ ಪಿಲ್ಲರ್‌ಗಳಿಗೆ ಸ್ಲ್ಯಾಬ್‌ಗಳನ್ನು ಅಳವಡಿಸಿ ಕಾಮಗಾರಿಗೆ ವೇಗ ನೀಡಲು ಗುತ್ತಿಗೆ ಪಡೆದ ಝಂಡು ಕಂಪನಿ ನಿರ್ಧರಿಸಿದೆ.


ಈ ನಿಟ್ಟಿನಲ್ಲಿ ಕ್ಲಬ್ ರಸ್ತೆಯನ್ನು ಬಂದ್ ಮಾಡಿ ಕಾಮಗಾರಿ ನಡೆಸಲು ಅನುಕೂಲ ಮಾಡಿಕೊಡುವಂತೆ ಹೆದ್ದಾರಿ ಪ್ರಾಧಿಕಾರದ ಮೂಲಕ ಸಂಬಂಧಪಟ್ಟ ಇಲಾಖೆಗಳಿಗೆ ಮನವಿ ಮಾಡಿದೆ.

ಇದೀಗ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಹೆದ್ದಾರಿ ಪ್ರಾಧಿಕಾರ ಗುತ್ತಿಗೆ ಪಡೆದ ಕಂಪನಿ ಜೊತೆ ಮಾತುಕತೆ ನಡೆಸಿದ್ದು, ಮೊದಲ ಹಂತವಾಗಿ ವಿಜಯಪುರ ರಸ್ತೆಯ ಪಿಲ್ಲರ್‌ಗಳಿಗೆ ಸ್ಲ್ಯಾಬ್ ಅಳವಡಿಸಲು ಸೂಚಿಸಿದೆ. ಈ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಸಂಬಂಧಪಟ್ಟ ಇಲಾಖೆಗಳಿಗೆ ಪತ್ರ ಬರೆದು ರಸ್ತೆ ಬಂದ್ ಮಾಡುವಂತೆ ಕೋರಲಾಗಿದೆ. ಆ ಕುರಿತು ಅಧಿಕಾರಿಗಳ ಜೊತೆ ಸಭೆ ನಡೆಸಿ, ವಾರದಲ್ಲಿ ನಿರ್ಣಯ ತೆಗೆದುಕೊಳ್ಳಲಾಗುವುದು' ಎಂದು ಹೆದ್ದಾರಿ ಪ್ರಾಧಿಕಾರದ ಅಧಿಕಾರಿಯೊಬ್ಬರು ತಿಳಿಸಿದರು.

ಚನ್ನಮ್ಮ ವೃತ್ತದಿಂದ ಲ್ಯಾಮಿಂಗ್ಟನ್ ರಸ್ತೆಯ ಅಶೋಕಾ ಟಾವರ್‌ವರೆಗಿನ ರಸ್ತೆಯ ಅಕ್ಕ ಪಕ್ಕದ ಜಾಗವನ್ನು ಮೇತುವೆ ನಿರ್ಮಾಣಕ್ಕೆ ಸ್ವಾಧೀನ ಮಾಡಿಕೊಳ್ಳಲು ಹೆದ್ದಾರಿ ಪ್ರಾಧಿಕಾರ, ಈಗಾಗಲೇ ಜಂಟಿ ಸಮೀಕ್ಷೆ ಮೂಲಕ ಸ್ಥಳವನ್ನು ಗುರುತು ಹಾಕಿದೆ. ರಸ್ತೆ ಮಧ್ಯದಿಂದ ಅಕ್ಕಪಕ್ಕದ 18.5 ಮೀಟರ್ ಜಾಗ ಸ್ವಾಧೀನಪಡಿಸಿಕೊಳ್ಳಲು ನಿರ್ಧರಿಸಿ, ಸಂಬಂಧಪಟ್ಟ ಆಸ್ತಿ ಮಾಲೀಕರಿಗೆ ಮೂರು ನೋಟಿಸ್ ನೀಡಿ, ಎರಡು ವಾರದ ಹಿಂದಷ್ಟೇ ಸಭೆ ನಡೆಸಿದೆ. ಆಸ್ತಿ ಬಿಟ್ಟುಕೊಡುವುದಾಗಿ ಮಾಲೀಕರು ತಿಳಿಸಿದ್ದು ಸಣ್ಣಪುಟ್ಟ ಬೇಡಿಕೆಗಳನ್ನು ಈಡೇರಿಸುವಂತೆ ವಿನಂತಿಸಿದ್ದಾರೆ. ನಗರದ ಅಭಿವೃದ್ಧಿಗೆ ನಾವು ಕೈ ಜೋಡಿಸುತ್ತೇವೆ. ಆದರೆ, ಪ್ರಸ್ತುತ ಮಾರುಕಟ್ಟೆ ದರ ಗಮನದಲ್ಲಿಟ್ಟುಕೊಂಡು ತೆರವಾಗುವ ಆಸ್ತಿಗೆ ದರ ನಿಗದಿಪಡಿಪಡಿಸಿ ಪರಿಹಾರ ನೀಡಬೇಕು' ಎನ್ನುವುದು ಆಸ್ತಿ ಮಾಲೀಕರ ಆಗ್ರಹ.'ಮೇತುವೆ ಕಾಮಗಾರಿಗೆ ಸಂಬಂಧಿಸಿ ಕೆಲದಿನಗಳ ಹಿಂದೆ ಪೊಲೀಸ್, ಮಹಾನಗರ ಪಾಲಿಕೆ, ಹೆದ್ದಾರಿ ಪ್ರಾಧಿಕಾರ ಹಾಗೂ ಗುತ್ತಿಗೆ ಪಡೆದ ಕಂಪನಿ ಜೊತೆ ಸಭೆ ನಡೆಸಿ ಚರ್ಚಿಸಲಾಗಿದೆ.

ತ್ರಿಡಿ ನಕ್ಷೆಯಲ್ಲಿದ್ದಷ್ಟೇ ಜಾಗ ಸ್ವಾಧೀನ 'ಈದಾ ಮೈದಾನದ ಕಾಂಪೌಂಡ್, ಉಪನಗರ ಪೊಲೀಸ್ ಠಾಣೆ ಕಟ್ಟಡ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಪ್ರವೇಶದ್ವಾರ, ಶಿವಕೃಷ್ಣಮಂದಿರದ ಜಾಗ, ಪ್ರೆಸ್‌ಕ್ಲಬ್ ಜಾಗ, ಕೇಂದ್ರ ಗ್ರಂಥಾಲಯದ ಪ್ರವೇಶದ್ವಾರ, ಕೃಷ್ಣಭವನ ಹೋಟೆಲ್ ಜಾಗ, ಸ್ವಯಂ ರೆಸಿಡೆನ್ಸಿ, ಅಶೋಕಾ ಟಾವರ್ ಸೇರಿದಂತೆ ಲ್ಯಾಮಿಂಗ್ಟನ್ ರಸ್ತೆಯ ಅಕ್ಕಪಕ್ಕದ ಕೆಲವು ಆಸ್ತಿಗಳು ಸ್ವಾಧೀನವಾಗಲಿವೆ. ತ್ರಿಡಿ ನಕ್ಷೆಯಲ್ಲಿ ಗುರುತು ಹಾಕಿದಷ್ಟೇ ಜಾಗ ಸ್ವಾಧೀನವಾಗಲಿದೆ. ಅದಕ್ಕೆ ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ. ವಿಜಯಪುರ ರಸ್ತೆಯಲ್ಲಿನ ಕಾಮಗಾರಿ ಮುಗಿದ ತಕ್ಷಣ ಭೂಸ್ವಾಧೀನ ಪ್ರಕ್ರಿಯೆ ನಡೆಸಲು ಭೂಸ್ವಾಧೀನ ಪ್ರಾಧಿಕಾರ ನಿರ್ಧರಿಸಿದೆ' ಎಂದು ಬಲ್ಲ ಮೂಲಗಳು ತಿಳಿಸಿವೆ.

**ಮೇತುವೆ ಕಾಮಗಾರಿ ಪುನರಾರಂಭ**



ಉದಯವಾಹಿನಿ ಚಿತ್ರ


> ಎಲ್ಲೆಲ್ಲಿ ಕಾಮಗಾರಿ ನಡೆಸಲಾಗುತ್ತದೆ ಎನ್ನುವ ಮಾಹಿತಿ ನೀಡಿದರೆ ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ಸಿಬ್ಬಂದಿ ನಿಯೋಜಿಸಿ, ವಾಹನಗಳ ಸಂಚಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಪರ್ಯಾಯ ಮಾರ್ಗ ನೀಡಬಹುದು. ಒಂದು ಮಾರ್ಗವನ್ನು ಸಂಪೂರ್ಣ ಬಂದ್ ಮಾಡಿದರೆ, ಅಲ್ಲಿಯ ಕಾಮಗಾರಿ ಪೂರ್ಣಗೊಳ್ಳುವವರೆಗೆ ಪರ್ಯಾಯ ಮಾರ್ಗದ ಮೇಲೆ ವಾಹನಗಳ ಸಂಚಾರದ ಒತ್ತಡವಾಗುತ್ತದೆ. ಹೆದ್ದಾರಿ ಪ್ರಾಧಿಕಾರ ಮತ್ತು ಗುತ್ತಿಗೆ ಪಡೆದ ಕಂಪನಿ ಕಾಮಗಾರಿ ನಡೆಸುವ ಮಾಹಿತಿ ನೀಡಿದ ತಕ್ಷಣ, ಪೊಲೀಸ್ ಇಲಾಖೆ ಜೊತೆ ಸಭೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು' -ದಿವ್ಯಪ್ರಭು, ಜಿಲ್ಲಾಧಿಕಾರಿ

**ಮೂರು ತಿಂಗಳಿನಿಂದ ಕಾಮಗಾರಿ ಸ್ಥಗಿತ**

ಮೇತುವೆ ಕಾಮಗಾರಿ ವೇಳೆ ಕಬ್ಬಿಣದ ರಾಡ್ ಬಿದ್ದು ಎಎಸ್‌ಐ ಅವರು ಮೃತಪಟ್ಟಿದ್ದು, ಮುಂಜಾಗ್ರತಾ ಕ್ರಮವಾಗಿ ಕೋರ್ಟ್ ವೃತ್ತದಿಂದ ವಿಜಯಪುರಕ್ಕೆ ತೆರಳುವ ರಸ್ತೆಯಲ್ಲಿನ ವಾಹನಗಳ ಸಂಚಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕು ಎಂದು ಪತ್ರದಲ್ಲಿ ತಿಳಿಸಲಾಗಿದೆ. 'ಕೋರ್ಟ್ ವೃತ್ತದಿಂದ ದೇಸಾಯಿ ವೃತ್ತದವರೆಗಿನ ಸುಮಾರು ಆರುನೂರು ಮೀಟರ್ ಉದ್ದದ ರಸ್ತೆಯಲ್ಲಿ ಬೃಹತ್ ಪಿಲ್ಲರ್‌ಗಳನ್ನು ಅಳವಡಿಸಿ ಒಂದು ವರ್ಷ ಕಳದಿದೆ ಮೂರು ತಿಂಗಳಿನಿಂದ ಕಾಮಗಾರಿ ಸಂಪೂರ್ಣ ಸ್ಥಗಿತಗೊಂಡಿದ್ದರಿಂದ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿತ್ತು.

# ಕೋವಿಡ್ ವೇಳೆಯೂ ಇದೇ ನಾಟಕವಾಡಿದ್ದ ಬೀಜಿಂಗ್ ಸರ್ಕಾರ

## ಎಚ್‌ಎಂಪಿವಿ ವೈರಸ್: ಚೀನಾ ಸರ್ಕಾರದ ಮಹತ್ವದ ಹೇಳಿಕೆ, ಸುಮಾರು ಏಳು ಮಿಲಿಯನ್ ಜನರ ಸಾವಿಗೆ ಕಾರಣವಾಗಿದ್ದ ಕೊರೋನಾ



**ಚೀನಾದ ವಿದೇಶಾಂಗ ಇಲಾಖೆ ಸ್ಪಷ್ಟನೆ**

**ಬೀಜಿಂಗ್:** ಇಡೀ ಜಗತ್ತಿಗೆ ನರಕಸದೃಶವಾಗಿದ್ದ ಕೋವಿಡ್ ಹೆಮ್ಮಾರಿಯ ದಾಳಿಯ ಐದು ವರ್ಷದ ನಂತರ ಅದೇ ರೋಗಲಕ್ಷಣವನ್ನು ಹೊಂದಿರುವ ಎಚ್ ಎಂಪಿವಿ ವೈರಸ್, ಚೀನಾದ ಉತ್ತರ ಪ್ರಾಂತ್ಯದಲ್ಲಿ ಕಾಣಿಸಿಕೊಂಡಿದೆ. ಚೀನಾಗೆ ಪಕ್ಕವಿರುವ ಹಾಂಕಾಂಗ್ ನಲ್ಲೂ, ಎರಡು ಕೇಸ್ ವರದಿಯಾಗಿದೆ ಎನ್ನುವ ಮಾಹಿತಿಯಿದೆ.

ಕೊರೋನಾ ಜನಕರೇ ಎಚ್‌ಎಂಪಿವಿ ವೈರಸಿನ ಜನಕರು ಕೂಡಾ. ತಮ್ಮ ದೇಶದಲ್ಲಿ ಮತ್ತೊಂದು ವೈರಸ್ ಹರಡುತ್ತಿರುವ ಸುದ್ದಿ ವೈರಲ್ ಆಗುತ್ತಿದ್ದಂತೆಯೇ ಚೀನಾ ಸರ್ಕಾರ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಿದೆ. ಇದು, ಪ್ರವಾಸೋದ್ಯಮಕ್ಕೆ ಹೊಡೆತ ಬೀಳಬಾರದು ಎನ್ನುವ ದೃಷ್ಟಿಯನ್ನು ಇಟ್ಟುಕೊಂಡು ಹೊರಡಿಸಿದ ಪ್ರಕಟಣೆಯಂತಿದೆ.

ಚೀನಾದ ಆಸ್ಪತ್ರೆಗಳು ತುಂಬಿ ತುಳುಕುತ್ತಿರುವ ದೃಶ್ಯಗಳು ಮತ್ತು ವಿಡಿಯೋಗಳು ಸಾಮಾಜಿಕ ತಾಣದಲ್ಲಿ ಹರಡುತ್ತಿರುವುದರಿಂದ, ಈ ವಿಡಿಯೋಗಳು ವಿಶ್ವಾಸಕ್ಕೆ ಅರ್ಹವಾದ ವಿಡಿಯೋ ಗಳಲ್ಲ. ಇದು, ಹಳೆಯ ವಿಡಿಯೋ ಗಳು ಎಂದು ಚೀನಾದ ವಿದೇಶಾಂಗ ಇಲಾಖೆ ಸ್ಪಷ್ಟನೆಯನ್ನು ನೀಡಿದೆ. ಇಡೀ ವಿಶ್ವದಲ್ಲಿ ಸುಮಾರು ಏಳು ಮಿಲಿಯನ್ ಜನರ ಸಾವಿಗೆ ಕಾರಣವಾಗಿದ್ದ ಕೊರೋನಾ ದಾಳಿಯ ಆರಂಭಿಕ ಹಂತದಲ್ಲಿ ಇದೇ ರೀತಿ ಚೀನಾ ಹೇಳಿಕೆ ಯನ್ನು ನೀಡಿದ್ದನ್ನು ಸ್ಮರಿಸಿಕೊಳ್ಳಬಹುದು. ವಿಶ್ವವನ್ನು ದಾರಿ ತಪ್ಪಿಸುವ ಹಲವಾರು ಹೇಳಿಕೆಗಳು ಆ ವೇಳೆ ಚೀನಾ ಸರ್ಕಾರದಿಂದ ಬಂದಿತ್ತು. ಆದಾಗ್ಯೂ, ಭಾರತ ಸರ್ಕಾರದ ಆರೋಗ್ಯ ಇಲಾಖೆ ಈ ವಿಚಾರದಲ್ಲಿ ನಿಗಾ ಇಟ್ಟಿದೆ. ಯಾವುದಕ್ಕೂ ಚಳಿಗಾಲದ ಮುನ್ನೆಚ್ಚರಿಕೆಯನ್ನು ತೆಗೆದುಕೊಳ್ಳಿ ಎಂದು ಹೇಳಿದೆ.

> **ಎಚ್‌ಎಂಪಿವಿ ಅಂದರೆ ಹ್ಯೂಮನ್ ಮೆಟಾನ್ಯುಮೊವೈರಸ್. ಇದು ಎಲ್ಲಾ ವಯಸ್ಸಿನವರ ಮೇಲೆ ಪರಿಣಾಮ ಬೀರುವ ವೈರಸ್. ಚೀನಾದ ಆಸ್ಪತ್ರೆಗಳು ತುಂಬಿರುವ ವಿಡಿಯೋಗಳು ಸಾಮಾಜಿಕ ತಾಣದಲ್ಲಿ ಹರಿದಾಡುತ್ತಿರುವುದು ಭಯವನ್ನು ಹುಟ್ಟಿಸುವಂತಿದೆ. ಆದರೆ, ಈ ವಿಡಿಯೋಗಳು ಹಳೆಯದ್ದು, ಚೀನಾ ದೇಶಕ್ಕೆ ಪ್ರವಾಸಿಗರು ಬರಲು ಯಾವುದೇ ತೊಂದರೆಯಿಲ್ಲ ಎಂದು ಚೀನಾ ಸರ್ಕಾರ ಹೇಳಿದೆ.**

ಎಚ್‌ಎಂಪಿವಿ ವೈರಸಿನ ಹಾವಳಿ ಎಂದು ಏನು ಸಾಮಾಜಿಕ ಜಾಲತಾಣದಲ್ಲಿ ಫೋಟೋ/ವಿಡಿಯೋ ವೈರಲ್ ಆಗುತ್ತಿದೆಯೋ, 2001ರ ಘಟನೆಗೆ ಸಂಬಂಧಿಸಿದ್ದು ಮತ್ತು ಐದು ವರ್ಷಗಳ ಹಿಂದಿನ ಕೊರೊನಾ ವೈರಸ್ ವಿದ್ಯಮಾನಕ್ಕೆ ಸಂಬಂಧಿಸಿದ್ದೇ ಹೊರತು, ಈಗಿನ ವೈರಸ್ ದಾಳಿಯದ್ದಲ್ಲ ಎಂದು ಚೀನಾ ಸರ್ಕಾರ ಹೇಳಿದೆ. ಚಳಿಗಾಲದಲ್ಲಿ ಕೆಮ್ಮು, ಶೀತ, ಜ್ವರ, ನೆಗಡಿ ಮುಂತಾದವು ಹೆಚ್ಚಾಗಿ ಎಲ್ಲರನ್ನೂ ಕಾಡುತ್ತದೆ. ಈ ಅವಧಿಯಲ್ಲಿ ಉಸಿರಾಟದ ಸೋಂಕುಗಳು ಹೆಚ್ಚಾಗುತ್ತವೆ. ಹಾಗಾಗಿ, ವಿಶ್ವದಾದ್ಯಂತ ಸುದ್ದಿಯಾಗುತ್ತಿರುವ ಎಚ್‌ಎಂಪಿವಿ ವೈರಸಿನ ಪ್ರಭಾವದದ್ದಲ್ಲ ಎನ್ನುವ ಸ್ಪಷ್ಟನೆಯನ್ನು ನೀಡಿದೆ.

> ■ ಚೀನಾದ ಆಸ್ಪತ್ರೆಗಳು ತುಂಬಿ ತುಳುಕುತ್ತಿರುವ ದೃಶ್ಯಗಳು ಮತ್ತು ವಿಡಿಯೋಗಳು ಹಳೆಯದ್ದು
>
> ■ ಭಾರತೀಯರು ಎಚ್‌ಎಂಪಿವಿ ವೈರಸ್ ಬಗ್ಗೆ ಪ್ಯಾನಿಕ್ ಆಗುವ ಅವಶ್ಯಕತೆಯಿಲ್ಲ ಎಂದ ಆರೋಗ್ಯ ಇಲಾಖೆ

ದೇಶದ ನಾಗರೀಕರು ಮತ್ತು ದೇಶಕ್ಕೆ ಬರುವ ಪ್ರವಾಸಿಗರು ಯಾವುದೇ ರೀತಿಯ ಪ್ಯಾನಿಕ್ ಆಗುವ ಅವಶ್ಯಕತೆಯಿಲ್ಲ. ಇಲ್ಲಿನ ಮತ್ತು ಇಲ್ಲಿಗೆ ಬರುವವರ ಆರೋಗ್ಯದ ಬಗ್ಗೆ ಸರ್ಕಾರಕ್ಕೆ ಕಾಳಜಿಯಿದೆ. ನಮ್ಮ ದೇಶದಲ್ಲಿ ಪ್ರಯಾಣಿಸುವುದು ಸುರಕ್ಷಿತ ಎನ್ನುವ ಭರವಸೆಯನ್ನು ಚೀನಾ ಸರ್ಕಾರ ನೀಡಿದೆ.

ಕೊರೊನಾದಲ್ಲಿ ಸಾಕಷ್ಟು ಸಾವು ಸಂಭವಿಸಿದ ದೇಶಗಳಲ್ಲಿ ಭಾರತ ಕೂಡಾ ಒಂದು. ಇದನ್ನು ಗಮನದಲ್ಲಿ ಇಟ್ಟುಕೊಂಡು ಹೇಳುವುದಾದರೆ, ಭಾರತೀಯರು ಎಚ್‌ಎಂಪಿವಿ ವೈರಸ್ ಬಗ್ಗೆ ಪ್ಯಾನಿಕ್ ಆಗುವ ಅವಶ್ಯಕತೆಯಿಲ್ಲ. ಚಳಿಗಾಲದಲ್ಲಿ ಇಂತಹ ರೋಗ ಲಕ್ಷಣಗಳು ಸಾಮಾನ್ಯವಾಗಿ ಕಾಣಿಸುತ್ತದೆ ಎಂದು ಆರೋಗ್ಯ ಇಲಾಖೆಯ ಡೈರೆಕ್ಟರ್ ಜನರಲ್ ಡಾ.ಅತುಲ್ ಗೋಯೆಲ್ ಹೇಳಿದ್ದಾರೆ.

ಉಸಿರಾಟಕ್ಕೆ ಸಂಬಂಧಿಸಿದ ತೊಂದರೆಯ ಕೇಸಿನ ಸ್ಟಡಿಯನ್ನು ಡಿಸೆಂಬರ್ 2024 ಅಂತ್ಯದವರೆಗೆ ನಡೆಸಿದ್ದೇವೆ. ನಮ್ಮಲ್ಲಿರುವ ಡೇಟಾದ ಪ್ರಕಾರ, ಈ ರೋಗ ಲಕ್ಷಣದ ಪ್ರಕರಣಗಳು ಗಣನೀಯವಾಗಿ ಹೆಚ್ಚಾಗಿಲ್ಲ. ವಿಶ್ವ ಆರೋಗ್ಯ ಸಂಸ್ಥೆಯು ಈ ವಿಚಾರದಲ್ಲಿ ಅಧಿಕೃತ ಪ್ರಕಟಣೆಯನ್ನು ಹೊರಡಿಸಿಲ್ಲ ಎಂದು ಡಾ. ಗೋಯೆಲ್ ಹೇಳಿದ್ದಾರೆ.

# ಭ್ರಷ್ಟಾಚಾರ ಬಯಲಿಗೆಳೆದ ಪತ್ರಕರ್ತನ ಶವ ಪತ್ತೆ

**ಬಿಜಾಪುರ್:** ಛತ್ತೀಸ್‌ಗಡದಲ್ಲಿ ಗುತ್ತಿಗೆದಾರನೊಬ್ಬನ ಬ್ರಹ್ಮಾಂಡ ಭ್ರಷ್ಟಾಚಾರ ಬಯಲಿಗೆಳೆದಿದ್ದ 28 ವರ್ಷದ ಪತ್ರಕರ್ತನ ಶವ, ಅದೇ ಗುತ್ತಿಗೆದಾರನಿಗೆ ಸೇರಿದ ಸ್ಥಳದ ಸೆಪ್ಟಿಕ್ ಟ್ಯಾಂಕ್‌ನಲ್ಲಿ ಪತ್ತೆಯಾಗಿದೆ. ಜನವರಿ 1 ರಿಂದ ನಾಪತ್ತೆಯಾಗಿದ್ದ ಹವ್ಯಾಸಿ ಪತ್ರಕರ್ತ ಮುಕೇಶ್ ಚಂದ್ರಕಾರ್ ಮೃತದೇಹವನ್ನು ಬಿಜಾಪುರ್ ಜಿಲ್ಲೆಯ ಚಟ್ಟನಪರ ಬಸ್ತಿ ಎಂಬಲ್ಲಿ ಪತ್ತೆ ಮಾಡಲಾಗಿದೆ.

ಗುತ್ತಿಗೆದಾರ ಸುರೇಶ್ ಚಂದ್ರಕಾರ್ ಎಂಬಾತನ ಅಕ್ರಮಗಳ ವಿರುದ್ಧ ತನಿಖಾ ವರದಿಗಳನ್ನು ಪ್ರಕಟಿಸಿದ್ದ ಮುಕೇಶ್, ಬಸ್ತಾರ್‌ನಲ್ಲಿನ 120 ಕೋಟಿ ರೂ ಮೊತ್ತದ ರಸ್ತೆ ನಿರ್ಮಾಣ ಯೋಜನೆಯಲ್ಲಿ ಭಾರಿ ಅವ್ಯವಹಾರ ನಡೆದಿರುವುದನ್ನು ಬಯಲಿಗೆಳೆದಿದ್ದರು. ಈ ವರದಿಯು ಗುತ್ತಿಗೆದಾರನ ಚಟುವಟಿಕೆಗಳ ಕುರಿತಂತೆ ತನಿಖೆ ನಡೆಸಲು ಆದೇಶಿಸಲು ಸರ್ಕಾರದ ಮೇಲೆ ಒತ್ತಡ ಹೇರಲು ಯಶಸ್ವಿಯಾಗಿತ್ತು.

ಪತ್ರಕರ್ತ ಮುಕೇಶ್ ಜನವರಿ 1ರ ರಾತ್ರಿಯಿಂದ ನಾಪತ್ತೆಯಾಗಿದ್ದರು. ಗುತ್ತಿಗೆದಾರ ಸುರೇಶ್ ಚಂದ್ರಕಾರ್‌ನ ಸಹೋದರ ರಿತೇಶ್, ತನ್ನ ಕುಟುಂಬಕ್ಕೆ ಸೇರಿದ ಸ್ಥಳದೊಂದರಲ್ಲಿ ಮುಕೇಶ್ ಜತೆ ಸಭೆ ಆಯೋಜಿಸಿದ್ದ. ಆದರೆ ಇದರ ಬಳಿಕ ಮುಕೇಶ್ ಫೋನ್ ಸ್ವಿಚ್ ಆಫ್



ಆಗಿತ್ತು. ನಂತರ ಮುಕೇಶ್ ಅವರ ಅಣ್ಣ ಯುಕೇಶ್ ಚಂದ್ರಕಾರ್ ಅವರು ಪೊಲೀಸರಿಗೆ ಕಾಣೆ ದೂರು ಸಲ್ಲಿಸಿದ್ದರು. ಮಾತುಕತೆಗಾಗಿ ಚಟ್ಟನಪರದಲ್ಲಿನ ಸುರೇಶ್‌ನ ಸ್ಥಳಕ್ಕೆ ತೆರಳಿದ್ದ ಮುಕೇಶ್, ಅದೇ ಜಾಗದಲ್ಲಿನ ನೀರಿನ ಟ್ಯಾಂಕ್‌ನಲ್ಲಿ ಜನವರಿ 3ರಂದು ಶವವಾಗಿ ಪತ್ತೆಯಾಗಿದ್ದಾರೆ.

ಜನವರಿ 1ರಿಂದ ಮುಕೇಶ್ ಕಾಣೆಯಾಗಿದ್ದಾರೆ ಎಂದು ಸಂತ್ರಸ್ತನ ಸಹೋದರ ನಮಗೆ ಮಾಹಿತಿ ನೀಡಿದ್ದರು. ನಾವು ಕೂಡಲೇ ಕ್ರಮ ಕೈಗೊಂಡು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದೆವು. ಅವರ ಕೊನೆಯ ಲೊಕೇಶನ್ ಕೂಡ ದೊರಕಿತು. ಟ್ಯಾಂಕ್ ಒಂದರ ಒಳಗೆ ಮುಕೇಶ್ ಮೃತದೇಹ ಪತ್ತೆ ಮಾಡಿದ್ದೇವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ. ಬಸ್ತಾರ್ ಜಂಕ್ಷನ್ ಎಂಬ ಯೂಟ್ಯೂಬ್ ಸುದ್ದಿ ವಾಹಿನಿ ನಡೆಸುತ್ತಿದ್ದ ಮುಕೇಶ್, ಇತರೆ ಕೆಲವು ಮಾಧ್ಯಮಗಳಿಗೂ ಸುದ್ದಿ ನೀಡುತ್ತಿದ್ದರು. ಅವರ ಸಹೋದರ ಯುಕೇಶ್ ಕೂಡ ಪತ್ರಕರ್ತರಾಗಿದ್ದು, ಸಣ್ಣ ವಯಸ್ಸಿನಲ್ಲಿಯೇ ಪೋಷಕರನ್ನು ಕಳೆದುಕೊಂಡಿದ್ದರು. ಇಬ್ಬರೂ ತಮ್ಮ ವೃತ್ತಿ ಬದುಕಿನಲ್ಲಿ ಪರಸ್ಪರ ನೆರವಾಗುತ್ತಿದ್ದರು.

> **ಸಹೋದರರ ಬಂಧನ**
>
> **ತಕ್ಷಣ ಕಾರ್ಯಾಚರಣೆ ನಡೆಸಿದ ಪೊಲೀಸರು, ಹೈದರಾಬಾದ್‌ನಲ್ಲಿ ಸುರೇಶ್ ಚಂದ್ರಕಾರ್‌ನನ್ನು ಹಾಗೂ ದಿಲ್ಲಿಯಲ್ಲಿ ರಿತೇಶ್‌ನನ್ನು ಬಂಧಿಸಿದ್ದಾರೆ. ಶವವನ್ನು ಎಸೆಯಲು ಸಹಾಯ ಮಾಡಿದ ಕಾರ್ಮಿಕನೊಬ್ಬನನ್ನು ಕೂಡ ಬಂಧಿಸಲಾಗಿದೆ. ಗುತ್ತಿಗೆದಾರನ ವಲಯದಲ್ಲಿನ ಹಲವಾರು ಶಂಕಿತರನ್ನು ವಿಚಾರಣೆಗೆ ಒಳಪಡಿಸಲಾಗುತ್ತಿದೆ. ಮುಕೇಶ್ ದೇಹ ಊದಿಕೊಂಡಿದ್ದು, ತಲೆ, ಹಿಂಭಾಗದಲ್ಲಿ ಹಲವಾರು ಗಾಯಗಳಾಗಿವೆ. ಅವರನ್ನು ಬಟ್ಟೆಗಳಿಂದ ಗುರುತಿಸಲಾಗಿದೆ.**

# ಇಂದು ಭಾರತಕ್ಕಾಗಮಿಸುತ್ತಿದ್ದಾರೆ ಅಮೆರಿಕ ರಾಷ್ಟ್ರೀಯ ಭದ್ರತಾ ಸಲಹೆಗಾರ ಸುಲ್ಲಿವಾನ್

**ವಾಷಿಂಗ್ಟನ್:** ಇಂದು ಅಮೆರಿಕ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾನ್ ಭಾರತಕ್ಕೆ ಆಗಮಿಸುತ್ತಿದ್ದು, ಅವರು ಭಾರತದ ಸಹವರ್ತಿ ಅಜಿತ್ ದೋವಲ್ ಮತ್ತಿತರ ಉನ್ನತ ಅಧಿಕಾರಿಗಳನ್ನು ಭೇಟಿಯಾಗುತ್ತಿದ್ದಾರೆ. ತಮ ಎರಡು ದಿನಗಳ ಭಾರತ ಭೇಟಿ ಸಮಯದಲ್ಲಿ ಅವರು ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳನ್ನು ಬಗೆಹರಿಸುವ ಕುರಿತಂತೆ ಮಹತ್ವದ ಮಾತುಕತೆ ನಡೆಸಲಿದ್ದಾರೆ.

ಅಮೆರಿಕದ ಅತ್ಯಂತ ಕಿರಿಯ ರಾಷ್ಟ್ರೀಯ ಭದ್ರತಾ ಸಲಹೆಗಾರ ಎಂಬ ಕೀರ್ತಿಗೆ ಒಳಗಾಗಿರುವ ಸುಲ್ಲಿವಾನ್ ಅವರು ತಮ ಅಧಿಕಾರವಧಿಯ ಕೊನೆ ದಿನಗಳಲ್ಲಿ ಭಾರತ ಪ್ರವಾಸ ಕೈಗೊಂಡಿರುವುದು ಕುತೂಹಲ ಕೆರಳಿಸಿದೆ.

ಈ ಭೇಟಿಯ ಸಮಯದಲ್ಲಿ ಇಬ್ಬರು ರಾಷ್ಟ್ರೀಯ ಭದ್ರತಾ ಸಲಹೆಗಾರರು ಕಳೆದ ನಾಲ್ಕು ವರ್ಷಗಳಲ್ಲಿ ನಾವು ಸಾಧಿಸಿದ ಪ್ರಗತಿಯ ಬಗ್ಗೆ ಪರಿಶೀಲನೆ ನಡೆಸಲಿದ್ದಾರೆ. ಇದು ಈ ಸಂಬಂಧದಲ್ಲಿ ಐತಿಹಾಸಿಕ ಮತ್ತು ಪರಿವರ್ತನೆಯ ಅವಧಿಯಾಗಿದೆ



> **ಇದು ನಮ ಪಾಲುದಾರಿಕೆಯ ವಿಸ್ತಾರದಾದ್ಯಂತ ಹಲವಾರು ಸಮಸ್ಯೆಗಳನ್ನು ಒಳಗೊಳ್ಳುತ್ತದೆ, ಆದರೆ ರಕ್ಷಣೆಯಿಂದ ಬಾಹ್ಯಾಕಾಶದಿಂದ ಕತಕ ಬುದ್ಧಿಮತ್ತೆಯವರೆಗಿನ ಡೊಮೇನ್‌ಗಳ ವ್ಯಾಪ್ತಿಯಾದ್ಯಂತ ನಾವು ಹೊಂದಿರುವ ಕಾರ್ಯತಂತ್ರದ ತಂತ್ರಜ್ಞಾನದ ಸಹಕಾರದ ಮೇಲೆ ನಿರ್ದಿಷ್ಟ ಗಮನವನ್ನು ಕೇಂದ್ರೀಕರಿಸುತ್ತದೆ ಎಂದು ಅವರು ತಿಳಿಸಿದ್ದಾರೆ.**

ಆದರೆ ಪ್ರಮುಖವಾದ ಕೆಲವು ನಡೆಯುತ್ತಿರುವ ಉಪಕ್ರಮಗಳನ್ನು ಅಂತಿಮಗೊಳಿಸುವುದನ್ನು ಮುಂದುವರಿಸುತ್ತದೆ.

ಆಡಳಿತದ ಅಂತ್ಯದ ಮೂಲಕ ನಮ ತಂತ್ರಜ್ಞಾನ ಸಹಕಾರವನ್ನು ಮುಂದುವರಿಸಲು ಮತ್ತು ಮುಂಬರುವ ತಂಡದೊಂದಿಗೆ ನಾವು ಆಶಿಸಲಾಗಿದೆ.

# ವಿಮಾನ ನಿಲ್ದಾಣಕ್ಕೆ ಹೋಗುವ ರಸ್ತೆಯಲ್ಲಿ 84 ಪಿಲ್ಲರ್ಸ್ ಆಫ್ ಫೇತ್ ಕಂಬಗಳ ನಿರ್ಮಾಣ

**ಲಖ್ನೋ:** ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಜ.13ರಿಂದ ಫೆ.26ರವರೆಗೆ ನಡೆಯಲಿರುವ ಮಹಾ ಕುಂಭ ಮೇಳಕ್ಕೆ ಭರದ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಈ ಹಿನ್ನಲೆಯಲ್ಲಿ ಉತ್ತರಪ್ರದೇಶ ಸರ್ಕಾರವು ವಿಮಾನ ನಿಲ್ದಾಣಕ್ಕೆ ಹೋಗುವ ರಸ್ತೆಯಲ್ಲಿ 84 ಪಿಲ್ಲರ್‌ಗಳನ್ನು ಸ್ಥಾಪಿಸುತ್ತಿದೆ. ಕೆಂಪು ಮರಳುಗಲ್ಲಿನಿಂದ ಮಾಡಿದ ಈ ಕಂಬಗಳಿಗೆ ಪಿಲ್ಲರ್ಸ್ ಆಫ್ ಫೇತ್ ಎಂದು ಹೆಸರಿಸಲಾಗಿದೆ.

ಸುಮಾರು 17 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈ ಕಂಬಗಳ ಮೇಲೆ 108 ಶಿವ ನಾಮಗಳನ್ನು ಬರೆಯಲಾಗಿದೆ. ಹಾಗೆಯೇ ಸನಾತನದ ಪ್ರತೀಕವಾದ ಕಲಶವನ್ನು ಸಹ ಎಲ್ಲಾ



ಕಂಬಗಳ ಮೇಲೆ ಇರಿಸಲಾಗಿದೆ. ಈ ಕಂಬಗಳನ್ನು ಜೋಡಿಸುವುದರಲ್ಲಿ ನಿಜವಾದ ಕುಶಲತೆ ಇದೆ. ವಾಸ್ತವವಾಗಿ ಈ 84 ಕಂಬಗಳನ್ನು ನಾಲ್ಕು ಭಾಗಗಳಲ್ಲಿ ಅಳವಡಿಸಲಾಗುತ್ತಿದೆ. ಈ ನಾಲ್ಕು ಭಾಗಗಳು ಸನಾತನ ಧರ್ಮದ ನಾಲ್ಕು ವೇದಗಳು, ನಾಲ್ಕು ಆಶ್ರಮಗಳು, ನಾಲ್ಕು ವರ್ಣಗಳು ಮತ್ತು ನಾಲ್ಕು ದಿಕ್ಕುಗಳನ್ನು ಪ್ರತಿನಿಧಿಸುತ್ತವೆ. ಇಂತಹ ಪರಿಸ್ಥಿತಿಯಲ್ಲಿ ಒಮೆ ಈ ಕಂಬಗಳ ಪ್ರದಕ್ಷಿಣೆ ಮುಗಿದರೆ 84 ಲಕ್ಷ ಜನಗಳ ಯಾತ್ರೆ ಪೂರ್ಣಗೊಳ್ಳಲಿದೆ. ಪ್ರತಿ ಕಂಬದ ಮೇಲೆ ಶಿವನ 108 ಹೆಸರುಗಳನ್ನು ದಾಖಲಿಸಲಾಗಿದೆ ಮತ್ತು ಈ ಹೆಸರುಗಳನ್ನು ನಾಲ್ಕು ಭಾಗಗಳಲ್ಲಿ ಬರೆಯಲಾಗಿದೆ ಎಂದು ಹೇಳಲಾಗುತ್ತದೆ.

> **ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅಮೃತ್ ಅಭಿಜತ್ ಪ್ರಕಾರ, ರಾಜಸ್ಥಾನದ ಬನ್ಸಿ ಪಹಾರ್ಪುರದಲ್ಲಿ ಈ ಕಂಬಗಳನ್ನು ನಿರ್ಮಿಸಲಾಗಿದೆ ಮತ್ತು ಪ್ರತಿಯೊಂದಕ್ಕೂ ಸುಮಾರು 20 ಲಕ್ಷ ರೂಪಾಯಿ ವೆಚ್ಚವಾಗಿದೆ. ಯಾವುದೇ ವ್ಯಕ್ತಿ ಈ ಕಂಬಗಳಿಗೆ ಪ್ರದಕ್ಷಿಣೆ ಹಾಕಿದಾಗ, ಅವರು 84 ಲಕ್ಷ ಜನರು ಯಾತ್ರೆಯನ್ನು ಪೂರ್ಣಗೊಳಿಸಿದ ಅನುಭವ ಹೊಂದುತ್ತಾರೆ ಎಂದರು.**

ಹೀಗಾಗಿ ಈ 84 ಸ್ತಂಭಗಳ ಕ್ರಾಂತಿ ಬ್ರಹಾಂಡದ ಕ್ರಾಂತಿಗೆ ಸಮಾನವಾಗಿರುತ್ತದೆ ಎಂದು ಮಹಾಕುಂಭದಿಂದ ವಿಮಾನ ನಿಲ್ದಾಣಕ್ಕೆ ಹೋಗುವ ಮಾರ್ಗದಲ್ಲಿ ಈ ಕಂಬಗಳನ್ನು ಅಳವ ಡಿಸಿರುವ ಸಂಸ್ಥೆಯ ಅಧಿಕಾರಿಗಳು ತಿಳಿಸಿದ್ದಾರೆ. ವಾಸ್ತವವಾಗಿ ಆತವು ಯಾವಾಗಲೂ ತನ್ನದೇ ಆದ ಅಸ್ತಿತ್ವವನ್ನು ಹುಡುಕುತ್ತದೆ. ಇದಕ್ಕಾಗಿ ಅವರು ವಿವಿಧ ಅವತಾರಗಳಲ್ಲಿ 84 ಲಕ್ಷ ಬಾರಿ ಭೂಮಿಗೆ ಬರಬೇಕು. ಪುರಾಣದ ನಂಬಿಕೆಗಳ ಪ್ರಕಾರ, ಈ ಸಂಪೂರ್ಣ ಚಕ್ರವನ್ನು 21 ಲಕ್ಷದ ನಾಲ್ಕು ವರ್ಗಗಳಾಗಿ ವಿಂಗಡಿಸಲಾಗಿದೆ.

ಹಾಗೆಯೇ, ಆತವು ಮಾನವ ದೇಹವನ್ನು ಪ್ರವೇಶಿಸಿದಾಗ, ಅದು ನಾಲ್ಕು ಪುರುಷಾರ್ಥಗಳನ್ನು ಪಡೆಯಲು ಬ್ರಹಚಾರಿ, ಗೃಹಸ್ಥ, ವಾನಪ್ರಸ್ಥ, ಸಂನ್ಯಾಸದಂತಹ ಆಶ್ರಮಗಳ ಮೂಲಕ ಹಾದು ಹೋಗಬೇಕು. ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ. ಅಂತೆಯೇ, ಈ ನಂಬಿಕೆಯ ಸ್ತಂಭಗಳು ಆತಕ್ಕೆ ಶಿವನ ಕೃಪೆಯಿಂದ, ಅದು ವಿಘಟನೆಗಳಿಂದ ಮುಕ್ತವಾಗುತ್ತದೆ ಮತ್ತು ಅಂತಿಮ ಗಮ್ಯಸ್ಥಾನವನ್ನು ತಲುಪುತ್ತದೆ ಎಂದು ಭರವಸೆ ನೀಡುತ್ತದೆ ಎಂದು ವಿವರಿಸಿದ್ದಾರೆ.

# ಮೈಕ್ ಜಾನ್ಸ್‌ನ ಅಮೆರಿಕ ಹೌಸ್ ಆಫ್ ಸ್ಪೀಕರ್

**ವಾಷಿಂಗ್ಟನ್:** ಅಮೆರಿಕಾದ ಹೌಸ್ ಆಫ್ ಸ್ಪೀಕರ್ ಆಗಿ ಮೈಕ್ ಜಾನ್ಸನ್ ಮರು ಆಯ್ಕೆಯಾಗಿದ್ದಾರೆ. ತೀವ್ರ ಕುತೂಹಲ ಕೆರಳಿಸಿದ್ದ ಚುನಾವಣೆಯಲ್ಲಿ ಮತ್ತೊಮ್ಮೆ ಆಯ್ಕೆಯಾಗುವಲ್ಲಿ ಯಶಸ್ವಿಯಾಗಿದ್ದಾರೆ.



ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೋನಾಲ್ಡ್ ಟ್ರಂಪ್ ಅವರು ಅಮೇರಿಕಾ ಅಧ್ಯಕ್ಷರಾಗಿ ಚುನಾಯಿತರಾಗಿದ್ದು ಇದೇ 20 ರಂದು ಅಮೇರಿಕಾದ 47ನೇ ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರಕ್ಕೆ ಇನ್ನೂ ಕೆಲವೇ ದಿನ ಬಾಕಿ ಉಳಿಸಿದೆ. ಈ ನಡುವೆ ಅವರದೇ ಪಕ್ಷದ ಮೈಕ್ ಜಾಕ್ಸನ್ ಹೌಸ್ ಆಫ್ ಸ್ಪೀಕರ್ ಆಗಿ ಆಯ್ಕೆಯಾಗಿದ್ದಾರೆ. ಮೈಕ್ ಜಾಕ್ಸನ್ ಮರು ಆಯ್ಕೆಯ ಮೂಲಕ ಹೌಸ್ ಆಫ್ ಸ್ಪೀಕರ್‌ನಲ್ಲಿ ರಿಪಬ್ಲಿಕನ್ ಹಿಡಿತ ಮತ್ತಷ್ಟು ಬಿಗಿಯಾಗಿದೆ. ನೂತನ ಸ್ಪೀಕರ್ ಆಯ್ಕೆಗೆ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅನುಮೋದನೆ ನೀಡಿದ್ದಾರೆ.

ಸ್ಪೀಕರ್ ಆಯ್ಕೆಯಲ್ಲಿ ಮೈಕ್ ಜಾಕ್ಸನ್ ಕೇವಲ ಎರಡು ಮತಗಳ ಅಂತರದಿಂದ ಹುದ್ದೆ ಕಳೆದುಕೊಳ್ಳುವ ಹಂತಕ್ಕೆ ಬಂದಿದ್ದರು. ಕೊನೆಗೆ , ಕೆಲವು ಲಾಬಿಯ ನಂತರ ಮತ್ತೊಮ್ಮೆ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ

ಹೌಸ್ ಸ್ಪೀಕರ್ ವಾಷಿಂಗ್ಟನ್‌ನ ಅತ್ಯಂತ ಶಕ್ತಿಶಾಲಿ ಹುದ್ದೆಗಳಲ್ಲಿ ಒಂದಾಗಿದೆ. ಅಮೇರಿಕಾದ ಕಾಂಗ್ರೆಸ್‌ನ ಕೆಳಚೇಂಬರ್ ಅನ್ನು ನಿಯಂತ್ರಿಸುತ್ತದೆ ಮತ್ತು ಅಮೇ ರಿಕಾದ ಉಪಾಧ್ಯಕ್ಷರ ನಂತರ ಅಧ್ಯಕ್ಷ ಸ್ಥಾನ ಹೌಸ್ ಆಫ್ ಸ್ಪೀಕರ್ ಗೆ ಇದೆ.

ಸ್ಪೀಕರ್‌ಗೆ ಮತ ಚಲಾಯಿಸಲು ಅಭ್ಯರ್ಥಿ ಸದನದ ಬಹುಮತದ ಬೆಂಬಲ ಪಡೆಯಬೇಕು. 218 ಮತಗಳು. ಆದರೆ ಹೌಸ್‌ನಲ್ಲಿ ರಿಪಬ್ಲಿಕನ್ ಬಹುಮತದ ಕಾರಣ, ಮೈಕ್ ಜಾನ್ಸನ್ ಇಬ್ಬರು ರಿಪಬ್ಲಿಕನ್ನರ ವಿರೋಧದಿಂದ ಹುದ್ದೆ ಕಳೆದುಕೊಳ್ಳುವ ಭೀತಿಯಲ್ಲಿದ್ದರು. ಆ ಬಳಿಕ ನಡೆದ ರಾಜಿ ಸಂಧಾನದ ಬಳಿಕ ಮತ್ತೆ ಸ್ಪೀಕರ್ ಆಗಿ ಆಯ್ಕೆಯಾಗಿದ್ದಾರೆ. ಸ್ಪೀಕರ್ ಆಗಿ ಆಯ್ಕೆಯಾದ ಬಳಿಕ ಪ್ರತಿಕ್ರಿಯೆ ನೀಡಿದ ಮೈಕ್ ಜಾಕ್ಸನ್, ಮತ್ತೊಮ್ಮೆ ಹೌಸ್ ಆಫ್ ಸ್ಪೀಕರ್ ಆಗಿ ಆಯ್ಕೆ ಮಾಡಲು ಸಹಕಾರ ನೀಡಿದ ಎಲ್ಲಾ ಸೆನೆಟರ್‌ಗಳಿಗೆ ಕೃತಜ್ಞತೆ ಸಲ್ಲಿಸುವುದಾಗಿ ಅವರು ತಿಳಿಸಿದ್ದಾರೆ. ದಕ್ಷಿಣ ಕೆರೊಲಿನಾ ಕಾಂಗ್ರೆಸ್ ಮ್ಯಾನ್ ರಾಲ್ಫ್ ನಾರ್ಮನ್ ಮತ್ತು ಟೆಕ್ಸಾಸ್ ಕಾಂಗ್ರೆಸ್ ಮನ್ ಕೀತ್ ಸೆಲ್ಫ್‌ಮ ಮತ್ತು ಮತ್ತೊಬ್ಬರು ಸ್ಪೀಕರ್ ಆಗಿ ಕಾರ್ಯನಿರ್ವಹಿಸುವ ಉತ್ಸಾಹದಲ್ಲಿದ್ದರು., ಕೊನೆಗೂ ಅವರ ಆಸೆ ಕೈಗೂಡೆ ಮೈಕ್ ಜಾಕ್ಸನ್ ಸ್ಪೀಕರ್ ಆಗಿ ಆಯ್ಕೆಯಾಗಿದ್ದಾರೆ.

# ಕೋಮು ಸಂಘಟನೆಗಳ ಜೊತೆ ಕೈ ಜೋಡಿಸಿದ ಕಾಂಗ್ರೆಸ್


**ಮಲಪ್ಪುರಂ:** ಕಾಂಗ್ರೆಸ್ ಮಿತ್ರಪಕ್ಷ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಐಯುಎಂಎಲ್ ಜಮಾತ್-ಎ-ಇಸ್ಲಾಮಿ, ಎಸ್ ಡಿಪಿಐನಂತಹ ಕೋಮುವಾದಿ ಸಂಘಟನೆಗಳ ದಾಳವಾಗಿದೆ ಎಂದು ಕೇರಳ ಮುಖ್ಯಮಂತ್ರಿ ವ ಪಿಣರಾಯಿ ವಿಜಯನ್ ಆರೋಪಿಸಿದ್ದಾರೆ.

ಜಮಾತ್ ಎ ಇಸ್ಲಾಮಿ, ಎಸ್ ಡಿಪಿಐ ಮೇಲೆ ಭಯೋತ್ಪಾದನೆ, ಕೋಮುಗಲಭೆ ನಡೆಸಿದ ಆರೋಪಿಗಳಿವೆ. ಅಂತಹ ಸಂಘಟನೆಗಳೊಂದಿಗೆ ಮುಸ್ಲಿಂ ಲೀಗ್ ಕೈಜೋಡಿಸುತ್ತಿದೆ ಎಂದು ದೂರಿದ್ದಾರೆ.

ಮಲಪ್ಪುರಂನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಪಿಣರಾಯಿ ವಿಜಯನ್ ಅವರು ಮುಸ್ಲಿಂ ಲೀಗ್ ಕೋಮುವಾದಿ ಶಕ್ತಿಗಳಿಗೆ ಶರಣಾಗುವ ಸ್ಥಿತಿಯಲ್ಲಿದೆ. ಇದೇ ಪ್ರವೃತ್ತಿ ಮುಂದುವರಿದರೆ ಲೀಗ್ ಅನ್ನೇ ದುರುಳರು ಕಬಳಿಸುತ್ತಾರೆ. ಇಂತಹ ರಾಜಕೀಯದ ಅಪಾಯವನ್ನು ಗುರುತಿಸಲು ವಿಫಲವಾದರೆ, ಮುಸ್ಲಿಂ ಲೀಗ್ ವಿನಾಶಕಾರಿ ಪರಿಣಾಮಗಳಿಗೆ ಕಾರಣವಾಗಬಹುದು ಎಂದು ಎಚ್ಚರಿಕೆ ನೀಡಿದರು. ಇದು ಮುಂದಿನ ದಿನಗಳಲ್ಲಿ ದೊಡ್ಡ ಪರಿಣಾಮಗಳಿಗೆ ಕಾರಣವಾಗಲಿದೆ. ಈ ಬಗ್ಗೆ ಎಚ್ಚರಿಕೆ ವಹಿಸುವುದು ಅಗತ್ಯ ಎಂದಿದ್ದಾತೆ.

ಕಾಂಗ್ರೆಸ್ ನಾಯಕರು ಮತ್ತು ಕಾರ್ಯಕರ್ತರು ಬಿಜೆಪಿಗೆ ಸೇರುತ್ತಿದ್ದಾರೆ. ಸಂಘ ಪರಿವಾರದ ಕಾರ್ಯಗಳನ್ನು ಬಹಿರಂಗವಾಗಿ ಪ್ರಶಂಸಿಸುತ್ತಿದ್ದಾರೆ. ಇದೆಲ್ಲವನ್ನೂ ಆ ಪಕ್ಷವು ನಿಯಂತ್ರಿಸಿಲ್ಲ. ಹಿಂದಿನ ತಪ್ಪುಗಳಿಂದ ಆ ಪಕ್ಷವು ಏನನ್ನೂ ತಿದ್ದಿಕೊಂಡಿಲ್ಲ ಎಂದು ಅವರು ಕುಟುಕಿದರು. ಬಿಜೆಪಿಯನ್ನು ಟೀಕಿಸಿದ ವಿಜಯನ್, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ಅವಮಾನಿಸಿದ್ದಾರೆ. ಕೇಂದ್ರ ಸರ್ಕಾರವು ಕಾಂಗ್ರೆಸ್‌ನ ನೀತಿಗಳನ್ನೇ ಅನುಸರಿಸುತ್ತಿದೆ. ಉದಾರೀಕರಣದಂತಹ ನೀತಿಗಳನ್ನು ಪರಿಚಯಿಸುವುದು ತಪ್ಪು ಎಂದು ಕಾಂಗ್ರೆಸ್‌ಗೆ ಈಗಲಾದರೂ ಅರಿವಾಗಿದೆಯೇ ಎಂದಿದ್ದಾರೆ.

ಕೇಂದ್ರ ಸರ್ಕಾರವು ತನ್ನ ವೈಫಲ್ಯಗಳಿಂದ ಸಾರ್ವ ಜನಿಕರ ಗಮನವನ್ನು ಬೇರೆಡೆಗೆ ಸೆಳೆಯಲು ಧಾರ್ಮಿಕ ವಿಚಾರಗಳನ್ನು ಮುನ್ನೆಲೆಗೆ ತರುತ್ತದೆ. ರಾಜ್ಯ ದಲ್ಲಿ ತಮ್ಮ ಸರ್ಕಾರ ಪರ್ಯಾಯ ಉದಾರೀಕರಣ ನೀತಿಗಳನ್ನು ಜಾರಿಗೆ ತರುತ್ತಿದೆ ಎಂದು



> **ಮತಕ್ಕಾಗಿ ಕಾಂಗ್ರೆಸ್ ರಾಜಿ**
>
> **ವಿರೋದ ಪಕ್ಷಗಳ ಮೈತ್ರಿಕೂಟ ಇಂಡಿಯಾದ ಪ್ರಮುಖ ಪಕ್ಷ ಕಾಂಗ್ರೆಸ್ ವಿರುದ್ಧವೂ ವಾಗ್ದಾಳಿ ನಡೆಸಿರುವ ಮುಖ್ಯಮಂತ್ರಿ, ಕೆಲವು ಮತಗಳಿಗಾಗಿ ಕಾಂಗ್ರೆಸ್ ಯಾವುದೇ ರಾಜಿಗೂ ಸಿದ್ಧವಾಗುತ್ತದೆ ಎಂದು ಹೇಳುವ ಮೂಲಕ ಆ ಪಕ್ಷವು ಮುಸ್ಲಿಮರ ಅತಿಯಾದ ಓಲೈಕೆಯನ್ನು ಮಾಡುತ್ತಿದೆ ಎಂದು ಟೀಕಿಸಿದ್ದಾರೆ. ಒಂದು ಸಮುದಾಯದ ಕೆಲವೇ ಮತಗಳಿಗಾಗಿ ಹೊಂದಾಣಿಕೆ ಮಾಡಿಕೊಳ್ಳುವ ಕಾಂಗ್ರೆಸ್ ಮತ್ತು ಮುಸ್ಲಿಂ ಲೀಗ್‌ನ ನಿಲುವು ಅಪಾಯಕಾರಿ. ಕಾಂಗ್ರೆಸ್ ನಿಜವಾಗಿಯೂ ಕೋಮುವಾದದ ವಿರುದ್ಧ ಹೋರಾಡುವ ಪಕ್ಷವೆಂದು ಹೇಳಿಕೊಳ್ಳಬಹುದೇ ಎಂದು ಪ್ರಶ್ನಿಸಿದ್ದಾರೆ.**

# ವಿಚಾರಣೆ ನ್ಯಾಯಯುತವಾಗಿರಲಿ: ಇಡಿಗೆ ಛೀಮಾರಿ ಹಾಕಿದ ಸುಪ್ರೀಂ

## ಹರಿಯಾಣದ ಮಾಜಿ ಕಾಂಗ್ರೆಸ್ ಶಾಸಕ ಸುರೇಂದರ್ ಪನ್ವರ್ ಅವರನ್ನು ಮನಿಲಾಂಡ್ರಿಂಗ್ ಕೇಸಿನಲ್ಲಿ ಇಡಿ ಬಂಧಿಸಿತ್ತು

**ದರ್ಪ ಅಹಂಕಾರ ಬಿಡಿ**

**ಹೊಸದಿಲ್ಲಿ:** ಹರಿಯಾಣದ ಮಾಜಿ ಕಾಂಗ್ರೆಸ್ ಶಾಸಕರನ್ನು ಬಂಧಿಸಿ, ಅಮಾನವೀಯ ರೀತಿಯಲ್ಲಿ ವಿಚಾರಣೆ ನಡೆಸಿದ್ದಕ್ಕೆ ಸರ್ವೋಚ್ಚ ನ್ಯಾಯಾಲಯ ಇಡಿಗೆ ಛೀಮಾರಿ ಹಾಕಿದೆ. ದರ್ಪ, ಅಹಂಕಾರವನ್ನು ಬಿಟ್ಟು ಕೆಲಸ ನಿರ್ವಹಿಸುವಂತೆ ಕಿವಿಹಿಂಡಿದೆ. ಇದು, ಬಿಜೆಪಿ ಸರ್ಕಾರದ ಕಾರ್ಯವೈಖರಿ ಎಂದು ಕಾಂಗ್ರೆಸ್ ಕಿಡಿಕಾರಿದೆ.

ಜ. ಅಭಯ್.ಎಸ್.ಓಕಾ ಮತ್ತು ಜ.ಆಗಸ್ಟಿನ್ ಜಾರ್ಜ್ ಇದ್ದ ದ್ವಿಪಕ್ಷೀಯ ಪೀಠ, ನೀವು ನಡೆಸುವ ವಿಚಾರಣೆಯ ವೈಖರಿಯೇ ಕ್ರಮಬದ್ಧವಲ್ಲ, ಅಮಾನವೀಯ ರೀತಿಯಲ್ಲಿ ವಿಚಾರಣೆ ನಡೆಸುತ್ತಿದ್ದೀರಿ. ನಿಮ್ಮ ವಿಚಾರಣೆಯ ಶೈಲಿ ಶಾಕ್ ತರುವಂತದ್ದು ಎಂದು ಪೀಠ, ಜಾರಿ ನಿರ್ದೇಶನಾಲಯದ ಕಿವಿ ಹಿಂಡಿದೆ. ಹರ್ಯಾಣದ ಮಾಜಿ ಕಾಂಗ್ರೆಸ್ ಶಾಸಕ ಸುರೇಂದರ್ ಪನ್ವರ್ ಅವರನ್ನು ಮನಿಲಾಂಡ್ರಿಂಗ್ ಕೇಸಿನಲ್ಲಿ ಇಡಿ ಬಂಧಿಸಿತ್ತು. ಅಕ್ರಮ ಗಣಿಗಾರಿಕೆ ಸಂಬಂಧ, ಇಡಿ ಅಧಿಕಾರಿಗಳು ಪನ್ವರ್ ಅವರನ್ನು ಜುಲೈ ತಿಂಗಳಲ್ಲಿ ತಡರಾತ್ರಿ 1.40ಕ್ಕೆ ಬಂಧಿಸಿತ್ತು. ಇದಕ್ಕೂ ಮುನ್ನ, 15 ತಾಸು ಸತತ ವಿಚಾರಣೆಯನ್ನು ನಡೆಸಿ, ನಂತರ ಅರೆಸ್ಟ್ ಮಾಡಿತ್ತು.

ಬಂಧನದ ವಿಚಾರಕ್ಕೆ ಸಂಬಂಧಿಸಿದಂತೆ, ಪನ್ವರ್ ಹೈಕೋರ್ಟ್ ಮೆಟ್ಟಲೇರಿದ್ದರು. ಸೆಪ್ಟಂಬರ್ ತಿಂಗಳಲ್ಲಿ, ಪನ್ವರ್ ಅವರ ಬಂಧನ ಕಾನೂನು ಬಾಹಿ ರವೆಂದು ಜಾಮೀನು ನೀಡಿತ್ತು. ನೀವು ಬೇಕಿದ್ದಲ್ಲಿ, ಸುಪ್ರೀಂಕೋರ್ಟ್ ನಲ್ಲಿ ಮೇಲ್ಮನವಿ ಸಲ್ಲಿಸಿ ಎಂದು ಸೂಚಿಸಿತ್ತು. ಪನ್ವರ್ ಅವರನ್ನು 14.40 ನಿಮಿಷ ವಿಚಾರಣೆ ನಡೆಸಲಾಗಿತ್ತು. ಈ ವೇಳೆ, ರಾತ್ರಿಯ ಊಟಕ್ಕೆ ಅವಕಾಶವನ್ನು ನೀಡಲಾಗಿತ್ತು, ಸತತ ವಿಚಾರಣೆ ಇದಾಗಿರಲಿಲ್ಲ. ತಡರಾತ್ರಿ ವಿಚಾರಣೆ ನಡೆಸುವುದನ್ನು ಇಡಿ ಬಹುತೇಕ ಕಮ್ಮಿ ಮಾಡಿದ್ದು, ತುರ್ತು ಕೇಸಿಗೆ ಸಂಬಂಧಿಸಿದಂತೆ ಮಾತ್ರ ತಡರಾತ್ರಿ ವಿಚಾರಣೆಗೆ ಕರೆತರಲಾಗುತ್ತಿದೆ ಎಂದು ಇಡಿ ಪರ ವಕೀಲ ಜೋಹೆಬ್ ಹುಸೇನ್, ಸರ್ವೋಚ್ಚ ನ್ಯಾಯಾಲಯ ದಲ್ಲಿ ವಾದ ಮಾಡಿದ್ದರು.



> **ವಿಚಾರಣೆ ಶೈಲಿಗೆ ತೀವ್ರ ಆಕ್ಷೇಪ**
>
> **ಇಡಿ ಅಧಿಕಾರಿಗಳ ಕಾರ್ಯವೈಖರಿಗೆ ವಿಪಕ್ಷದ ನಾಯಕರು ಆಕ್ಷೇಪವನ್ನು ವ್ಯಕ್ತ ಪಡಿಸುತ್ತಲೇ ಬರುತ್ತಿದ್ದರು. ಇದಕ್ಕೆ ಪೂರಕ ಎನ್ನುವಂತೆ, ಸರ್ವೋಚ್ಚ ನ್ಯಾಯಾಲಯವು, ಇಡಿ ವಿಚಾರಣೆ ನಡೆಸುವ ಶೈಲಿಗೆ ತೀವ್ರ ಆಕ್ಷೇಪವನ್ನು ಎತ್ತಿದೆ. ದರ್ಪ, ಅಹಂಕಾರವನ್ನು ಬಿಟ್ಟು, ನ್ಯಾಯಸಮ್ಮತವಾಗಿ, ಮಾನವೀಯತೆಯಿಂದ ವಿಚಾರಣೆಯನ್ನು ನಡೆಸಿ ಎಂದು ಕಿವಿ ಹಿಂಡಿದೆ.**

> ● **15 ತಾಸು ಸತತ ವಿಚಾರಣೆಯನ್ನು ನಡೆಸಿ, ನಂತರ ಪನ್ವರ್ ಅವರನ್ನು ಇಡಿ ಅರೆಸ್ಟ್ ಮಾಡಿತ್ತು**
>
> ● **ಸರ್ಕಾರೀ ಏಜನ್ಸಿಗಳನ್ನು ಬಿಜೆಪಿ ದುರುಪಯೋಗ ಪಡಿಸಿಕೊಳ್ಳುತ್ತಿದೆ ಎನ್ನುವ ಆರೋಪ**

ಇಡಿ ಪರ ವಕೀಲರ ವಾದವನ್ನು ಪರಿಗಣಿಸದ ಸುಪ್ರೀಂ ಕೋರ್ಟ್, ಸಾಕಷ್ಟು ವಿರಾಮಗಳನ್ನು ನೀಡ ದೇ ಒಬ್ಬ ವ್ಯಕ್ತಿಯನ್ನು ಸುದೀರ್ಘ ವಿಚಾರಣೆಗೆ ಒಳ ಪಡಿಸುವ ಇಡಿ ಕಚೇರಿಯ ಉದ್ದೇಶವಾದರೂ ಏನು ಒಟ್ಟಾರೆಯಾಗಿ, ವಿಚಾರಣೆಯ ರೀತಿ ನ್ಯಾಯ ಸಮ್ಮತವಲ್ಲ ಎಂದು ವಕೀಲರ ಕಿವಿ ಹಿಂಡಿತ್ತು. ಹೈಕೋರ್ಟ್ ತನ್ನ ಆದೇಶದಲ್ಲಿ, ಸುರೇಂದರ್ ಪನ್ವರ್ ಅವರನ್ನು ಇಡಿ ಅಧಿಕಾರಿಗಳು, ಹರ್ಯಾಣದ ಗುರುಗ್ರಾಮದಲ್ಲಿರುವ ಪ್ರಾದೇಶಿಕ ಕಚೇರಿಗೆ 11ಗಂಟೆಗೆ ಬರಲು ಸೂಚಿಸಿದ್ದರು. ಅಲ್ಲಿಂದ, ಮಧ್ಯರಾತ್ರಿ 1.40ರವರೆಗೆ ವಿಚಾರಣೆಯನ್ನು ನಡೆಸಿ, ನಂತರ ಬಂಧಿಸಿತ್ತು. ಇಡಿಯ ವಿಚಾರಣೆ ಪರಿ, ಅಮಾನವೀಯತೆಯಿಂದ ಕೂಡಿದೆ ಎಂದು ಹೇಳಿತ್ತು. ಸಂವಿಧಾನದ 21ನೇ ವಿಧಿಯನ್ನು ತೀರ್ಪು ನೀಡುವ ವೇಳೆ ಉಲ್ಲೇಖಿಸಿದ್ದ ನ್ಯಾಯಾಲಯ, ವಿಚಾರಣೆ ನಡೆಸಲು ಸಮಂಜಸವಾದ ಸಮಯದ ಮಿತಿಯನ್ನು ನಿಗದಿ ಪಡಿಸುವಂತೆ, ಇಡಿ ಅಧಿಕಾರಿಗಳಿಗೆ ಸೂಚಿಸಿತು. ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮೂಲಭೂತ ಮಾನದಂಡಗಳಿಗೆ ಅನುಗುಣವಾಗಿ, ವಿಚಾರಣೆಯ ವೇಳೆ ನ್ಯಾಯಯುತ ಮತ್ತು ಮಾನವೀಯತೆಯಿಂದ ನಡೆದುಕೊಳ್ಳಲು, ನ್ಯಾಯಾಲಯ ಸೂಚಿಸಿತು. ನೀವು ವಿಚಾರಣೆ ನಡೆಸುತ್ತಿರುವ ರೀತಿಗೆ ಇನ್ನೊಬ್ಬರು ಆಕ್ಷೇಪ ಎತ್ತುವಂತೆ ಮಾಡುತ್ತಿದ್ದೀರಿ ಎಂದು ಜಾಮೀನು ಮಂಜೂರು ಮಾಡಿ, ಹೈಕೋರ್ಟ್ ಆದೇಶವನ್ನು ಎತ್ತಿ ಹಿಡಿಯಿತು. ಇಡಿ ಬಳಿ ಬಲವಾದ ಸಾಕ್ಷ್ಯಾಧಾರವಿಲ್ಲ ಎಂದು ನ್ಯಾಯಾಲಯ ತನ್ನ ತೀರ್ಪಿನಲ್ಲಿ ಹೇಳಿದೆ.

# ಮಿನಿ ನ್ಯೂಸ್

## ತಮಿಳುನಾಡಿನಲ್ಲಿ ಪಟಾಕಿ ಘಟಕ ಸ್ಫೋಟಕ್ಕೆ ಆರು ಮಂದಿ ಬಲಿ

**ಚೆನ್ನೈ:** ಪಟಾಕಿ ಘಟಕದಲ್ಲಿ ಸ್ಫೋಟ ಸಂಭವಿಸಿ ಆರು ಕಾರ್ಮಿಕರು ಮೃತಪಟ್ಟಿರುವ ಹೃದಯ ವಿದ್ರಾವಕ ಘಟನೆ ತಮಿಳುನಾಡಿನಲ್ಲಿ ಸಂಭವಿಸಿದೆ.ತಮಿಳುನಾಡಿನ ವಿರುದುನಗರದಲ್ಲಿರುವ ಪಟಾಕಿ ತಯಾರಿಕಾ ಘಟಕದಲ್ಲಿ ಶನಿವಾರ ಸಂಭವಿಸಿದ ಸ್ಫೋಟದಲ್ಲಿ ಆರು ಕಾರ್ಮಿಕರು ಸಾವನ್ನಪ್ಪಿದ್ದು, ಕೆಲವರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ರಾಸಾಯನಿಕಗಳನ್ನು ಬೆರೆಸುವ ಪ್ರಕ್ರಿಯೆಯಲ್ಲಿ ಸ್ಫೋಟ ಸಂಭವಿಸಿದೆ ಎಂದು ಶಂಕಿಸಲಾಗಿದೆ. ಸ್ಫೋಟವು ಕನಿಷ್ಠ ನಾಲ್ಕು ಕೊಠಡಿಗಳನ್ನು ನೆಲಸಮಗೊಳಿಸಿದೆ ಮತ್ತು ಸಾವುನೋವುಗಳಿಗೆ ಕಾರಣವಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪೊಲೀಸರು, ಅಗ್ನಿಶಾಮಕ ದಳ ಮತ್ತು ರಕ್ಷಣಾ ಸಿಬ್ಬಂದಿ ಸ್ಥಳಕ್ಕೆ ಧಾವಿಸಿದ್ದು, ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಫೋಟದ ಕಾರಣ ಮತ್ತು ಹಾನಿಯ ಪ್ರಮಾಣದ ಬಗ್ಗೆ ತನಿಖೆ ನಡೆಸುತ್ತಿದ್ದೇವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಅಯ್ಯಪ್ಪ ಭಕ್ತರು ಮಸೀದಿಗೆ ಭೇಟಿ ನೀಡಬಾರದು ; ರಾಜಾಸಿಂಗ್

**ಹೈದರಾಬಾದ್:** ಕೇರಳದ ಶಬರಿಮಲೆಗೆ ಭೇಟಿ ನೀಡುವ ಅಯ್ಯಪ್ಪ ಭಕ್ತರು ತಮ್ಮ ತೀರ್ಥಯಾತ್ರೆಯ ಸಮಯದಲ್ಲಿ ಮಸೀದಿಗಳಿಗೆ ಹೋಗುವುದನ್ನು ತಪ್ಪಿಸುವಂತೆ ಬಿಜೆಪಿ ಮುಖಂಡ ರಾಜಾ ಸಿಂಗ್ ಸಲಹೆ ನೀಡಿದ್ದಾರೆ. ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅವರು, ಭಕ್ತರು ಅಯ್ಯಪ್ಪ ದೀಕ್ಷಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು, ಮಸೀದಿಗೆ ಭೇಟಿ ನೀಡುವುದರಿಂದ ಅವರನ್ನು ಅಪವಿತ್ರಗೊಳಿಸಲಾಗುತ್ತದೆ ಎಂದು ಸಲಹೆ ನೀಡಿದರು. ಗೋಶಾಮಹಲ್ ಶಾಸಕರು ಮಸೀದಿಗೆ ಭೇಟಿ ನೀಡುವಂತೆ ಭಕ್ತರನ್ನು ಪ್ರೋತ್ಸಾಹಿಸುತ್ತಿರುವುದು ಷಡ್ಯಂತ್ರದ ಭಾಗವಾಗಿದೆ ಎಂದು ಅವರು ಆರೋಪಿಸಿದರು. ತೆಲಂಗಾಣ, ಆಂಧ್ರಪ್ರದೇಶದ ಮುಖ್ಯಮಂತ್ರಿಗಳಾದ ಎ ರೇವಂತ್ ರೆಡ್ಡಿ ಮತ್ತು ಎನ್ ಚಂದ್ರಬಾಬು ನಾಯ್ಡು ಅವರು ಕೇರಳ ಸರ್ಕಾರಕ್ಕೆ ಪತ್ರ ಬರೆದು ಭಕ್ತರಿಗೆ ವಸತಿ ನಿರ್ಮಿಸಲು 10 ಎಕರೆ ಜಾಗವನ್ನು ನೀಡುವಂತೆ ಕೋರಿದರು.

## ಜಾಲತಾಣದಲ್ಲಿ ಅಪ್ರಾಪ್ತರ ಖಾತೆ ತೆರೆಯಲು ಪೋಷಕರ ಒಪ್ಪಿಗೆ ಕಡ್ಡಾಯ

**ನವದೆಹಲಿ:** ಇನ್ನು ಮುಂದೆ ಅಪ್ರಾಪ್ತ ಅಂದರೆ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಸಾಮಾಜಿಕ ಮಾಧ್ಯಮದಲ್ಲಿ ಖಾತೆಯನ್ನು ತೆರೆಯಲು ಅವರ ಪೋಷಕರ ಒಪ್ಪಿಗೆಯನ್ನು ಕಡ್ಡಾಯವಾಗಿ ಪಡೆಯಬೇಕಾಗುತ್ತದೆ.ಇದಕ್ಕಾಗಿ, ಕೇಂದ್ರ ಸರ್ಕಾರವು ಡಿಜಿಟಲ್ ವೈಯಕ್ತಿಕ ಡೇಟಾ ಸಂರಕ್ಷಣಾ ಕಾಯ್ದೆ ಡಿಪಿಡಿಪಿ 2023 ರ ಅಡಿಯಲ್ಲಿ ಕರಡು ನಿಯಮಗಳನ್ನು ಸಿದ್ಧಪಡಿಸಿದೆ. ಈ ಕರಡನ್ನು ಶುಕ್ರವಾರ ಸಾರ್ವಜನಿಕರಿಗೆ ಬಿಡುಗಡೆ ಮಾಡಲಾಗಿದೆ.

ಈ ಮಹತ್ವದ ನಿರ್ಧಾರದ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಫೆಬ್ರವರಿ 18 ರವರೆಗೆ ಜನರಿಗೆ ಅವಕಾಶ ನೀಡಲಾಗಿದೆ. ಸಂಗ್ರಹಿಸಿದ ಅಭಿಪ್ರಾಯಗಳ ಆಧಾರದ ಮೇಲೆ ಅಂತಿಮ ವರದಿಯನ್ನು ಬಿಡುಗಡೆ ಮಾಡಲು ಸರ್ಕಾರ ಸಿದ್ಧವಾಗಿದೆ. ಕರಡು ವರದಿಯ ಪ್ರಕಾರ, ಮಕ್ಕಳು ಸಾಮಾಜಿಕ ಮಾಧ್ಯಮದಲ್ಲಿ ಖಾತೆಗಳನ್ನು ತೆರೆಯಲು ಪೋಷಕರ ಅನುಮತಿ ಕಡ್ಡಾಯವಾಗಿದೆ. ಹೆಚ್ಚುವರಿಯಾಗಿ, ಬಳಕೆದಾರರು ತಮ್ಮ ದಾಖಲೆಗಳನ್ನು ಅಳಿಸಲು ಮತ್ತು ದಾಖಲೆಗಳನ್ನು ಏಕೆ ಸಂಗ್ರಹಿಸಲಾಗುತ್ತಿದೆ ಎಂಬುದರ ಕುರಿತು ಮಾಹಿತಿಯನ್ನು ಪಡೆಯಲು ಮತ್ತು ಅವರ ಗೌಪ್ಯತೆಯನ್ನು ರಕ್ಷಿಸಲು ಕಂಪನಿಗಳನ್ನು ಕೇಳುವ ಹಕ್ಕನ್ನು ಹೊಂದಿದ್ದಾರೆ. ಬಹುನಿರೀಕ್ಷಿತ ಡಿಜಿಟಲ್ ವೈಯಕ್ತಿಕ ಡೇಟಾ ರಕ್ಷಣೆ ನಿಯಮಗಳ ಕರಡನ್ನು ಕೇಂದ್ರ ಸರ್ಕಾರ ಶುಕ್ರವಾರ ಬಿಡುಗಡೆ ಮಾಡಿದೆ. ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಡಿಜಿಟಲ್ ವೈಯಕ್ತಿಕ ಡೇಟಾ ಸಂರಕ್ಷಣಾ ಕಾಯ್ದೆಯ ಕರಡನ್ನು ಬಿಡುಗಡೆ ಮಾಡಿದೆ. ಸರ್ಕಾರವು ಈ ಕಾನೂನನ್ನು ಆಗಸ್ಟ್ 2023 ರಲ್ಲಿ ಸಂಸತ್ತಿನಲ್ಲಿ ಪರಿಚಯಿಸಿದೆ .

## ಸೇನಾ ನೇಮಕಾತಿ ಹೆಸರಲ್ಲಿ ವಂಚನೆ: ಆರೋಪಿ ಬಂಧನ

**ಮೀರತ್:** ನಕಲಿ ದಾಖಲೆಗಳ ಮೂಲಕ ಭಾರತೀಯ ಸೇನೆಗೆ ನೇಮಕಾತಿ ಮಾಡಿಸುವುದಾಗಿ ವಂಚನೆ ಮಾಡುತ್ತಿದ್ದ ಅಂತರರಾಜ್ಯ ಗ್ಯಾಂಗ್‌ನ ಸದಸ್ಯನೊಬ್ಬನನ್ನು ಉತ್ತರ ಪ್ರದೇಶದ ವಿಶೇಷ ಕಾರ್ಯ ಪಡೆ ಬಂಧಿಸಿದೆ.'ಆರೋಪಿ ರಾಹುಲ್ ಕುಮಾರ್‌ನನ್ನು ಸದಾರ್ ಬಜಾರ್‌ನ ಮೀರತ್ ಕಂಟ್ರೋನೆಂಟ್ ಪ್ರದೇಶದಲ್ಲಿ ಶುಕ್ರವಾರ ರಾತ್ರಿ ಬಂಧಿಸಲಾಗಿದೆ' ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ. 'ಭಾರತೀಯ ಸೇನೆಯ ನಕಲಿ ಪ್ರವೇಶ ಪತ್ರಿಕೆಯ ಐದು ಪ್ರತಿಗಳು, ಅಗ್ನಿವೀರರ ನಕಲಿ ಆಯ್ಕೆ ಪಟ್ಟಿ, ಎರಡು ಮೊಬೈಲ್ ಮತ್ತು ಒಂದು ಕಾರು ಅನ್ನು ಆರೋಪಿಯಿಂದ ವಶಪಡಿಸಿಕೊಳ್ಳಲಾಗಿದೆ' ಎಂದು ತಿಳಿಸಿದ್ದಾರೆ.

ಬಾಗ್‌ಪತ್‌ನ ಕುಮಾರ್ ಎಂಬಾತ, ನೇಮಕಾತಿಗಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಬೃಹತ್ ಮೊತ್ತದ ಹಣ ಗಳಿಸಿರುವ ಬಗ್ಗೆ ಸಿಕ್ಕಿದ ಮಾಹಿತಿ ಆಧಾರದಲ್ಲಿ ಎಸ್‌ಟಿಎಫ್ ತನಿಖೆ ಆರಂಭಿಸಿತ್ತು. 'ಬಿಹಾರದ ರಾಜ್ ಪಟೇಲ್ ಹಾಗೂ ಹರಿಯಾಣದ ಸುಮಿತ್, ಸೋಂಬಿರ್ ಅವರನ್ನು ಒಳಗೊಂಡ ಜಾಲದ ಭಾಗವಾಗಿರುವುದಾಗಿ ಆರೋಪಿಯು ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾನೆ' ಎಂದು ಪೊಲೀಸರು ಹೇಳಿದ್ದಾರೆ. ಈ ಜಾಲದಲ್ಲಿ ಇದ್ದವರು ಸೇನೆಯಲ್ಲಿ ಉದ್ಯೋಗ ಕೊಡಿಸುವುದಾಗಿ ಭರವಸೆ ನೀಡಿ ಆಕಾಂಕ್ಷಿಗಳಿಂದ ಹಣ ಪಡೆದುಕೊಳ್ಳುತ್ತಿದ್ದರು. ಕುಮಾರ್ ವಿರುದ್ಧ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಸೂರತ್: ಸೇವಾ ಶಸ್ತ್ರಾಸ್ತ್ರದಿಂದ ಗುಂಡು ಹಾರಿಸಿಕೊಂಡು ಯೋಧ ಆತ್ಮಹತ್ಯೆ

**ಸೂರತ್:** ಸೂರತ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಗೆ ಸೇರಿದ ಯೋಧರೊಬ್ಬರು ತನ್ನ ಸೇವಾ ಶಸ್ತ್ರಾಸ್ತ್ರದಿಂದ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ. ಸಿಐಎಸ್‌ಎಫ್ ಸಿಬ್ಬಂದಿ ಕಿಸಾನ್ ಸಿಂಗ್ (32) ಆತ್ಮಹತ್ಯೆಗೆ ಶರಣಾದವರು. ಇಂದು ಮಧ್ಯಾಹ್ನ 2.10ರ ಸುಮಾರಿಗೆ ವಿಮಾನ ನಿಲ್ದಾಣದ ವಾಶ್ ರೂಮ್‌ನಲ್ಲಿ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ. ತಕ್ಷಣ ಅವರನ್ನು ಖಾಸಗಿ ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ ಅಲ್ಲಿನ ವೈದ್ಯರು ಅವರು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಬಗ್ಗೆ ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದೂ ಅವರು ತಿಳಿಸಿದ್ದಾರೆ.




## ರಿಷಬ್ ಶೆಟ್ಟಿ ಬಳಿಕ ತೆಲುಗಿನ ರಾಣಾ ದಗ್ಗುಬಾಟಿ ಶೋಗೆ ಬಂದ ಮತ್ತೋರ್ವ ಕನ್ನಡಿಗ

ರಾಣಾ ದಗ್ಗುಬಾಟಿ ಅವರ 'ದಿ ರಾಣಾ ದಗ್ಗುಬಾಟಿ ಶೋ'ಗೆ ಕನ್ನಡದ ಹೀರೋ ಒಬ್ಬರ ಆಗಮನ ಆಗಿದೆ. ಇತ್ತೀಚೆಗೆ ಸೂಪರ್ ಹಿಟ್ ಆದ ಚಿತ್ರದ ಯಶಸ್ಸಿನ ನಂತರ ಈ ಆಗಮನ ನಡೆದಿದೆ. ಉಪೇಂದ್ರ ಅವರ ವಿಶಿಷ್ಟವಾದ ಆಲೋಚನೆಗಳು ಮತ್ತು ಅಭಿಪ್ರಾಯಗಳನ್ನು ಈ ಶೋನಲ್ಲಿ ಕಾಣಬಹುದು. ಅಮೆಜಾನ್ ಪ್ರೈಮ್ ವಿಡಿಯೋದಲ್ಲಿ ಈ ಎಪಿಸೋಡ್ ಪ್ರಸಾರವಾಗಲಿದೆ. ಶರ್ಮಿಳಾ ಮಾಂಡ್ರೆ ಕೂಡ ಈ ಶೋನಲ್ಲಿ ಭಾಗವಹಿಸಿದ್ದಾರೆ.

ರಾಣಾ ದಗ್ಗುಬಾಟಿ ಅವರಿಗೆ ಯಾವುದೇ ಭಾಷೆಯ ಮಿತಿ ಇಲ್ಲ. ಅವರು ಆ ರೀತಿಯ ಗಡಿಯನ್ನು ಹಾಕಿಕೊಂಡವರಲ್ಲ.

ಎಲ್ಲಾ ಚಿತ್ರರಂಗ ಒಂದು ಎಂದುಕೊಂಡವರು ಅವರು. ಈಗ ಅವರು 'ದಿ ರಾಣಾ ದಗ್ಗುಬಾಟಿ ಶೋ'ನ ನಡೆಸಿಕೊಡುತ್ತಿದ್ದಾರೆ. ಇತ್ತೀಚೆಗೆ ರಿಷಬ್ ಶೆಟ್ಟಿ ಅವರು ಈ ಕಾರ್ಯಕ್ರಮದಲ್ಲಿ ಕಾಣಿಸಿಕೊಂಡಿದ್ದರು. ರಾಣಾ ಅವರೇ ಕುಂದಾಪುರಕ್ಕೆ ತೆರಳಿ ಶೂಟ್ ಮಾಡಿದ್ದರು. ಈಗ ಮತ್ತೋರ್ವ ಕನ್ನಡಿಗನಿಗೆ ಈ ಶೋನಲ್ಲಿ ಅವಕಾಶ ಸಿಕ್ಕಿದೆ. ಅವರು ಬೇರಾರೂ ಅಲ್ಲ, ರಿಯಲ್ ಸ್ಟಾರ್ ಉಪೇಂದ್ರ. ಉಪೇಂದ್ರ ಅವರು ಇತ್ತೀಚೆಗೆ 'ಯುಐ' ಚಿತ್ರದ ಮೂಲಕ ಗೆಲುವು ಕಂಡರು. ಈ ಸಿನಿಮಾ ಸೂಪರ್ ಹಿಟ್ ಆಯಿತು. ಈ ಚಿತ್ರವನ್ನು ಕನ್ನಡದವರು ಮಾತ್ರವಲ್ಲದೆ, ಪರಭಾಷಿಗರು ಕೂಡ ಇಷ್ಟಪಟ್ಟಿದ್ದಾರೆ. ಈ ಸಿನಿಮಾದ ಕಲೆಕ್ಷನ್ ಕೂಡ ಜೋರಾಗಿದೆ. ಕನ್ನಡದ ಜೊತೆಗೆ ತೆಲುಗು ಹಾಗೂ ತಮಿಳಿನ ಪ್ರೇಕ್ಷಕರಿಗೂ ಸಿನಿಮಾ ಇಷ್ಟ ಆಗುತ್ತಿದೆ. ಅವರು ಗೆಲುವಿನ ಖುಷಿಯಲ್ಲಿ ಇದ್ದಾರೆ.

ಇದೇ ಖುಷಿಯಲ್ಲಿ ಅವರು 'ದಿ ರಾಣಾ ದಗ್ಗುಬಾಟಿ' ಶೋಗೆ ಆಗಮಿಸಿದ್ದಾರೆ. ರಾಣಾ ದಗ್ಗುಬಾಟಿ ಅವರು ನಟನಾಗಿ ಹೆಚ್ಚು ಗುರುತಿಸಿಕೊಂಡಿದ್ದಾರೆ. ಅವರು 'ಯುಐ' ಚಿತ್ರಕ್ಕಾಗಿ ಒಂದು ಪ್ರಮೋಷನಲ್ ವಿಡಿಯೋ ಕೂಡ ಮಾಡಿದ್ದರು. ಉಪೇಂದ್ರ ಜೊತೆ ಒಂದಷ್ಟು ಚರ್ಚೆಗಳನ್ನು ನಡೆಸಿದ್ದರು. ಈಗ ಉಪೇಂದ್ರ ಅವರನ್ನು ತಮ್ಮ ಶೋಗೇ ಕರೆಸಿಕೊಂಡಿದ್ದಾರೆ. ಅಮೇಜಾನ್ ಪ್ರೈಮ್ ವಿಡಿಯೋದಲ್ಲಿ ಶೋ ಪ್ರಸಾರ ಕಾಣಲಿದೆ. ಇದರ ಶೂಟ್ ಮುಂಜಾನೆ 3 ಗಂಟೆಗೆ ನಡೆದಿದೆ. ಶರ್ಮಿಳಾ ಮಾಂಡ್ರೆ ಕೂಡ ಶೂಟ್‌ನಲ್ಲಿ ಭಾಗಿ ಆಗಿದ್ದಾರೆ. ಅವರು ಸೋಶಿಯಲ್ ಮೀಡಿಯಾದಲ್ಲಿ ಫೋಟೋ ಹಂಚಿಕೊಂಡಿದ್ದಾರೆ.



## ನನಗೆ ಮದುವೆ ಆಗಿ ಇಬ್ಬರು ಮಕ್ಕಳಿದ್ದಾರೆ

ಸೊಸೈಟಿಯಲ್ಲಿ ಆಗಬಹುದಾದ ಸಡನ್ ಸುದ್ದಿಗಳಿಗೆ ಜನಸಾಮಾನ್ಯರು ಟಿವಿ, ನ್ಯೂಸ್ ಪೇಪರ್ ಗಳನ್ನು ನಂಬುವ ಕಾಲ ಮರೆಯಾಯ್ತು. ಅಂಗೈಲ್ಲಿರುವ ಮೊಬೈಲ್ ನಲ್ಲಿಯೇ ಎಲ್ಲಾ ಸುದ್ದಿಗಳು ಘಟಿಸಿದ ಕೆಲವೇ ಸೆಕೆಂಡುಗಳಲ್ಲಿ ತಲುಪಿಬಿಡುತ್ತದೆ. ಅಷ್ಟರಮಟ್ಟಿಗೆ ತಂತ್ರಜ್ಞಾನ ಬೆಳೆದು, ನೋಡುಗರೇ ನಿಬ್ಬೆರಗಾಗುವಂತೆ ಮಾಡುತ್ತಿದೆ. ಇನ್ನು ಸೋಶಿಯಲ್ ಮೀಡಿಯಾವಂತೂ ಎಲ್ಲಾ ಮಾಧ್ಯಮಗಳನ್ನು ಸೈಡ್ ಗೆ ತಳ್ಳಿ ತನ್ನ ಕಬಂಧ ಬಾಹುವಿನಿಂದ ಆಕ್ರಮಿಸಿಕೊಂಡುಬಿಟ್ಟಿದೆ.

ಆದರೆ ಸೋಶಿಯಲ್ ಮೀಡಿಯಾದಲ್ಲಿ ಪ್ರಕಟವಾಗುವ ಸುದ್ದಿಗಳು, ವಿಚಾರಗಳು ಸತ್ಯವೋ, ಸುಳ್ಳೋ ಎಂಬುದನ್ನು ಅರಿಯುವಷ್ಟರಲ್ಲಿ ಎಲ್ಲರಿಗೂ ಸುದ್ದಿಗಳು ಹರಡಿ ಮತ್ತಾವುದೋ ಪ್ರಮಾದವನ್ನು ಸೃಷ್ಟಿಸಿ ಬಿಟ್ಟಿರುತ್ತದೆ.ಇದಕ್ಕೆ ಸಂಜನಾ ಆನಂದ್ ಅವರಿಗಾದ ಅನುಭವ ಮತ್ತೊಂದು ಉದಾಹರಣೆ. ಹೌದು, ಕೆಲ ದಿನಗಳ ಹಿಂದೆ ಸಂಜನಾ ಆನಂದ್ ಅವರ ಕುರಿತು ಸುಳ್ಳು ಸುದ್ದಿಯೊಂದನ್ನು ಹಬ್ಬಿಸಲಾಗಿತ್ತು. ನಿವೇದಿತಾ ಗೌಡ ಅವರಿಂದ ದೂರವಾದ ಚಂದನ್ ಶೆಟ್ಟಿ ಜೊತೆ ಸಂಜನಾ ಮದುವೆ ಆಗಲಿದ್ದಾರೆ ಎನ್ನುವ ಸುದ್ದಿ ಅದು. ಈ ಸುದ್ದಿಗೆ ತಕ್ಷಣವೇ ಸಂಜನಾ ಆನಂದ್ ಪ್ರತಿಕ್ರಿಯೆಯನ್ನು ನೀಡಿದ್ದರು. ಚಂದನ್ ಶೆಟ್ಟಿ ಜೊತೆ ನಾನು ಮದುವೆಯಾಗುತ್ತಿರುವ ಸುದ್ದಿ ಸಂಪೂರ್ಣ ಸುಳ್ಳು ಎಂದಿದ್ದರು. ಈ ತರಹದ ಸುಳ್ಳು ಸುದ್ದಿಗಳನ್ನೆಲ್ಲ ಹಬ್ಬಿಸಬೇಡಿ ಎಂದು ಮನವಿಯನ್ನೂ ಮಾಡಿಕೊಂಡಿದ್ದರು. ಆದರೂ ಕೂಡ ಸಂಜನಾ ಆನಂದ್ ಅವರ ಕುರಿತ ಈ ಸುಳ್ಳು ಸುದ್ದಿ ಇವತ್ತು ಕೂಡ ಚಾಲ್ತಿಯಲ್ಲಿದೆ. ಸಾಲದಕ್ಕೆ ಸಂಜನಾ ಆನಂದ್ ಅವರಿಗೆ ಇಬ್ಬರು ಮಕ್ಕಳಿದ್ದಾರೆ ಎನ್ನುವ ವದಂತಿಯನ್ನು ಕೂಡ ಕೆಲವರು ಹಬ್ಬಿಸಿದ್ದಾರೆ. ಈ ಸುದ್ದಿ ಎಷ್ಟರ ಮಟ್ಟಿಗೆ ಹರಡಿಕೊಂಡಿದೆ ಅಂದರೆ ಮೊನ್ನೆ ಮೊನ್ನೆವರೆಗೆ ಸಂಜನಾ ಆನಂದ್ ಅವರ ವಿಕ್ಕಿಪೀಡಿಯಾದಲ್ಲಿ ಸಂಜನಾ ಆನಂದ್‌ಗೆ ಮದುವೆಯಾಗಿದೆ, ಇಬ್ಬರು ಮಕ್ಕಳಿದ್ದಾರೆ ಎನ್ನುವ ವಿಚಾರವನ್ನು ಉಲ್ಲೇಖಿಸಲಾಗಿತ್ತು. ಸಂಜನಾ ಆನಂದ್ ಅವರ ವಯಸ್ಸು 32 ಎಂದು ನಮೂದಿಸಲಾಗಿತ್ತು. 'ಗ್ಯಾರಂಟಿ ನ್ಯೂಸ್'ಗೆ ನೀಡಿದ ಸಂದರ್ಶನದಲ್ಲಿ ಈ ವಿಚಾರದ ಕುರಿತು ಸಂಜನಾ ಆನಂದ್ ತಮಾಷೆ ಮಾಡಿದ್ದಾರೆ. ವಿಕ್ಕಿಪೀಡಿಯಾದಲ್ಲಿ ಬರೋದನ್ನೆಲ್ಲ ನಂಬೋಕೆ ಆಗಲ್ಲ ಎಂದು ಹೇಳಿದ್ದಾರೆ.

## ಅಲ್ಲು ಅರ್ಜುನ್‌ಗೆ ಜಾಮೀನು ಮಂಜೂರು



ಪುಷ್ಪ 2 ಕಾಲ್ತುಳಿತ ಪ್ರಕರಣ ಸಂಬಂಧ ಅಲ್ಲು ಅರ್ಜುನ್‌ಗೆ ಹೈದರಾಬಾದ್‌ನ ನಾಂಪಲ್ಲಿ ಕೋರ್ಟ್ ಜಾಮೀನು ಮಂಜೂರು ಮಾಡಿದೆ. ಡಿಸೆಂಬರ್ 31ರಂದು ವಿಚಾರಣೆ ನಡೆಸಿದ್ದ ಹೈಕೋರ್ಟ್ ಇಂದಿಗೆ ಆದೇಶ ಕಾಯ್ದಿರಿಸಿತ್ತು. ಮಧ್ಯಂತರ ಬೇಲ್‌ನಲ್ಲಿದ್ದ ಅಲ್ಲು ಅರ್ಜುನ್‌ಗೆ ಇಂದು ರೆಗ್ಯುಲರ್ ಬೇಲ್ ಸಿಕ್ಕಿದೆ.

ಡಿ.4ರಂದು 'ಪುಷ್ಪ 2' ಪ್ರೀಮಿಯರ್ ವೇಳೆ, ಕಾಲ್ತುಳಿತದಿಂದ ರೇವತಿ ಎಂಬುವವರು ಸಾವನ್ನಪ್ಪಿದ್ದರು. ಈ ಹಿನ್ನೆಲೆ ಅಲ್ಲು ಅರ್ಜುನ್‌ರನ್ನು ಡಿ.13 ಹೈದರಾಬಾದ್‌ನ ಚಿಕ್ಕಡಪಲ್ಲಿ ಪೊಲೀಸರು ಬಂಧಿಸಿದ್ದರು.

ಬಳಿಕ ಅಲ್ಲು ಅರ್ಜುನ್‌ಗೆ ಮಧ್ಯಂತರ ಜಾಮೀನು ಮಂಜೂರಾಗಿತ್ತು.

## ರಾಬರ್ಟ್ ಸಿನಿಮಾಗಳಿಕೆ ಬೀಟ್ ಮಾಡುವ ಸನಿಹದಲ್ಲಿದೆ 'ಮ್ಯಾಕ್ಸ್'



ಕಿಚ್ಚ ಸುದೀಪ್ ನಟನೆಯ 'ಮ್ಯಾಕ್ಸ್' ಸಿನಿಮಾ ಉತ್ತಮ ಗಳಿಕೆ ಮಾಡುತ್ತಿದೆ. ಬಾಕ್ಸ್ ಆಫೀಸ್‌ನಲ್ಲಿ ಚಿತ್ರ ಒಳ್ಳೆಯ ಕಲೆಕ್ಷನ್ ಮಾಡಿ ಮುನ್ನುಗ್ಗುತ್ತಿದೆ. ಸಂಕ್ರಾಂತಿವರೆಗೆ ದೊಡ್ಡ ಸಿನಿಮಾಗಳ ಹವಾ ಇಲ್ಲ. ಅಲ್ಲಿವರೆಗೆ 'ಮ್ಯಾಕ್ಸ್' ಚಿತ್ರದ ಅಬ್ಬರ ಮುಂದುವರಿಯಲಿದೆ. ಈ ಸಿನಿಮಾ ಹಲವು ದಾಖಲೆಗಳನ್ನು ಪುಡಿ ಮಾಡಿದೆ. ಅದೇ ರೀತಿ, ದರ್ಶನ್ ನಟನೆಯ 'ರಾಬರ್ಟ್' ಚಿತ್ರದ ಗಳಿಕೆಯನ್ನು ಈ ಸಿನಿಮಾ ಬೀಟ್ ಮಾಡುವ ಸನಿಹದಲ್ಲಿ ಇದೆ. ರಾಬರ್ಟ್' ಚಿತ್ರದಲ್ಲಿ ದರ್ಶನ್ ನಟಿಸಿದ್ದರು. 2021ರಲ್ಲಿ ಸಿನಿಮಾ ರಿಲೀಸ್ ಆಗಿ ಸದ್ದು ಮಾಡಿತ್ತು. ಈ ಚಿತ್ರ ಬಾಕ್ಸ್ ಆಫೀಸ್‌ನಲ್ಲಿ 50 ಕೋಟಿ ರೂಪಾಯಿ ಆಸುಪಾಸಿನಲ್ಲಿ ಗಳಿಕೆ ಮಾಡಿದೆ ಎಂದು ಸ್ವತಃ ನಿರ್ಮಾಪಕ ಉಮಾಪತಿ ಶ್ರೀನಿವಾಸ್ ಅವರೇ ಹೇಳಿಕೊಂಡಿದ್ದರು. ಈಗ ಆ ಗಳಿಕೆಯನ್ನು 'ಮ್ಯಾಕ್ಸ್' ಚಿತ್ರ ಬೀಟ್ ಮಾಡುವ ಸನಿಹದಲ್ಲಿ ಇದೆ. ಸದ್ಯ 'ಮ್ಯಾಕ್ಸ್' ಚಿತ್ರದ ಗಳಿಕೆ 40 ಕೋಟಿ ರೂಪಾಯಿ ಸಮೀಪಿಸಿದೆ. ಇನ್ನೊಂದು ವಾರದಲ್ಲಿ ಸುದೀಪ್ ಸಿನಿಮಾ 'ರಾಬರ್ಟ್' ಚಿತ್ರದ ಗಳಿಕೆಯನ್ನು ಹಿಂದಿಕ್ಕಲಿದೆ ಎಂಬುದು ಬಾಕ್ಸ್ ಆಫೀಸ್ ಪಂಡಿತರ ಲೆಕ್ಕಾಚಾರ. ದರ್ಶನ್ ನಟನೆಯ ಮತ್ತೊಂದು ಸೂಪರ್ ಹಿಟ್ ಚಿತ್ರ 'ಕಾಟೇರ'ದ ಅಧಿಕೃತ ಕಲೆಕ್ಷನ್ 70 ಕೋಟಿ ರೂಪಾಯಿ ಆಸುಪಾಸಿನಲ್ಲಿ ಇದೆ.

## ರಾಕಿಂಗ್ ಟಾಕ್ಸಿಕ್ ಟೀಸರ್ ಬಿಡುಗಡೆಗೆ ಮುಹೂರ್ತ ಫಿಕ್ಸ್ ಆಯ್ತಾ



ವರ್ಷದ ಬಹುನಿರೀಕ್ಷಿತ ಸಿನಿಮಾ 'ಟಾಕ್ಸಿಕ್'. ಗೀತು ಮೋಹನ್ ದಾಸ್ ನಿರ್ದೇಶನದ ಚಿತ್ರದಲ್ಲಿ ಯಶ್ ಡಾನ್ ಪಾತ್ರದಲ್ಲಿ ನಟಿಸುತ್ತಿದ್ದಾರೆ ಎನ್ನಲಾಗ್ತಿದೆ. ಪ್ಯಾನ್ ಇಂಡಿಯಾ ಅಲ್ಲ ಪ್ಯಾನ್ ವರ್ಲ್ಡ್ ಮಟ್ಟದಲ್ಲಿ ಸಿನಿಮಾ ತೆರೆಗೆ ಬರಲಿದೆ. ಹಾಲಿವುಡ್ ದೊಡ್ಡ ಸಂಸ್ಥೆ ಜೊತೆ ಯಶ್ ಚರ್ಚಿಸುತ್ತಿದ್ದಾರೆ ಎನ್ನಲಾಗ್ತಿದೆ.
KGF ಸರಣಿ ಬಳಿಕ ವಾಟ್ ನೆಕ್ಸ್ಟ್ ಎನ್ನುವ ಪ್ರಶ್ನೆಗೆ ವರ್ಷದ ಹಿಂದೆ 'ಟಾಕ್ಸಿಕ್' ಎನ್ನುವ ಉತ್ತರ ಕೊಟ್ಟಿದ್ದರು ಯಶ್. ಆದರೆ ಸಿನಿಮಾ ಶುರುವಾಗುವುದು ತಡವಾಗಿತ್ತು. ಆಗಸ್ಟ್‌ನಲ್ಲಿ ಸಿನಿಮಾ ಸೆಟ್ಟೇರಿತ್ತು. ಈ ವರ್ಷ ಏಪ್ರಿಲ್ 10ಕ್ಕೆ ಸಿನಿಮಾ ರಿಲೀಸ್ ಎಂದು ಘೋಷಣೆ ಮಾಡಲಾಗಿತ್ತು. ಆದರೆ ಅದು ಸಾಧ್ಯವಾಗುತ್ತಿಲ್ಲ. ಸಿನಿಮಾ ಪ್ರಾರಂಭ ತಡವಾಗಿದ್ದರಿಂದ ರಿಲೀಸ್ ಡೇಟ್ ಪೋಸ್ಟ್‌ಪೋನ್ ಆಗಿದೆ. ಅಭಿಮಾನಿಗಳಂತೂ 'ಟಾಕ್ಸಿಕ್' ಅಪ್‌ಡೇಟ್ ಕೇಳಿ ಕೇಳಿ ಸುಸ್ತಾಗಿದ್ದಾರೆ. ಸಣ್ಣ ಮೋಷನ್ ಪೋಸ್ಟರ್ ಬಿಟ್ಟು ಚಿತ್ರವನ್ನು ಘೋಷಿಸಲಾಗಿತ್ತು. ಬಳಿಕ ಪೂಜೆ ನೆರವೇರಿಸಿ ಚಿತ್ರೀಕರಣ ಆರಂಭಿಸಲಾಗಿತ್ತು. ಇನ್ನುಳಿದಂತೆ ಯಾವುದೇ ಮಾಹಿತಿ ಸಿಗಲಿಲ್ಲ. 300 ರಿಂದ 400 ಕೋಟಿ ರೂ. ಬಜೆಟ್‌ನಲ್ಲಿ ಚಿತ್ರ ನಿರ್ಮಾಣ ಆಗುತ್ತಿದೆ ಎನ್ನುವ ಚರ್ಚೆ ನಡೀತಿದೆ. ಇತ್ತೀಚೆಗೆ ತಿಂಗಳ ಕಾಲ ಮುಂಬೈನಲ್ಲಿ ಚಿತ್ರೀಕರಣ ನಡೆಸಲಾಗಿತ್ತು. ನಯನತಾರ, ಕಿಯಾರಾ ಅದ್ವಾನಿ, ಹುಮಾ ಖುರೇಶಿ ಸೇರಿದಂತೆ ಜನಪ್ರಿಯ ಕಲಾವಿದರು ಚಿತ್ರದಲ್ಲಿ ನಟಿಸುತ್ತಿದ್ದಾರೆ. ಯೂರೋಪ್ ಕಲಾವಿದರು ಚಿತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. 60, 70ರ ದಶಕದ ಕಥೆ ಇದು, ಡ್ರಗ್ಸ್ ಮಾಫಿಯಾ ಸುತ್ತಾ ಸಿನಿಮಾ ಸುತ್ತುತ್ತದೆ ಎಂದು ಹೇಳಲಾಗುತ್ತಿದೆ.

## ಪಾಕ್ ವಿರುದ್ಧ ಚೊಚ್ಚಲ ದ್ವಿಶತಕ ಸಿಡಿಸಿ 10 ವರ್ಷಗಳ ಬರ ನೀಗಿಸಿದ ರಿಕಲ್ಟನ್

ದಕ್ಷಿಣ ಆಫ್ರಿಕಾ ತಂಡದ ಆರಂಭಿಕ ಬ್ಯಾಟ್ಸ್‌ಮನ್ ರಿಯಾನ್ ರಿಕಲ್ಟನ್ ಪಾಕಿಸ್ತಾನದ ವಿರುದ್ಧದ ಎರಡನೇ ಟೆಸ್ಟ್ ಪಂದ್ಯದಲ್ಲಿ ಅದ್ಭುತ ದ್ವಿಶತಕ ಸಿಡಿಸಿದ್ದಾರೆ. ಇದು ಅವರ ವೃತ್ತಿಜೀವನದ ಮೊದಲ ದ್ವಿಶತಕ ಹಾಗೂ ಈ ವರ್ಷದ ಮೊದಲ ದ್ವಿಶತಕವಾಗಿದೆ. ಈ ಭರ್ಜರಿ ಇನ್ನಿಂಗ್ಸ್‌ನಿಂದಾಗಿ ದಕ್ಷಿಣ ಆಫ್ರಿಕಾ ತಂಡವು ಮೊದಲ ಇನ್ನಿಂಗ್ಸ್‌ನಲ್ಲಿ ಭಾರೀ ಮೊತ್ತವನ್ನು ಗಳಿಸುವಲ್ಲಿ ಯಶಸ್ವಿಯಾಗಿದೆ. ನಾಯಕ ತೆಂಬ ಬವುಮಾ ಕೂಡ ಶತಕ ಸಿಡಿಸಿದ್ದಾರೆ.

ಪಾಕಿಸ್ತಾನ ವಿರುದ್ಧದ ಮೊದಲ ಟೆಸ್ಟ್ ಪಂದ್ಯವನ್ನು ಗೆದ್ದು ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ಗೆ ಅರ್ಹತೆ ಗಿಟ್ಟಿಸಿಕೊಂಡಿದ್ದ ದಕ್ಷಿಣ ಆಫ್ರಿಕಾ ತಂಡ ಇದೀಗ ಎರಡನೇ ಟೆಸ್ಟ್ ಪಂದ್ಯದಲ್ಲಿ ಅದ್ಭುತ ಪ್ರದರ್ಶನ ನೀಡುತ್ತಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡುತ್ತಿರುವ ಆಫ್ರಕಾ ತಂಡ ಮೊದಲ ಇನ್ನಿಂಗ್ಸ್‌ನಲ್ಲಿ 450 ಕ್ಕೂ ಹೆಚ್ಚು ರನ್ ಮಾಡಿ ಇನ್ನಿಂಗ್ಸ್ ಮುಂದುವರೆಸಿದೆ. ತಂಡ ಇಷ್ಟು ಬೃಹತ್ ಮೊತ್ತ ಕಲೆಹಾಕುವಲ್ಲಿ ಆರಂಭಿಕ ರಿಯಾನ್ ರಿಕಲ್ಟನ್ ಅವರ ಪಾತ್ರ ಅಪಾರವಾಗಿದೆ. ಈ ಪಂದ್ಯದಲ್ಲಿ ಆರಂಭಿಕನಾಗಿ ಕಣಕ್ಕಿಳಿದಿರುವ ರಿಯಾನ್ ರಿಕಲ್ಟನ್ ತಮ್ಮ ವೃತ್ತಿಜೀವನದ ಹಾಗೂ ಈ ವರ್ಷದ ಮೊದಲ ದ್ವಿಶತಕವನ್ನು ಸಿಡಿಸಿದ ದಾಖಲೆ ಬರೆದಿದ್ದಾರೆ.



ಪಂದ್ಯದ ಎರಡನೇ ದಿನ ರಿಕಲ್ಟನ್ 266 ಎಸೆತಗಳಲ್ಲಿ ತಮ್ಮ ಟೆಸ್ಟ್ ವೃತ್ತಿಜೀವನದ ಮೊದಲ ದ್ವಿಶತಕವನ್ನು ಪೂರೈಸಿದರು. ಇದರಲ್ಲಿ 24 ಬೌಂಡರಿ ಮತ್ತು 1 ಸಿಕ್ಸರ್ ಕೂಡ ಸೇರಿದೆ. ಇದರೊಂದಿಗೆ 9 ವರ್ಷಗಳ ನಂತರ ದಕ್ಷಿಣ ಆಫ್ರಿಕಾದ ಆಟಗಾರನೊಬ್ಬ ಟೆಸ್ಟ್ ಕ್ರಿಕೆಟ್‌ನಲ್ಲಿ ದ್ವಿಶತಕ ಬಾರಿಸಿದ ದಾಖಲೆಯನ್ನು ರಿಕಲ್ಟನ್ ಬರೆದಿದ್ದಾರೆ. ಇದಕ್ಕೂ ಮೊದಲು ಕೇಪ್ ಟೌನ್‌ನಲ್ಲಿ ನಡೆದ ಹೊಸ ವರ್ಷದ ಟೆಸ್ಟ್‌ನಲ್ಲಿ ಹಶೀಮ್ ಆಮ್ಲಾ ದ್ವಿಶತಕ ಸಿಡಿಸಿದ್ದರು. ಅಷ್ಟೇ ಅಲ್ಲ, ಪಾಕಿಸ್ತಾನದ ವಿರುದ್ಧ ದ್ವಿಶತಕ ಸಿಡಿಸಿದ ದಕ್ಷಿಣ ಆಫ್ರಿಕಾದ ನಾಲ್ಕನೇ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ರಿಕಲ್ಟನ್ ಪಾತ್ರರಾಗಿದ್ದಾರೆ.

ಇದಲ್ಲದೆ ರಿಕಲ್ಟನ್ ಚೊಚ್ಚಲ ದ್ವಿಶತಕವನ್ನು ಪೂರ್ಣಗೊಳಿಸುವ ಮೂಲಕ, ಕಳೆದ ಹತ್ತು ವರ್ಷಗಳಲ್ಲಿ ಟೆಸ್ಟ್‌ನಲ್ಲಿ ದ್ವಿಶತಕ ಗಳಿಸಿದ ಮೊದಲ ಪ್ರೋಟಿಯಸ್ ಆರಂಭಿಕ ಆಟಗಾರ ಎನಿಸಿಕೊಂಡಿದ್ದಾರೆ. ಈ ಹಿಂದೆ ಗ್ರೇಮ್ ಸ್ಮಿತ್ ಕೊನೆಯ ಬಾರಿಗೆ 2013 ರಲ್ಲಿ ತಂಡದ ಪರ ಆರಂಭಿಕನಾಗಿ ಕಣಕ್ಕಿಳಿದು ಈ ಸಾಧನೆ ಮಾಡಿದ್ದರು. ಸ್ಮಿತ್ ಕೂಡ ಪಾಕಿಸ್ತಾನ ವಿರುದ್ಧವೇ 16 ಬೌಂಡರಿ ಸಹಿತ 234 ರನ್ ಕಲೆಹಾಕಿದ್ದರು. ಪಂದ್ಯದ ವಿಚಾರಕ್ಕೆ ಬರುವುದಾದರೆ ಎರಡನೇ ದಿನದಾಟವನ್ನು ಮುಂದುವರೆಸಿರುವ ದಕ್ಷಿಣ ಆಫ್ರಿಕಾ ತಂಡ ಈ ಸುದ್ದಿ ಬರೆಯುವ ಹೊತ್ತಿಗೆ 6 ವಿಕೆಟ್ ಕಳೆದುಕೊಂಡು 477 ರನ್ ಕಲೆಹಾಕಿದೆ. ತಂಡದ ಪರ ರಿಕಲ್ಟನ್ ಅಜೇಯ 233 ರನ್ ಬಾರಿಸಿ ಕ್ರೀಸ್‌ನಲ್ಲಿದ್ದಾರೆ. ಇವರಲ್ಲದೆ ನಾಯಕ ತೆಂಬ ಬವುಮಾ ಕೂಡ ಈ ಪಂದ್ಯದಲ್ಲಿ 106 ರನ್‌ಗಳ ಶತಕದ ಇನ್ನಿಂಗ್ಸ್ ಆಡಿದ್ದಾರೆ.

## ರಿಷಬ್ ಪಂತ್ ಆರ್ಭಟಕ್ಕೆ 50 ವರ್ಷಗಳ ಹಳೆಯ ದಾಖಲೆ

ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಐದನೇ ಟೆಸ್ಟ್ ಪಂದ್ಯ ಸಿಡ್ನಿಯಲ್ಲಿ ನಡೆಯುತ್ತಿದೆ. ಈ ಪಂದ್ಯದ ಎರಡನೇ ದಿನ ಟೀಂ ಇಂಡಿಯಾ 145 ರನ್‌ಗಳ ಮುನ್ನಡೆ ಸಾಧಿಸಿದೆ. ಇದರಲ್ಲಿ ರಿಷಭ್ ಪಂತ್ ಕೊಡುಗೆ ಅಪಾರವಾಗಿದ್ದು, ಎರಡನೇ ಇನ್ನಿಂಗ್ಸ್‌ನಲ್ಲಿ ಅದ್ಭುತ ಬ್ಯಾಟಿಂಗ್ ನಡೆಸಿದ ಪಂತ್ 29 ಎಸೆತಗಳಲ್ಲಿ ಅರ್ಧಶತಕ ಗಳಿಸಿದರು. ಅಂತಿಮವಾಗಿ ಪಂತ್ 33 ಎಸೆತಗಳಲ್ಲಿ 6 ಬೌಂಡರಿ ಹಾಗೂ 4 ಸಿಕ್ಸರ್ ಒಳಗೊಂಡ 61 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಕಟ್ಟಿದರು.

**50 ವರ್ಷಗಳ ಹಳೆಯ ದಾಖಲೆ:** ಈ ಅದ್ಭುತ ಅರ್ಧಶತಕದ ಮೂಲಕ ಪಂತ್ 50 ವರ್ಷಗಳ ಹಳೆಯ ದಾಖಲೆಯನ್ನು ಮುರಿದಿದ್ದಾರೆ. ವಾಸ್ತವವಾಗಿ 1975 ರಲ್ಲಿ, ವೆಸ್ಟ್ ಇಂಡೀಸ್‌ನ ರಾ ಫ್ರೆಡೆರಿಕ್ಸ್ ಆಸ್ಟ್ರೇಲಿಯನ್ ನೆಲದಲ್ಲಿ ಟೆಸ್ಟ್ ಕ್ರಿಕೆಟ್‌ನಲ್ಲಿ ವೇಗದ ಅರ್ಧಶತಕ ಸಿಡಿಸಿದ ದಾಖಲೆ ಬರೆದಿದ್ದರು. ಫ್ರೆಡೆರಿಕ್ಸ್ 33 ಎಸೆತಗಳಲ್ಲಿ ಅರ್ಧಶತಕ ಪೂರೈಸಿದ್ದರು. ಇದೀಗ 29 ಎಸೆತಗಳಲ್ಲಿ ಈ ಸಾಧನೆ ಮಾಡಿರುವ ರಿಷಬ್ ಪಂತ್ ಆಸ್ಟ್ರೇಲಿಯಾ ನೆಲದಲ್ಲಿ ಅತಿವೇಗದ ಅರ್ಧಶತಕ ಸಿಡಿಸಿದ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದಾರೆ.



**ಸರಣಿಯಲ್ಲಿ 250ಕ್ಕೂ ಹೆಚ್ಚು ರನ್:** ಸಿಡ್ನಿ ಟೆಸ್ಟ್‌ಗೂ ಮುನ್ನ ಈ ಸರಣಿಯಲ್ಲಿ ರಿಷಭ್ ಪಂತ್ ಯಾವುದೇ ದೊಡ್ಡ ಇನ್ನಿಂಗ್ಸ್ ಆಡಲಾಗಲಿಲ್ಲ. ಆದರೆ ಪ್ರತಿಯೊಂದು ಪಂದ್ಯದಲ್ಲೂ ಉತ್ತಮ ಆರಂಭವನ್ನೇ ಪಡೆದಿದ್ದ ಪಂತ್ ಅದನ್ನು ಬಿಗ್ ಇನ್ನಿಂಗ್ಸ್ ಆಗಿ ಪರಿವರ್ತಿಸುವಲ್ಲಿ ವಿಫಲರಾಗಿದ್ದರು. ಇದರಿಂದಾಗಿ ಅವರು ಆಡಿದ 5 ಪಂದ್ಯಗಳ ಸರಣಿಯಲ್ಲಿ 9 ಇನ್ನಿಂಗ್ಸ್‌ಗಳಲ್ಲಿ 255 ರನ್ ಗಳಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಚಹಾಲ್ – ಧನಶ್ರೀ ದಾಂಪತ್ಯದಲ್ಲಿ ಬಿರುಕು



ಟೀಂ ಇಂಡಿಯಾದ ಸ್ಟಾರ್ ಸ್ಪಿನ್ ಬೌಲರ್ ಯುಜುವೇಂದ್ರ ಚಹಾಲ್ ಮತ್ತು ಅವರ ಪತ್ನಿ ಧನಶ್ರೀ ವರ್ಮಾ ಅವರ ದಾಂಪತ್ಯ ಜೀವನದಲ್ಲಿ ಬಿರುಕು ಮೂಡಿದೆ ಎಂಬ ಸುದ್ದಿ ಕಳೆದ ಕೆಲವು ದಿನಗಳಿಂದ ಕೇಳಿಬರುತ್ತಿದೆ. ಅಲ್ಲದೆ ಈ ಇಬ್ಬರೂ ಇಷ್ಟರಲ್ಲೇ ವಿಚ್ಛೇದನವನ್ನು ಪಡೆಯಲಿದ್ದಾರೆ ಎಂಬ ಊಹಾಪೋಹಗಳು ಕೂಡ ಎಲ್ಲೆಡೆ ಹಬ್ಬಿದೆ. ಇದೀಗ ಈ ಊಹಾಪೋಹಗಳಿಗೆ ಪುಷ್ಠಿ ನೀಡುವ ಘಟನೆ ನಡೆದಿದ್ದು, ಚಹಾಲ್ ಮತ್ತು ಧನಶ್ರೀ ತಮ್ಮ ಅಧಿಕೃತ ಸೋಶಿಯಲ್ ಮೀಡಿಯಾ ಖಾತೆ ಇನ್ಸ್ಟಾಗ್ರಾಮನಲ್ಲಿ ಪರಸ್ಪರ ಅನ್‌ಫಾಲೋ ಮಾಡಿದ್ದಾರೆ.

**ಪರಸ್ಪರ ಅನ್‌ಫಾಲೋ:** ಇನ್‌ಸ್ಟಾಗ್ರಾಮ್‌ನಲ್ಲಿ ಪರಸ್ಪರ ಅನ್‌ಫಾಲೋ ಮಾಡಿದ ನಂತರ ಧನಶ್ರೀ ಅವರೊಂದಿಗಿನ ಎಲ್ಲಾ ಫೋಟೋ ಹಾಗೂ ವಿಡಿಯೋಗಳನ್ನು ಚಹಾಲ್ ಡಿಲೀಟ್ ಮಾಡಿದ್ದಾರೆ. ಇದನ್ನು ನೋಡಿದ ಅಭಿಮಾನಿಗಳಿಗೆ ಈ ಇಬ್ಬರೂ ಇಷ್ಟರಲ್ಲೇ ಬೇರಾಗಲಿದ್ದಾರೆ ಎಂಬುದು ಖಾತ್ರಿಯಾದ್ದಂತ್ತಾಗಿದೆ. ಆದಾಗ್ಯೂ ವಿಚ್ಛೇದನಕ್ಕೆ ಸಂಬಂಧಿಸಿದಂತೆ ಚಹಾಲ್ ಆಗಲಿ ಅಥವಾ ಧನಶ್ರೀ ಆಗಲಿ ಇದುವರೆಗೆ ಯಾವುದೇ ಹೇಳಿಕೆ ನೀಡಿಲ್ಲ. ಎನ್‌ಡಿಟಿವಿಯ ವರದಿಯ ಪ್ರಕಾರ, ವಿಚ್ಛೇದನದ ವದಂತಿಗಳು ನಿಜವೆಂದು ದಂಪತಿಗಳ ನಿಕಟ ಮೂಲಗಳು ಟೈಮ್ಸ್ ಆಫ್ ಇಂಡಿಯಾಕ್ಕೆ ತಿಳಿಸಿವೆ. ಅಲ್ಲದೆ ಈ ಇಬ್ಬರು ಪರಸ್ಪರ ಬೇರೆ ಬೇರೆಯಾಗುವುದಕ್ಕೆ ನಿಖರವಾದ ಕಾರಣಗಳು ಏನು ಎಂಬುದು ಇದುವರೆಗೆ ತಿಳಿದುಬಂದಿಲ್ಲ. ಆದರೆ ದಂಪತಿಗಳು ಪ್ರತ್ಯೇಕ ಜೀವನವನ್ನು ನಡೆಸಲು ನಿರ್ಧರಿಸಿದ್ದಾರೆ ಎಂಬುದು ಸ್ಪಷ್ಟವಾಗಿದೆ. ಈ ಮೊದಲು ಕೂಡ ಚಹಾಲ್ ಮತ್ತು ಧನಶ್ರೀ ವರ್ಮಾ ವಿಚ್ಛೇದನದ ಬಗ್ಗೆ ಸಾಕಷ್ಟು ಚರ್ಚೆಗಳು ನಡೆದಿದ್ದವು. ಸಾಮಾಜಿಕ ಜಾಲತಾಣಗಳಲ್ಲಿ ಇವರಿಬ್ಬರ ಬಗ್ಗೆ ಸಾಕಷ್ಟು ವದಂತಿಗಳು ಹಬ್ಬಿದ್ದವು.

ಆ ಸಮಯದಲ್ಲಿ, ಯುಜುವೇಂದ್ರ ಅವರು ವಿಚ್ಛೇದನದ ವದಂತಿಗಳನ್ನು ತಳ್ಳಿಹಾಕುವ ಟಿಪ್ಪಣಿ ಯನ್ನು ಪೋಸ್ಟ್ ಮಾಡಿದ್ದರು. ಇದರಲ್ಲಿ ವದಂತಿಗಳನ್ನು ನಂಬಬೇಡಿ ಅಥವಾ ಹರಡಬೇಡಿ ಎಂದು ಅಭಿಮಾನಿಗಳ ಬಳಿ ಮನವಿ ಮಾಡಿದ್ದರು.

## ಶೂ ಒಳಗೆ ಸ್ಯಾಂಡ್ ಪೇಪರ್
### ಬುಮ್ರಾ ವಿರುದ್ಧ ಗಂಭೀರ ಆರೋಪ

ಆಸ್ಟ್ರೇಲಿಯಾದ ಅಭಿಮಾನಿಗಳು ಜಸ್ಪ್ರೀತ್ ಬುಮ್ರಾ ಅವರ ಮೇಲೆ ಮರಳುಕಾಗದ ಬಳಸಿ ಚೆಂಡನ್ನು ವಿರೂಪಗೊಳಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಒಂದು ವಿಡಿಯೋದಲ್ಲಿ ಬುಮ್ರಾ ಅವರ ಶೂನಿಂದ ಒಂದು ವಸ್ತು ಬೀಳುತ್ತಿರುವುದನ್ನು ತೋರಿಸಲಾಗಿದೆ. ಇದನ್ನು ಆಸೀಸ್ ಫ್ಯಾನ್ಸ್ ಸ್ಯಾಂಡ್‌ಪೇಪರ್ ಎನ್ನುತ್ತಿದ್ದಾರೆ. ಆದರೆ ಆ ವಸ್ತು ಬೌಲರ್‌ಗಳು ಬಳಸುವ ಫಿಂಗರ್ ಕ್ಯಾಪ್ ಎಂದು ತಿಳಿದುಬಂದಿದೆ. ಬೌಲರ್‌ಗಳು ಬೆರಳುಗಳನ್ನು ರಕ್ಷಿಸಿಕೊಳ್ಳಲು ಧರಿಸುವ ಈ ವಸ್ತುವನ್ನು ತಪ್ಪಾಗಿ ಅರ್ಥೈಸಿಕೊಳ್ಳಲಾಗಿದೆ.

**ಆರೋಪದ ಸತ್ಯಾಸತ್ಯತೆ ಇಲ್ಲಿದೆ**

**ಬುಮ್ರಾ ಅವರ ಶೂನಿಂದ ಹೊರಬಂದ ವಸ್ತುವು ಖಂಡಿತವಾಗಿಯೂ ಸ್ಯಾಂಡ್‌ಪೇಪರ್‌ನಂತೆ ಕಾಣುತ್ತದೆ. ಆದರೆ ಅದು ಸ್ಯಾಂಡ್‌ಪೇಪರ್ ಅಲ್ಲ. ಬದಲಿಗೆ ಅದು ಫಿಂಗರ್ ಕ್ಯಾಪ್. ಬೌಲರ್‌ಗಳು ತಮ್ಮ ಬೆರಳುಗಳನ್ನು ಗಾಯದಿಂದ ರಕ್ಷಿಸಿಕೊಳ್ಳಲು ಇದನ್ನು ಹೆಚ್ಚಾಗಿ ಧರಿಸುತ್ತಾರೆ. ಆಸ್ಟ್ರೇಲಿಯಾದ ಇನ್ನಿಂಗ್ಸ್‌ನಲ್ಲಿ ಬುಮ್ರಾ ಕೂಡ ಅದೇ ರೀತಿ ಮಾಡಿದ್ದಾರೆ. ಬೌಲಿಂಗ್ ಮಾಡಿದ ನಂತರ ಫೀಲ್ಡಿಂಗ್‌ಗೆ ಹೋಗುವ ವೇಳೆ ಬುಮ್ರಾ ತಮ್ಮ ಶೂನಿಂದ ಫಿಂಗರ್ ಕ್ಯಾಪ್ ಅನ್ನು ತೆಗೆದಿದ್ದಾರೆ. ಆದರೆ ಇದನ್ನೇ ದಾಳವಾಗಿ ಬಳಸಿಕೊಂಡಿರುವ ಆಸ್ಟ್ರೇಲಿಯಾದ ಅಭಿಮಾನಿಗಳು ಬುಮ್ರಾ ಸ್ಯಾಂಡ್‌ಪೇಪರ್ ಬಳಸಿ ಚೆಂಡನ್ನು ವಿರೂಪಗಳಿಸುವ ಮೂಲಕ ಸುಲಭವಾಗಿ ವಿಕೆಟ್ ಪಡೆಯುತ್ತಿದ್ದಾರೆ ಎಂದು ಆರೋಪಿಸುತ್ತಿದ್ದಾರೆ.**

ಸಿಡ್ನಿಯಲ್ಲಿ ನಡೆಯುತ್ತಿರುವ ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಐದು ಪಂದ್ಯಗಳ ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯ ಕೊನೆಯ ಪಂದ್ಯದಲ್ಲಿ ಎರಡೂ ತಂಡಗಳಿಂದ ಜಿದ್ದಾಜಿದ್ದಿನ ಹೋರಾಟ ಕಂಡುಬರುತ್ತಿದೆ. ಈಗಾಗಲೇ ಉಭಯ ತಂಡಗಳು ಮೊದಲ ಇನ್ನಿಂಗ್ಸ್ ಆಡಿ ಮುಗಿಸಿದ್ದು, ಟೀಂ ಇಂಡಿಯಾ ಕೇವಲ 4 ರನ್‌ಗಳ ಮುನ್ನಡೆ ಪಡೆದುಕೊಂಡಿದೆ. ಇದರೊಂದಿಗೆ ಎರಡನೇ ಇನ್ನಿಂಗ್ಸ್ ಆರಂಭಿಸಿರುವ ಭಾರತ ತಂಡ ದಿನದಾಟದಂತ್ಯಕ್ಕೆ 6 ವಿಕೆಟ್ ಕಳೆದುಕೊಂಡು 141 ರನ್ ಕಲೆಹಾಕಿದೆ. ಈ ನಡುವೆ ಆಸ್ಟ್ರೇಲಿಯಾ ತಂಡದ ಅಭಿಮಾನಿಗಳಿಂದ ಬುಮ್ರಾರ ಮಾನಸಿಕ ಸ್ಥೈರ್ಯವನ್ನು ಕುಗ್ಗಿಸುವ ಕೆಲಸ ನಡೆಯುತ್ತಿದೆ. ಇಡೀ ಸರಣಿಯಲ್ಲಿ ಆಸೀಸ್ ಆಟಗಾರರಿಗೆ ಸಿಂಹಸ್ವಪ್ನರಾಗಿರುವ ಬುಮ್ರಾ ವಿರುದ್ಧ ಗಂಭೀರ ಆರೋಪ ಮಾಡುತ್ತಿರುವ ಆಸೀಸ್ ಅಭಿಮಾನಿಗಳು, ಬುಮ್ರಾ ತಮ್ಮ ಶೂಗಳ ಒಳಗೆ ಸ್ಯಾಂಡ್‌ಪೇಪರ್ ಅನ್ನು ಇಟ್ಟುಕೊಂಡಿದ್ದಾರೆ. ಚೆಂಡನ್ನು ವಿರೂಪಗೊಳಿಸುವ ಮೂಲಕ ಬುಮ್ರಾ ಯಶಸ್ವಿಯಾಗುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಇದರ ಜೊತೆಗೆ ವಿಡಿಯೋವನ್ನು ಸಹ ಸೋಶಿಯಲ್ ಮೀಡಿಯಾದಲ್ಲಿ ಹರಿಬಿಟ್ಟಿದ್ದಾರೆ. **ವಿಡಿಯೋ ವೈರಲ್:** ವಾಸ್ತವವಾಗಿ ಆಸೀಸ್ ಅಭಿಮಾನಿಗಳು ಸೋಶಿಯಲ್ ಮೀಡಿಯಾದಲ್ಲಿ ಹರಿಬಿಟ್ಟಿರುವ ವಿಡಿಯೋದಲ್ಲಿ ಜಸ್ಪ್ರೀತ್ ಬುಮ್ರಾ ತಾವು ಧರಿಸಿದ್ದ ಶೂಗಳನ್ನು ಬಿಚ್ಚಿ, ಅದನ್ನು ಮತ್ತೆ ಹಾಕಿಕೊಂಡಿದ್ದಾರೆ. ಈ ವೇಳೆ ಬುಮ್ರಾ ಅವರ ಶೂನಿಂದ ಯಾವುದೋ ವಸ್ತು ಕೆಳಗೆ ಬೀಳುತ್ತದೆ. ಇದನ್ನು ನೋಡಿದ ಆಸೀಸ್ ಅಭಿಮಾನಿಗಳು ಅದನ್ನು ಸ್ಯಾಂಡ್‌ಪೇಪರ್ (ಚೆಂಡನ್ನು ವಿರೂಪಗಳಿಸಲು ಬಳಸುವ ಸಾಧನ) ಎಂದು ಹೇಳುತ್ತಿದ್ದಾರೆ. ಈ ಮೂಲಕ ಬುಮ್ರಾ ಮೇಲೆ ಒತ್ತಡ ಹೇರುವ ಪ್ರಯತ್ನ ನಡೆಯುತ್ತಿದೆ. ಆದರೆ ಆಸೀಸ್ ಅಭಿಮಾನಿಗಳ ಆರೋಪದಲ್ಲಿ ಹುರುಳಿಲ್ಲ ಎಂಬುದಕ್ಕೆ ವಿವರಣೆ ಇಲ್ಲಿದೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966